ಸಂಪುಟ: 04 ಸಂಚಿಕೆ: 186 ಪುಟಗಳು: 08 ಬುಧವಾರ 18 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಜೀವ ನಮ್ಮ ಮಾತನ್ನು ಕೇಳುವುದಿಲ್ಲ, ಯಾವಾಗ ಬೇಕಾದರೂ ಹೋಗಬಹುದು. ಜೀವನ ನಮ್ಮ ಮಾತನ್ನು ಕೇಳುತ್ತದೆ, ಹೇಗೆ ಬೇಕಾದರೂ ರೂಪಿಸಿಕೊಳ್ಳಬಹುದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಶಾಸಕ ಮುನಿರತ್ನ ಪರಪ್ಪನ ಅಗ್ರಹಾರ ಜೈಲು ಪಾಲು

• ಉದಯವಾಹಿನಿ, ಬೆಂಗಳೂರು

ಗುತ್ತಿಗೆದಾರನಿಗೆ ಜೀವ ಬೆದರಿಕೆ, ಜಾತಿ ನಿಂದನೆ ಆರೋಪದಲ್ಲಿ ಬಂಧನಕ್ಕೀಡಾಗಿರುವ ಬಿಜೆಪಿ ಶಾಸಕ ಮುನಿರತ್ನ, ಇದೀಗ ಪರಪ್ಪನ ಅಗ್ರಹಾರ ಜೈಲು ಸೇರಿದ್ದಾರೆ. ಜೀವ ಬೆದರಿಕೆ, ಜಾತಿ ನಿಂದನೆ ಕೇಸ್‌ನಲ್ಲಿ ಎರಡು ದಿನ ಪೊಲೀಸ್ ಕಷ್ಟಡಿಗೆ ಪಡೆದಿದ್ದ ಪೊಲೀಸರು, ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ 82ನೇ ಸಿಸಿಹೆಚ್ ಕೋರ್ಟ್‌ಗೆ ಹಾಜರು ಪಡಿಸಿದ್ದರು. ಈ ವೇಳೆ ಮುನಿರತ್ನ ಪರ ವಕೀಲರು ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು. ಆದರೆ ಕೋರ್ಟ್ ಒಂದು ದಿನದವರೆಗೆ ಮುನಿರತ್ನ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ನೀಡಿದೆ. ನ್ಯಾಯಾಂಗ ಬಂಧನ ಹಿನ್ನೆಲೆಯಲ್ಲಿ ಪೊಲೀಸರು ಮುನಿರತ್ನ ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಶಿಫ್ಟ್ ಮಾಡಿದ್ದು, ಮುನಿರತ್ನ ಜೈಲು ಸೇರಿದ್ದಾರೆ. ಮುನಿರತ್ನ ಅವರಿಗೆ ಜಾಮೀನು ಸಿಗಲಿದೆಯೇ? ಕಾದು ನೋಡಬೇಕಿದೆ.

## ಜಾರಕಿಹೊಳಿ, ಯತ್ನಾಳ್ ವಿಚಾರ ಹೈಕಮಾಂಡ್ ಗಮನಿಸಲಿದೆ

• ಉದಯವಾಹಿನಿ, ಬೆಂಗಳೂರು

ಬಿ.ವೈ.ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಎಂದು ಒಪ್ಪಲು ಸಾಧ್ಯವಿಲ್ಲ. ಅವರು ನಮಗೆ ನಾಯಕರಲ್ಲ ಎಂಬ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿರುವ ವಿಪಕ್ಷ ನಾಯಕ ಆರ್.ಅಶೋಕ್, ಅದು ವಿಜಯೇಂದ್ರ ಹಾಗೂ ಜಾರಕಿಹೊಳಿ ನಡುವಿನ ಗಲಾಟೆ. ಅದರಲ್ಲಿ ನಮ್ಮ ಪಾತ್ರವೇನೂ ಇಲ್ಲ ಎಂದಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ್, ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಕೇಂದ್ರ ನಾಯಕರ ಸಂಪರ್ಕದಲ್ಲಿದ್ದಾರೆ. ಅವರ ಬಗ್ಗೆ ಹೈಕಮಾಂಡ್ ಜೊತೆ ಚರ್ಚೆ ನಡೆಯುತ್ತಿದೆ. ಇದು ಇಂದಿನ ಸಮಸ್ಯೆಯಲ್ಲ. ಹೈಕಮಾಂಡ್ ಹೇಳಿದಂತೆ ನಡೆಯುತ್ತೇನೆ ಎಂದು ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಅದು ಅವರಿಬ್ಬರ ನಡುವಿನ ವಿಚಾರ ಇದರಲ್ಲಿ ನಮ್ಮ ಪಾತ್ರವಿಲ್ಲ ಎಂದರು. ಕೇಂದ್ರ ನಾಯಕರು ಯತ್ನಾಳ್, ಜಾರಕಿಹೊಳಿ ಬಗ್ಗೆ ಗಮನ ಕೊಡುತ್ತಾರೆ. ಅವರೇ ತೀರ್ಮಾನಿಸುತ್ತಾರೆ ಎಂದು ಹೇಳಿದರು.

## ಗೌರಿ ಲಂಕೇಶ್ ಹತ್ಯೆ ಪ್ರಕರಣ ಆರೋಪಿಗಳಿಗೆ ಜಾಮೀನು

• ಉದಯವಾಹಿನಿ, ಬೆಂಗಳೂರು

ಪತ್ರಕರ್ತೆ ಗೌರಿ ಲಂಕೇಶ್ ಹತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೆ ನಾಲ್ವರು ಆರೋಪಿಗಳಿಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ನಾಲ್ವರು ಆರೋಪಿಗಳು ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾ, ವಿಶ್ವಜಿತ್ ಶೆಟ್ಟಿ ಅವರಿದ್ದ ಪೀಠ, ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ಆರೋಪಿಗಳಾದ ಹುಕ್ಕೇರಿಯ ಭರತ್ ಜಯವಂತ ಕುರಾನೆ (42), ಮಹಾರಾಷ್ಟ್ರದ ಶ್ರೀಕಾಂತ್ ಪಂಗರ್ಕರ್ (48), ಶ್ರೀಕಾರಿಪುರದ ಸುಜಿತ್ ಕುಮಾರ್ (42) ಮಹಾರಾಷ್ಟ್ರದ ಸತಾರದ ಸುಧನ್ವ ಗ್ಂಧಲೇಕರ್ (43) ಜಾಮೀನು ಪಡೆದವರಾಗಿದ್ದಾರೆ. ಆರೋಪಿಗಳಿಗೆ ತಲಾ ಒಂದು ಲಕ್ಷ ರೂಪಾಯಿ ಮೌಲ್ಯದ ವೈಯಕ್ತಿಕ ಬಾಂಡ್, ಇಬ್ಬರ ಭದ್ರತಾ ಖಾತರಿ, ವಿಚರಣೆಯ ಎಲ್ಲಾ ದಿನ ಆರೋಪಿಗಳು ವಿಚಾರಣೆಗೆ ಹಾಜರಗಬೇಕು. ಸಾಕ್ಷಿಗಳಿಗೆ ಬೆದರಿಕೆ ಹಾಕುವಂತಿಲ್ಲ. ಇಂತಹ ಪ್ರಕರಣಗಳಲ್ಲಿ ಭಾಗಿಯಾಗುವಂತಿಲ್ಲ ಎಂದು ಕೋರ್ಟ್ ಷರತ್ತು ವಿಧಿಸಿದೆ. ಆರೋಪಿಗಳು 2018ರಿಂದ ನ್ಯಾಯಾಂಗ ಬಂಧನದಲ್ಲಿದ್ದರು.

## ಮೋದಿ ಜನ್ಮದಿನ: ಇಂದಿನಿಂದ ಬಿಜೆಪಿ ಸೇವಾ ಪಾಕ್ಷಿಕ ಆರಂಭ

• ಉದಯವಾಹಿನಿ, ಬೆಳಗಾವಿ

ಇಂದಿನಿಂದ ಬಿಜೆಪಿ ಸೇವಾ ಪಾಕ್ಷಿಕ ಹಮ್ಮಿಕೊಳ್ಳಲಾಗಿದೆ. ಸೆ. 17ರಿಂದ ರಾಜ್ಯದೆಲ್ಲೆಡೆ ಸೇವಾ ಪಾಕ್ಷಿಕ ಹಮ್ಮಿಕೊಂಡಿದ್ದು, 25,000ಕ್ಕೂ ಹೆಚ್ಚು ಕಾರ್ಯಕರ್ತರು ರಕ್ತದಾನ ಮಾಡಲಿದ್ದಾರೆ ಎಂದು ಮಾಜಿ ಸಚಿವ ಹರತಾಳು ಹಾಲಪ್ಪ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ. ಸೆ. 17ರಂದು ಮೋದಿ, ಸೆ. 25 ರಂದು ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಜನ್ಮದಿನ ಹಾಗೂ ಅ. 2ರಂದು ಗಾಂಧಿ ಜಯಂತಿ ಇದ್ದು, ಈ ಹಿನ್ನೆಲೆಯಲ್ಲಿ ಸೆ. 17ರಿಂದ ಅ. 2ರವರೆಗೆ ಸೇವಾ ಪಾಕ್ಷಿಕ ಹಮ್ಮಿಕೊಳ್ಳಲಾಗಿದೆ. ಈ ಮೂವರ ಹೆಸರಿನಲ್ಲಿ ವಿವಿಧ ಸಾಮಾಜಿಕ ಸೇವಾ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಪ್ರಧಾನಿ ಮೋದಿ ಅವರ ಜನ್ಮದಿನದ ಅಂಗವಾಗಿ ರಾಜ್ಯದ ಎಲ್ಲಾ ಮಂಡಲ, ಜಿಲ್ಲಾ ಕೇಂದ್ರಗಳಲ್ಲಿ ರಕ್ತದಾನ ಶಿಬಿರ, ಗಿಡ ನೆಡುವುದು, ಅನ್ನ ಸಂತರ್ಪಣೆ, ಸ್ವಚ್ಛತಾ ಕಾರ್ಯಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಬಿಜೆಪಿ ರಾಜ್ಯ ಕಾರ್ಯದರ್ಶಿ ಅಂಬಿಕಾ ಹುಲಿನಾಯ್ಕರ್ ಮಾತನಾಡಿ, ಸೆ. 18ರಿಂದ 24ರ ವರೆಗೆ ಶಾಲೆ, ಆಸ್ಪತ್ರೆಗಳ ಆವರಣದಲ್ಲಿ ಸ್ವಚ್ಛತಾ ಕಾರ್ಯ ನಡೆಯಲಿದೆ. ಕ್ರೀಡಾಪಟುಗಳಿಗೆ ಸನ್ಮಾನ, ಕ್ರೀಡಾ ಸಲಕರಣೆ ಸೌಲಭ್ಯ ವಿತರಿಸಲಾಗುವುದು.



# ಕ್ರಾಂತಿ ಕಲ್ಯಾಣ ಪ್ರಗತಿಗೆ ದರ್ಪಣ

## 5ಸಾವಿರ ಕೋಟಿ ರೂ.ಗಳ ವಿಶೇಷ ಅನುದಾನ

1 ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿನ ಮಹಿಳೆಯರು ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆಯ ಸಮಸ್ಯೆ ಹೆಚ್ಚು ಇದೆ. ಆರೋಗ್ಯವಂತ ಜನರು ದೇಶದ ಸಂಪತ್ತಾಗಿರುತ್ತಾರೆ

2 ಜನರ ಆರೋಗ್ಯ ಸುಧಾರಣೆಗಾಗಿ ಆರೋಗ್ಯ-ಆವಿಷ್ಕಾರ ಕಾರ್ಯಕ್ರಮವನ್ನು ರೂಪಿಸಿದ್ದೇವೆ

3 ಕಲ್ಯಾಣ ಕರ್ನಾಟಕ ಅಮೃತ ಮಹೋತ್ಸವ ಹಾಗೂ ಕಲ್ಯಾಣ ಕರ್ನಾಟಕಕ್ಕೆ ಸಂವಿಧಾನದಲ್ಲಿ ವಿಶೇಷ ಸ್ಥಾನಮಾನ ಕಲ್ಪಿಸುವ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಕಲ್ಯಾಣ ಕರ್ನಾಟಕ ಭಾಗದ ಪ್ರಗತಿಗಾಗಿ 5 ಸಾವಿರ ಕೋಟಿ ರೂ.ಗಳ ವಿಶೇಷ ಅನುದಾನದಲ್ಲಿ ಕ್ರಿಯಾಯೋಜನೆ ರೂಪಿಸಲಾಗಿದ್ದು, ಅಭಿವೃದ್ಧಿಯ ನವಕ್ರಾಂತಿಯನ್ನು ನಿರೀಕ್ಷಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಕಲ್ಯಾಣ ಕರ್ನಾಟಕ ಅಮೃತ ಮಹೋತ್ಸವ ಹಾಗೂ ಕಲ್ಯಾಣ ಕರ್ನಾಟಕಕ್ಕೆ ಸಂವಿಧಾನದ ವಿಶೇಷ ಸ್ಥಾನಮಾನ ಕಲ್ಪಿಸುವ 371 ಜೆ ವಿಧಿಯ ಜಾರಿಯ ದಶಮಾನೋತ್ಸವದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಗೌರವರಕ್ಷೆ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಈ ವರ್ಷ ಉತ್ತಮ ಮಳೆಯಾಗಿದ್ದು, ಪ್ರಕೃತಿಯ ಆಶೀರ್ವಾದದಿಂದ ರೈತರಲ್ಲಿ ಸಂತಸ ಮೂಡಿದೆ ಎಂದರು. 2013 ರಿಂದ ಈವರೆಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 19,778 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಗಿದ್ದು, 13,229 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಈವರೆಗೂ 11,174 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ ಎಂದು ಹೇಳಿದರು. ಬಿಡುಗಡೆಯಾದ ಅನುದಾನಕ್ಕೆ ಶೇ.85ರಷ್ಟು ಮಂಡಳಿ ಆರ್ಥಿಕ ಪ್ರಗತಿಯನ್ನು ಸಾಧಿಸಿದೆ ಒಟ್ಟಾರೆ 35,885 ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 27,164 ಕಾಮಗಾರಿಗಳು ಪೂರ್ಣಗೊಂಡಿವೆ. 8,621 ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿವೆ ಎಂದು ವಿವರಿಸಿದರು. ಭಾರತಕ್ಕೆ ಸ್ವಾತಂತ್ರ್ಯ ಬಂದರೂ ಹೈದರಾಬಾದ್ ನಿಜಾಮರ ಆಳ್ವಿಕೆಯಲ್ಲಿತ್ತು. ಬೀದರ್, ಕಲಬುರಗಿ, ರಾಯಚೂರು ಜಿಲ್ಲೆಗಳಲ್ಲಿ ಸ್ವಾತಂತ್ರ್ಯದ ಬೆಳಕು ಬಂದಿದ್ದು 1948 ರಲ್ಲಿ. ಅಸಂಖ್ಯಾತರ ಹೋರಾಟ, ತ್ಯಾಗ ಬಲಿದಾನದಿಂದ ಸರ್ದಾರ್ ವಲ್ಲಭಾಬಾಯಿ ಪಟೇಲ್, ಜವಹರಲಾಲ್ ನೆಹರೂ ಅವರ ದೂರದೃಷ್ಟಿಯಿಂದಾಗಿ ಕಲ್ಯಾಣ ಕರ್ನಾಟಕ ಭಾಗ ಭಾರತದ ಒಕ್ಕೂಟ ವ್ಯವಸ್ಥೆಗೆ ಸೇರ್ಪಡೆಯಾಗುವಂತಾಯಿತು. ಹೈದರಾಬಾದ್-ಕರ್ನಾಟಕದ ವಿಮೋಚನೆಗಾಗಿ ಹೋರಾಡಿದ ಎಲ್ಲಾರನ್ನೂ ಸರಿಸುವುದಾಗಿ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗ ಸೂಫಿ ಸಂತರ ಬೀಡಾಗಿದ್ದು, ಕೋಮುಸೌಹಾರ್ದತೆಗೆ ಹೆಸರುವಾಸಿಯಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಸ್ವಾತಂತ್ರ್ಯ ಹೋರಾಟ, ಹೈದರಾಬಾದ್-ಕರ್ನಾಟಕ ವಿಮೋಚನಾ ಹೋರಾಟ, ಭಾಷಾವಾರು ಪ್ರಾಂತ್ಯ ರಚನೆ ಹೋರಾಟ, ವಿಶೇಷ ಸ್ಥಾನಮಾನಕ್ಕಾಗಿ ಹೋರಾಟ ಸೇರಿ ನಾಲ್ಕು ಮಹತ್ವದ ಚಳವಳಿಗಳು ನಡೆದಿವೆ. ಈ ಭಾಗವನ್ನು ಬ್ರಿಟಿಷರು ಮತ್ತು ನಿಜಾಮರು ಕಡೆಗಣಿಸಿದ್ದರು. ಪ್ರಾದೇಶಿಕ ಅಸಮಾನತೆ ಹೆಚ್ಚಾಗಿತ್ತು. ವಿಶೇಷ ಸ್ಥಾನಮಾನದಿಂದಾಗಿ ಅಭಿವೃದ್ಧಿಯ ವೇಗ ಕಾಣುತ್ತಿದೆ ಎಂದು ಹೇಳಿದರು.

ಪಂಚಖಾತ್ರಿ ಯೋಜನೆಗಳ ಸಮಗ್ರ ವಿವರಣೆ ನೀಡಿದ ಮುಖ್ಯಮಂತ್ರಿಯವರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗೆ ಪ್ರಸಕ್ತ ಬಜೆಟ್ನಲ್ಲಿ 5ಸಾವಿರ ಕೋಟಿ ರೂ. ಘೋಷಿಸಿ, ಅನುದಾನ ಹಂಚಿಕೆ ಮಾಡಲಾಗಿದೆ. ಅಷ್ಟು ಮೊತ್ತದ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ಹೊಸ ಕ್ರಾಂತಿಯನ್ನು ನಿರೀಕ್ಷಿಸಲಾಗಿದೆ.

### ಶಿಕ್ಷಣದಲ್ಲಿ ಅಮೂಲಾಗ್ರ ಬದಲಾವಣೆ ತರಲು ಅಕ್ಷರ ಆವಿಷ್ಕಾರ ಯೋಜನೆ ಜಾರಿಗೆ

### ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧ

### ಕಲ್ಯಾಣ ಕರ್ನಾಟಕ ಅಭಿವೃದ್ಧಿ ಸಂಕಲ್ಪ :ಸಿಎಂ

### ನಂಜುಂಡಪ್ಪ ವರದಿ

ನಂಜುಂಡಪ್ಪ ವರದಿ 2002ರಲ್ಲಿ ಸಲ್ಲಿಕೆಯಾಗಿತ್ತು. ಅನಂತರ ಸಾಮಾಜಿಕ, ಆರ್ಥಿಕ, ಇನ್ನಿತರ ಆಯಾಮಗಳಲ್ಲಿ ಮಹತ್ವದ ಬೆಳವಣಿಗೆಗಳಾಗಿವೆ. ಇದರ ಪರಿಣಾಮಗಳ ಅಧ್ಯಯನಕ್ಕಾಗಿ ಪ್ರೊ. ಗೋವಿಂದರಾವ್ ಅಧ್ಯಕ್ಷತೆಯಲ್ಲಿ ಉನ್ನತ ಅಧಿಕಾರ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯ ಆಧಾರದ ಮೇಲೆ ರಾಜ್ಯದಲ್ಲಿ ತಾಲ್ಲೂಕು ಮತ್ತು ಜಿಲ್ಲೆಗಳ ಆರ್ಥಿಕ ಮತ್ತು ಅಸಮಾನತೆಯನ್ನು ವರ್ಗೀಕರಿಸಿ ಹೊಸ ಅಭಿವೃದ್ಧಿ ಸೂಚ್ಯಂಕವನ್ನು ತಯಾರಿಸಲಾಗುವುದು



ಎಂದರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ 38ಸಾವಿರ ಕೋಟಿ ರೂ.ಗಳನ್ನು ಮೀಸಲಿಡಲಾಗಿದ್ದು, ಲಾಭವನ್ನು ಈ ಭಾಗದ ಜನ ಪಡೆಯುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಶೇಷ ಸ್ಥಾನಮಾನಕ್ಕೆ ಹೊರಡಿಸಲಾಗಿರುವ ಆದೇಶದ ಅನುಷ್ಠಾನದ ಮೇಲ್ವಿಚಾರಣೆಗೆ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರ ಮೇಲ್ವಿಚಾರಣೆಯಲ್ಲಿ ಸಂಪುಟ ಉಪಸಮಿತಿ ರಚಿಸಲಾಗಿದೆ.

### ಕೌಶಲ್ಯಾಭಿವೃದ್ಧಿ ಕಂಪ್ಯೂಟರ್ ಕಲಿಕಾ ಆಸರೆ

ಶಿಕ್ಷಣದಲ್ಲಿ ಅಮೂಲಾಗ್ರ ಬದಲಾವಣೆ ತರಲು ಅಕ್ಷರ ಆವಿಷ್ಕಾರ ಯೋಜನೆ ಜಾರಿಗೆ ತರಲಾಗಿದೆ. 1,008 ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಎಲ್ಕೆಜಿ, ಯುಕೆಜಿ ಮಾದರಿ ಶಿಕ್ಷಣ ಆರಂಭಿಸಲಾಗಿದೆ. 36,445 ಮಕ್ಕಳು ಪ್ರವೇಶ ಪಡೆದಿದ್ದು, 1,353 ಅತಿಥಿ ಶಿಕ್ಷಕರು, 892 ಸಹಾಯಕಿಯರನ್ನು ನೇಮಿಸಲಾಗಿದೆ. 872 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡದ ಜೊತೆಗೆ ಇಂಗ್ಲಿಷ್ ಭಾಷಾ ಕಲಿಕೆಯನ್ನು ಪ್ರಾರಂಭಿಸಲಾಗಿದೆ. ಕೌಶಲ್ಯಾಭಿವೃದ್ಧಿ ಕಂಪ್ಯೂಟರ್ ಕಲಿಕಾ ಆಸರೆ ಎಂಬ ವಿಶೇಷ ಅಭ್ಯಾಸವನ್ನು ಒದಗಿಸಲಾಗಿದೆ ಎಂದರು.

### ಕಲಬುರಗಿ ಸ್ಮಾರ್ಟ್ ಸಿಟಿ

ರಾಜ್ಯ ಸರ್ಕಾರದಿಂದಲೆ ಸುಮಾರು 1,685 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕಲಬುರಗಿ ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲು ಯೋಚಿಸಲಾಗುತ್ತಿದೆ. ಹಿಂದುಳಿದ ಜಿಲ್ಲೆಗಳಲ್ಲಿ ಹೂಡಿಕೆಯನ್ನು ಆಕರ್ಷಿಸುವುದಲ್ಲದೆ ಇಲ್ಲಿನ ನಗರ ವಾಸಿಗಳ ಜೀವನ ಗುಣಮಟ್ಟ ಹೆಚ್ಚಿಸುವ ಮತ್ತು ಸುಸ್ಥಿರ



ಅಭಿವೃದ್ಧಿಯನ್ನು ಉತ್ತೇಜಿಸಲು ಇದು ಸಹಕಾರಿಯಾಗಲಿದೆ. ರಾಜ್ಯ,ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ತಾಲೂಕಿನ ನದಿಸಿನ್ನೂರ-ಹೊನ್ನಕಿರಣಗಿ ಬಳಿ 1,000 ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ. ಮಾದರಿಯಲ್ಲಿ ಮೆಗಾ ಟೆಕ್ಸ್ಟೈಲ್ ಪಾರ್ಕ ಅನ್ನು ಸ್ಥಾಪಿಸಲಾಗುತ್ತಿದೆ. ಈ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ 50 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುತ್ತಿದ್ದು, ಇದರಿಂದ 1 ಲಕ್ಷ ಜನರಿಗೆ ನೇರ ಹಾಗೂ 2 ಲಕ್ಷ ಜನರಿಗೆ ಪರೋಕ್ಷ ಉದ್ಯೋಗ ಸೃಷ್ಠಿಯಾಗಲಿದೆ. ಸಮರ್ಪಿತ ಆರ್ಥಿಕ ಕಾರಿಡಾರ್‌ಗಳು ಆರ್ಥಿಕ ಅಭಿವೃದ್ಧಿಗೆ ಪೂರಕ ಮೂಲಸೌಕರ್ಯ ಜಾಲವನ್ನು ಒದಗಿಸುತ್ತವೆ. ಕಲ್ಯಾಣ ಕರ್ನಾಟಕ ಪ್ರದೇಶದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಹಾಗೂ ಗುಣಾತ್ಮಕವಾಗಿ ಅಭಿವೃದ್ಧಿ ಪಡಿಸಲು ಹಾಗೂ ಸಮಗ್ರ ಗ್ರಾಮೀಣಾಭಿವೃದ್ಧಿ ಮಾಡುವ ಧ್ಯೇಯದೊಂದಿಗೆ ''ಕಲ್ಯಾಣ ಪಥ'' ಯೋಜನೆಯನ್ನು ರೂಪಿಸಲಾಗಿದೆ.

## ಪ್ರಜಾಪ್ರಭುತ್ವ ಉಳಿಸುವ ಕಾಳಜಿ ಇದ್ದರೆ ಚುನಾವಣೆ ನಡೆಸಿ

• ಉದಯವಾಹಿನಿ, ಬೆಂಗಳೂರು

ಮಾನವ ಸರಪಳಿ ನೆಪದಲ್ಲಿ ರಾಜ್ಯ ಸರ್ಕಾರ ಪುಕ್ಕಟೆ ಪ್ರಚಾರ ಗಿಟ್ಟಿಸಿದ್ದು, ಅದರಿಂದ ಪ್ರಜಾಪ್ರಭುತ್ವ ಉಳಿಯುತ್ತದೆಯೇ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಸರ್ಕಾರಕ್ಕೆ ಪ್ರಜಾಪ್ರಭುತ್ವ ಉಳಿಸುವ ಕಾಳಜಿಗೆ ಇಲ್ಲ, ಒಂದು ವೇಳೆ ಅಂತಹ ಕಾಳಜಿ ಇದ್ದರೆ ಮೊದಲು ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲಿ ಎಂದು ಹೇಳಿದ್ದಾರೆ. ಮಾನವ ಸರಪಳಿ ನೆಪದಲ್ಲಿ ಪುಕ್ಕಟೆ ಪ್ರಚಾರ ಗಿಟ್ಟಿಸಿದ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಪ್ರಜಾಪ್ರಭುತ್ವ ಉಳಿಸುವ ಕಾಳಜಿಯೇ ಇಲ್ಲ. ಇದ್ದರೆ ಮೊದಲು ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲಿ.




ಅಧಿಕಾರಕ್ಕೇರಿದಾಗಿನಿಂದ ಪ್ರಜಾಪ್ರಭುತ್ವದ ಸರಪಳಿಯ ತಳಮಟ್ಟದ ಆಧಾರಸ್ತಂಭಗಳಾದ ಜಿಲ್ಲಾ ತಾಲ್ಲೂಕು ಪಂಚಾಯತಿ ಮತ್ತು ಬಿಬಿಎಂಪಿ ಚುನಾವಣೆ ನಡೆಸಿಲ್ಲ, ಯಾಕೆ? ಸ್ಥಳೀಯ ಸರ್ಕಾರಗಳ ಕತ್ತು ಹಿಸುಕಿ ನೀವು ವಿಧಾನಸೌಧದಲ್ಲಿ ಮೆರೆದರೇನು ಭಾಗ್ಯ? ಎಂದು ಪ್ರಶ್ನಿಸಿದ್ದಾರೆ. ಸಿದ್ಧರಾಮಯ್ಯ ನವರೇ.. ನೀವು ಅಧಿಕಾರಕ್ಕೆ ಬಂದು ವರ್ಷದ ಮೇಲೆ 4 ತಿಂಗಳಾಯಿತು(2023 ಮೇ 20). ಈವರೆಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸಾಧ್ಯವಾಗಿಲ್ಲ. ನಿಮ್ಮ ಪ್ರಜಾಪ್ರಭುತ್ವ, ಜನಪರತೆ, ಜಾಹೀರಾತುಗಳಲ್ಲಷ್ಟೆ ಝುಗ ಮಗಿಸುತ್ತಿದೆ. ನಿಮ್ಮದು ಪ್ರಚಾರ ಜಾಸ್ತಿ, ಆಚಾರ ನಾಸ್ತಿ ಎಂದು ಟೀಕಿಸಿದ್ದಾರೆ. ವಿಚ್ಛಿದ್ರ ಶಕ್ತಿಗಳನ್ನು ದಮನ ಮಾಡುವುದು ಎಂದರೆ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ತತ್ವಕ್ಕೆ ತಿಲಾಂಜಲಿ ಇಡುವುದೇ? ಮಾನವ ಸರಪಳಿಯಿಂದ ಪ್ರಜಾಪ್ರಭುತ್ವ ಉಳಿಯುತ್ತದೆಯೇ?

ಜನರ ತೆರಿಗೆ ಹಣದ ಪೋಲು ಪ್ರಜಾಪ್ರಭುತ್ವಕ್ಕೆ ಭೂಷಣವೇ? ಮೊದಲು ಸ್ಥಳೀಯ ಸಂಸ್ಥೆ ಚುನಾವಣೆ ಘೋಷಿಸಿ. ನೈಜ ಪ್ರಜಾಪ್ರಭುತ್ವದ ಸರಪಳಿಯನ್ನು ಗಟ್ಟಿಗೊಳಿಸಿ ಎಂದು ಹೇಳಿದ್ದಾರೆ.

**ಸರ್ಕಾರದ ವಿರುದ್ಧ ವಾಗ್ದಾಳಿ**

## ಮುನಿರತ್ನ ಧ್ವನಿ ನಿಜವಾದರೆ ಕ್ರಮ ಜರುಗಲಿ

• ಉದಯವಾಹಿನಿ, ಬೆಂಗಳೂರು



ಗುತ್ತಿಗೆದಾರನಿಗೆ ಜೀವ ಬೆದರಿಕೆ ಹಾಗೂ ಜಾತಿ ನಿಂದನೆ ಮಾಡಿದ ವಿಚಾರವಾಗಿ ಮುನಿರತ್ನ ವಿರುದ್ಧ ಕೇಳಿ ಬಂದಿರುವ ಆರೋಪದ ಕುರಿತಾಗಿ, ಬೆಂಗಳೂರಿನಲ್ಲಿ ಆದಿಚುಂಚನಗಿರಿಯ ಮಹಾಸಂಸ್ಥಾನದ ಪೀಠಾಧ್ಯಕ್ಷರಾದಂತಹ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಪ್ರತಿಕ್ರಿಯೆ ನೀಡಿದ್ದು, ಒಂದು ವೇಳೆ ಆಡಿಯೋದಲ್ಲಿ ಮುನಿರತ್ನ ಧ್ವನಿ ನಿಜವಾಗಿದ್ದರೆ, ಆತನ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಉರಿ ಗೌಡ ನಂಜೇಗೌಡ ವಿಚಾರವಾಗಿ ಕರೆದು ಮುನಿರತ್ನಗೆ ಬುದ್ಧಿ ಹೇಳಿದ್ದೆ. ಆಗ ಮಾಜಿ ಸಚಿವ ಮುನಿರತ್ನ ಸ್ಟಾಪ್ ಮಾಡಿದ್ದರು. ಈ ವಿಚಾರಕ್ಕೆ ಸಂಬಂಧಿಸಿದಂತೆ ಧ್ವನಿ ಮುದ್ರಣದಲ್ಲಿ ನಿಜ ಆಯ್ತು ಅಂದರೆ. ಮಾತನಾಡಿರೋವರನ್ನು ಕ್ಷಮಿಸಲು ಆಗುವುದಿಲ್ಲ. ಯಾರೇ ಮಾತಾಡಿದರೂ ನಾಗರಿಕ ಸಮಾಜ ಒಪ್ಪುವುದು ಖಂಡನೀಯ ಎಂದರು.

ಆಧುನಿಕತೆ ಬೆಳೆದಿದೆ ಅಂತ ನಮ್ಮ ಸಂಸ್ಕೃತಿಯನ್ನು ಮರೆಯಬಾರದು. ಕೇವಲ ಒಕ್ಕಲಿಗ ದಲಿತರಿಗೆ ಮಾತಾಡಿದ್ದಾರೆ ಅನ್ನೋದು ಎಷ್ಟು ಮುಖ್ಯವೋ, ಅದೇ ರೀತಿ ಸಮಾಜದಲ್ಲಿನ ಎಲ್ಲಾ ಸಮುದಾಯಗಳು ಕೂಡ ಅಷ್ಟೇ ಮುಖ್ಯವಾಗಿವೆ.

ಪ್ರತಿಯೊಂದು ಸಮುದಾಯವನ್ನು ನಮ್ಮ ಸಂವಿಧಾನ ಒಪ್ಪಿಕೊಂಡಿದೆ. ನಮ್ಮ ದೇಶದ ಅಸ್ಮಿತೆ ತಾಯಂದಿರು, ದೇಶವನ್ನು ಭಾರತ ಮಾತೆ ಅಂತೇವೆ ಎಂದು ತಿಳಿಸಿದರು.

# ನೂರು ದಿನ ಪೂರೈಸಿದ ಮೋದಿ ಸರ್ಕಾರಕ್ಕೆ ನೂರು ಸವಾಲುಗಳು

## 'ಐತಿಹಾಸಿಕ' ಮೂರನೇ ಅವಧಿಗೆ ಅಧಿಕಾರಕ್ಕೆ ಬಂದ ನಂತರ, ತನ್ನ ಮೊದಲ 100 ದಿನಗಳನ್ನು ಪೂರೈಸಿದ ಎನ್‌ಡಿಎ ಸರ್ಕಾರ


• ಉದಯವಾಹಿನಿ, ನವದೆಹಲಿ

ನರೇಂದ್ರ ಮೋದಿಯವರ ಜನ್ಮದಿನ. 74ನೇ ವಸಂತಕ್ಕೆ ಕಾಲಿಡುತ್ತಿರುವ ಮೋದಿಯವರಿಗೆ ದೇಶದ ರಾಜಕೀಯ ನಾಯಕರು, ಗಣ್ಯರು, ಸೆಲೆಬ್ರಿಟಿಗಳು ಜನ್ಮದಿನದ ಶುಭಾಶಯ ಕೋರಿದ್ದಾರೆ.

ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ 'ಐತಿಹಾಸಿಕ' ಮೂರನೇ ಅವಧಿಗೆ ಅಧಿಕಾರಕ್ಕೆ ಬಂದ ನಂತರ, ತನ್ನ ಮೊದಲ 100 ದಿನಗಳನ್ನು ಪೂರೈಸಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮೂಲಸೌಕರ್ಯ, ರೈತರು, ಮಧ್ಯಮ ವರ್ಗ, ಮಹಿಳೆಯರು, ಆದಿವಾಸಿಗಳು ಮತ್ತು ಅಲ್ಪಸಂಖ್ಯಾತರನ್ನು ಗಮನದಲ್ಲಿಟ್ಟುಕೊಂಡು 15 ಲಕ್ಷ ಕೋಟಿ ರೂಪಾಯಿಗಳ ಯೋಜನೆಗಳನ್ನು ಘೋಷಿಸಿದೆ.

15 ಲಕ್ಷ ಕೋಟಿ ರೂಪಾಯಿಗಳ ಯೋಜನೆಗಳನ್ನು ಘೋಷಿಸಿದ ಪ್ರಧಾನಿ ಮೋದಿಯವರು, ದೇಶವನ್ನು ಮುನ್ನಡೆಸುವ ಮಾತುಗಳನ್ನು ಆಡುವ ಬದಲು; ಮೂರನೆಯ ಅವಧಿಯ ಮೊದಲ 100 ದಿನಗಳಲ್ಲಿ ವಿರೋಧ ಪಕ್ಷಗಳು ತಮ್ಮನ್ನು ಅವಮಾನಿಸಿದವು. ಗೇಲಿ ಮಾಡಿದವು ಹಾಗೂ ಅಣಕಿಸಿದವು ಎಂದು ದೂರಿದ್ದಾರೆ. ಮುಂದುವರೆದು, ವಿರೋಧ ಪಕ್ಷಗಳು ಮುಸ್ಲಿಮರ ತುಷ್ಟೀಕರಣಕ್ಕಾಗಿ ಯಾವ ಮಿತಿಯನ್ನು ಬೇಕಿದ್ದರೂ ಮೀರಬಲ್ಲರು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಕಾರಾತ್ಮಕತೆ ತುಂಬಿದ ಕೆಲವರು ಭಾರತದ ಏಕತೆಯನ್ನು ಗುರಿಯಾಗಿಸಿಕೊಂಡಿದ್ದಾರೆ. ದೇಶವನ್ನು ಒಡೆಯುವ ಉದ್ದೇಶ ಹೊಂದಿದ್ದಾರೆ. ದ್ವೇಷ ತುಂಬಿಕೊಂಡಿರುವ ವ್ಯಕ್ತಿಗಳು ಭಾರತಕ್ಕೆ ಕೆಟ್ಟ ಹೆಸರು ತರುವ ಯಾವ ಅವಕಾಶವನ್ನೂ ಬಿಡುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಪ್ರಧಾನಿ ಮೋದಿಯವರ ಮಾತುಗಳನ್ನು ಕೇಳುತ್ತಿದ್ದರೆ, ದೇಶವನ್ನು ಒಡೆಯುವ, ದೇಶಕ್ಕೆ ಕೆಟ್ಟ ಹೆಸರು ತರುವ ವ್ಯಕ್ತಿಗಳ ಬಗ್ಗೆ ಸಿಟ್ಟು, ಆಕ್ರೋಶ ವ್ಯಕ್ತವಾಗುವುದು ಸಹಜ. ಅವರ ಉದ್ದೇಶವೂ ಅದೇ. ಮೋದಿಯವರ ಮನಸ್ಸಿನಲ್ಲಿರುವುದು, ಗುರಿಯಾಗಿರಿಸಿಕೊಂಡಿರುವುದು ವಿರೋಧ ಪಕ್ಷದ ನಾಯಕ, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿಯನ್ನು ದೂರದ ಅಮೆರಿಕದಲ್ಲಿ ಮೀಸಲಾತಿ ಕುರಿತು ಮಾತನಾಡಿದ ರಾಹುಲ್ ಗಾಂಧಿಯ ವಿಡಿಯೋ ತುಣುಕನ್ನು ತಮಗೆ ಬೇಕಾದಂತೆ ತಿರುಚಿ, ಖಳನಾಯಕನನ್ನಾಗಿ ಚಿತ್ರಿಸಿ, ಬಿಜೆಪಿ ಐಟಿ ಸೆಲ್ ಭಕ್ತರು ಇಡೀ ಪ್ರಪಂಚಕ್ಕೆ ಕ್ಷಣಮಾತ್ರದಲ್ಲಿ ಹಂಚಿದ್ದರು. ಭಕ್ತರ ಕಿಡಿಗೇಡಿ ಕೃತ್ಯವನ್ನು ಖಂಡಿಸಿ ತಿರಸ್ಕರಿಸಬೇಕಾದ ಪ್ರಧಾನಿ, ಪದವಿಯ ಘನತೆಯನ್ನು ಮರೆತು ಆ ಸುಳ್ಳಿನ ವಿಡಿಯೋ ತುಣುಕನ್ನೇ



ಗುರಾಣಿಯನ್ನಾಗಿ ಮಾಡಿಕೊಂಡರು. ದೇಶ ಒಡೆಯುವ ದುಷ್ಟರ ಪಟ್ಟಿಗೆ ರಾಹುಲ್ ಸೇರಿಸಿ ಜನರಲ್ಲಿ ದ್ವೇಷ ಬಿತ್ತಿದರು.

ಗಿಡವಾಗಿ ಬಗ್ಗದು ಮರವಾಗಿ ಬಗೀತೆ ಎನ್ನುವಂತೆ, ಮೂರನೇ ಅವಧಿಯಲ್ಲೂ ಮೋದಿಯವರು ಮತ್ತದೇ ವರಸೆಗಳ ಮೊರೆ ಹೋಗಿದ್ದಾರೆ. ಬಹುಮತವಿದೆ ಎಂಬ ಭಂಡ ಧೈರ್ಯದಲ್ಲಿ ಹಲವಾರು ಕಾಯ್ದೆ ಕಾನೂನುಗಳನ್ನು ಜಾರಿಗೆ ತರಲು ತವಕಿಸಿದರು. ಆದರೆ ಮಿತ್ರಪಕ್ಷಗಳೇ ಅಪಸ್ವರ ಎತ್ತಿದಾಗ ಹಿಂತೆಗೆದುಕೊಂಡು ಅವಮಾನಕ್ಕೊಳಗಾದರು.

ಅದಷ್ಟೇ ಅಲ್ಲ ದತ್ತಾಂಶ ಸಂರಕ್ಷಣಾ ಮಸೂದೆ, ಬ್ರಾಡ್‌ಕಾಸ್ಟಿಂಗ್ (ನಿಯಂತ್ರಣ) ಮಸೂದೆ, ಲ್ಯಾಟರಲ್ ಎಂಟ್ರಿ, ವಕ್ಸ್(ತಿದ್ದುಪಡಿ) ಮಸೂದೆಯನ್ನು ಲೋಕಸಭೆಯಲ್ಲಿ ಮಂಡಿಸಿ, ವಿರೋಧ ಪಕ್ಷಗಳ ತೀವ್ರ ದಾಳಿಗೆ ಬೆಚ್ಚಿ ಹಿಂತೆಗೆದುಕೊಳ್ಳುವಂತಹ ಹಿನ್ನಡೆಯನ್ನೂ ಅನುಭವಿಸಿದರು. ಇನ್ನು ನೂರು ದಿನಗಳಲ್ಲಿ 38 ರೈಲುಗಳ ಅಪಘಾತವಾಗಿ 21 ಪ್ರಯಾಣಿಕರ ಪ್ರಾಣಪಕ್ಷಿ ಹಾರಿಹೋಗಿದೆ. ಭಯೋತ್ಪಾದನೆಗೆ 29 ಸೈನಿಕರು ಅಸುನೀಗಿದ್ದಾರೆ. ನೀಟ್-ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಲಕ್ಷಾಂತರ ಯುವಜನತೆಯ ಭವಿಷ್ಯ ಬರಿದಾಗಿದೆ. ದಲಿತರು ಮತ್ತು ಅಲ್ಪಸಂಖ್ಯಾತರ ಮೇಲಿನ ದಾಳಿ ಹೆಚ್ಚಾಗಿದೆ. ಮಹಿಳೆಯರ ಮೇಲಿನ ದೌರ್ಜನ್ಯ ಮಿತಿಮೀರಿದೆ. ಅತ್ಯಾಚಾರಗಳು ಅತಿಯಾಗಿವೆ. ನಿರುದ್ಯೋಗ, ಹಣದುಬ್ಬರ, ಬೆಲೆ ಏರಿಕೆ ನಿಯಂತ್ರಣಕ್ಕೆ ಸಿಗದಂತಾಗಿದೆ. ಡೀಸೆಲ್, ಪೆಟ್ರೋಲ್, ಗ್ಯಾಸ್ ಬೆಲೆ ಗಗನಕ್ಕೇರಿದೆ. ಟೋಲ್ ಹೆಚ್ಚಳಕ್ಕೆ ತಡೆಯೇ ಇಲ್ಲದಂತಾಗಿದೆ.

ಇದರ ನಡುವೆ ವಿಮಾನ ನಿಲ್ದಾಣಗಳ ಛಾವಣಿಗಳು ಕುಸಿದು ಬಿದ್ದವು. ಹದಿನೈದು ಸೇತುವೆಗಳು ತುಂಡಾದವು. ಪ್ರತಿಷ್ಠಿತರ ಪ್ರತಿಮೆಗಳು ಉರುಳಿದವು. ರಸ್ತೆಗಳು ಬಿರುಕುಬಿಟ್ಟವು. ಸುರಂಗ ಮಾರ್ಗ ಕುಸಿಯಿತು. ಇದಲ್ಲದೆ ಮಣಿಪುರ ಮತ್ತೆ ಹತ್ತಿ ಉರಿಯಿತು. ಪ್ರಧಾನಿ ಮೋದಿಯಿಂದ ಉತ್ತರವೂ ಇಲ್ಲ ಪರಿಹಾರವೂ ಇಲ್ಲ.

### ಇದು ಪ್ರಧಾನಿ ಮೋದಿಯವರ 100 ದಿನಗಳ ಮಹತ್ ಸಾಧನೆ

ಮೋದಿಯವರು ಕಳೆದ ಹತ್ತು ವರ್ಷಗಳಲ್ಲಿ ನಿರಂತರವಾಗಿ ಚಾಲ್ತಿಯಲ್ಲಿಟ್ಟಿದ್ದು ಈ ಫೇಕ್ ಫ್ಯಾಕ್ಟರಿಯನ್ನೇ. ಈ ಮೂರನೇ ಅವಧಿಯ 100 ದಿನಗಳಲ್ಲಿ ಈ ಫ್ಯಾಕ್ಟರಿಗೆ ಬೀಗ ಬಿದ್ದಿತ್ತು. ನೂರನೇ ದಿನವಾಗುತ್ತಿದ್ದಂತೆ ಮತ್ತೆ ಚಾಲ್ತಿಗೆ ಬಂದಿದೆ. ಮೂರನೇ ಅವಧಿಗೆ ಪ್ರಧಾನಿಯಾದ ಮೋದಿಯವರಲ್ಲಿ ಕೊಂಚ ಮಾಗಿದ ನಡೆ ಕಾಣತೊಡಗಿತ್ತು. ದೇಶದ ಪ್ರಜ್ಞಾವಂತ ಮತದಾರರು ಪ್ರಜಾಪ್ರಭುತ್ವದ ಪಾಠ ಕಲಿಸಿದ್ದು ಅವರ ನಡೆ ಮತ್ತು ನುಡಿಯಲ್ಲಿ ಕಾಣುತ್ತಿತ್ತು. ಮೋದಿಯವರ ಅಕ್ಕ-ಪಕ್ಕ ಮಿತ್ರ ಪಕ್ಷಗಳ ಇಕ್ಕಳ ಇರುವಂತೆ ನೋಡಿಕೊಂಡಿದ್ದು, ಆಡಳಿತದಲ್ಲಿ ಬದಲಾವಣೆ ಬರಬಹುದೆಂಬ ನಿರೀಕ್ಷೆ ಹುಟ್ಟಿಸಿತ್ತು. ದೇಶದ ಜನಕ್ಕೆ ಈ ಮೂರನೇ ಅವಧಿಯಲ್ಲಾದರೂ ದೇಶ ಬದಲಾಗಬಹುದೆಂಬ ಆಸೆ ಇತ್ತು.

| ಈ ದಿನದ ದರ | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,489/Gram24ct ₹6,865/Gram22ct | ಬೆಳ್ಳಿ: ₹92.00/Gram |
|---|---|---|---|---|

# ಪಡಿತರದಾರರಿಗೆ ರಾಜ್ಯ ಸರ್ಕಾರದಿಂದ ಸಿಹಿಸುದ್ದಿ

## ರಾಜ್ಯದೆಲ್ಲೆಡೆ ಪಡಿತರದಲ್ಲಿ ಅಕ್ಕಿ ಜೊತೆಗೆ ತೊಗರಿ ಬೇಳೆ ವಿತರಿಸಬೇಕು ಎಂದು ಬೇಡಿಕೆ ಕೇಳಿ ಬಂದಿದ್ದು

• **ಉದಯವಾಹಿನಿ ಬೆಂಗಳೂರು**

ರಾಜ್ಯ ಸರ್ಕಾರವು ಪಡಿತರದಾರರಿಗೆ ಶೀಘ್ರದಲ್ಲೇ ಸಿಹಿ ಸುದ್ದಿ ನೀಡಲು ಮುಂದಾಗಿದೆ. ರಾಜ್ಯದೆಲ್ಲೆಡೆ ಪಡಿತರದಲ್ಲಿ ಅಕ್ಕಿ ಜೊತೆಗೆ ತೊಗರಿ ಬೇಳೆ ವಿತರಿಸಬೇಕು ಎಂದು ಬೇಡಿಕೆ ಕೇಳಿ ಬಂದಿದ್ದು, ಈ ಬಗ್ಗೆ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿದ್ದಾರೆ. ಕಲಬುರಗಿಯಲ್ಲಿ ಮಾತನಾಡಿರುವ ಸಚಿವ ಕೆ.ಎಚ್.ಮುನಿಯಪ್ಪ, ಪಡಿತರದಲ್ಲಿ ತೊಗರಿ ಬೇಳೆ ವಿತರಿಸ ಬೇಕೆಂದು ಬೇಡಿಕೆ ಬಂದಿರುವ ಹಿನ್ನೆಲೆ ಈ ಬಗ್ಗೆ ಸರ್ಕಾರ ಚಿಂತನೆ ನಡೆಸಲಿದೆ ಎಂದು ಹೇಳಿದ್ದಾರೆ.

ಇದು ಇಂದಿನ ಬೇಡಿಕೆಯಲ್ಲ, ತೊಗರಿ ಬೇಳೆ ಬೇಕೆಂದು ಬಹಳ ದಿನಗಳಿಂದಲೂ ಬೇಡಿಕೆ ಇದೆ.

ಹಾಗಾಗಿ ಪಡಿತರದಲ್ಲಿ ತೊಗರಿ ಸೇರ್ಪಡೆಯಾದರೆ, ರೈತರು ಗ್ರಾಹಕರಿಬ್ಬರಿಗೂ ತುಂಬಾ ಅನುಕೂಲವಾಗಲಿದೆ. ಇದರಿಂದ ಹಾಸ್ಟೆಲ್‌ಗಳಿಗೂ ಬೇಳೆ ಪೂರೈಸಲು ಸಹಾಯಕವಾಗಲಿದೆ ಎಂದಿದ್ದಾರೆ.

ಇದೇ ವೇಳೆ ಮಾತನಾಡಿರುವ ಸಚಿವ ಕೆ.ಎಚ್.ಮುನಿಯಪ್ಪ,


ಉದಯವಾಹಿನಿ ಚಿತ್ರ

**ರೈತರು ಗ್ರಾಹಕರಿಬ್ಬರಿಗೂ ತುಂಬಾ ಅನುಕೂಲ**

ರಾಜ್ಯದಲ್ಲಿ ಯಾವುದೇ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುತ್ತಿಲ್ಲ. ಹೊಸದಾಗಿ ಬಿಪಿಎಲ್ ಕಾರ್ಡ್ ಪಡೆಯಲು ಕೂಡ ಯಾವ ನಿರ್ಬಂಧವೂ ಇಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಕಳೆದ ವರ್ಷ ಅನ್ನಭಾಗ್ಯ ಯೋಜನೆ ಜಾರಿಯಾದಾಗ ಪಡಿತರದಾರರಿಗೆ ತಲಾ ಹತ್ತು ಕೆ.ಜಿ ಅಕ್ಕಿ ಘೋಷಿಸುವುದಾಗಿ ರಾಜ್ಯ ಸರ್ಕಾರ ಘೋಷಣೆ ಮಾಡಿತ್ತು. ಆದರೆ, ರಾಜ್ಯದಿಂದಲೇ ಹತ್ತೂ

**ರಾಜ್ಯಕ್ಕೆ ಅಗತ್ಯವಿರುವ ಅಕ್ಕಿ ಪೂರೈಸುವ ಭರವಸೆಯನ್ನು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನೀಡಿದ್ದಾರೆ. ಈ ಸಂಬಂಧ ಮುಂದಿನ ಹಂತದಲ್ಲಿ ಕೇಂದ್ರಕ್ಕೆ ಪ್ರಸ್ತಾವನೆಯನ್ನೂ ಕಳುಹಿಸಲಾಗುವುದು. ಪ್ರತಿ ತಿಂಗಳಿಗೆ 20 ಸಾವಿರ ಮೆಟ್ರಿಕ್ ಟನ್ ಅಕ್ಕಿಯ ಅಗತ್ಯವಿದೆ. ರಾಜ್ಯದ ಜನರು ಹಣದ ಬದಲು ಬೇಳೆ ಹಾಗೂ ಅಕ್ಕಿಗೆ ಮನವಿ ಮಾಡಿದ್ದಾರೆ.**
**ಸಚಿವ ಕೆ.ಎಚ್.ಮುನಿಯಪ್ಪ**

ಕೆ.ಜಿ ಅಕ್ಕಿ ನೀಡಲು ಅಗತ್ಯ ದಾಸ್ತಾನು ಇರಲಿಲ್ಲ. ಹೀಗಾಗಿ ಅಕ್ಕಿ ನೀಡುವಂತೆ ರಾಜ್ಯ ಸರ್ಕಾರವು ಕೇಂದ್ರದ ಮೊರೆ ಹೋಗಿತ್ತು. ಇದಕ್ಕೆ ಹೆಚ್ಚುವರಿ ಹಣ ನೀಡುವುದಾಗಿಯೂ ಕಾಂಗ್ರೆಸ್ ಸರ್ಕಾರ ಹೇಳಿತ್ತು. ಆದರೆ, ಕೇಂದ್ರ ಸರ್ಕಾರವು ಅಕ್ಕಿ ನೀಡಲು ಸಾಧ್ಯವಿಲ್ಲ ಎಂದು ಹೇಳಿತ್ತು. ಇದಾದ ಬಳಿಕ ಕೇವಲ ಐದು ಕೆ.ಜಿ

**ಅಕ್ಕಿಯೂ ಸಿಗಲಿದೆ: ಇಲ್ಲಿವರೆಗೆ ಅನ್ನಭಾಗ್ಯ ಯೋಜನೆಯಡಿ ಕೇವಲ ಐದು ಕೆ.ಜಿ ಅಕ್ಕಿಯನ್ನು ರಾಜ್ಯ ಸರ್ಕಾರ ವಿತರಿಸುತ್ತಿತ್ತು. ಬಾಕಿ ಐದು ಕೆ.ಜಿ.ಬದಲಿಗೆ ಹಣವನ್ನು ಪಡಿತರದಾರರ ಖಾತೆಗೆ ಜಮೆ ಮಾಡುತ್ತಿತ್ತು. ಈಗ ಹಣದ ಬದಲಿಗೆ ಅಕ್ಕಿಯನ್ನೇ ನೀಡುವುದಾಗಿ ಆಹಾರ ಸಚಿವರು ಹೇಳಿದ್ದಾರೆ.**

ಅಕ್ಕಿಯನ್ನಷ್ಟೇ ರಾಜ್ಯ ಸರ್ಕಾರ ನೀಡಲು ನಿರ್ಧರಿಸಿ, ಬಾಕಿ ಅಕ್ಕಿಗೆ ಹಣ ನೀಡುವ ಘೋಷಿಸಿತ್ತು. ಇನ್ನು ಇತ್ತೀಚೆಗೆ ಹೆಚ್ಚುವರಿ ಅಕ್ಕಿಗಾಗಿ ರಾಜ್ಯದವರೇ ಆದ ಕೇಂದ್ರ ಆಹಾರ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ಸಚಿವ ಕೆ.ಎಚ್.ಮುನಿಯಪ್ಪ ಭೇಟಿಯಾಗಿದ್ದರು. ಈ ವೇಳೆ ರಾಜ್ಯಕ್ಕೆ ಅನ್ನಭಾಗ್ಯ ಯೋಜನೆಯಡಿ ಹೆಚ್ಚು ಅಕ್ಕಿ ನೀಡಲು ಪೂರೈಕೆ ಮಾಡುವಂತೆ ಮನವಿ ಮಾಡಿದ್ದರು. ಆಗ ಕೇಂದ್ರದಿಂದ ಅಕ್ಕಿ ಪೂರೈಸುವ ಭರವಸೆಯನ್ನು ನೀಡಿದ್ದಾರೆ ಎಂದು ಹೇಳಲಾಗಿತ್ತು.



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

# ತಾನುಂಟು ಜಗಮುಂಟು

ನಿಜಗುಣರ ಪರಮಾನುಭವ ಬೋಧೆಯ ಮಾತು. ಜೀವನಿಗೆ ತಾನು ಹುಟ್ಟುವ ಮೊದಲು ಈ ಜಗದ ಅರಿವಿಲ್ಲ. ಹುಟ್ಟಿದ ಬಳಿಕ ಈ ಜಗದ ಅರಿವು ಒಡನಾಟ. ನಾನು ನನ್ನದೆಂಬ ಬಡಿದಾಟ. ಜೀವನು ಈ ಸ್ಥೂಲ ದೇಹವನ್ನು ತೊರೆದ ಬಳಿಕವೂ ಈ ಜಗದ ಅರಿವು ಸಂಬಂಧ ಸಂಪರ್ಕವಿಲ್ಲ. ಆದ್ದರಿಂದ ತಾನಿದ್ದರೆ ಈ ಜಗತ್ತು, ತಾನಿಲ್ಲದಿದ್ದರೆ ಈ ಜಗತ್ತು ಇಲ್ಲ ಶೂನ್ಯ. ಒಬ್ಬ ಸತ್ತ ಮಾತ್ರಕ್ಕೆ ಜಗತ್ತು ಸುಳ್ಳು ಹೇಗೆ? ಉಳಿದವರಿಗೆ ಜಗತ್ತು ಇದ್ದೇ ಇರುವುದಲ್ಲ ಎಂಬ ಪ್ರಶ್ನೆ ಸಹಜ. ಆದರೆ ಇಲ್ಲಿ ಯಾವ ವ್ಯಕ್ತಿಗೆ ಉಪದೇಶ ನೀಡಲಾಗುತ್ತಿದೆಯೋ ಆ ವ್ಯಕ್ತಿಗೆ ಸುಳ್ಳು ಎಂದರ್ಥ. ಆ ವ್ಯಕ್ತಿ ಯಾರು ಬೇಕಾದರೂ ಆಗಬಹುದು. ನಮಗಾಗಿ ನಮ್ಮ ಬದುಕು. ನಾವೇ ಸ್ಥಿರ ಅಲ್ಲವಾದ ಬಳಿಕ ಜಗತ್ತು ನಮ್ಮೊಂದಿಗೆ ಸ್ಥಿರ ಎಂದು ಹೇಳಲಾಗದು. ಆದ್ದರಿಂದ ಜಗತ್ತು ಮಿಥ್ಯಾ ಎಂಬ ಅಭಿಪ್ರಾಯ. ಇನ್ನು ದೇಹಸಹಿತನಾದಾಗ ಜಗತ್ತನ್ನು ಕಾಣುವ ಜೀವ ದೃಕ್ ನೋಡುವವ ಎನಿಸುವನು. ಜಗತ್ತು ಜೀವನಿಗೆ ದೃಶ್ಯ ಎನಿಸುವುದು. ತನ್ನ ಹಾಗೂ ಜಗದ ಮೂಲ ಸ್ವರೂಪವನ್ನು ತಿಳಿದ ಬಳಿಕ ಎರಡೂ ಬ್ರಹ್ಮ ಪರಮಾತ್ಮನ ಸ್ವರೂಪವೇ ಆಗಿರುವುದರಿಂದ ದೃಕ್ ದೃಶ್ಯ ಎಂಬ ಭೇದ ಅಡಗಿ ತನಗಿಂತ ಜಗತ್ತು ಬೇರೆ ಎಂಬುದಾಗಿ ತೋರದು. ತಾನು ಜಗತ್ತು ಭೇದ ಅಡಗಿ ಎರಡೂ ಶೂನ್ಯ ಎನಿಸುವವು.

# ಗರುಡ ಪುರಾಣ (ಧಾರ್ಮಿಕ ಪ್ರವಚನ)

• **ಉದಯವಾಹಿನಿ ಬೆಂಗಳೂರು**



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಸೆಪ್ಟೆಂಬರ್ 19 ರಿಂದ ಆಗಸ್ಟ್ 2ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಶ್ರೀ ಚಿಮ್ಮಲಗಿ ಆಚಾರ್ಯರಿಂದ ಗರುಡ ಪುರಾಣ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಬೆಂಗಳೂರು-560003

# ಶಾಲಾವಾಹನ ಚಾಲಕನ ಮೇಲೆ ಹಲ್ಲೆ ಮಾಡಿದ ಆರೋಪಿಗಳಿಗಾಗಿ ಪೊಲೀಸರ ಹುಡುಕಾಟ

• **ಉದಯವಾಹಿನಿ ಬೆಂಗಳೂರು**

ಶಾಲಾ ವಾಹನವನ್ನು ಅಡ್ಡಗಟ್ಟಿ ಚಾಲಕನ ಮೇಲೆ ಹಲ್ಲೆ ನಡೆಸಿ, ನಿಂದಿಸಿ ಪರಾರಿಯಾಗಿರುವ ಆರೋಪಿಗಳ ಪತ್ತೆಗೆ ಹೆಬ್ಬಗೋಡಿ ಪೊಲೀಸರು ಬಲೆ ಬೀಸಿದ್ದಾರೆ. ನಿನ್ನೆ ಮಧ್ಯಾಹ್ನ 3 ಗಂಟೆ ಸಂದರ್ಭದಲ್ಲಿ ಹುಲಿಮಂಗಲ ರಸ್ತೆಯಲ್ಲಿ ಶಾಲಾ ಮಕ್ಕಳನ್ನು ಕರೆದುಕೊಂಡು ಹೋಗುತ್ತಿದ್ದ ವಾಹನದ ಹಿಂದೆ ಸ್ಕಾರ್ಪಿಯೋ ವಾಹನ ಬರುತ್ತಿದ್ದು, ಮುಂದೆ ಹೋಗುವುದಕ್ಕೆ ರಸ್ತೆ ಬಿಡಲಿಲ್ಲವೆಂದು ಅದರಲ್ಲಿದ್ದವರು ಬಸ್ ಅಡ್ಡಗಟ್ಟಿ ಚಾಲಕನ ಜೊತೆ ಜಗಳ ತೆಗೆದು ಹಲ್ಲೆ ಮಾಡಿ ನಿಂದಿಸಿ ವಾಹನದ ಕಿಟಕಿ ಗಾಜುಗಳನ್ನು ಹೊಡೆದು ದಾಂಧಲೆ ನಡೆಸಿ ಪರಾರಿಯಾಗಿದ್ದಾರೆ. ಇದರಿಂದ ಶಾಲಾ ವಾಹನದಲ್ಲಿದ್ದ ಮಕ್ಕಳು ಗಾಬರಿಗೊಂಡು ತಮ ಪೋಷಕರಿಗೆ ತಿಳಿಸಿದ್ದರು. ನಂತರ ಇಡೀ ಘಟನೆ ಸಾಮಾಜಿಕ ತಾಣದಲ್ಲಿ ವೈರಲ್ ಆಗಿದ್ದು, ಹೆಬ್ಬಗೋಡಿ ಠಾಣೆ ಪೊಲೀಸರು ಇದನ್ನು ಗಂಭೀರವಾಗಿ ಪರಿಗಣಿಸಿ ಪ್ರಕರಣ ದಾಖಲಿಸಿಕೊಂಡು ಸ್ಕಾರ್ಪಿಯೋ ವಾಹನವನ್ನು ಪತ್ತೆ ಹಚ್ಚಿದ್ದಾರೆ. ಸದ್ಯ ಪರಾರಿಯಾಗಿರುವ ಆರೋಪಿಗಳ ಪತ್ತೆಗೆ ಬಲೆ ಬೀಸಲಾಗಿದೆ.

# ಚಿರತೆ ದಾಳಿಗೆ 32 ಕುರಿಗಳು ಬಲಿ

• **ಉದಯವಾಹಿನಿ ಬೆಂಗಳೂರು**

ಒಂದೆಡೆ ರಾಜ್ಯ ರಾಜಧಾನಿ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಬಳಿ ಚಿರತೆ ಪ್ರತ್ಯಕ್ಷವಾಗಿದ್ದು, ಆತಂಕಕ್ಕೆ ಕಾರಣವಾಗಿದ್ದರೆ, ಮತ್ತೊಂದೆಡೆ ತುಮಕೂರಿನಲ್ಲಿ ಚಿರತೆಗಳ ದಾಳಿಗೆ 32 ಕುರಿಗಳು ಬಲಿಯಾಗಿರುವ ಘಟನೆ ನಡೆದಿದೆ. ತುಮಕೂರಿನ ದೊಡ್ಡಹೊಸಹಳ್ಳಿಯಲ್ಲಿ ಕುರಿದೊಡ್ಡಿಯ ಮೇಲೆ ಚಿರತೆಗಳು ದಾಳಿ ನಡೆಸಿವೆ.

ಬರೊಬ್ಬರಿ 32 ಕುರಿಗಳು ಚಿರತೆ ದಾಳಿಗೆ ಸಾವನ್ನಪ್ಪಿವೆ. ಜನರು ಬರುತ್ತಿದ್ದಂತೆ 7 ಕುರಿಗಳನ್ನು ಚಿರತೆಗಳು ಹೊತ್ತೊಯ್ದಿವೆ. ಕುರಿದೊಡ್ಡಿಯ ಮಾಲೀಕರು, ಗ್ರಾಮಸ್ಥರು ಈ ಬಗ್ಗೆ ಮಾಹಿತಿ ನೀಡಿದ್ದು, 5 ಚಿರತೆಗಳು ಕುರಿ ದೊಡ್ಡಿಯ ಮೇಲೆ ದಾಳಿ ನಡೆಸಿದ್ದು, 32 ಕುರಿಗಳನ್ನು ಬಲಿಪಡೆದಿವೆ. ಶಬ್ಧ ಕೇಳುತ್ತಿದ್ದಂತೆ ಜನರು ಕುರಿದೊಡ್ಡಿ ಬಳಿ ಬರುತ್ತಿದ್ದಂತೆ ಚಿರತೆಗಳು 7 ಕುರಿಗಳ ಸಮೇತ ಸ್ಥಳದಿಂದ ಕಾಲ್ಕಿತ್ತಿವೆ. ಅರಣ್ಯ ಇಲಾಖೆ ಸಿಬ್ಬಂದಿಗಳು ಚಿರತೆಗಳ ಸೆರೆ ಹಿಡಿಯಬೇಕು. ಗ್ರಾಮಸ್ಥರು, ಜನ-ಜಾನುವಾರುಗಳು ಜೀವ ಭಯದಲ್ಲಿ ಕಾಲಕಳೆಯುವಂತಾಗಿವೆ ಎಂದು ಅಳಲು ತೋಡಿಕೊಂಡಿದ್ದಾರೆ.

# ರಮೇಶ್ ಜಾರಕಿಹೊಳಿ ಹೇಳಿಕೆಗೆ ಬಿ.ವೈ. ವಿಜಯೇಂದ್ರ ತಿರುಗೇಟು

• **ಉದಯವಾಹಿನಿ ಬೆಂಗಳೂರು**

ವಿಜಯೇಂದ್ರ ನಮ್ಮ ನಾಯಕ ಅಲ್ಲ, ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುತ್ತಿಲ್ಲ ಎಂಬ ಮಾಜಿ ಸಚಿವ, ಶಾಸಕ ರಮೇಶ್ ಜಾರಕಿಹೊಳಿ ಹೇಳಿಕೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿ.ವೈ.ವಿಜಯೇಂದ್ರ, ನಾನು ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗಲ್ಲ ಎಂಬ ಕೆಲವರ ಆರೋಪವಿದೆ.ಅದನ್ನು ನಾನು ಒಪ್ಪಲ್ಲ ಎಂದು ಹೇಳಿದರು. ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡೇ ಕೆಲಸ ಮಾಡುತ್ತಿದ್ದೇನೆ. ನನ್ನ ಮುಂದಿನ ಗುರಿ ರಾಜ್ಯದಲ್ಲಿ ಬಿಜೆಪಿಯನ್ನು ಗೆಲ್ಲಿಸುವುದು. ಸ್ಪಷ್ಟ ಬಹುಮತದಿಂದ ಬಿಜೆಪಿ ಗೆಲ್ಲಿಸುವುದೇ ನನ್ನ ಗುರಿ ಎಂದು ಹೇಳಿದರು. ನಾನು ಯಡಿಯೂರಪ್ಪನವರ ಮಗ ಎಂಬ ಹೆಮ್ಮೆ ಇದೆ. ಯಡಿಯೂರಪ್ಪನವರಂತಹ ನಾಯಕ ಹಾಗೂ ಎಲ್ಲಾ ಹಿರಿಯರ ಹೋರಾಟ, ಶ್ರಮದಿಂದಾಗಿಯೇ ಬಿಜೆಪಿ ಇಷ್ಟುದೊಡ್ಡ ಮಟ್ಟದಲ್ಲಿ ಬೆಳೆದು ನಿಂತಿದೆ. ಹಿರಿಯ ನಾಯಕರು ವಿಶ್ವದಿಂದಲೇ ನನಗೆ ಜವಾಬ್ದಾರಿ ನೀಡಿದ್ದಾರೆ. ಎಲ್ಲರನ್ನೂ ವಿಸ್ವಾಸಕ್ಕೆ ಪಡೆದೇ ಪಕ್ಷ ಸಂಘಟನೆ ಮೂಲಕ ರಾಜ್ಯದಲ್ಲಿ ಮತ್ತೊಮ್ಮೆ ಬಿಜೆಪಿಗ್ ಅಧಿಕಾರಕ್ಕೆ ತರಲಾಗುವುದು ಎಂದು ಹೇಳಿದರು.

# ದರ್ಶನ್ ಗ್ಯಾಂಗ್‌ಗೆ ಮತ್ತೆ ಜೈಲೇಗತಿ ಸೆ.30 ರವರೆಗೆ ನ್ಯಾಯಾಂಗ ಬಂಧನ

• **ಉದಯವಾಹಿನಿ ಬೆಂಗಳೂರು**

ನಟ ದರ್ಶನ್ ಗ್ಯಾಂಗ್‌ಗೆ ಮತ್ತೆ ಜೈಲೇ ಗತಿ ಆಗಿದ್ದು, ಸೆ.30 ರವರೆಗೆ ನ್ಯಾಯಾಂಗ ಬಂಧನ ವಿಸ್ತರಣೆ ಮಾಡಿ ಬೆಂಗಳೂರಿನ 24 ನೇ ಎಸಿಎಂಎಂ ಕೋರ್ಟ್ ಆದೇಶ ಹೊರಡಿಸಿದೆ.ಆರೋಪಿಗಳ ನ್ಯಾಯಾಂಗ ಬಂಧನ ಅವಧಿ ಅಂತ್ಯವಾದ ಹಿನ್ನೆಲೆ ಎಲ್ಲಾ 17 ಆರೋಪಿಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ಬೆಂಗಳೂರಿನ 24 ನೇ ಎಸಿಎಂಎಂ ಕೋರ್ಟ್‌ಗೆ ಹಾಜರುಪಡಿಸಿದ್ದರು. ವಿಚಾರಣೆ ನಡೆಸಿದ ಕೋರ್ಟ್ ಸೆ.30 ರವರೆಗೂ ನ್ಯಾಯಾಂಗ ಬಂಧನಕ್ಕೆ ನೀಡಿ ಆದೇಶ ಹೊರಡಿಸಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಗ್ಯಾಂಗ್ ನ್ನು ವಿಡಿಯೋ ಕಾನ್ಪರೆನ್ಸ್ ಮೂಲಕ ಪೊಲೀಸರು ಜಡ್ಜ್ ಮುಂದೆ ಹಾಜರುಪಡಿಸಿದ್ದರು. ನಟ ದರ್ಶನ್ ರನ್ನು ಬಳ್ಳಾರಿ ಜೈಲಿನಿಂದ ವಿಚಾರಣೆಗೆ ಹಾಜರುಪಡಿಸಲಾಗಿತ್ತು.

# ವೃದ್ಧಾಶ್ರಮದ ಹಿರಿಯ ನಾಗರಿಕರ ಜೊತೆಯಲ್ಲಿ ಪ್ರಧಾನಿ ನರೇಂದ್ರಮೋದಿರವರ ಹುಟ್ಟುಹಬ್ಬದ ಅಚರಣೆ

• **ಉದಯವಾಹಿನಿ ರಾಜಾಜಿನಗರ**

ವಿಧಾನಸಭಾ ದಯಾನಂದ ನಗರ ವಾರ್ಡ್ ಬಿಜೆಪಿ ವತಿಯಿಂದ ಪ್ರಧಾನಿ ನರೇಂದ್ರಮೋದಿರವರ ಹುಟ್ಟು ಹಬ್ಬದ ಶುಭಾ ಸಂದರ್ಭದಲ್ಲಿ ಆಶ್ರಯ ಸೇವಾ ಟ್ರಸ್ಟ್ ವೃದ್ದಾಶ್ರಮದಲ್ಲಿ ಹಿರಿಯ ನಾಗರಿಕರ ಜೊತೆಯಲ್ಲಿ ಬಿಬಿಎಂಪಿ ಮಾಜಿ ಸದಸ್ಯರುಗಳಾದ ಎಂ.ಮುನಿರಾಜು ರವರು, ಶ್ರೀಮತಿ ಶಕೀಲ ಮುನಿರಾಜು, ಬಿಜೆಪಿ ಮುಖಂಡರಾದ ಗಿರೀಶ್ ಗೌಡ, ರಾಜಾಜಿನಗರ ವಿಧಾನಸಭಾ ಯುವ ಮೋರ್ಚಾ ಅಧ್ಯಕ್ಷರಾದ ಸಂಜಯ್ ಕುಮಾರ್ ರವರು ಕೇಕ್ ಕಟ್ ಮಾಡಿ ಜನ್ಮ ದಿನಾಚರಣೆ ಆಚರಿಸಿದರು.

ವೃದ್ದಾಶ್ರಮ ಹಿರಿಯ ಮಹಿಳೆಯರಿಗೆ ಸೀರೆಗಳನ್ನು ವಿತರಿಸಲಾಯಿತು. ಎಂ.ಮುನಿರಾಜು ರವರು ಮಾತ ನಾಡಿ ಪ್ರಧಾನಿ ನರೇಂದ್ರಮೋದಿ ರವರು ತಮ್ಮ ಜೀವನವನ್ನು ದೇಶದ ಸುರಕ್ಷತೆ, ಅಭಿವೃದ್ದಿಗಾಗಿ ಮೀಸಲು ಇಟ್ಟಿದ್ದಾರೆ. ಮೂರು ಬಾರಿ ಪ್ರಧಾನಿಯಾಗಿ ಜನರ ಮನಸ್ಸನ್ನ ಗೆದ್ದಿದ್ದಾರೆ. ಉಜ್ವಲ ಯೋಜನೆ ಪ್ರಧಾನಿ ಅವಾಸ್ ಯೋಜನೆ, ಜನಧನ್, ಜನರಿಕ್, ಅಯುಷ್ಮಾನ್ ಭಾರತ್, ಮುದ್ರ ಯೋಜನೆ, ಜಲಶಕ್ತಿ, ವಂದೇ ಭಾರತ್ ರೈಲ್ವೆ ನೂರಾರು ಯೋಜನೆಗಳು ದೇಶದ ಜನರು ಆರ್ಥಿಕವಾಗಿ ಸಬಲರಾಗಿ ಮಾಡುವಲ್ಲಿ ಸಹಕಾರಿಯಾಗಿದೆ. ಪ್ರಧಾನಿ ನರೇಂದ್ರಮೋದಿರವರ


ಉದಯವಾಹಿನಿ ಚಿತ್ರ

ಆಡಳಿತದಲ್ಲಿ ಅಯೋಧ್ಯೆ ಭವ್ಯ ಶ್ರೀರಾಮಮಂದಿರ ನಿರ್ಮಾಣವಾಗಿದೆ. ದಯಾನಂದ ನಗರ ವಾರ್ಡ್ ಮಾಜಿ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನ ಪ್ರಾರಂಭಿಸಲಾಗಿದೆ.

ದೇಶ ಮೊದಲು ಎಂಬ ರಾಷ್ಟ್ರ ಭಕ್ತಿ ಕಲಿಸಿದ ಬಿಜೆಪಿ ಪಕ್ಷದ ಕಾರ್ಯಕರ್ತ ಎಂದರೆ ಹೆಮ್ಮೆ ಪಡುವ ಸಂಗತಿಯಾಗಿದೆ. ವಿಶ್ವದ ಬಲಿಷ್ಠ ಪ್ರಧಾನಿ ನರೇಂದ್ರ ಮೋದಿರವರಿಗೆ ಭವ್ಯ ಭಾರತ ನಿರ್ಮಾಣ ಮಾಡುವಲ್ಲಿ ಹೆಚ್ಚಿನ ಶಕ್ತಿ ತುಂಬಲಿ ಎಂದು ಪ್ರಾರ್ಥಿಸುತ್ತೇನೆ.

ಬಿಜೆಪಿ ಮುಖಂಡರುಗಳಾದ ಸುರೇಶ್ ಬಾಬು, ಗುರುಮೂರ್ತಿ,ವಿಜಯಲಕ್ಷ್ಮಿ, ಶೋಭಾ, ಮದನ್, ಜ್ಞಾನೋಜಿರಾವ್, ಷಣ್ಮುಗಂ , ಮುದ್ದಣ್ಣ, ಮಂಜುನಾಥ್ ಮೈಲಾರ್, ಚಂದನ್, ರವರು ಭಾಗವಹಿಸಿದ್ದರು.

# ಸಂಚಾರದ ವೇಳೆ ಸಂಯಮದಿಂದ ವರ್ತಿಸಿ, ಆವೇಶಕ್ಕೆ ಒಳಗಾಗದಿರಿ

• **ಉದಯವಾಹಿನಿ ಬೆಂಗಳೂರು**

ನಗರದಲ್ಲಿ ರೋಡ್‌ರೇಂಜ್ ಘಟನೆಗಳು ಮರುಕಳಿಸುತ್ತಿದ್ದು, ಸಣ್ಣಪುಟ್ಟ ವಿಷಯಗಳಿಗೆ ವಾಗ್ವಾದ ಮಾಡಿಕೊಳ್ಳದೆ ಸಂಯಮದಿಂದ ವರ್ತಿಸಿ, ಆವೇಶಕ್ಕೆ ಒಳಗಾಗಬೇಡಿ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಾಹನಗಳ ಸಂಚಾರದ ವೇಳೆ ಸಣ್ಣಪುಟ್ಟ ವಿಷಯಕ್ಕೂ ವಾಗ್ವಾದಗಳು ಆಗುತ್ತಿವೆ. ಏನೇ ವಿಷಯವಿದ್ದರೂ ಸಂಯಮದಿಂದ ಬಗೆಹರಿಸಿಕೊಳ್ಳಿ. ನಿಮಗೆ ತೊಂದರೆಯಾದಲ್ಲಿ 112ಗೆ ಕರೆ ಮಾಡಿದರೆ ತಕ್ಷಣ ಪೊಲೀಸರು ಏಳೆಂಟು ನಿಮಿಷದೊಳಗೆ ಸ್ಥಳಕ್ಕೆ ಬಂದು ಪರಿಶೀಲಿಸುತ್ತಾರೆ ಎಂದು ತಿಳಿಸಿದರು.

ಅನೇಕ ಸಂದರ್ಭದಲ್ಲಿ ಗಾಡಿಗೆ ಟಚ್ ಆಗಿದೆ, ಓವರ್‌ಟೇಕ್ ಮಾಡಲಾಗಿದೆ ಎಂಬ ಕಾರಣಕ್ಕೆ ವಾಗ್ವಾದಗಳಾಗಿವೆ. ರಸ್ತೆ ಬಳಸಲು ಎಲ್ಲರಿಗೂ ಹಕ್ಕಿದೆ, ಒಬ್ಬರ ಹಕ್ಕನ್ನು ಇನ್ನೊಬ್ಬರು ಕೇಳಲೂ ಆಗುವುದಿಲ್ಲ, ಎಲ್ಲರು ರಸ್ತೆ ನಿಯಮಗಳನ್ನು ಪಾಲಿಸಬೇಕು ಎಂದರು. ಒಂದು ವೇಳೆ ಏನಾದರೂ ತೊಂದರೆಯಾದರೆ ತಕ್ಷಣ ಪೊಲೀಸರನ್ನು ಸಂಪರ್ಕಿಸಿ. ತೊಂದರೆ ಕೊಡುವ


ಉದಯವಾಹಿನಿ ಚಿತ್ರ

**ತಂತ್ರಜ್ಞಾನ ಅಳವಡಿಸಿಕೊಳ್ಳಿ**

**ಮನೆಮುಂದೆ ವಾಹನ ನಿಲುಗಡೆ, ಮಾಲ್‌ಗಳಿಗೆ, ಇಲ್ಲವೆ ಬೇರೆಡೆ ಅಥವಾ ಕೆಲಸಕ್ಕೆ ಹೋಗುವ ಸಂದರ್ಭಗಳಲ್ಲಿ ತಮ ದ್ವಿಚಕ್ರ ವಾಹನಗಳನ್ನು ನಿಲ್ಲಿಸುವಾಗ ಅವುಗಳ ಸುರಕ್ಷತೆ ಬಗ್ಗೆ ಗಮನ ಹರಿಸಬೇಕು. ತಾವು ವಾಹನ ನಿಲ್ಲಿಸಿರುವ ಸ್ಥಳ ಸುರಕ್ಷಿತವೇ ಎಂಬುದು ತಿಳಿದುಕೊಳ್ಳಬೇಕು ತಂತ್ರಜ್ಞಾನ ಸಾಕಷ್ಟು ಮುಂದುವರೆದಿದೆ. ಉತ್ತಮ ಲಾಕಿಂಗ್, ಜಿಪಿಎಸ್ ಅಳವಡಿಸಿಕೊಂಡರೆ ಕಳವು ನಿಯಂತ್ರಿಸಬಹುದು ಎಂದರು.**

**ನಾಗರಿಕರಿಗೆ ಧನ್ಯವಾದ**

**ನಗರದಲ್ಲಿ ಗೌರಿ-ಗಣೇಶಹಬ್ಬ ಹಾಗೂ ಈದ್‌ಮಿಲಾದ್ ಹಬ್ಬ ಬಹಳ ಶಾಂತಿಯುತ ಹಾಗೂ ಸೌಹಾರ್ದಯುತ ವಾತಾವರಣದಲ್ಲಿ ಜರುಗಿರುವುದಕ್ಕೆ ನಗರದ ಪ್ರಜ್ಞಾವಂತ ನಾಗರಿಕರಿಗೆ ಆಯುಕ್ತರು ಧನ್ಯವಾದ ತಿಳಿಸಿದ್ದಾರೆ.**

ವ್ಯಕ್ತಿಯ ಚಹರೆ, ಅವರ ವಾಹನದ ಸಂಖ್ಯೆಯನ್ನು ಫೋಟೊ ತೆಗೆದು ಪೊಲೀಸ್ ಆಪ್‌ನಲ್ಲಿ ಹಾಕಿದರೆ ಅವರನ್ನು ಪತ್ತೆಹಚ್ಚಲು ನೆರವಾಗುತ್ತದೆ. 112ಗೆ ಕರೆ ಮಾಡಿದ ಸಂದರ್ಭದಲ್ಲಿ ಪೊಲೀಸರು ಸ್ಥಳಕ್ಕೆ ಬಂದಾಗ ಅವರಿಗೆ ವಿವರವಾಗಿ ತಿಳಿಸಿ. ಒಂದು ವೇಳೆ ಆ ವ್ಯಕ್ತಿ ಸ್ಥಳದಲ್ಲಿ ಇದ್ದರೆ ಅವರು ಸಹ ತಮಗಾದ ತೊಂದರೆಯನ್ನು ಹೇಳಲು ಅವಕಾಶ ಕೊಡಿ ಎಂದು ತಿಳಿಸಿದರು. ತಮಗೆ ಏನೇ ತೊಂದರೆಯಾದರೂ ಮೊದಲು ಪೊಲೀಸ್ ಆಪ್‌ಗೆ ಟ್ಯಾಗ್ ಮಾಡಬೇಕು. ನಂತರ ಸೋಶಿಯಲ್ ಮೀಡಿಯಾದಲ್ಲಿ ಹಾಕಿ, ಇಲ್ಲದಿದ್ದರೆ ಸಾಮಾಜಿಕ ಜಾಲತಾಣದಲ್ಲಿ ಹಾಕಿದವರ ಬಗ್ಗೆ ಮೊದಲು ತನಿಖೆ ನಡೆಸಬೇಕಾಗುತ್ತದೆ ಎಂದರು.

# ಅವರಿಗೆಲ್ಲ ಜೈಲುಗಳೇ ಸಾಕಾಗಲ್ಲ?: ಸಚಿವೆ ವಾರ್ನಿಂಗ್

• **ಉದಯವಾಹಿನಿ ಬೆಂಗಳೂರು**

ಜಾತಿ ನಿಂದನೆ ಹಾಗೂ ಕೊಲೆ ಬೆದರಿಕೆ ಕೇಸ್‌ನಲ್ಲಿ ಬಿಜೆಪಿ ಶಾಸಕ ಮುನಿರತ್ನ ಅವರ ಬಂಧನದ ವಿಚಾರವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಖಾರವಾಗಿ ಮಾತನಾಡಿದ್ದಾರೆ. ಅಲ್ಲದೆ ಮುನಿರತ್ನ ಅವರ ಬಂಧನದ ಹಿಂದೆ ಕಾಂಗ್ರೆಸ್‌ನ ಷಡ್ಯಂತ್ರವಿದೆ ಎನ್ನುವ ಆರೋಪಕ್ಕೂ ಅವರು ಪ್ರತಿಕ್ರಿಯಿಸಿದ್ದಾರೆ. ಕಲಬುರಗಿಯಲ್ಲಿ ಮಾತನಾಡಿರುವ ಅವರು, ನಾವು ಬಿಜೆಪಿಯವರ ಮೇಲೆ ಷಡ್ಯಂತ್ರ ಮಾಡುವ ಅಗತ್ಯವಿಲ್ಲ. ಒಂದು ವೇಳೆ ನಾವೆಲ್ಲ ಬಿಜೆಪಿಯವರಂತೆಯೇ ಷಡ್ಯಂತ್ರ ಮಾಡಲು ನಿಂತರೆ, ಅವರಿಗೆಲ್ಲ ಜೈಲುಗಳೇ ಸಾಕಾಗುವುದಿಲ್ಲ ಎಂದು ತಿರುಗೇಟು ನೀಡಿದ್ದಾರೆ.

ರಾಜಕಾರಣಿ ಅಂದ ಮೇಲೆ ಒಂದು ಜವಾಬ್ದಾರಿಯುತ ಸ್ಥಾನದಲ್ಲಿರುತ್ತಾರೆ. ಅಲ್ಲದೆ ರಾಜಕಾರಣಿಗಳು ಜನರೂ ಫಾಲೋ ಮಾಡ್ತಾರೆ. ಹಾಗಿದ್ದಾಗ ನಮ್ಮ ಜವಾಬ್ದಾರಿ ಏನೆಂಬುದರ ಅರಿವಿನಲ್ಲಿ ಮಾತನಾಡಬೇಕು. ಮಹಿಳೆಯರ ಬಗ್ಗೆ ನಾಲಿಗೆ ಹರಿಬಿಡಬಾರದು ಎಂದು ಬಿಜೆಪಿ ಶಾಸಕ ಮುನಿರತ್ನ ಅವರು ಬಗ್ಗೆ ವಾಗ್ದಾಳಿ ನಡೆಸಿದ್ದಾರೆ. ಬಿಬಿಎಂಪಿ ಗುತ್ತಿಗೆದಾರನಿಗೆ ಕೊಲೆ ಬೆದರಿಕೆ ಹಾಗೂ ಜಾತಿ ನಿಂದನೆ ಆರೋಪದ ಮೇರೆಗೆ ಬಿಜೆಪಿ ಶಾಸಕ ಮುನಿರತ್ನ ಅವರನ್ನು ಪೊಲೀಸರು ಬಂಧಿಸಿದ್ದರು. ಮುನಿರತ್ನ ತನಗೆ ಬೆದರಿಕೆ ಹಾಕಿದ್ದಾರೆ ಎನ್ನಲಾದ ಆಡಿಯೋವನ್ನು ಗುತ್ತಿಗೆದಾರ ಬಿಡುಗಡೆ ಮಾಡಿ, ಪೊಲೀಸರಿಗೆ ದೂರು ನೀಡಿದ್ದ. ಈ ದೂರು ಆಧರಿಸಿದ್ದ ಪೊಲೀಸರು, ಕೋಲಾರಕ್ಕೆ ತೆರಳಿ ಮುನಿರತ್ನ ಅವರನ್ನು ಬಂಧಿಸಿ ಬೆಂಗಳೂರಿಗೆ ಕರೆತಂದಿದ್ದರು. ಬಳಿಕ ನ್ಯಾಯಾಧೀಶರ ಎದುರು ಹಾಜರುಪಡಿಸಿದಾಗ ಎರಡು ಪೊಲೀಸ್ ಕಸ್ಟಡಿಗೆ ನೀಡಲಾಗಿತ್ತು. ತಮ್ಮ ಮೇಲಿನ ಆರೋಪದ ಬಗ್ಗೆ ಮಾತನಾಡಿದ್ದ ಶಾಸಕ ಮುನಿರತ್ನ, ನಾನು ಯಾವುದೇ ತಪ್ಪು ಮಾಡಿಲ್ಲ. ರಾಜಕೀಯ ಷಡ್ಯಂತ್ರದಿಂದ ನನ್ನ ಮೇಲೆ ಈ ರೀತಿಯ ಆರೋಪ ಮಾಡಲಾಗಿದೆ ಎಂದಿದ್ದರು.

ಪೊಲೀಸ್ ಕಸ್ಟಡಿಯಲ್ಲಿದ್ದ ಶಾಸಕ ಮುನಿರತ್ನ ಅವರಿಗೆ ನಿನ್ನೆ


ಉದಯವಾಹಿನಿ ಚಿತ್ರ

**ಆ ಆಡಿಯೋ ನನ್ನದೇ ಎಂದು ಸಾಬೀತಾದರೆ, ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿಯೂ ಮುನಿರತ್ನ ಹೇಳಿದ್ದರು. ಇದರ ಬೆನ್ನಲ್ಲೇ ಬಿಜೆಪಿ ನಾಯಕರು ಕೂಡ ಮುನಿರತ್ನ ಅವರ ಬಂಧನದ ಬಗ್ಗೆ ಹಲವು ಅನುಮಾನಗಳನ್ನು ವ್ಯಕ್ತಪಡಿಸಿದ್ದರು. ಉದ್ದೇಶಪೂರ್ವಕವಾಗಿ ಕಾಂಗ್ರೆಸ್‌ನವರು ಮುನಿರತ್ನ ಅವರನ್ನು ಬಂಧಿಸಿದ್ದಾರೆ ಎಂದು ಆರೋಪಿಸಿದ್ದರು. ಇದಕ್ಕೆ ಲಕ್ಷ್ಮಿ ಹೆಬ್ಬಾಳ್ಕರ್ ಈ ರೀತಿ ತಿರುಗೇಟು ನೀಡಿದ್ದಾರೆ.**

ಎದೆ ನೋವು ಕಾಣಿಸಿಕೊಂಡಿದ್ದು, ಪೊಲೀಸರು ಜಯದೇವ ಆಸ್ಪತ್ರೆಗೆ ಕರೆದುಕೊಂಡು ಹೋಗಿರುವುದಾಗಿ ವರದಿಯಾಗಿದೆ. ಮುನಿರತ್ನ ತನಗೆ ಎದೆನೋವು ಕಾಣಿಸಿಕೊಂಡಿದೆ ಎಂದು ಹೇಳಿದ ಕೂಡಲೇ ಪೊಲೀಸರು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು.

ಅಲ್ಲಿಂದ ತುರ್ತು ಚಿಕಿತ್ಸಾ ಘಟಕದಲ್ಲಿ ಮುನಿರತ್ನಗೆ ಚಿಕಿತ್ಸೆ ನೀಡಲಾಗಿತ್ತು. ಬಳಿಕ ಮುನಿರತ್ನ ಅವರಿಗೆ ಪ್ರತಿ ದಿನ ಆರೋಗ್ಯ ತಪಾಸಣೆ ಮಾಡಿಸುವಂತೆ ಪೊಲೀಸರು ಸೂಚಿಸಿದ್ದಾರೆ. ಸದ್ಯ ಆ ಆಡಿಯೋವನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದ್ದು, ಆ ಧ್ವನಿ ಮುನಿರತ್ನ ಅವರ ಧ್ವನಿಗೆ ಮ್ಯಾಚ್ ಆಗದಿದ್ದರೆ, ಅವರ ಮೇಲಿನ ಈ ಕೇಸ್ ಮುಂದುವರಿಸುವುದಿಲ್ಲ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಸ್ಪಷ್ಟನೆ ನೀಡಿದ್ದಾರೆ.

# ಡಿಕೆಶಿ ವಿರುದ್ಧ ಶಾಸಕ ಯತ್ನಾಳ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ಮುಂದೂಡಿಕೆ

• **ಉದಯವಾಹಿನಿ ಬೆಂಗಳೂರು**

ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರ ವಿರುದ್ಧದ ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಂಬಂಧ ಪ್ರತಿವಾದಿಗಳಿಗೆ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿ ಅರ್ಜಿ ವಿಚಾರಣೆಯನ್ನು ನಾಲ್ಕು ವಾರಗಳ ಕಾಲ ಮುಂದೂಡಿದೆ.

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಕೈಗೆತ್ತಿ ಕೊಂಡ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಗಳಾದ ಸೂರ್ಯಕಾಂತ್, ಉಜ್ಜಲ್ ಬುಯಾನ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠ, ಲೋಕಾಯುಕ್ತ, ಸಿಬಿಐ, ರಾಜ್ಯ ಸರ್ಕಾರ



**ಬಿಜೆಪಿ ಸರ್ಕಾರ ನೀಡಿದ್ದ ಸಿಬಿಐ ತನಿಖೆ**

ಮತ್ತು ಡಿ.ಕೆ.ಶಿವಕುಮಾರ್ ಅವರಿಗೆ ತಕರಾರು ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಿ ಅರ್ಜಿ ವಿಚಾರಣೆಯನ್ನು ನಾಲ್ಕು ವಾರಗಳ ಕಾಲ ಮುಂದೂಡಿತು. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಸಂಪಾದಿಸಿದ ಪ್ರಕರಣ ಸಂಬಂಧ ಸಚಿವ ಸಂಪುಟದಲ್ಲಿ ಹಿಂದಿನ ಬಿಜೆಪಿ ಸರ್ಕಾರ ನೀಡಿದ್ದ ಸಿಬಿಐ ತನಿಖೆಯನ್ನು ಹಿಂಪಡೆಯಲಾಗಿತ್ತು.

**ಬಸನಗೌಡ ಯತ್ನಾಳ್ ಅರ್ಜಿ ಸಲ್ಲಿಕೆಗೆ ಮುನ್ನವೇ ಡಿ.ಕೆ ಶಿವಕುಮಾರ್ ಅವರು, ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಕೇವಿಯಟ್ ಸಲ್ಲಿಸಿದ್ದು, ಪ್ರಕರಣದಲ್ಲಿ ತಮ ಅಭಿಪ್ರಾಯ ಕೇಳದೆ ಯಾವುದೇ ಆದೇಶ ನೀಡಬಾರದು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದ್ದಾರೆ.**


ಸುದೀರ್ಘ ವಿಚಾರಣೆ ನಡೆಸಿದ ಹೈ ಕೋರ್ಟ್ ದ್ವಿಸದಸ್ಯ ಪೀಠ ಇದನ್ನು ಸುಪ್ರೀಂಕೋರ್ಟನಲ್ಲಿ ಪ್ರಶ್ನಿಸುವಂತೆ ಸೂಚಿಸಿ ಯತ್ನಾಳ್ ಅವರ ಅರ್ಜಿಯನ್ನು ವಜಾಗೊಳಿಸಿತ್ತು. ಇದರಂತೆ ಯತ್ನಾಳ್ ಸುಪ್ರೀಂಕೋರ್ಟ್‌ಗೆ ಮೇಲನವಿ ಸಲ್ಲಿಸಿದ್ದರು.

# ಸಿಎಂ ಸಿದ್ದರಾಮಯ್ಯಗೆ ಎಂಎಲ್‌ಸಿ ಸಿ.ಟಿ.ರವಿ ಟಾಂಗ್

• **ಉದಯವಾಹಿನಿ ಬೆಂಗಳೂರು**

ನನ್ನ ರಾಜಕೀಯ ಜೀವನದಲ್ಲಿ ಒಂದೇ ಒಂದು ಕಳಂಕವಿಲ್ಲ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿರುವ ಬಿಜೆಪಿ ಎಂಎಲ್ ಸಿ ಸಿ.ಟಿ.ರವಿ, ಅರ್ಕಾವತಿ ಹಗರಣ, ಮುಡಾ ಹಗರಣ ಇದೆಲ್ಲ ನಿಮಗೆ ಕಳಂಕ ಅಂತಾ ಅನಿಸಲಿಲ್ಲವೇ ಎಂದು ಟಾಂಗ್ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿ.ಟಿ,ರವಿ, ಸದನದಲ್ಲಿ ನಮ್ಮ ಪ್ರಶ್ನೆಗಳಿಗೆ



ಉತ್ತರಿಸಲಾರದೇ ಪಲಾಯನ ಮಾಡಿದಿರಿ.

ಹೊರಗೆ ಬಂದು ನಿಮ್ಮನ್ನು ನೀವು ಸಮರ್ಥಿಸಿಕೊಳ್ಳುತ್ತಿದ್ದೀರಿ ಎಂದು ವಾಗ್ದಾಳಿ ನಡೆಸಿದ್ದಾರೆ. ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟರೆ ತನಿಖೆ ಎದುರಿಸಲು ನಿಮಗೆ ಭಯ.

ರಾಜ್ಯ ಪಾಲರ ವಿರುದ್ಧವೇ ಚಳುವಳಿ ಎಬ್ಬಿಸುವ ಮಾತನಾಡುತ್ತಿದ್ದೀರಿ. ವಿಶೇಷ ಅಧಿವೇಶನ ಕರೆಯಿರಿ, ಚರ್ಚೆ ಮಾಡೋಣ ಎಂದು ಕಿಡಿಕಾರಿದ್ದಾರೆ.

# ಬಿಬಿಎಂಪಿ ಅಧಿಕಾರಿಗಳಿಗೆ ಖಡಕ್ ವಾರ್ನಿಂಗ್ ಕೊಟ್ಟ ಕಮಿಷನರ್

## ಬೆಂಗಳೂರಿನಲ್ಲಿರುವ ಎಲ್ಲಾ ಮೇಲ್ಸೇತುವೆ ಹಾಗೂ ಅಂಡರ್‌ಪಾಸ್‌ಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂಬ ಸೂಚನೆ

• **ಉದಯವಾಹಿನಿ ಬೆಂಗಳೂರು**

ಬಿಬಿಎಂಪಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು, ಸಿಬ್ಬಂದಿಗೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಇದೀಗ ಮತ್ತೊಮ್ಮೆ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ. ಬೆಂಗಳೂರಿನಲ್ಲಿ ವಿವಿಧ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಹಾಗೂ ಕಾರ್ಯವೈಖರಿಯನ್ನು ಸುಧಾರಿಸಿಕೊಳ್ಳುವಂತೆ ತುಷಾರ್ ಗಿರಿನಾಥ್ ವಾರ್ನ್ ಮಾಡಿದ್ದಾರೆ. ನಗರದಲ್ಲಿರುವ ಬಾಕಿ ರಸ್ತೆಗುಂಡಿಗಳನ್ನು ಮುಚ್ಚುವುದು ಸೇರಿದಂತೆ ವಿವಿಧ ಟಾಸ್ಕ್‌ಗಳನ್ನು ನೀಡಿದ್ದಾರೆ. ಬೆಂಗಳೂರಿನಲ್ಲಿರುವ ಎಲ್ಲಾ ಮೇಲ್ಸೇತುವೆ ಹಾಗೂ ಅಂಡರ್‌ಪಾಸ್‌ಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ವೀಡೀಯೊ ಸಂವಾದದ ಮೂಲಕ ನಡೆದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ನಗರದಲ್ಲಿ ಪಾಲಿಕೆ ಒಡೆತನದಲ್ಲಿರುವ ಎಲ್ಲಾ ಮೇಲುಸೇತುವೆ ಹಾಗೂ ಕೆಳಸೇತುವೆಗಳನ್ನು ಪರಿಶೀಲನೆ ನಡೆಸಿ ಸರಿಯಾಗಿ ನಿರ್ವಹಣೆ ಮಾಡಬೇಕೆಂದು ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಿ**

**ಬಾಕಿ ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಿ:** ಪಾಲಿಕೆ ವ್ಯಾಪ್ತಿಯ ಎಲ್ಲಾ 8 ವಲಯಗಳಲ್ಲಿ ನಿರಂತರವಾಗಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದೆ. ಆಯಾ ವಲಯಗಳಲ್ಲಿ ಎಂಜಿನಿಯರ್‌ಗಳು ರಸ್ತೆಗುಂಡಿಗಳನ್ನು ಮುಚ್ಚಲಾಗುತ್ತಿದೆ. ಆದರೆ, ಬಾಕಿ ಇರುವ ರಸ್ತೆಗುಂಡಿಗಳನ್ನು ಸಹ ಸಾಧ್ಯವಾದಷ್ಟು ಬೇಗ ಮುಚ್ಚಬೇಕು ಎಂದು ನಿರ್ದೇಶಿಸಿದ್ದಾರೆ.

ಕಸದ ಸಮಸ್ಯೆ ಬಗೆಹರಿಸಿ: ನಗರದಲ್ಲಿ ರಸ್ತೆ ಬದಿಯಲ್ಲಿ ಕಸದ ಸಮಸ್ಯೆಯ ಬಗ್ಗೆ ವರದಿಯಾಗಿದೆ. ಬೆಂಗಳೂರನ ರಸ್ತೆಬದಿ, ಪಾದಾಚರಿ ಮಾರ್ಗ, ಖಾಲಿ ಜಾಗಗಳಲ್ಲಿ ಕಸ ಸುರಿಯುವ ಸ್ಥಳ(ಬ್ಲಾಕ್ ಸ್ಪಾಟ್ಸ್)ಗಳನ್ನು ಪಟ್ಟಿ ಮಾಡಿ ಅವುಗಳನ್ನು ಸಹ ಕೂಡಲೇ ಸ್ವಚ್ಛ ಮಾಡಿ ಮತ್ತೆ ಬ್ಲಾಕ್ಸ್ ಸ್ಪಾಟ್ಸ್ ಗಳು ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು. ಬೆಂಗಳೂರಿನ ರಸ್ತೆ ಬದಿ ಕಸ ಸುರಿಯುವುದರಿಂದ ನಗರ ಸೌಂದರ್ಯ ಹಾಳಾಗುತ್ತಿದೆ. ಈ ಬಗ್ಗೆ ಬೆಂಗಳೂರಿನ ಎಲ್ಲ ವಲಯ ವ್ಯಾಪ್ತಿಯಲ್ಲಿಯೂ ಸೂಕ್ತ ಕ್ರಮ ತಗೆದುಕೊಳ್ಳಬೇಕು. ಅಲ್ಲದೇ ಸಾರ್ವಜನಿಕರು ಸಹ ಅರಿವು ಮೂಡಿಸುವ ಕೆಲಸ ಮಾಡಬೇಕೆಂದು ಸೂಚನೆ ನೀಡಿದರು.

**ಬೀದಿ ದಿಪಗಳ ನಿರ್ವಹಣೆ ಮಾಡಿ:** ನಗರದಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ಮಾಡಬೇಕು. ನಗರ ಪ್ರಮುಖ ರಸ್ತೆ ಗಳಿ, ಮೇಲುಸೇತುವೆಗಳಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ಮಾಡಬೇಕೆಂದು ಸೂಚಿಸಿದರು. ವಿಡಿಯೋ ಸಂವಾದದಲ್ಲಿ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಡಾ. ಕೆ. ಹರೀಶ್ ಕುಮಾರ್, ಎಲ್ಲಾ ವಲಯ ಆಯುಕ್ತರು ಇದ್ದರು.

**ಸ್ಕೈವಾಕ್‌ಗಳ ನಿರ್ವಹಣೆ**

**ಬೆಂಗಳೂರಿನಲ್ಲಿರುವ ಸ್ಕೈವಾಕ್(ಪಾದಚಾರಿ ಮೇಲುಸೇತುವೆ)ಗಳಲ್ಲಿ ಬರುವ ಲಿಫ್ಟ್‌ಗಳು ಎಲ್ಲಾ ಸಮಯದಲ್ಲೂ ಸಮರ್ಪಕವಾಗಿ ಕೆಲಸ ಮಾಡುತ್ತಿದೆಯೇ ಎಂದು ನೋಡಿಕೊಳ್ಳಬೇಕು. ಜೊತೆಗೆ ಎಲ್ಲಾ ಸ್ಕೈವಾಕ್‌ಗಳ ಬಳಿ ಸ್ವಚ್ಛತೆ ಕಾಪಾಡಬೇಕು. ಪಾದಚಾರಿಗಳ ಓಡಾಟಕ್ಕೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕೆಂದು ಎಂದು ಕಮಿಷನರ್ ಹೇಳಿದ್ದಾರೆ.**

**ಆಸ್ತಿ ತೆರಿಗೆ ಸಂಗ್ರಹ**

**ಪಾಲಿಕೆ ವ್ಯಾಪ್ತಿಯಲ್ಲಿ ಹೆಚ್ಚು ಆಸ್ತಿ ಬಾಕಿ ಉಳಿಸಿಕೊಂಡಿರುವವರಿಂದ ಆಸ್ತಿ ತೆರಿಗೆ ಸಂಗ್ರಹಿಸಬೇಕು. ನವೆಂಬರ್ ತಿಂಗಳಾಂತ್ಯದವರೆಗೆ ಒಂದು ಬಾರಿ ಪರಿಹಾರ ಯೋಜನೆಯನ್ನು ವಿಸ್ತಿರಿಸಲಾಗಿದೆ. ಬಾಕಿ ಆಸ್ತಿ ತೆರಿಗೆ ಪಾವತಿಸಬೇಕಿರುವವರಿಂದ ಕೂಡಲೇ ಬಾಕಿ ಆಸ್ತಿ ತೆರಿಗೆಯನ್ನು ಪಾವಸಿಕೊಳ್ಳಲು ಕ್ರಮ ತೆಗೆದುಕೊಳ್ಳಬೇಕು ಎಂದು ಬಿಬಿಎಂಪಿಯ ವಿಶೇಷ ಆಯುಕ್ತರಿಗೆ ಹೇಳಿದರು.**

# ಟಿಕೆಟ್: ಕಮಲ-ದಳ ನಾಯಕರ ಫೈಟ್

## ಉಪಚುನಾವಣೆಯಲ್ಲಿ ಎನ್‌ಡಿಎ ಟಿಕೆಟ್, ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಪ್ರತಿಕ್ರಿಯೆ

• ಉದಯವಾಹಿನಿ, ರಾಮನಗರ

ವಿಧಾನಸಭಾ ಉಪಚುನಾವಣೆಯ ಕಾವು ಜೋರಾಗಿದೆ. ಉಪ ಚುನಾವಣೆ ಡಿ ಕೆ ಬ್ರದರ್ಸ್‌ಗೆ ಅಸ್ತಿತ್ವದ ಪ್ರಶ್ನೆಯಾಗಿದ್ರೆ, ಮೈತ್ರಿ ನಾಯಕರಿಗೆ ಚನ್ನಪಟ್ಟಣ ಕ್ಷೇತ್ರದ ಚುನಾವಣೆ ಪ್ರತಿಷ್ಠೆಯ ಕಣವಾಗಿದೆ. ಚನ್ನಪಟ್ಟಣ ಉಪಚುನಾವಣೆಯಲ್ಲಿ ಎನ್‌ಡಿಎ ಟಿಕೆಟ್ ನನಗೆ ಸಿಗುತ್ತದೆ ಎಂಬ ವಿಶ್ವಾಸವಿದೆ. ಹಳ್ಳಿಹಳ್ಳಿಗಳಿಗೆ ತೆರಳಿ ಜನರನ್ನು ಭೇಟಿಯಾಗುತ್ತೇನೆ' ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಿ.ಪಿ.ಯೋಗೇಶ್ವರ್ ತಿಳಿಸಿದ್ದು, ಈ ಬಗ್ಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ಪ್ರತಿಕ್ರಿಯಿ ಸಿದ್ದಾರೆ. ಸಿ ಪಿ ಯೋಗೇಶ್ವರ್ ರವರ ಹೇಳಿಕೆಯನ್ನ ನಾನು ಗ್ರಹಿಸಿದ್ದೇನೆ. ಅವರು ಸ್ಪಷ್ಟವಾಗಿ ಹೇಳಿದ್ದಾರೆ ಜೆಡಿಎಸ್ - ಬಿಜೆಪಿ ಒಟ್ಟಾಗಿ ಚುನಾವಣೆ ಎದುರಿಸುತ್ತೇವೆಂದು ಅವರು ಹೇಳಿದ್ದಾರೆ.

ನಾಗಮಂಗಲ ಗಲಭೆ ವಿಚಾರಕ್ಕೆ ಮಾತನಾಡಿದ ಅವರು ಕಾಂಗ್ರೆಸ್ ಸರ್ಕಾರದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದಕ್ಕೆ


ಉದಯವಾಹಿನಿ ಚಿತ್ರ

ಸಿ ಪಿ ಯೋಗೇಶ್ವರ್ ರವರ ಹೇಳಿಕೆ

ನಾಗಮಂಗಲ ಘಟನೆ ಸಾಕ್ಷಿ.

ಜಿಲ್ಲಾ ಉಸ್ತುವಾರಿ ಸಚಿವರಿಗೆ ಕೇಳ್ತೇನೆ ಒಂದು ಸಮುದಾಯ ಓಲೈಸಲು ಇನ್ನೊಂದು ಸಮುದಾಯಕ್ಕೆ ಅನ್ಯಾಯ ಮಾಡುವುದು ಎಷ್ಟು ಸರಿ ಎಂದು ಸಚಿವ ಚಲುವರಾಯ ಸ್ವಾಮಿ ಅವರಿಗೆ ಪ್ರಶ್ನಿಸಿದರು.

ವರ್ಷಕ್ಕೊಮ್ಮೆ ಗಣೇಶನ ಹಬ್ಬ ಬರಲಿದೆ, ನಾವು ಒಂದು ತಿಂಗಳವರೆಗೂ ಗಣೇಶನನ್ನ ವಿಸರ್ಜನೆ ಮಾಡ್ತೇವೆ. ಮುಸ್ಲಿಂ ಸಮುದಾಯದವರು ದಿನಕ್ಕೆ 5 ಬಾರಿ ನಮಾಜ್ ಕೂಗುತ್ತಾರೆ.ನಾವು ಅದನ್ನ ಗೌರವಿಸುತ್ತೇವೆ. ಹಿಂದೂ - ಮುಸ್ಲಿಂ ಸಾಮರಸ್ಯ ಕದಡುತ್ತಿರುವುದು ಕಾಂಗ್ರೆಸ್ ಪಕ್ಷದವರು ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಮಾತನಾಡಲಿ,ಮುಂದೆ ಜನರೇ ಇದಕ್ಕೆ ಉತ್ತರ ಕೊಡ್ತಾರೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿಗೆ ನಿಖಿಲ್ ಕುಮಾರಸ್ವಾಮಿ ಅವರು ತಿರುಗೇಟು ಕೊಟ್ಟರು.

**ನಿಖಿಲ್ ಕುಮಾರಸ್ವಾಮಿ ಅವರು ಸಹ ಅವರ ಪಕ್ಷದ ಬೆಂಬಲಿಗರ ವಿಶ್ವಾಸ ಪಡೆಯುತ್ತಿದ್ದಾರೆಂದು ಸ್ಪಷ್ಟವಾಗಿ ಹೇಳಿದ್ದಾರೆ. ಹಾಗಾಗಿ ಇಲ್ಲಿ ಯಾವುದೇ ಗೊಂದಲ ಇಲ್ಲ ಎಲ್ಲವೂ ಕೂಡ ಸುಗಮವಾಗಿ ಬಗೆ ಹರಿಯುತ್ತೆ. ಟಿಕೆಟ್ ವಿಚಾರವಾಗಿ ದೆಹಲಿಯ ನಾಯಕರು ಮುಂದಿನ ದಿನಗಳಲ್ಲಿ ನಿರ್ಧಾರ ಮಾಡ್ತಾರೆ ಎಂದು ತಿಳಿಸಿದ್ದಾರೆ. ಇನ್ನೂ ಚನ್ನಪಟ್ಟಣ ಕ್ಷೇತ್ರದ ಅಕ್ಕೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಅಕ್ಕೂರು, ಬಾಣಗಹಳ್ಳಿ, ಸೋಗಲ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರಮುಖ ಮುಖಂಡರೊಂದಿಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ಸಭೆ ನಡೆಸಿ ಪಕ್ಷ ಸಂಘಟನೆ ಮತ್ತು ಪಕ್ಷ ಬಲವರ್ಧನೆ ಬಗ್ಗೆ ಚರ್ಚಿಸಿದರು.**

**ಶಾಸಕ ಮುನಿರತ್ನ ಅರೆಸ್ಟ್ ವಿಚಾರಕ್ಕೆ ಮಾತನಾಡಿದ ಅವರು ಆ ಆಡಿಯೋ ದಲ್ಲಿರುವುದು ಅವರ ಧ್ವನಿನಾ ? ಅಲ್ಲವಾ ಎಂಬುದು FSL ವರದಿ ಬರಬೇಕಿದೆ ಹಾಗಾಗಿ ನಾವು ಈ ಬಗ್ಗೆ ಮಾತನಾಡುವುದು ಸೂಕ್ತ ಅಲ್ಲ. ಆದರೆ ಈ ನೆಲದ ಕಾನೂನಿನ ಮುಂದೆ ಎಲ್ಲರೂ ಒಂದೇ.ಎಷ್ಟೇ ಪ್ರಭಾವಿ ವ್ಯಕ್ತಿ ಆಗಿದ್ದರೂ ಸಹ ಕಾನೂನು ಎಲ್ಲರಿಗೂ ಒಂದೇ ಎಂದು ಹೇಳಿದರು.**

ನಿಖಿಲ್ ಕುಮಾರಸ್ವಾಮಿ

# ಹಣ ದುರುಪಯೋಗ ನಿಯಂತ್ರಣ ಸೇರಿದಂತೆ ವಿವಿಧ ಬೇಡಿಕೆಗೆ ಒತ್ತಾಯ

• ಉದಯವಾಹಿನಿ,ಬಂಗಾರಪೇಟೆ

ನರೇಗಾ ಕಾಮಗಾರಿಗಳಲ್ಲಿ ನಡೆಯುತ್ತಿರುವ ಅಕ್ರ ಮಗಳಿಗೆ ಕಡಿವಾಣ ಹಾಕಿ, 15ನೇ ಹಣಕಾಸು ಯೋಜನೆಯಲ್ಲಿ ಆಗುತ್ತಿರುವ ಹಣ ದುರುಪಯೋಗ ನಿಯಂತ್ರಣ ಸೇರಿದಂತೆ ವಿವಿಧ ಬೇಡಿಕೆಗಳನ್ನು ಒತ್ತಾಯಿಸಿ ಕರ್ನಾಟಕ ದಲಿತ ರೈತ ಸೇನೆಯಿಂದ ತಾ.ಪಂ ಎದುರು ಪ್ರತಿಭಟನೆ ನಡೆಸಿ ಇಒ ರವಿಕುಮಾರ್ ಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಕರ್ನಾಟಕ ದಲಿತ ರೈತ ಸೇನೆಯ ರಾಜ್ಯಾಧ್ಯಕ್ಷ ಹುಣಸನಹಳ್ಳಿ ಎಸ್.ವೆಂಕಟೇಶ ಮಾತನಾಡಿ, ನರೇಗಾ ಯೋಜನೆಗಳ ಅನುಷ್ಠಾನಕ್ಕೆ ಗ್ರಾಮ ಪಂಚಾಯಿತಿ ಮೂಲಕ ಗ್ರಾಮ ಸಭೆಗಳನ್ನು ನಡೆಸಿ ಅವುಗಳ ಮೂಲಕ ಕ್ರಿಯಾಯೋಜನೆಯನ್ನು ತಯಾರಿಸಬೇಕಾದಂತಹ ಅಧಿಕಾರಿಗಳು ಪಂಚಾಯಿತಿಯಲ್ಲಿ ಕುಂತು ತಮಗೆ ಇಷ್ಟ ಬಂದ ರೀತಿಯಲ್ಲಿ ಕ್ರಿಯಾ ಯೋಜನೆ ತಯಾರಿಸಿ ಅನುಮೋದಿಸಲಾಗುತ್ತಿದೆ. ನರೇಗಾ ಕಾಮಗಾರಿಗಳಿಗೆ ಯಂತ್ರಗಳನ್ನು ಬಳಕೆ ಮಾಡಬಾರದು ಎಂಬ ಆದೇಶವಿದ್ದರೂ ಸಹ ಕೆಲವು ಪಿಡಿಒಗಳು ಇಂಜಿನಿಯರ್‌ಗಳ ಜೊತೆಗೂಡಿ



ಉದಯವಾಹಿನಿ ಚಿತ್ರ

ಯೋಜನೆಯನ್ನು ದುರ್ಬಳಕೆ ಮಾಡುತ್ತಾ ಹಣವನ್ನು ಲೂಟಿ ಮಾಡುತ್ತಿದ್ದಾರೆ.

ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ನಿರ್ಮಾಣವಾದ ಘನ ತ್ಯಾಜ್ಯ ವಿಲೇವಾರಿ ಘಟಕಗಳು ಆಟಕ್ಕೆ ಉಂಟು ಲೆಕ್ಕಕ್ಕೆ ಇಲ್ಲ ಎಂಬಂತಾಗಿದ್ದು ತ್ಯಾಜ್ಯಗಳು ಸರಿಯಾಗಿ ಕಾರ್ಯ ನಿರ್ವಹಣೆ ಮಾಡುತ್ತಿಲ್ಲ. ಇದರಿಂದ ಗ್ರಾಮಗಳಲ್ಲಿ ಕಸದ ರಾಶಿಗಳು ಎಲ್ಲೆಂದರಲ್ಲಿ ಗಬ್ಬುನಾರುತ್ತಿದ್ದು, ಸಾಂಕ್ರಾಮಿಕ ರೋಗಗಳು ಹರಡುವ ಬೀತಿ ಎದುರಾಗಿದೆ. ಇತ್ತ ಕಸ ಸಂಗ್ರಹಿಸುವ ವಾಹನ ಚಾಲಕರು ಅಂಗಡಿ ಮಾಲೀಕರುಗಳಿಂದ ತಿಂಗಳಿಗೆ ಇಷ್ಟು ಎಂಬಂತೆ ಹಣವನ್ನು ವಸೂಲಿ ಮಾಡುತ್ತಿದ್ದಾರೆ ಎಂಬ ಆರೋಪವೂ ಇದ್ದು ಇದರ ಬಗ್ಗೆ ನಿಗಾ ವಹಿಸಬೇಕು ಹಾಗೂ ತ್ಯಾಜ್ಯ ವಿಲೇವಾರು ಘಟಗಳು ಸಮರ್ಪಕವಾಗಿ ಕಾರ್ಯ ನಿರ್ಯವಹಿಸುವಂತೆ ಕ್ರಮ ಜರುಗಿಸಬೇಕಿದೆ ಎಂದು ಒತ್ತಾಯ ಮಾಡಿದರು.

ಹೀರೆ ಕರಪನಹಳ್ಳಿ ಮುನಿರಾಜು, ಹುಳದೇನಹಳ್ಳಿ ವೆಂಕಟೇಶ್, ಕೀಲುಕೊಪ್ಪ ಮುನಿರಾಜ್, ಶ್ರೀನಿವಾಸ್, ಸತೀಶ್, ಸುಮನ್ ಮುಂತಾದವರು ಹಾಜರಿದ್ದರು.

**15ನೇ ಹಣಕಾಸು ಯೋಜನೆಯ ಸಾಮಗ್ರಿ ಗಳ ಖರೀದಿಯಲ್ಲಿ ಬೀದಿ ದೀಪಗಳ ಖರೀದಿಗೆ ಮತ್ತು ನಿರ್ವಹಣೆ, ಕುಡಿಯುವ ನೀರಿನ ಬಿಡಿ ಭಾಗಗಳ ಖರೀದಿಯಲ್ಲಿ ಪಂಚಾಯಿತಿ ಅಧಿಕಾರಿಗಳು ಬೃಹತ್ ಬ್ರಷ್ಟಾಚಾರವನ್ನು ಮಾಡುತ್ತಾ ಲಕ್ಷಾಂತರ ರೂಗಳನ್ನು ಗುಳುಂ ಮಾಡುತ್ತಾ ಬಂದಿದ್ದಾರೆ. ಇದರ ಬಗ್ಗೆ ತನಿಖೆ ನಡೆಸಿ ಬ್ರಷ್ಟಚಾರವನ್ನು ಬಯಲಿಗೆ ಎಳೆದು ಸರ್ಕಾರದ ಹಣವನ್ನು ವಸೂಲಿ ಮಾಡಬೇಕು ಎಂದರು.**

# ಕಾಂಗ್ರೆಸ್ ಚುನಾವಣೆಯಲ್ಲಿ ಭಾಗವಹಿಸಲು ಮನವಿ

• ಉದಯವಾಹಿನಿ, ಕೋಲಾರ

ರಾಜ್ಯದಲ್ಲಿ ನಡೆಯುತ್ತಿರುವ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಎನ್.ಎಸ್.ಯು.ಐ ಪದಾಧಿಕಾರಿಗಳು ಸದಸ್ಯರು, ಯುವಕರು ಸಕ್ರಿಯವಾಗಿ ಭಾಗವಹಿಸುವಂತೆ ಎನ್.ಎಸ್. ಯು ಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಹಾಲ್ ತರೀನ್ ಮನವಿ ಮಾಡಿದ್ದಾರೆ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು ಕಾಂಗ್ರೆಸ್ ಪಕ್ಷದ ಯುವ ನೇತಾರ ರಾಹುಲ್ ಗಾಂಧಿ ಯುವ ಕಾಂಗ್ರೆಸ್ ಅಧ್ಯಕ್ಷರ ಮತ್ತು ಪದಾಧಿಕಾರಿಗಳ ಚುನಾವಣೆಯನ್ನು ಪ್ರಜಾಪ್ರಭುತ್ವ ಮಾದರಿಯಲ್ಲಿ ಯುವ ಮತದಾರರೇ ಆಯ್ಕೆ ಮಾಡುವ ವ್ಯವಸ್ಥೆಯನ್ನು ತಂದಿದ್ದು ಇದರಿಂದ ಯುವ ಶಕ್ತಿ ಹೆಚ್ಚಾಗಿ ರಾಜಕೀಯಕ್ಕೆ ಬರಲು ಸಾಧ್ಯವಾಗಿದೆ ಯುವಕರು ಹೆಚ್ಚಿನ ರೀತಿಯಲ್ಲಿ ಭಾಗವಹಿಸಿ ಮತದಾನ ಮಾಡುವಂತೆ ಮನವಿ ಮಾಡಿದರು.



**ದೇಶದಲ್ಲಿ, ರಾಜ್ಯದಲ್ಲಿ ಮುಂಚೂಣಿ ಘಟಕಗಳ ಪದಾಧಿಕಾರಿಗಳು, ಮುಖಂಡರು ಯುವ ಕಾಂಗ್ರೆಸ್‌ನಿಂದ ಬೆಳೆದು ಬಂದಿದ್ದಾರೆ ಯುವ ಕಾಂಗ್ರೆಸ್ ಸದಸ್ಯರಾದವರು ರಾಜ್ಯಾಧ್ಯಕ್ಷ ರಾಜ್ಯ ಪ್ರಧಾನ ಕಾರ್ಯದರ್ಶಿ, ಜಿಲ್ಲಾಧ್ಯಕ್ಷ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ವಿಧಾನಸಭಾ ಕ್ಷೇತ್ರದ ಅಧ್ಯಕ್ಷ, ಬ್ಲಾಕ್ ಅಧ್ಯಕ್ಷ ಸ್ಥಾನಗಳಿಗೆ ಒಟ್ಟು ಆರು ಮತವನ್ನು ಹಾಕಬಹುದು ನಮ್ಮ ಪಕ್ಷದೊಳಗೆ ನಡೆಯುವ ಅಂತರಿಕ ಚುನಾವಣೆಯಲ್ಲಿ ಎಲ್ಲರು ಸಕ್ರಿಯವಾಗಿ ಭಾಗವಹಿಸಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಟಗೊಳಿಸ ಬೇಕು ಎಂದು ನಿಹಾಲ್ ತರೀನ್ ಮನವಿ ಮಾಡಿದರು.**

# ಶಿಕ್ಷಕರಲ್ಲಿ ವಿದ್ಯಾರ್ಥಿಗಳನ್ನು ತಿದ್ದಿತೀಡಬಲ್ಲ ತಾಳ್ಮೆ, ಮಾತೃಹೃದಯವಿರಬೇಕು

• ಉದಯವಾಹಿನಿ, ಶಿಡ್ಲಘಟ್ಟ

ವಿದ್ಯಾರ್ಥಿಗಳನ್ನು ತಿದ್ದಿತೀಡುವ ಕಾರ್ಯಕ್ಕಾಗಿ ಶಿಕ್ಷಕರಲ್ಲಿ ತಾಳ್ಮೆ, ಮಕ್ಕಳಾಟಗಳನ್ನೆಲ್ಲಾ ತಡೆದುಕೊಳ್ಳುವ ಮನೋಧರ್ಮ, ಮಾತೃಹೃದಯವಿರಬೇಕು. ಉತ್ತಮ ಪ್ರಜೆಗಳನ್ನು ನಿರ್ಮಾಣ ಮಾಡುವ ಮೂಲಕ ಭವಿಷ್ಯದ ರಾಷ್ಟ್ರನಿರ್ಮಾಣದ ಕಾರ್ಯದಲ್ಲಿ ಶಿಕ್ಷಕರದ್ದೇ ಪ್ರಮುಖ ಪಾತ್ರ ಎಂದು ಮುಖ್ಯಶಿಕ್ಷಕ ಎಚ್.ಎಸ್. ರುದ್ರೇಶಮೂರ್ತಿ ತಿಳಿಸಿದರು.

ತಾಲ್ಲೂಕಿನ ಸುಗಟೂರು ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಂದರಲಾಲ್ ಬಹುಗುಣ ಇಕೋ ಕ್ಲಬ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶಿಕ್ಷಕರ ದಿನಾಚರಣೆ, ಎಂಜಿನಿಯರ್ ದಿನ, ಓಜೋನ್ ಸಂರಕ್ಷಣಾ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಂಡು ಮಾತನಾಡಿದರು.

ಉತ್ತಮ ಸಮಾಜವನ್ನು ನಿರ್ಮಿಸಿ, ಸುಸ್ಥಿತಿಯಲ್ಲಿಡಲು ಶಿಕ್ಷಕರ ಕಾರ್ಯವು ಮಹತ್ತರವಾದುದು. ಯುವಪೀಳಿಗೆಯನ್ನು ಜಾಗರೂಕತೆಯಿಂದ ಉಪಯೋಗಿಸಿಕೊಳ್ಳುವ ಕಾರ್ಯವಾಗಬೇಕಿದೆ.


ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳು ಶಿಕ್ಷಕರಲ್ಲಿನ ಉತ್ತಮ ನಡಾವಳಿಗಳನ್ನು ಅನುಕರಣೆ ಮಾಡುವಂತಾಗಬೇಕು. ಮಕ್ಕಳಲ್ಲಿ ಕಡಿಮೆಯಾಗುತ್ತಿರುವ ಸಂವಹನಾಕೌಶಲವನ್ನು ವೃದ್ಧಿಸಿಕೊಳ್ಳಲು ಪೂರಕ ಚಟುವಟಿಕೆಗಳನ್ನು ಶಿಕ್ಷಕರು ಯೋಜಿಸಬೇಕು ಎಂದರು.

ಶಿಕ್ಷಕಿ ಎಂ.ಸುನಿತಾ, ಶಿಕ್ಷಕ ಬಿ.ನಾಗರಾಜು ಮಾತನಾಡಿದರು. ವಿದ್ಯಾರ್ಥಿನಿ ಎಸ್.ಎಸ್.ಮೊನಿಷಾ ನಿರೂಪಿಸಿದರು. ವಿದ್ಯಾಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಜಾಗೃತಿ ಗೀತೆಗಳ ಗಾಯನ ನಡೆಯಿತು. ಶಿಕ್ಷಕರನ್ನು ಗೌರವಿಸಲಾಯಿತು. ಓಜೋನ್ ಪದರ ಸಂರಕ್ಷಣೆ ಕುರಿತು ಭಿತ್ತಿಪತ್ರ ತಯಾರಿ ಸ್ಪರ್ಧೆ ನಡೆಸಿ ಬಹುಮಾನಗಳನ್ನು ವಿತರಿಸಲಾಯಿತು.

### ಎಂ.ವಿ.ಕೊಡುಗೆ ಅಪಾರ

**ಶಿಕ್ಷಕಿ ಎಚ್.ತಾಜೂನ್ ಮಾತನಾಡಿ, ಸ್ವಾತಂತ್ರ್ಯನಂತರದಲ್ಲಿ ಇಡೀ ದೇಶದ ಆರ್ಥಿಕಸುಧಾರಣೆ, ಔದ್ಯೋಗಿಕ ಕ್ಷೇತ್ರಕ್ಕೆ ಸರ್.ಎಂ.ವಿಶ್ವೇಶ್ವರಯ್ಯ ಅವರ ಕೊಡುಗೆ ಅಪಾರವಾದುದು. ಭಾರತಕ್ಕೆ ಪಂಚವಾರ್ಷಿಕಯೋಜನೆಗಳ ಪರಿಕಲ್ಪನೆಯನ್ನು ನೀಡಿ ರಾಷ್ಟ್ರದ ಬಹುತೇಕ ವಿವಿದೋದ್ದೇಶ ಯೋಜನೆಗಳ ಆರಂಭಕ್ಕೆ ಭದ್ರಬುನಾದಿಯನ್ನು ಹಾಕಿದವರು. ನೀರಾವರಿ, ಶಿಕ್ಷಣ, ಬ್ಯಾಂಕಿಂಗ್, ಕೈಗಾರಿಕೆಗಳಿಗೆ ಆದ್ಯತೆನೀಡಿ ರಾಷ್ಟ್ರದ ಅಭಿವೃದ್ಧಿಗೆ ವಿಶ್ವೇಶ್ವರಯ್ಯ ಅವರು ಕಾರಣರಾಗಿದ್ದಾರೆ ಎಂದರು.**

**ಭೂಮಂಡಲವನ್ನು ಆವರಿಸಿ ಭೂಮಿಯನ್ನು, ಜೀವಸಂಕುಲಗಳನ್ನು ನೇರಳಾತೀತ ಕಿರಣಗಳ ಮೂಲಕ ರಕ್ಷಿಸುತ್ತಿರುವ ಓಜೋನ್ ಪದರವನ್ನು ವಾಯುಮಾಲಿನ್ಯದಿಂದ ತಡೆಯುವ ಮೂಲಕ ಸಂರಕ್ಷಿಸುವ ಕರ್ತವ್ಯ ಎಲ್ಲರ ಮೇಲಿದೆ. ಆಧುನಿಕತೆಯ ಹೆಸರಿನಲ್ಲಿ ಆಗುತ್ತಿರುವ ಅಭಿವೃದ್ಧಿಕಾರ್ಯಗಳು ಜಾಗತಿಕ ತಾಪಮಾನ ವೈಪರೀತ್ಯ, ಓಜೋನ್ ಹಾನಿಯಂತಹ ಪರಿಣಾಮಗಳನ್ನು ಉಂಟುಮಾಡುತ್ತಿರುವುದರಿಂದ ಎಚ್ಚರ ವಹಿಸಬೇಕಾದ ಅನಿವಾರ್ಯತೆಯಿದೆ ಎಂದರು.**

ಶಿಕ್ಷಕ ಟಿ.ಎಂ.ಮಧು

# ದೇಶ ಕಂಡ ಅಪರೂಪದ ಎಂಜಿನಿಯರ್: ಸರ್ ಎಂ. ವಿ

• ಉದಯವಾಹಿನಿ, ತುಮಕೂರು

ಆಧುನಿಕ ಭಾರತದ ನಿರ್ಮಾತೃಗಳಲ್ಲಿ ಅಗ್ರಗಣ್ಯ ವ್ಯಕ್ತಿಗಳಲ್ಲಿ ನಿಲ್ಲುವ ಕರ್ನಾಟಕದ ಪುತ್ರ, ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯನವರು ದೇಶದ ನೀರಾವರಿ ಕ್ಷೇತ್ರದ ದಿಗ್ಗಜರಲ್ಲಿ ಒಬ್ಬರಲ್ಲದೆ ದಕ್ಷಿಣಭಾರತದಲ್ಲಿ ನೀರಾವರಿ ಕ್ರಾಂತಿಗೆ ನಾಂದಿ ಹಾಡಿದ ವಿಶ್ವೇಶ್ವರಯ್ಯ ದೇಶಕಂಡ ಅಪರೂಪದ ಎಂಜಿನಿಯರ್'' ಎಂದು ಸಾಹಿತಿ ಮತ್ತು ನಿವೃತ್ತ ಎಕ್ಸಿಕ್ಯೂಟಿವ್ ಎಂಜಿನಿಯರ್ ಡಾ. ಗಂಗಾಧರ ಕೊಡ್ಲಿಯವರ ನುಡಿದರು.

ಡಾ. ಸಿದ್ಧಗಂಗಪ್ಪ ಮಾತನಾಡಿ ಶ್ರೇಷ್ಠ ಹಣಕಾಸು ತಜ್ಞರೆನಿಸಿಕೊಂಡಿದ್ದ ವಿಶ್ವೇಶ್ವರಯ್ಯನವರು ಜನರ ಆರ್ಥಿಕ ಸಂಕಷ್ಟಗಳಿಗೆ ಪರಿಹಾರ ರೂಪವಾಗಿ ತಾವು ದಿವಾನರಾಗಿದ್ದ ಸಮಯದಲ್ಲಿ ಬ್ಯಾಂಕ್ ಆಫ್ ಮೈಸೂರು ಲಿ. ಸಂಸ್ಥೆಯನ್ನು 2 ಅಕ್ಟೋಬರ್ 1918ರಂದು ಸ್ಥಾಪಿಸಿದ ಒಂದೇ ವರ್ಷದ ಅವಧಿಯಲ್ಲಿ ಎರಡು ಸಾವಿರ ರೂಗಳ ಲಾಭ ಮಾಡಿದ್ದುದು ಒಂದು ಐತಿಹಾಸಿಕ ದಾಖಲೆಯಾಗಿದೆ. ಇದೇ ಮುಂದೆ ಸ್ಟೇಟ್‌ಬ್ಯಾಂಕ್ ಆಫ್ ಮೈಸೂರು ಆಗಿ ಪರಿವರ್ತನೆ ಆಗಿ ಸಾರ್ವಜನಿಕ ವಲಯಕ್ಕೆ ತೆರೆದುಕೊಂಡಿತು. ಹೀಗೆ ಮೈಸೂರು ಎಂಬ ಬ್ರಾಂಚನ್ನು ಇಡೀ ಜಗತ್ತಿಗೆ ಪರಿಚಯಿಸಿದ ಕೀರ್ತಿ ಧೀಮಂತ ಎಂಜಿನಿಯರ್ ವಿಶ್ವೇಶ್ವರಯ್ಯನವರಿಗೆ ಸಲ್ಲುತ್ತದೆ ಎಂದರು. ಜಿಲ್ಲಾ ಕಸಾಪ ಕಾರ್ಯ ದರ್ಶಿಗಳಾದ ಡಾ. ಡಿ.ಎನ್.ಯೋಗೀಶ್ವರಪ್ಪ, ಕಂಟಲಗೆರೆ ಸಣ್ಣಹೊನ್ನಯ್ಯ, ಸಂಘ ಟನಾ ಕಾರ್ಯ ದರ್ಶಿ ಜಿ.ಹೆಚ್.ಮಹದೇವಪ್ಪ, ತಾಲ್ಲೂಕು ಕಸಾಪ ಅಧ್ಯಕ್ಷ ಚಿಕ್ಕಬೆಳ್ಳಾವಿ ಶಿವಕುಮಾರ್, ಕಸಾಪ ರಾಜ್ಯ ಪ್ರತಿನಿಧಿ ಡಾ. ಎಂ.ಗೋವಿಂದರಾಯ, ಜಯ ರಾಮ್, ನಾರಾಯಣ್, ಪರಮೇ ಶ್ವರಯ್ಯ, ಗಜೇಂದ್ರ ಇತರರಿದ್ದರು.


ಉದಯವಾಹಿನಿ ಚಿತ್ರ

**ಭಾವಚಿತ್ರ : ನಗರದ ಕನ್ನಡ ಭವನದಲ್ಲಿ ಜಿಲ್ಲಾ ಕಸಾಪ ವತಿಯಿಂದ ವಿಶ್ವೇಶ್ವರಯ್ಯನವರ ಜನ್ಮದಿನಾಚರಣೆಯನ್ನು ಏರ್ಪಡಿಸಲಾಗಿತ್ತು. ಸಾಹಿತಿ ಡಾ. ಗಂಗಾಧರ ಕೊಡ್ಲಿಯವರ್, ಕೆ.ಎಸ್.ಸಿದ್ಧಲಿಂಗಪ್ಪ, ಡಾ. ಡಿ.ಎನ್.ಯೋಗೀಶ್ವರಪ್ಪ, ಜಿ.ಹೆಚ್.ಮಹದೇವಪ್ಪ, ಡಾ. ಎಂ.ಗೋವಿಂದರಾಯ, ಚಿಕ್ಕಬೆಳ್ಳಾವಿ ಶಿವಕುಮಾರ್ ಇತರರಿದ್ದಾರೆ.**

# ನಾಗೇಶ್ ಅವರ ಸೇವೆ ಅಮೋಘ

• ಉದಯವಾಹಿನಿ, ಬಂಗಾರಪೇಟೆ

ಮುಖ್ಯಪೇದೆ ನಾಗೇಶ್ ಅವರ ಸೇವೆ ಅಮೋಘವಾಗಿದೆ ಎಂದು ಆತ್ಮವಿಶ್ವಾಸ ವೇದಿಕೆ, ದಲಿತ ಶಕ್ತಿ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಸೀಸಂದ್ರ ದಿಢೀರ್ ಎಂ.ಎನ್. ಭಾರದ್ವಾಜ್ ಅಭಿಪ್ರಾಯಪಟ್ಟಿದ್ದಾರೆ.

ವಾಲ್ಮೀಕಿ ಸ್ವಾಭಿಮಾನಿ ಸಂಘದ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ನಾಗೇಶ್ ಪೊಲೀಸ್ ಇಲಾಖೆಯಲ್ಲಿ ನಿಷ್ಠೆ ಪ್ರಾಮಾಣಿಕತೆ ಯಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದರೆ ತಪ್ಪಾಗಲಾರದು. ಸಾರ್ವಜನಿಕರಲ್ಲಿ ಉತ್ತಮ ಬಾಂಧವ್ಯ, ಪ್ರೀತಿ, ವಿಶ್ವಾಸ, ಹೊಂದಿದ್ದರು. ಇವರು ಯಾವುದೇ ರೀತಿಯ ಭೇದಭಾವವಿಲ್ಲದೆ ಎಲ್ಲಾ ಸಮುದಾಯ ವರ್ಗದವರನ್ನು ಸಹ ಒಂದೇ ರೀತಿಯಲ್ಲಿ ಸಮಾನತೆಯಲ್ಲಿ ಕಂಡು ಎಲ್ಲರ ಕೆಲಸ ಕಾರ್ಯಗಳನ್ನು ಹಾಗೂ ಪೊಲೀಸ್ ಇಲಾಖೆಗೆ ಸಂಬಂಧಪಟ್ಟ ಸಮಸ್ಯೆಗಳನ್ನು ಮೇಳ ಅಧಿಕಾರಿಗಳಿಗೆ ತಿಳಿಸಿ ಬಗೆ ಹರಸಿ ಉತ್ತಮ ಪೇದೆ ಎಂದು ಬಿರುದಿಗೆ ಪಾತ್ರರಾಗಿದ್ದಾರೆಂದರೆ ತಪ್ಪಾಗಲಾರದು.

ಇವರು ರಾಜಕೀಯ ಕಾರ್ಯಕ್ರಮವಾಗಲಿ, ಸಂಘಟನೆ ಕಾರ್ಯಕ್ರಮವಾಗಲಿ, ಸರ್ಕಾರಿ ಕಾರ್ಯಕ್ರಮವಾಗಲಿ, ಸಾರ್ವಜನಿಕ ಕಾರ್ಯಕ್ರಮವಾಗಲಿ, ಯಾವುದೇ ರೀತಿಯ ಕಾರ್ಯಕ್ರಮಗಳಿಗೆ ಇವರು ಸ್ಪಂದಿಸಿ ಆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮುಂದಾಗುತ್ತಿದ್ದರು. ಎಲ್ಲರಿಗೂ ಸ್ಪಂದಿಸುತ್ತಾ ಉತ್ತಮ ಕೆಲಸಗಳನ್ನು ಮಾಡುತ್ತಾ ಸಾರ್ವಜನಿಕರ ಮನಸ್ಸು ಗೆಲ್ಲುವಲ್ಲಿ ಇವರ ಪಾತ್ರ ಅಮೋಘ ಎಂದು ಹೇಳಬಹುದು. ಅದರಲ್ಲೂ ನಮ್ಮ ಬಂಗಾರಪೇಟೆ ಇನ್ಸ್ಪೆಕ್ಟರ್ ಆಗಲಿ ಪೊಲೀಸ್ ಸಿಬ್ಬಂದಿಯಾಗಲಿ ಅಧಿಕಾರಿಗಳಾಗಲಿ ಉತ್ತಮ ಸೇವೆ ಸಲ್ಲಿಸಿ ಸಾರ್ವಜನಿಕರ ಮೆತ್ತಿಗೆಗೆ ಪಾತ್ರರಾಗಿದ್ದಾರೆ. ಒಟ್ಟಿನಲ್ಲಿ ನಮ್ಮ ಬಂಗಾರಪೇಟೆ ತಾಲ್ಲೂಕಿನ ಪೊಲೀಸ್ ಇಲಾಖೆ ಉತ್ತಮ ಕೆಲಸಗಳು ಮಾಡಿ ಎಲ್ಲಾ ಸಮಸ್ಯೆಗಳನ್ನು ಸ್ಪಂದಿಸುತ್ತಾ, ರಸ್ತೆ ನಿಯಮಗಳು ಹಾಗೂ ಯುವಕರ ಜಾಗೃತಿ ಬಗ್ಗೆ ಹರಿವು ಮೂಡಿಸುತ್ತಿರುವುದು ಶ್ಲಾಘನೀಯ ವಿಚಾರವಾಗಿದೆ. ಆದರಿಂದ ಮುಖ್ಯ ಪೇದೆ ನಾಗೇಶ್ ಅವರಿಗೆ ಇನ್ನು ಹೆಚ್ಚು ಆರೋಗ್ಯ ಐಶ್ವರ್ಯ ನೀಡಲೆಂದು ಹಾರೈಸಿದರು.


ಉದಯವಾಹಿನಿ ಚಿತ್ರ


# ಸಮುದಾಯದ ಒಳಿತಿಗೆ ಪಕ್ಷಾತೀತವಾಗಿ ಶ್ರಮಿಸೋಣ

## ಕರ್ನಾಟಕ ಒಕ್ಕಲಿಗರ ಸಂಘದ ವತಿಯಿಂದ ನಡೆದ ನೂತನ ಪದಾಧಿಕಾರಿಗಳ ಪದಗ್ರಹಣ, ನಾಡಪ್ರಭು ಕೆಂಪೇಗೌಡ ಜಯಂತಿಯ

• ಉದಯವಾಹಿನಿ, ಮೈಸೂರು

ಸಮುದಾಯದ ಅಭಿವೃದ್ಧಿಗೆ ಪಕ್ಷಾತೀತವಾಗಿ ಭಿನ್ನಾಭಿಪ್ರಾಯ ಬದಿಗಿರಿಸಿ ಕೆಲಸ ಮಾಡೋಣ ಎಂದು ಪಶು ಸಂಗೋಪನೆ ಇಲಾಖೆ ಸಚಿವ ಕೆ.ವೆಂಕಟೇಶ್ ಅಭಿಪ್ರಾಯಪಟ್ಟರು.

ನಗರದ ಕಲಾಮಂದಿರದ ಆವರಣದಲ್ಲಿ ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ವತಿಯಿಂದ ನಡೆದ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ನಾಡಪ್ರಭು ಕೆಂಪೇಗೌಡ ಜಯಂತಿಯ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಮಾಜದ ಒಳಿತಿಗೆ ನಡೆಯುವ ಕೆಲಸಗಳಲ್ಲಿ ಹಿಂದೇಟು ಹಾಕಬಾರದು. ಶ್ರೀ ಬಾಲಗಂಗಾಧರ ನಾಥ ಸ್ವಾಮೀಜಿ ಅಣತೆಯನ್ನು ಆದಿಚುಂಚನಗಿರಿ ಮಠದ ಪರವಾಗಿ ಕೆಲಸ ಮಾಡುತ್ತಿರುವೆ ಎಂದರು. ಹಳೆ ಮೈಸೂರು ಭಾಗವಲ್ಲದೇ ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ಒಕ್ಕಲಿಗರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಉಪ ಪಂಗಡಗಳಾಗಿ ಹಂಚಿ ಹೋಗಿದ್ದಾರೆ. ಹೀಗಾಗಿ ಎಲ್ಲಾ ಸಮುದಾಯವನ್ನು ಒಗ್ಗೂಡಿಸುವ ಉದ್ದೇಶದಿಂದ ಈ ಸಂಘಕ್ಕೆ ಅಸ್ತಿತ್ವಕ್ಕೆ ಬಂದಿದ್ದು, ಸಂಘದ ರಾಜ್ಯಾಧ್ಯಕ್ಷ ಗಂಗಾಧರ ಗೌಡ ಸಮುದಾಯವನ್ನು ಕಟ್ಟುವ ಕೆಲಸ ಮಾಡಲಿ. ಹಿಂದೆ ಒಕ್ಕಲಿಗರು ಕೃಷಿ ಭೂಮಿಯನ್ನು


ಉದಯವಾಹಿನಿ ಚಿತ್ರ

ಸಣ್ಣ ಜಾತಿ ಬೈದರು ಪ್ರತಿಕ್ರಿಯೆ

ಮಾರುತ್ತಿರಲಿಲ್ಲ. ಈಗ ಮಾರುವ ಸಾಲಿನಲ್ಲಿ ಮೊದಲಿಗರು ಒಕ್ಕಲಿಗರಾಗಿದ್ದಾರೆ. ರೈತರು ಕನಿಷ್ಠ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಜೊತೆಗೆ ನೇಗಿಲ ಯೋಗಿಗಳು ಮದುವೆಗಾಗಿ ಕಾಯುತ್ತಿದ್ದಾರೆ. ಆದರೆ, ಸಮುದಾಯದ ಕೆಲ ಹೆಣ್ಣು ಮಕ್ಕಳು ಲವ್ ಜಿಹಾದಿಗೆ ಒಳಗಾಗಿ ಬದುಕು ಕಳೆದುಕೊಳ್ಳುತ್ತಿದ್ದಾರೆ. ಒಕ್ಕಲಿಗರು ಹೇಡಿಗಳಿಂದ ಪ್ರಚೋದನೆ ಪಡೆಯಬಾರದು ಎಂದರು. ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ಅಂದಿನ ಕಾಲದಲ್ಲಿ ಸಮುದಾಯದಲ್ಲಿ ಹೆಚ್ಚು ವಿದ್ಯಾಂತರು ಇರಲಿಲ್ಲ.

ರಾಷ್ಟ್ರಕವಿ ಕುವೆಂಪು ಅವರು ಮೈಸೂರು ವಿವಿ ಕುಲಪತಿಯಾದಾಗ ಒಕ್ಕಲಿಗರ ವಿದ್ಯಾಭ್ಯಾಸಕ್ಕೆ ನೀಡಿದ ಪ್ರೇರಣೆ ಮತ್ತು ಬಾಲಗಂಗಾಧರನಾಥ ಸ್ವಾಮೀಜಿ ಅವರ ಸಮುದಾಯ ಕಾಳಜಿಯಿಂದ ಪ್ರಸ್ತುತ ಎಲ್ಲಾ ರಂಗದಲ್ಲಿಯೂ ಬೃಹದಾಕಾರದಲ್ಲಿ ಒಕ್ಕಲಿಗರು ಗುರುತಿಸಿಕೊಂಡಿದ್ದಾರೆ. ಗುಲ್ಬರ್ಗ, ರಾಯಚೂರು ಹಾಗೂ ಉತ್ತರ ಕರ್ನಾಟಕ ಕೂಡು ಒಕ್ಕಲಿಗರಿದ್ದು, ಇವರನ್ನು ಸಂಘಟಿಸಬೇಕು ಎಂದು ಹೇಳಿದರು. 20 ಮಂದಿಗೆ ಸೇವಾ ರತ್ನ ಪ್ರಶಸ್ತಿ: ಲೇಖಕ ಸಿ.ಪಿ.ಕೃಷ್ಣಕುಮಾರ್, ಡಿ.ಮಾದೇಗೌಡ, ಶಿವಮೊಗ್ಗ ಕುವೆಂಪು ವಿಶ್ವವಿದ್ಯಾಲಯದ ಆರ್.ಅನುರಾಧ ಪಟೇಲ್, ಪ್ರಗತಿಪರ ರೈತ ಎಂ.ಸಿ.ರಂಗಸ್ವಾಮಿ, ವೈದ್ಯ ಶುಶ್ರುತ್ ಗೌಡ, ಬಿಜೆಪಿ ಮುಖಂಡ ಇ.ಸಿ.ನಿಂಗರಾಜೇಗೌಡ, ಲಿಂಗಪ್ಪ, ಕೆಎಎಸ್ ಅಧಿಕಾರಿ ಶೈಲಾ ರವಿಕುಮಾರ್, ಉದ್ಯಮಿ ಸಿ.ನಾರಾಯಣಗೌಡ, ಲಯನ್ ದೇವೇಗೌಡ, ಕೃಷಿ ವಿಜ್ಞಾನಿ ವಸಂತಕುಮಾರ್ ತಿಮಕಾಪುರ, ನಿವೃತ್ತ ಐಪಿಎಸ್ ಅಧಿಕಾರಿ ಎಸ್.ಪಿ.ಶಂಕರೇಗೌಡ, ಶಿಕ್ಷಣ ಸೇವೆಗೆ ದತ್ತೇಶ್ ಕುಮಾರ್, ಚಿತ್ರಕಲಾ ನಾಗರಾಜು, ಉದ್ಯಮಿ ಗೋಪಾಲಸ್ವಾಮಿ, ವಿ.ಸಿ.ರವಿಕುರ್ಮಾ, ಕಾಂಗ್ರೆಸ್ ಮುಖಂಡ ಕೆ.ದಿನೇಶ್, ರಾಜೂಗೌಡ, ಚಲುವರಾಜು, ಪತ್ರಕರ್ತ ರವಿಪಾಂಡವಪುರ ಅವರು ಪ್ರಶಸ್ತಿ ಸ್ವೀಕರಿಸಿದರು.

### ಆದರ್ಶ ದಂಪತಿ

**ಹಿರಿಯ ದಂಪತಿಗಳಾದ ಗೋವಿಂದೇಗೌಡ ಮತ್ತು ಜಯಮ್ಮ, ಉದ್ಯಮಿ ಸಿ.ವೈ.ಶಿವೇಗೌಡ ಮತ್ತು ಉಮಾರಾಣಿ ಶಿವೇಗೌಡ, ಡಾ.ರಾಜಶೇಖರ್ ಮತ್ತು ಡಾ.ಲತಾ ರಾಜಶೇಖರ್, ಶ್ರೀಂಕಠಯ್ಯ ಮತ್ತು ಶಾಂತಮ್ಮ, ಹೋಟೆಲ್ ಉದ್ಯಮಿ ಮಂಜುನಾಥ್ ಮತ್ತು ವಿಜಯ, ಶಿವಶಂಕರ್ ಮತ್ತು ಉಮಾದೇವಿ ದಂಪತಿಗೆ ಆದರ್ಶ ಒಕ್ಕಲಿಗ ದಂಪತಿ ಪ್ರಶಸ್ತಿ ನೀಡಲಾಯಿತು.**

**ಪ್ರಸ್ತುತ ಸಂದರ್ಭದಲ್ಲಿ ನಮ್ಮ ಅಸ್ಮಿತೆ, ಅಸ್ತಿತ್ವ, ಸ್ವಾಭಿಮಾನ ಕ್ಷೀಣಿಸುತ್ತಿದೆ. ಸಣ್ಣ ಜಾತಿಯನ್ನು ಬೈದರು ಪ್ರತಿಕ್ರಿಯೆ ಕೊಡುತ್ತಾರೆ. ಆದರೆ, ಹಿಂದೂ ಧರ್ಮವನ್ನು ನಿಂದಿಸಿದರೂ ಯಾವುದೇ ಪ್ರತಿಕ್ರಿಯೆ ಕೊಡುವುದಿಲ್ಲ. ಇಂತಹ ಧೋರಣೆ ಹೊಂದಿರುವ ಮಾನಸಿಕತೆ ಅತ್ಯಂತ ಅಪಾಯಕಾರಿ. ಸನಾತನ ಧರ್ಮ ಬಲವಾಗಿದ್ದರೆ ಒಕ್ಕಲಿಗರು, ಕುರುಬರು, ಲಿಂಗಾಯರು, ದಲಿತರು ಸೇರಿ ಎಲ್ಲ ಜಾತಿಗಳು ಸುರಕ್ಷಿತವಾಗಿರಲಿವೆ ಎಂದು ಹೇಳಿದರು.**

ಸದಸ್ಯ ಸಿ.ಟಿ.ರವಿ ವಿಧಾನ ಪರಿಷತ್

## ಮಿನಿ ನ್ಯೂಸ್

### ವಿಶ್ವಕರ್ಮ ಜಯಂತಿ ಕಾರ್ಯಕ್ರಮ

• ಉದಯವಾಹಿನಿ,ಬಂಗಾರಪೇಟೆ

ನಿರ್ದಿಷ್ಟ ರೂಪ ತಂದುಕೊಟ್ಟು ಮೂರ್ತತ್ತೇಯ ಕಡೆ ಕೊಂಡೊಯ್ದು ಕಲಾಕಾರ ಶ್ರೀ ವಿಶ್ವಕರ್ಮ ಮಹಾ ಗುರುಗಳು ಎಂದು ಶಾಸಕ ಎಸ್ ಎಸ್ ನಾರಾಯಣ ಸ್ವಾಮಿ ಅಭಿಪ್ರಾಯಪಟ್ಟರು. ಪಟ್ಟಣದ ತಾಲ್ಲೂಕು ಆಡಳಿತ ಕಛೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ವಿಶ್ವಕರ್ಮ ಸಮುದಾಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಕರ್ಮ ಜಯಂತಿ ಕಾರ್ಯ ಕ್ರಮದಲ್ಲಿ ಭಾಗವಹಿಸಿ ಮಾತನಾಡಿ ವಿಶ್ವಕರ್ಮ ಜಯಂತಿಯು ದೈವಿಕ ವಾಸ್ತುಶಿಲ್ಪಿ ಮತ್ತು ಕುಶಲಕರ್ಮಿ ಎಂದು ಪರಿಗಣಿಸಲ್ಪಟ್ಟ ಭಗವಾನ್ ವಿಶ್ವಕರ್ಮರ ಗೌರವಾರ್ಥವಾಗಿ ಆಚರಿಸಲಾಗುವ ಮಹತ್ವದ ಹಿಂದೂ ಹಬ್ಬವಾಗಿದೆ ಮತ್ತು ಋಗ್ವೇದದಲ್ಲಿ ವಿಶ್ವಕರ್ಮರ ಬಗ್ಗೆ ಪ್ರಸ್ತಾಪವಿದ್ದು ಸಂವೃದ್ಧಿ ಮೂಲ, ದಾರ್ಶನಿಕ, ಪಾದ್ರಿ ಎಂದು ಕರೆಯುವುದರ ಮೂಲಕ ಇಡೀ ಬ್ರಹ್ಮಾಂಡದ ವಾಸ್ತುಶಿಲ್ಪಿಯ ಮೂಲ ಕರ್ತ ಎಂದು ಪ್ರತಿಪಾದಿಸಲಾಗಿದೆ, ವಿಶ್ವಕರ್ಮ ಗುರುಗಳು ದೇವಾನು ದೇವರುಗಳಿಗೆ ನಿರ್ದಿಷ್ಟ ಆಕಾರ ನೀಡುವುದರೊಂದಿಗೆ ಅನೇಕ ದೇವಾಲಯಗಳ ಸೃಜನಶೀಲ ವಾಸ್ತು ಶಿಲ್ಪ ರಚನೆಗೆ ಸಾಕ್ಷಿಯಾಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ವೆಂಕಟೇಶಪ್ಪ, ಇಒ ರವಿಕುಮಾರ್, ಪುರಸಭೆ ಅಧ್ಯಕ್ಷ ಗೋವಿಂದ, ಸದಸ್ಯರಾದ ಷಫಿ, ಅರುಣಾಚಲಂ ಮಣಿ, ಶಶಿ ,ಬಾಳೆ ಹಣ್ಣು ವೆಂಕಟೇಶ್, ಅಧ್ಯಕ್ಷರಾದ ನಾಗರಾಜಾ ಚಾರಿ, ರವಿ ಆಚಾರಿ, ಜೈರಾಮಾ ಚಾರಿ, ನರೇಶ್, ನವರತ್ನಾಚಾರಿ, ಯೋಗಾನಂದ, ಗಿರಿಚಾರಿ, ಮುನೇಶ್ವರ ಚಾರಿ, ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

### ಸಂಭ್ರಮದ ಅನಂತ ಪದ್ಮನಾಭ ವ್ರತ

• ಉದಯವಾಹಿನಿ, ಬಾಗೇಪಲ್ಲಿ

ಭಾರತದ ಹಲವಾರು ಭಾಗಗಳಲ್ಲಿ ಹಿಂದೂಗಳು ಆಚರಿಸುವ ಒಂದು ಹಬ್ಬ ಅನಂತ ಪದ್ಮನಾಭ ಸ್ವಾಮಿ ವ್ರತದ ಈ ಹಬ್ಬವನ್ನು ಭಾದ್ರಪದ ಮಾಸದಲ್ಲಿ ಆಚರಿಸಲಾಗುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿ ಅನಂತ ಪದ್ಮನಾಭ ಸ್ವಾಮಿ ವ್ರತದ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸುವುದು ಮಹಿಳೆಯರಿಗೆ ಎಲ್ಲಿಲ್ಲದ ಸಂತೋಷ ಮತ್ತು ಸಡಗರ ಸಂಭ್ರಮ ತರುವ ಹಬ್ಬವಾಗಿದೆ.

ಎಂದಿನಂತೆ ಈ ವರ್ಷವೂ ಸಹ ಮನೆಗಳಲ್ಲಿ ಅನಂತ ಪದ್ಮನಾಭ ಸ್ವಾಮಿ ವ್ರತದ ಹಬ್ಬವವನ್ನು ವಿಶೇಷವಾಗಿ ಅಲಂಕಾರ ಮಾಡಿರುವುದು ಕಂಡು ಬಂದಿತು. ಈ ದಿನದಂದು ಕುಟುಂಬದವರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಮುತ್ತೈದೆಯುರು ಅನಂತ ಪದ್ಮನಾಭ ಸ್ವಾಮಿ ವ್ರತದ ಪೂಜೆ ಸಲ್ಲಿಸಲು ಬೆಳಿಗ್ಗಿನಿಂದಲೆ ತಟ್ಟೆಯಲ್ಲಿ ಪೂಜಾ ಸಾಮಾಗ್ರಿಗಳನ್ನು ಇಟ್ಟುಕೊಂಡು ಪೂಜೆ ಸಲ್ಲಿಸುತ್ತಿದ್ದ ದೃಶ್ಯ ಎಲ್ಲೆಡೆ ಇತ್ತು. ಮಹಿಳೆಯರು ಬೆಳಗಿನ ಜಾವ ಬೆಳಕು ಅರಳುತ್ತಿರುವಾಗಲೇ ಮಹಿಳೆಯರು ತಮ್ಮ ಮನೆಗಳ ಮುಂದೆ ವಿವಿಧ ಬಣ್ಣಗಳಲ್ಲಿ ರಂಗೋಲಿ ಹಾಕಿ, ರಂಗೋಲಿಯ ಚಿತ್ತಾರ ಮೂಡಿಸಿರುವುದು, ಮನೆಯ ಬಾಗಿಲಿಗೆ ಮಾವಿನ ಎಲೆಗಳ ತೋರಣದ ಹಾರ ಮತ್ತು ವಿವಿಧ ಬಣ್ಣದ ಹೂವುಗಳ ಹಾರಗಳನ್ನು ಹಾಕುವ ಮೂಲಕ ಅಲಂಕರಿಸಿ ಸ್ವಾಮಿಯ ಹಬ್ಬದ ವಾತಾವರಣವನ್ನು ಮಹಿಳೆಯರು ಮೂಡಿಸಿದ್ದರು. ಮಧ್ಯಾಹ್ನದ ನಂತರ ಮುತ್ತೈದು ಮಹಿಳೆಯರು ಮನೆ ಮನೆಗೂ ತೆರಳಿ ಅರ್ಷಿನ ಕುಂಕಮ ತಾಂಬೂಲ ಸ್ವೀಕರಿಸುವಂತೆ ಆಹ್ವಾನಿಸುತ್ತಿರುವುದು ಅನಂತ ಪದ್ಮನಾಭ ಸ್ವಾಮಿ ವ್ರತವಾದ ದಿನದಂದು ಹಲವಾರು ಮನೆಗಳಲ್ಲಿ ಗೋಚರಿಸಿತು.

### ಚಿರತೆ ದಾಳಿ: 32 ಕುರಿ ಸಾವು

• ಉದಯವಾಹಿನಿ, ಕೊಡಿಗೇನಹಳ್ಳಿ

ಪುರವರ ಹೋಬಳಿ ದೊಡ್ಡಹೊಸಹಳ್ಳಿ ಗ್ರಾಮದಲ್ಲಿ ಮಂಗಳವಾರ ಬೆಳಗಿನ ಜಾವ ಚಿರತೆ ದಾಳಿ ನಡೆಸಿ 32 ಕುರಿಗಳನ್ನು ಕೊಂದು ಹಾಕಿದೆ. ಕುರಿಗಾಹಿ ಮಲ್ಲಣ್ಣ ಎಂಬುವವರ ಕುರಿರೊಪ್ಪಕ್ಕೆ ಅಳವಡಿಸಿದ್ದ ಮೆಸ್ ಕಿತ್ತುಹಾಕಿ ಒಳನುಗ್ಗಿರುವ ಚಿರತೆಯು ಕುರಿಗಳ ಮೇಲೆ ದಾಳಿ ನಡೆಸಿದೆ. ಕುರಿಗಳನ್ನೇ ನಂಬಿ ಜೀವನ ನಡೆಸುತ್ತಿದ್ದ ಮಲ್ಲಣ್ಣಗೆ ದಿಕ್ಕು ತೋಚದಂತಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಅತ್ಯುತ್ತಮ ಶಿಕ್ಷಕರನ್ನು ಸಮಾಜ ಪೂಜಿಸುತ್ತದೆ, ಗೌರವಿಸುತ್ತದೆ

• ಉದಯವಾಹಿನಿ, ಮಂಡ್ಯ

ಅತ್ಯುತ್ತಮ ಶಿಕ್ಷಕರನ್ನು ಸಮಾಜ ಪೂಜಿಸುತ್ತದೆ. ಗೌರವಿಸುತ್ತದೆ. ನೂರು ವರ್ಷ ಕಳೆದರೂ ಸಹ ಉತ್ತಮ ಶಿಕ್ಷಕರು ಜನರ ಮನಸ್ಸಿನಿಂದ ಕಣ್ಮರೆಯಾಗುವುದಿಲ್ಲ. ಶಿಕ್ಷಕರಾಗಿರುವವರು ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಸಮಾಜ ಮಾದರಿಯಾಗಿ ನಡೆದುಕೊಳ್ಳಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮಹದೇವ್ ತಿಳಿಸಿದರು. ಮಂಡ್ಯ ಅಮೃತ ಅಲೆಯನ್ಸ್ ಸಂಸ್ಥೆ, ಎಲ್ಲರೊಳಗೊಂದಾಗು ಮಂಕುತಿಮ್ಮ ಟ್ರಸ್ಟ್, ಅನಿಕೇತನ ಸ್ಕೂಲ್ ಆಫ್ ಎಜುಕೇಷನ್ ಇವರ ವತಿಯಿಂದ ಅನಿಕೇತನ ಪ್ರೌಢಶಾಲಾ ಆವರಣದಲ್ಲಿ ನಡೆದ ಶಿಕ್ಷಕರ ದಿನಾಚರಣೆ, ಆದರ್ಶ ಶಿಕ್ಷಕರ ಪ್ರಶಸ್ತಿ ಪ್ರದಾನ, ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬದುಕಿಗೆ ಶಿಕ್ಷಣ ಮುಖ್ಯವಾಗುವುದಿಲ್ಲ. ದುಡಿಮೆಯೇ ಮುಖ್ಯ. ಆದರೆ, ಬದುಕಿನಲ್ಲಿ ಜೀವನವನ್ನು ಚೆನ್ನಾಗಿ ಅನುಭವಿಸಬೇಕು ಎಂದರೆ ಶಿಕ್ಷಣ ಅಗತ್ಯ. ಮಾನವೀಯ ಮೌಲ್ಯಗಳ, ಮನುಷ್ಯತ್ವದ, ಸಮಾನತೆಯ ಮೇಲೆ, ಪ್ರೀತಿ ವಿಶ್ವಾಸದ ಮೇಲೆ, ಧರ್ಮ, ಧರ್ಮಗಳ ನಡುವೆ ತಿಕ್ಕಾಟವಿಲ್ಲದೆ ವಿದ್ಯಾರ್ಥಿಗಳ ಭವಿಷ್ಯದ ಜೀವನವನ್ನು ಕಟ್ಟಿಕೊಡುವ ಶಿಕ್ಷಣ ನೀಡಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಪ್ರಮುಖ ಪಾತ್ರ ವಹಿಸಬೇಕು ಎಂದು ಸಲಹೆ ನೀಡಿದರು.

### ಹಾಲಿನ ದರ ರೂ.10 ಹೆಚ್ಚಳಕ್ಕೆ ರೈತ ಸಂಘ ಒತ್ತಾಯ

• ಉದಯವಾಹಿನಿ, ರಾಮನಗರ

ಜಿಲ್ಲೆಯ ಮಾಗಡಿಗೆ ಇತ್ತೀಚೆಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತರ ಹಿತದೃಷ್ಟಿಯಿಂದ, ಹಾಲಿನ ದರವನ್ನು ರೂ 5ರಷ್ಟು ಏರಿಕೆ ಮಾಡುವುದಾಗಿ ಭರವಸೆ ನೀಡಿರುವುದು ಸ್ವಾಗತಾರ್ಹ. ಹೈನುಗಾರಿಕೆಯಿಂದ ನಷ್ಟ ಅನುಭವಿಸುತ್ತಿರುವ ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕಾದರೆ ಹಾಲಿನ ದರವನು ರೂ 10ರಷ್ಟು ಏರಿಕೆ ಮಾಡಬೇಕು' ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಎ.ಎಲ್. ಬೈರೇಗೌಡ ಒತ್ತಾಯಿಸಿದರು. 'ದನಗಳ ಖರೀದಿ ದರ ಸೇರಿದಂತೆ ಮೇವಿನ ಬೆಲೆಯೂ ಹೆಚ್ಚಾಗಿದೆ. ಬೇರೆ ರಾಜ್ಯಗಳಿಗೆ ಕರ್ನಾಟಕದಲ್ಲೇ ಅತಿ ಕಡಿಮೆ ದರದಲ್ಲಿ ಹಾಲು ಮಾರಾಟ ಮಾಡಲಾಗುತ್ತಿದೆ. ರಾಮನಗರ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ರೈತರು ಹೈನುಗಾರಿಕೆಯನ್ನು ನೆಚ್ಚಿಕೊಂಡಿದ್ದಾರೆ

ಅಂತರಾಳದಿಂದ... EDITORIAL

# ಸಿಬಿಐಗೆ ಛೀಮಾರಿ ಹಾಕಿದ ಸುಪ್ರೀಂ ಕೋರ್ಟ್

ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರಕಾರ ಬಂದ ನಂತರ ಪ್ರತಿಪಕ್ಷಗಳನ್ನು, ಬಿಜೆಪಿಯೇತರ ಚುನಾಯಿತ ರಾಜ್ಯ ಸರಕಾರಗಳನ್ನು ಉರುಳಿಸಲು ನಡೆಸುತ್ತಿರುವ ಹುನ್ನಾರ ಮಿತಿ ಮೀರಿದೆ. ಹಾಗಾಗಿ ಈ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್ ಸಿಬಿಐ ಎಂಬ ತನಿಖಾ ಸಂಸ್ಥೆ ಕೇಂದ್ರ ಸರಕಾರದ ಪಂಜರದ ಗಿಳಿಯಾಗಬಾರದು ಎಂದು ಛೀಮಾರಿ ಹಾಕಿದೆ.

ಅಬಕಾರಿ ನೀತಿ ಕುರಿತ ಹಗರಣದಲ್ಲಿ ದಿಲ್ಲಿ ಮುಖ್ಯಮಂತ್ರಿ ಅರವಿಂದ ಕೇಜಿವಾಲ್ ಅವರ ಬಂಧನದ ಅಗತ್ಯ ಹಾಗೂ ಸಮಯದ ಬಗ್ಗೆ ಕೇಂದ್ರೀಯ ತನಿಖಾ ಸಂಸ್ಥೆ ಸಿಬಿಐಯನ್ನು ತರಾಟೆಗೆ ತೆಗೆದುಕೊಂಡ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಗಳಾದ ಸೂರ್ಯಕಾಂತ್ ಹಾಗೂ ಉಜ್ವಲ್ ಭುಯಾನ್ ಅವರಿದ್ದ ಪೀಠ ಅರವಿಂದ ಕೇಜಿವಾಲ್ ಅವರನ್ನು ಜಾಮೀನು ಮೇಲೆ ಬಿಡುಗಡೆ ಮಾಡಿ ಈ ತೀರ್ಪು ನೀಡಿತು.

ಸಂವಿಧಾನಾತ್ಮಕವಾದ ಎಲ್ಲ ಸ್ವಾಯತ್ತ ಸಂಸ್ಥೆಗಳನ್ನು ಕೈವಶ ಮಾಡಿಕೊಂಡ ಮೋದಿ ಸರಕಾರ ಅವುಗಳನ್ನು ರಾಜಕೀಯ ವಿರೋಧಿಗಳನ್ನು ಹತ್ತಿಕ್ಕಲು ಬಳಸಿಕೊಳ್ಳುತ್ತಿದೆ. ಚುನಾವಣಾ ಆಯೋಗವನ್ನು ಸಹ ತನ್ನ ರಾಜಕೀಯ ಸ್ವಾರ್ಥ ಸಾಧನೆಗೆ ಬಳಸಿಕೊಳ್ಳುತ್ತಿದೆ. ಮಹಾರಾಷ್ಟ್ರದಲ್ಲಿ ಶಿವಸೇನೆ ಮತ್ತು ಕಾಂಗ್ರೆಸ್ ಹಾಗೂ ರಾಷ್ಟ್ರವಾದಿ ಕಾಂಗ್ರೆಸ್ ಸರಕಾರವನ್ನು ಉರುಳಿಸಲು ಏಕನಾಥ ಶಿಂದೆಯವರ ಭಿನ್ನಮತೀಯ ಬಣಕ್ಕೆ ಚುನಾವಣಾ ಆಯೋಗ ಮಾನ್ಯತೆ ನೀಡಿತು ಕೇಂದ್ರ ಸರಕಾರದ ಈ ವರ್ತನೆ ಬಗ್ಗೆ ಸುಪ್ರೀಂ ಕೋರ್ಟ್ ಅಸಮಾಧಾನವನ್ನು ವ್ಯಕ್ತಪಡಿಸುತ್ತಲೇ ಇದೆ. ಹಿಂದೆ ಕಲ್ಲಿದ್ದಲು ಹಗರಣಕ್ಕೆ ಸಂಬಂಧಿಸಿದಂತೆ ನಡೆದ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿ ಆರ್.ಎಂ.ಲೋಧಾ ಅವರ ನೇತೃತ್ವದ ಸುಪ್ರೀಂ ಕೋರ್ಟ್ ಪೀಠ ಕೂಡ ಕೇಂದ್ರೀಯ ತನಿಖಾ ಸಂಸ್ಥೆ ಯಜಮಾನನ ರೀತಿ ಮಾತಾಡುವ ಪಂಜರದ ಗಿಳಿ ಇದ್ದಂತೆ ಎಂದು ಹೇಳಿತ್ತು ಅದನ್ನು ಮತ್ತೆ ಸುಪ್ರೀಂ ಕೋರ್ಟ್ ಪುನರುಚ್ಚರಿಸಿದೆ.


ಸಿಬಿಐ ಒಂದು ಮಹತ್ವದ ತನಿಖಾ ಸಂಸ್ಥೆಯಾಗಿದೆ. ಸಾರ್ವಜನಿಕ ಹಿತಾಸಕ್ತಿಯಿಂದ ಈ ಸಂಸ್ಥೆಗೆ ಉನ್ನತ ಸ್ಥಾನ ನೀಡಲಾಗಿದೆ. ಆದರೆ ಯಾವುದೇ ತನಿಖೆಗಳು ನ್ಯಾಯಯುತವಾಗಿ ನಡೆದಿಲ್ಲ. ಇಲ್ಲವೇ ಪಕ್ಷಪಾತದಿಂದ ಕೂಡಿವೆ ಎಂಬ ಭಾವನೆ ಮೂಡದಂತೆ ನಡೆದುಕೊಳ್ಳುವುದು ತನಿಖಾ ಸಂಸ್ಥೆಗಳ ಹೊಣೆಗಾರಿಕೆಯಾಗಿದೆ ಎಂದು ನ್ಯಾಯಮೂರ್ತಿಗಳು ಹೇಳಿದ್ದಾರೆ. ತನಿಖಾ ಸಂಸ್ಥೆಗಳ ವರ್ತನೆ ಬಗ್ಗೆ ಪದೇ ಪದೇ ಆಕ್ಷೇಪ ವ್ಯಕ್ತಪಡಿಸಿದ ಅವರು ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಈಗಾಗಲೇ ಕಠಿಣ ಕರಾರುಗಳೊಂದಿಗೆ ಜಾಮೀನು ನೀಡಿರುವಾಗ ಮತ್ತೆ ಅದೇ ಅಪರಾಧಕ್ಕೆ ಸಂಬಂಧಿಸಿದಂತೆ ಕೇಬ್ರಿವಾಲ್ ಅವರನ್ನು ಬಂಧನಕ್ಕೆ ದಿಲ್ಲಿ ಮುಖ್ಯಮಂತ್ರಿಯನ್ನು 2013ರ ಮಾರ್ಚ್ ತಿಂಗಳಲ್ಲಿ ವಿಚಾರಣೆಗೆ ಒಳಪಡಿಸಿತ್ತು ಆಗ ಅದಕ್ಕೆ ಬಂಧಿಸುವ ಅಗತ್ಯ ಕಾಣಲಿಲ್ಲ. 22 ತಿಂಗಳವರೆಗೆ ಸುಮ್ಮನಿತ್ತು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬಂಧಿಸಿದ ಪ್ರಕರಣದಲ್ಲಿ ಅವರಿಗೆ ಜಾಮೀನು ದೊರೆತ ಕೂಡಲೇ ಸಿಬಿಐ ಸಕ್ರಿಯವಾಗಿ ಕೇಜಿವಾಲ್ ಅವರನ್ನು ತಮ್ಮ ವಶಕ್ಕೆ ತೆಗೆದುಕೊಂಡಿತು.

**ತನಿಖಾ ಸಂಸ್ಥೆಯು ಪಂಜರದಗಿಳಿಯಂತೆ ಕಾರ್ಯನಿರ್ವಹಿಸುತ್ತಿದೆ ಎಂಬ ಭಾವನೆ ಜನರಲ್ಲಿದೆ. ಈ ಭಾವನೆಯನ್ನು ಹೋಗಲಾಡಿಸಬೇಕೆಂದು ಹೇಳಿದ ನ್ಯಾಯಮೂರ್ತಿ ಭುಯಾನ್ ಸೀಸರ್ ಪತ್ನಿ ಉಪಮೆಯನ್ನು ಉಲ್ಲೇಖಿಸಿ ಸಿಬಿಐ ತನಿಖಾ ಸಂಸ್ಥೆ ಸಂಶಯಾತೀತವಾಗಿರಬೇಕೆಂದು ಹೇಳಿದರು. ಕೇಜಿವಾಲ್ ಅವರನ್ನು ಬಂಧಿಸಿರುವ ಕ್ರಮ ನ್ಯಾಯ ಸಮ್ಮತವಾಗಿಲ್ಲ. ಹಾಗೂ ಹಲವಾರು ಪ್ರಶ್ನೆಗಳನ್ನು ಹುಟ್ಟು ಹಾಕುತ್ತದೆ ಎಂದು ಹೇಳಿದರು.**

ಜಾರಿ ನಿರ್ದೇಶನಾಲಯದ ಪ್ರಕರಣದಲ್ಲಿ ಕೇಬ್ರಿವಾಲ್ ಅವರು ಬಿಡುಗಡೆಯಾಗುವ ಸಂದರ್ಭ ಅವರನ್ನು ಬಂಧಿಸಲೇ ಬೇಕಾದ ತುರ್ತು ಅಗತ್ಯವೇನಿತ್ತು ಎಂದು ನ್ಯಾಯಮೂರ್ತಿಗಳು ತರಾಟೆಗೆ ತೆಗೆದುಕೊಂಡಿದ್ದಾರೆ. ಅರವಿಂದ ಕೇಜಿವಾಲ್ ಅವರ ಬಂಧನಕ್ಕೆ ಸಿಬಿಐ ಖಚಿತ ಸಮರ್ಥನೆಯನ್ನು ನೀಡಿಲ್ಲ. ಅದರ ಬದಲಿಗೆ ಕೇಜಿವಾಲ್ ಅವರು ಹಾರಿಕೆಯ ಉತ್ತರ ನೀಡುತ್ತಿದ್ದಾರೆ ಎಂದು ಬಂಧನ ಪ್ರಕ್ರಿಯೆಯನ್ನು ಮುಂದುವರಿಸಿದೆ ಎಂದು ನ್ಯಾಯಮೂರ್ತಿ ವಿಶ್ಲೇಷಣೆ ಮಾಡಿದ್ದಾರೆ.

ಇಲ್ಲಿ ಜಾಮೀನು ನೀಡಿರುವುದು ಒಂದೆಡೆಯಾದರೆ ತೀರ್ಪು ನೀಡುವಾಗ ನ್ಯಾಯಪೀಠವು ಹೇಳಿರುವ ಮಾತುಗಳು ಯಾವುದೇ ವ್ಯಕ್ತಿಯನ್ನು ಸುದೀರ್ಘ ಕಾಲ ಜೈಲಿನಲ್ಲಿಡುವುದು ಅದರಲ್ಲೂ ವಿಶೇಷವಾಗಿ ವಿಚಾರಣೆಯು ಸದ್ಯದಲ್ಲಿ ಮುಗಿಯುವುದಿಲ್ಲ ಎಂದು ತಿಳಿದಿರುವಾಗಲೂ ಜಾಮೀನು ನೀಡದೆ ಇರುವುದು ಮಾನವ ಹಕ್ಕುಗಳ ಉಲ್ಲಂಘನೆ ಯಾಗುತ್ತದೆ ಎಂಬುದನ್ನು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಉಜ್ವಲ್ ಭುಯಾನ್ ಸ್ಪಷ್ಟವಾಗಿ ಹೇಳಿದ್ದಾರೆ. ಯಾವುದೇ ವ್ಯಕ್ತಿಗೆ ತನಿಖಾ ಪ್ರಕ್ರಿಯೆ ಎಂಬುದು ಶಿಕ್ಷೆಯಂತಾಗಬಾರದು ಎಂದು ನ್ಯಾಯಮೂರ್ತಿಗಳು ಸಿಬಿಐಗೆ ಎಚ್ಚರಿಕೆಯನ್ನು ನೀಡಿದ್ದಾರೆ. ಅನಿವಾರ್ಯ ಸಂದರ್ಭದಲ್ಲಿ ಮಾತ್ರ ಯಾವುದೇ ವ್ಯಕ್ತಿಯನ್ನು ಬಂಧಿಸಿ ಸೆರೆಮನೆಗೆ ಹಾಕಬಹುದು. ಇಲ್ಲವಾದರೆ ಜಾಮೀನು ನೀಡಬೇಕೆಂಬುದು ನಿಯಮ ಎಂದಿರುವ ನ್ಯಾಯಾಲಯ ಸಂವಿಧಾನದ 21ನೇ ವಿಧಿಯ ಅನ್ವಯ ನೀಡಲಾದ ಸ್ವಾತಂತ್ರ್ಯದ ಹಕ್ಕಿನ ಮೌಲ್ಯವನ್ನು ಮತ್ತೊಮ್ಮೆ ಪ್ರತಿಪಾದಿಸಿದೆ. ಸುಪ್ರೀಂ ಕೋರ್ಟಿನ ಈ ತೀರ್ಪು ಯಾಕೆ ಮಹತ್ವದ್ದಾಗಿದೆ ಅಂದರೆ ನ್ಯಾಯಮೂರ್ತಿ ಭುಯಾನ್ ಅವರು ಕೇಜಿವಾಲ್ ಅವರ ಬಂಧನದ ಅಗತ್ಯವನ್ನು ಕುರಿತು ನೀಡಿರುವ ಪ್ರತ್ಯೇಕ ತೀರ್ಪಿನಲ್ಲಿ ಸಿಬಿಐ ನಡೆಯ ಬಗ್ಗೆ ಎತ್ತದ ಪ್ರಶ್ನೆಗಳಿಂದಾಗಿ, ಸಿಬಿಐ ಬಂಧನ ಪ್ರಕ್ರಿಯೆಯ ಬಗ್ಗೆ ನ್ಯಾಯಮೂರ್ತಿ ಸೂರ್ಯಕಾಂತ ಹೆಚ್ಚಿಗೆ ಹೇಳಿಲ್ಲವಾದರೂ ನ್ಯಾಯಮೂರ್ತಿ ಭುಯಾನ್ ಮಾತ್ರ ಸಿಬಿಐ ನಡೆಯ ಬಗ್ಗೆ ತೀವ್ರ ಆಕ್ಷೇಪವನ್ನು ವ್ಯಕ್ತಪಡಿಸಿದ್ದಾರೆ. ಈ ತನಿಖಾ ಸಂಸ್ಥೆಯ ವರ್ತನೆ ಲೋಪದಿಂದ ಕೂಡಿದೆ'' ಎಂದಿದ್ದಾರೆ. ಸಿಬಿಐ ನಡೆಯ ಹಿಂದೆ ದುರುದ್ದೇಶವಿದೆ. ಪಿಎಂಎಲ್ಎ ಪ್ರಕರಣದಲ್ಲಿ ಜಾಮೀನು ಮಂಜೂರಾದ ನಂತರವೂ ಕೇಜಿವಾಲ್ ಅವರನ್ನು ಬಂಧಿಸಿದ್ದು ಅವರ ಬಿಡುಗಡೆಯನ್ನು ವಿಫಲಗೊಳಿಸುವ ಹುನ್ನಾರವಾಗಿದೆ ಎಂದು ನ್ಯಾಯಪೀಠ ಹೇಳಿದೆ.

## ರಾಮಾಯಣ



ಬಾಲಕಾಂಡ

• ಹಿಂದಿನ ಸಂಚಿಕೆಯಿಂದ **1ನೆಯ ಅಧ್ಯಾಯ**

ಬಳಿಕ ಶತ್ರುಸಂಹಾರಕನಾದ ರಘುನಾಥನು ಶಬರಿಯಬಳಿಗೈದಿ, ಆಕೆಯು ಅರ್ಘ್ಯಪಾದ್ಯಾಚಮನಾದಿಗಳಿಂದ ಸತ್ಕಾರಮಾಡಲು, ಆ ಪೂಜೆಯನ್ನು ಕೈಕೊಂಡು ಪಂಪಾತೀರಕ್ಕೆ ಬಂದು ಹನುಮಂತನನ್ನು ಕಂಡು ಆತನು ಸುಗ್ರೀವನ ವೃತ್ತಾಂತವನ್ನು ಬಿನ್ನಹಮಾಡಲು ರಾಮನು ಸುಗ್ರೀವನ ಬಳಿಗೆ ಹೋಗಿ ತಾನು ವನವಾಸಕ್ಕೆ ಬಂದ ವೃತ್ತಾಂತವನ್ನೂ ಸೀತಾದೇವಿಯ ವೃತ್ತಾಂತವನ್ನೂ ಹೇಳಿದನು , ಸುಗ್ರೀವನು ಅತ್ಯಂತ ಸಂತೋಷ ಪಟ್ಟು ರಘುನಾಥನೊಡನೆ ಅಗ್ನಿಸಾಕ್ಷಿಕವಾಗಿ ಸಖ್ಯವನ್ನು ಮಾಡಿಕೊಂಡು, ಸ್ನೇಹದಿಂದ, ತನ್ನ ಅಣ್ಣನಾದ ವಾಲಿಯೊಡನೆ ವಿರೋಧ ಉಂಟಾದ ವೃತ್ತಾಂತವನ್ನು ಬಿನ್ನಹಮಾಡಿದನು, ಆ ವೃತ್ತಾಂತವನ್ನು ಕೇಳಿ ರಘುನಾಥನು ವಾಲಿಯನ್ನು ಸಂಹಾರಮಾಡುವುದಾಗಿ ಪ್ರತಿಜ್ಞೆಯನ್ನು ಮಾಡಿದನು, ಸುಗ್ರೀವನು ವಾಲಿಯ ಭುಜಪರಾಕ್ರಮವನ್ನು ನೆನೆದು ರಘುನಾಥನಿಂದ ಆ ಕಾರ್ಯವು ಸಾಧ್ಯವಾಗುವುದೋ ಇಲ್ಲವೋ ಎಂದು ಸಂಶಯವುಳ್ಳವನಾಗಿ ಆತನ ಪರಾಕ್ರಮವನ್ನು ಪರೀಕ್ಷೆಮಾಡಬೇಕೆಂದು ದೊಡ್ಡ ಪರ್ವತಕ್ಕೆ ಸಮಾನವಾದ ದುಂದುಭಿಯೆಂಬ ರಾಕ್ಷಸನ ದೇಹವನ್ನು ತೋರಿಸಿದನು ; ಅತ್ಯಂತ ಬಾಹುಬಲವುಳ್ಳ ರಘುನಾಥನು ಆ ಶುಷ್ಕವಾದ ಅಸ್ಥಿಯೆನ್ನು ಸ ನೋಡಿ ಮುಗುಳನಗೆಯುಳ್ಳವನಾಗಿ ತನ್ನ ಪಾದಾಂಗುಷ್ಠದಿಂದಲೇ ಆ ಶರೀರವನ್ನು ಹತ್ತುಗಾವುದ ದೂರದಲ್ಲಿ ಕೆಡಹಿ ಒಂದು ಬಾಣವನ್ನು ಬಿಲ್ಲಿನಲ್ಲಿ ತೊಟ್ಟು ಅಸಾಧ್ಯವಾದ ಏಳು ಓಲೆಮರಗಳನ್ನು ಕತ್ತರಿಸಿ ನಂಬಿಕೆಯನ್ನುಂಟುಮಾಡಿದನು. ಆಗ ಸುವರ್ಣದಹಾಗೆ ತನುಕಾಂತಿಯುಳ್ಳ ಸುಗ್ರೀವನು ಅತ್ಯಂತ ಸಂತುಷ್ಟನಾಗಿ ರಘುನಾಥನಲ್ಲಿ ಅತ್ಯಂತವಿಶ್ವಾ ) ಸವನ್ನು ಮಾಡಿ ಕಿಷ್ಕಿಂಧಾಪಟ್ಟಣಕ್ಕೆ ಹೋಗಿ ವಾಲಿಯಿದ್ದ ಗುಹೆಯ ಸಮೀಪದಲ್ಲಿ ಸಿಂಹನಾದವನ್ನು ಮಾಡಿದನು. ಮಹತ್ತಾದ ಆ ಧ್ವನಿಯಿಂದ

**ಹ ಬಾಲಕಾಂಡ. 1ನೆಯ ಅಧ್ಯಾಯ**

ಕುಪಿತನಾದ ಮುಲಿಯು ತಾರೆಯನ್ನು ಸಂತವಿಟ್ಟು ಗುಹೆಯಿಂದ ಹೊರಟು ಯುದ್ಧಕ್ಕೆ ಬರಲು, ರಘುನಾಥನು ಸುಗ್ರೀವನನ್ನು ಆತನೊಡನೆ ಯುದ್ಧವನ್ನು ಮಾಡಿಸಿ ಒಂದೇ ಬಾಣದಿಂದ ವಾಲಿಯನ್ನು ಕೊಂದು ಕಿಷ್ಕಿಂಧಾರಾಜ್ಯದ ಪಟ್ಟವನ್ನು ಸುಗ್ರೀವನಿಗೆ ಕಟ್ಟಿದನು, ವಾನರಶ್ರೇಷ್ಠನಾದ ಸುಗ್ರೀವನು ಸಮಸ್ತಕಪಿನಾಯಕರನ್ನೂ ಕರೆಕಳುಹಿಸಿ ಸೀತಾದೇವಿಯನ್ನು ಹುಡುಕುವುದಕ್ಕೋಸ್ಕರ ನಾನಾದಿಕ್ಕುಗಳಿಗೂ ಕಳುಹಿಸಿದನು... ಹನುಮಂತನು ಅಂಗದಾದಿಗಳೊಡನೆ ಸೀತಾದೇವಿ ಯನ್ನು ಅರಸಿಕೊಂಡು ಹೋಗಿ ಜಟಾಯುವನ್ನು ಕೊಂದು ಸೀತಾದೇವಿಯನ್ನು ರಾವಣನು ಅಪಹರಿಸಿಕೊಂಡುಹೋದ ವೃತ್ತಾಂತವನ್ನು ಸಂಪಾತಿಗೆ ಹೇಳಿದನು. ಆತನು ಹೇಳಿದ ಪ್ರಕಾರದಲ್ಲಿ ನೂರುಗಾವುದ ಅಗಲವಾದ ಲವಣಸಮುದ್ರವನ್ನು ಅತಿವೇಗದಿಂದ ದಾಟಿ,

ಮುಂದುವರಿಯುವುದು...

# ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾಕಷ್ಟು ಮುಂಜಾಗ್ರತಾ ಕ್ರಮ

## ಡೆಂಘೀ ವಾರಿಯರ್ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಟೌನ್ ಹಾಲ್‌ನಲ್ಲಿ ಏರ್ಪಡಿಸಿದ್ದ ಪ್ರಶಸ್ತಿ


• ಉದಯವಾಹಿನಿ ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಡೆಂಘೀ ಪ್ರಕರಣಗಳನ್ನು ನಿಯಂತ್ರಣಕ್ಕೆ ತರಲಾಗಿದೆ ಎಂದು ಆರೋಗ್ಯ ವಿಭಾಗದ ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್ ರವರು ತಿಳಿಸಿದರು.

ನಗರದಲ್ಲಿ ಡೆಂಘೀ ಪ್ರಕರಣಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪಾಲಿಕೆಯ ಆರೋಗ್ಯ ವಿಭಾಗವು ಜುಲೈ 2024ರಲ್ಲಿ ನಾಗರೀಕರು ಹಾಗೂ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ''ಡೆಂಘೀ ವಾರಿಯರ್'' ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಇಂದು ಟೌನ್ ಹಾಲ್ ನಲ್ಲಿ ಏರ್ಪಡಿಸಿದ್ದ ಪ್ರಶಸ್ತಿ ಪುರಸ್ಕಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ನಗರದಲ್ಲಿ ಜುಲೈ ತಿಂಗಳಲ್ಲಿ ಹೆಚ್ಚು ಡೆಂಘೀ ಪ್ರಕರಣಗಳು ಕಂಡು ಬರುತ್ತಿದ್ದವು. ಅದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪಾಲಿಕೆ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಆರೋಗ್ಯ ವಿಭಾಗದ ಎಲ್ಲಾ ಅಧಿಕಾರಿಗಳು ಶ್ರಮಿಸಿರುವ ಪರಿಣಾಮ ಡೆಂಘೀ ನಿಯಂತ್ರಿಸಲು ಸಾಧ್ಯವಾಯಿತೆಂದು ತಿಳಿಸಿದರು.

ಸಾಂಕ್ರಾಮಿಕ ರೋಗಗಳು ಬಂದಾಗ ಸಮುದಾಯವು ಆಡಳಿತದೊಂದಿಗೆ ಕೈಜೋಡಿಸಿದರೆ ತ್ವರಿತಗತಿಯಲ್ಲಿ





ಉದಯವಾಹಿನಿ ಚಿತ್ರ

**ಸಾಮಾಜಿಕ ಜಾಲತಣ ಬಳಸಿಕೊಂಡು ನಾಗರೀಕರಲ್ಲಿ ಜಾಗೃತಿ**

**ಪ್ರಾಯೋಜಕತ್ವ ನೀಡಿದವರು**

**ಡೆಂಘೀ ವಾರಿಯರ್ಸ್ ಸ್ಪರ್ಧೆಗಾಗಿ ಬೆಸ್ಟ್ ಕ್ಲಸ್ಟರ್, ಎನ್.ಸಿ.ಬಿ.ಎಸ್, ಫೋರಮ್ ಸೌತ್ ಮಾಲ್, ಮಂತ್ರಿ ಸ್ಕ್ವೇರ್, ನೆಕ್ಸ್ ಮಾಲ್ ಹಾಗೂ ಮಾಲ್ ಆಫ್ ಏಷ್ಯಾ ಪಾಲಿಕೆ ಜೊತೆ ಕೈ ಜೋಡಿಸಿ ಪ್ರಾಯೋಜಕತ್ವ ನೀಡಿದ್ದು, ವಿಜೇತರಿಗೆ ಗಿಫ್ಟ್ ಓಚರ್ ಗಳನ್ನು ನೀಡಿವೆ.**

ಪರಿಣಾಮಕಾರಿಯಾಗಿ ತಡೆಗಟ್ಟಬಹುದಾಗಿದೆ. ಸಾಮಾಜಿಕ ಜಾಲತಣ ಬಳಸಿಕೊಂಡು ನಾಗರೀಕರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಿದಾಗ ಹೆಚ್ಚು ಮಂದಿಗೆ ವಿಷಯ ತಲುಪಲಿದೆ ಎಂದು ಹೇಳಿದರು.

ಡೆಂಘೀ ನಿಯಂತ್ರಣಕ್ಕಾಗಿ ನಾಗರೀಕರು ಅಥವಾ ವಿದ್ಯಾರ್ಥಿಗಳು ತಮ್ಮ ಮನೆಗಳಲ್ಲಿ ಏನೆಲ್ಲಾ ಕ್ರಮ ಗಳನ್ನು ಕೈಗೊಂಡಿದ್ದಾರೆ,

ಯಾವ ರೀತಿ ಇತರರಿಗೆ ಅರಿವು ಮೂಡಿಸಲಾಗಿದೆ ಎಂಬುದರ ಕುರಿತು ಕಿರು ಚಿತ್ರ(ರೀಲ್ಸ್)ಗಳನ್ನು ಮಾಡಿ ಆ ವೀಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಲು ತಿಳಿಸಲಾಗಿತ್ತು. ಅದರಂತೆ ಈ ಸ್ಪರ್ಧೆಯಲ್ಲಿ 250ಕ್ಕೂ ಹೆಚ್ಚು ವಾರಿಯರ್ಸ್ ಭಾಗವಹಿಸಿ ಡೆಂಘೀ ಮೂಲ ಗುರುತಿಸುವಿಕೆ, ವರದಿ ಮಾಡುವಿಕೆ ಮತ್ತು ತಡೆಗಟ್ಟುವ ಕುರಿತು ವೀಡಿಯೊಗಳನ್ನು ಮಾಡಿ ಸಾಮಾಜಿಕ ಜಾಲತಣದಲ್ಲಿ ಅಪ್ಲೋಡ್ ಮಾಡಿದ್ದರು ಎಂದು ಹೇಳಿದರು.

ಡೆಂಘೀ ವಾರಿಯರ್ಸ್ ಸಿದ್ದಪಡಿಸಿದ ವೀಡಿಯೊಗಳು 58 ಲಕ್ಷಕ್ಕೂ ಹೆಚ್ಚು ವೀಕ್ಷಣೆಗಳು ಮತ್ತು 4 ಲಕ್ಷಕ್ಕೂ ಹೆಚ್ಚು ಲೈಕ್ಸ್ ಬಂದಿವೆ. ವಿವಿಧ ಸಂಸ್ಥೆಗಳಿಂದ ಪ್ರಾಯೋಜಕತ್ವ ಪಡೆದು ಇಂದು ಪ್ರಶಸ್ತಿ ಪುರಸ್ಕಾರ ಮಾಡಲಾಗಿದೆ. ನಾಗರೀಕರು ಹಾಗೂ ವಿದ್ಯಾರ್ಥಿಗಳು ಇದೇ ರೀತಿ ಮುಂದೆ ಬಂದು ಅರಿವು ಮೂಡಿಸುವ ಕೆಲಸ ಮಾಡಬೇಕೆಂದು ತಿಳಿಸಿದರು.

**ಪ್ರಶಸ್ತಿ ವಿಜೇತರ ವಿವರ:** ಡೆಂಘೀ ಕುರಿತು ಮಾಡಿರುವ ರೀಲ್ಸ್‌ಗಳಲ್ಲಿ ಹೆಚ್ಚು ಲೈಕ್ಸ್ ಹಾಗೂ ವೀಕ್ಷಣೆ ಮಾಡಿರುವ ವೀಡಿಯೋಗಳ ಅನುಸಾರ ಪ್ರಶಸ್ತಿ ವಿತರಣೆ ಮಾಡಲಾಗುತ್ತಿದೆ. ಆಯ್ಕೆಯಾಗಿರುವ 10 ಮಂದಿಯ ಪೈಕಿ ಮೊದಲ 5 ವಿಜೇತರಿಗೆ ಮೊದಲ ಪ್ರಶಸ್ತಿ ಹಾಗೂ ನಂತರದ 5 ಮಂದಿಗೆ ದ್ವಿತೀಯ ಬಹುಮಾನ ನೀಡಲಾಗಿದೆ. ಅದಲ್ಲದೆ ಹೆಚ್ಚು ಮಕ್ಕಳಿಗೆ ಪ್ರೇರಣೆ ನೀಡಿದ ಶಿಕ್ಷಕಿ ಹಾಗೂ ಉತ್ತಮ ಶಿಕ್ಷಣ ಸಂಸ್ಥೆಯನ್ನು ಗುರುತಿಸಿ ಪ್ರಶಸ್ತಿ ಪುರಸ್ಕರಿಸಲಾಯಿತು. ಈ ವೇಳೆ ಮುಖ್ಯ ಆರೋಗ್ಯಾಧಿಕಾರಿಯಾದ ಡಾ. ಸೈಯದ್ ಸಿರಾಜುದ್ದೀನ್ ಮದನಿ, ವಲಯ ಆರೋಗ್ಯಾಧಿಕಾರಿಗಳು, ಆರೋಗ್ಯ ವೈದ್ಯಾಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಲಿಂಕ್ ವರ್ಕರ್ಸ್‌ಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಪ್ರಶಸ್ತಿಗಳ ವಿವರ

- ಕ್ರ. ಸಂ - ವಿಜೇತರ ಸಂಖ್ಯೆ ಹಾಗೂ ವರ್ಗ - ಗಿಫ್ಟ್ ಓಚರ್ - ಪ್ರಾಯೋಜಕತ್ವ ನೀಡಿದವರು
- 05 ರೀಲ್ಸ್ - 25,000(ಒಬ್ಬರಿಗೆ) - ನೆಕ್ಸ್ ಮಾಲ್
- 05 ರೀಲ್ಸ್ - 10,000(ಒಬ್ಬರಿಗೆ) - ಬೆಸ್ಟ್ ಕ್ಲಸ್ಟರ್
- 01 ಹೆಚ್ಚು ಮಕ್ಕಳಿಗೆ ಪ್ರೇರಣೆ ನೀಡಿದ ಶಿಕ್ಷಕ - 35000 - ಎನ್.ಸಿ.ಬಿ.ಸಿ
- 01 ಉತ್ತಮ ಶಿಕ್ಷಣ ಸಂಸ್ಥೆ - 1 ಲಕ್ಷ ರೂ. - ಮಾಲ್ ಆಫ್ ಏಷ್ಯಾ ಹಾಗೂ ಮಂತ್ರಿ ಸ್ಕ್ವೇರ್

# ಪುರೋಹಿತರು



ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ

ಪುರೋಹಿತ ಎನ್ನುವ ಪದ ನಿರ್ದಿಷ್ಟ ಸಮುದಾಯವನ್ನು ಸೂಚಿಸುವಂಥದಲ್ಲ. ಇದೊಂದು ಉಪಾಧಿ. ಇದೊಂದು ಗುರುತು. ಪ್ರಾಚೀನ ಗ್ರಂಥಗಳಲ್ಲಿ ವೇದಮಂತ್ರಗಳಲ್ಲಿ ಇದಕ್ಕೆ ಏನು ಅರ್ಥಕೊಟ್ಟಿದ್ದಾರೆ ಎಂಬುದನ್ನು ತಿಳಿದುಕೊಳ್ಳೋಣ।

**ಪುರಃ ಧೀಯತೇ :** ಪುರಃ ಎಂಬ ಪದಕ್ಕೆ ಮು ಖ್ಯಾರ್ಥ ದೇಹ. ಧೀಯತೇ ಎಂದರೇ ದೇಹಕ್ಕೆ ಚೈತನ್ಯ ಪ್ರಾಯವಾಗಿ ಯಾವುದು ಇರುವುದೋ ಅದು.

ಆದ್ದರಿಂದ ಚೈತನ್ಯಯುಕ್ತವಾದ ದೇಹವನ್ನು ಸಾಧನಾರೂಪದಿಂದ ಉಪಯೋಗಿಸಿಕೊಂಡು ಅಭ್ಯುದಯ ನಿಶ್ರೇಯಸ ಮಾರ್ಗವನ್ನು ತೋರಿಸಿಕೊಡುವನೋ ಅವನೇ ಪು ರೋಹಿತ.

ದೇವತಾಕಾರ್ಯಗಳಲ್ಲಿ ಮಂಚೂಣಿಯಲ್ಲಿ ನಿಂತು ವಿಧಿಪೂರ್ವಕವಾಗಿ ಶಾಸ್ತ್ರಕರ್ಮಗಳನ್ನು ನಡೆಸು ವವನೇ ಪುರೋಹಿತ.ಅರ್ಥಾತ್ ಯಜಮಾನನು ಸ್ವರ್ಗಲೋಕ ಕಾಮ್ಯನಾದರೇ ಜ್ಯೋತಿಷ್ಟೋಮ ಯಜ್ಞವನ್ನೂ , ಗೋವುಗಳೇ ಮುಂತಾದ ಪಶುಗಳನ್ನು ಪಡೆಯುವ ಇಚ್ಛೆಯಿದ್ದರೇ ಚಿತ್ತಿ ಎಂಬ ಯಜ್ಞವನ್ನೂ ಮುಂತಾದ ಇಹಪರಲೋಕ ಕಾಮ್ಯಗಳನ್ನು ಇಟ್ಟುಕೊಂಡವನು ಆಯಾ ದೇವತೆಗಳ ಆರಾಧನೆಯನ್ನು ಯಜ್ಞಯಾಗಾದಿಗಳ ಮೂಲಕವೇ ಪಡೆದುಕೊಳ್ಳಬೇಕು.

ಇಂಥ ಕಾಮ್ಯಕರ್ಮಗಳಲ್ಲಿ ಸತ್ಯವಾಚಿಯಾದ, ಅಂತಃಕರಣಶುದ್ಧಿಯುಳ್ಳ , ವೇದಗಳನ್ನೂ ಧರ್ಮಸೂತ್ರ ಗೃಹ್ಯಸೂತ್ರಗಳನ್ನೂ ಆಮೂಲಾಗ್ರ ಅಧ್ಯಯನದಿಂದ ಮನನಮಾಡಿಕೊಂಡ, ಸದಾಚಾರವುಳ್ಳ ,ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೇ ಪರೋಪಕಾರ ಹಾಗೂ ಋಜುಮಾರ್ಗದಲ್ಲಿಯೇ ನಿರತನಾಗಿರುವ, ವೇದಗಳನ್ನೂ ವೇದಾಂಗಗಳ ಮೂಲತತ್ತ್ವವನ್ನೂ ತಪಸ್ಸಿನಿಂದ ತಿಳಿದುಕೊಂಡಂಥ ಯಾವಾತನು ತಾನೇ ಮಂಚೂಣಿಯಲ್ಲಿ ನಿಂತು ವಿಧಿಪೂರ್ವಕವಾಗಿ ಶಾಸ್ತ್ರಕರ್ಮಗಳನ್ನು ಯಜಮಾನನ ಅಭ್ಯುದಯದಕ್ಕಾಗಿ ನಡೆಸಿಕೊಡುವನೋ ಅವನೇ ಪುರೋಹಿತ ಎನಿಸಿಕೊಳ್ಳುತ್ತಾನೆ ಎಂಬುದಾಗಿ ಚಾಣಕ್ಯನು ತನ್ನ ಕವಿಕಪಲತಾ ಎಂಬ ಗ್ರಂಥದಲ್ಲಿ ಹೇಳಿದ್ದಾನೆ. ಈ ರೀತಿಯಾಗಿ ವೇದಗಳು ಸಾರುತ್ತಿರುವ ಧರ್ಮವನ್ನೇ ಸದಾಕಾಲಕ್ಕೂ ಚಿಂತಿಸುತ್ತಿರುವ, ಸಮಸ್ತ ಪ್ರಜೆಗಳ ಅವರನ್ನಾಳುವ ರಾಜರುಗಳ ಒಳಿತನ್ನು ಅನವರತ ಯೋಚಿಸುವವನೇ ರಾಜಪುರೋಹಿತ.

ಸಕಲ ಗುಣವಂತನಾದ , ಮಂತ್ರವಿದ್ಯೆಗಳನ್ನು ತಿಳಿದುಕೊಂಡು ತಾನೂ ಧರ್ಮಾತ್ಮನಾಗಿ, ರಾಜರನ್ನೂ ಪ್ರಜೆಗಳನ್ನೂ ಧರ್ಮಮಾರ್ಗದಲ್ಲಿ ಕರೆದೊಯ್ಯುವ ಬ್ರಾಹ್ಮಣನಿಂದಲೇ ಪುನಃ ಪುನಃ ಸತ್ಕಾರ್ಯಗಳನ್ನು ಯಜಮಾನನು ಮಾಡಿಸಿಕೊಳ್ಳಬೇಕು. ಅರ್ಥಾತ್ ಈ ಸಂದರ್ಭದಲ್ಲಿ ಪುರೋಧಾ ಎಂಬ ಪದಕ್ಕೆ ''ಕುಲಪುರೋಹಿತ



ಉದಯವಾಹಿನಿ ಚಿತ್ರ

**ಯಾವಾತನು ವೈದ್ಯಶಾಸ್ತ್ರದಲ್ಲಿ ನುರಿತನಾದವನೋ, ತನ್ನ ಚಿಕಿತ್ಸೆಯಿಂದ ಪ್ರಜೆಗಳ, ರಾಜರುಗಳ ''ಪುರ'' ಅರ್ಥಾತ್ ದೇಹದ ಆರೋಗ್ಯವನ್ನು ಕಾಪಾಡುತ್ತಾನೋ ಅಂಥ ವೈದ್ಯನೂ ಪುರೋಹಿತನೇ. ಹೀಗೆಂದು ಸುಶೃತಮಹರ್ಷಿಯು ತನ್ನ ಆಯುರ್ವೇದ ಸೂತ್ರಗಳಲ್ಲಿ ಹೇಳಿದ್ದಾನೆ. ಹೀಗೆ ಪುರೋಹಿತ ಪದವು ವಿಸ್ತೃತ ವ್ಯಾಖ್ಯಾನ ಹೊಂದಿದ್ದು, ಪ್ರತಿಯೊಂದು ಧರ್ಮದಲ್ಲೂ ಈ ಕರ್ತವ್ಯಗಳನ್ನು ನಿರ್ವಹಿಸುವವರನ್ನು ಆಯಾ ದೇಶಭಾಷೆಗಳಲ್ಲಿ ಪುರೋಹಿತರೆಂದೇ ಕರೆಯಲಾಗಿದೆ.**

**ನಿತ್ಯನೈಮಿತ್ತಿಕ ಹಾಗೂ ಕಾಮ್ಯಕರ್ಮಗಳ ದೃಷ್ಟ ಮತ್ತು ಅದೃಷ್ಟ ಫಲಗಳನ್ನು ಆಯಾಕರ್ಮಗಳಿಗನುಗುಣವಾಗಿ ಯಾವಾತನು ತಿಳಿಸಿಕೊಡುತ್ತಾನೋ ಅವನೇ ಪುರೋಹಿತ ಎಂಬುದಾಗಿ ಮೀಮಾಂಸಾ ದಿಗ್ಗಜರಾದ ಕುಮಾರಿಲ ಭಟ್ಟರು ಹೇಳಿದ್ದಾರೆ.**

ಅಥವಾ ಆಸ್ಥಾನ ರಾಜಪುರೋಹಿತ ಎಂಬುದಾಗಿ ವಾಚಸ್ಪತ್ಯಾಚಾರ್ಯರು ನಿರ್ವಚನ ಮಾಡಿದ್ದಾರೆ. ಇದಲ್ಲದೇ ಇಂಥ ಗುಣವಂತನಾದ ಬ್ರಾಹ್ಮಣನ ಮಾರ್ಗದರ್ಶನದಲ್ಲಿಯೇ ರಾಜರುಗಳ ಜಯಾಪಜಯ, ಇತರ ಆಗುಹೋಗುಗಳನ್ನು ಇತಿಹಾಸದಲ್ಲಿ ಕಂಡಿದ್ದೇವೆ. ಹೀಗೆ ಬೋಧಾಯನಾಚಾರ್ಯರು ಹೇಳಿದ್ದಾರೆ.

ವೇದತ್ರಯಗಳನ್ನೂ, ರಾಜ್ಯಭಾರ, ಶಾಸನಾದಿ ದಂಡನೀತಿಗಳನ್ನೂ ಪರಿಣಿತನಾದವನೇ ಪುರೋಹಿತನೆಂಬುದಾಗಿ ಅಗ್ನಿಪುರಾಣದಲ್ಲಿ ಹೇಳಿದೆ.

ಆತ್ಯಂತಿಕವಾದ ಸಹಿಷ್ಣುತತೆಯೇ ಪುರೋಹಿತನ ಆದ್ಯ ಧರ್ಮ ಎಂಬುದಾಗಿ ಪುರೋಹಿತ ಧರ್ಮದಲ್ಲಿ ಹೇಳಿದೆ. ಪ್ರಜೆಗಳನ್ನು ಪ್ರೀತಿಯಿಂದ ಪರಿಪಾಲಿಸಬೇಕಾದ ರಾಜ ತನ್ನ ಕರ್ತವ್ಯವನ್ನು ಉಪೇಕ್ಷಿಸಿ ದಬ್ಬಾಳಿಕೆ ನಡೆಸಿದರೆ ಅದನ್ನು 'ಸರ್ವಾಧಿಕಾರ' ಎಂದು ಕರೆಯಲಾಗುತ್ತದೆ. ಹಾಗೆಯೇ, ಪುರೋಹಿತ ವರ್ಗ ತನ್ನ ಕರ್ತವ್ಯವಾದ ಸಕಲ ಜನಹಿತದ ವಿಶಾಲ ಮನೋಭಾವ ಬಿಟ್ಟು ಪಕ್ಷಪಾತ ಮತ್ತು ಹೇರಿಕೆಯ ಧೋರಣೆ ತೋರಿದರೆ ಅದನ್ನು 'ಪುರೋಹಿತಶಾಹಿ' ಎಂದು ಕರೆಯುವ ರೂಢಿ ಇದೆ.

## ಬೀದಿ ದೀಪಗಳ ದುರಸ್ತಿ ಕಾರ್ಯ ಸರಿಯಾಗಿ ನಿರ್ವಹಿಸಲು

# ಕಟ್ಟುನಿಟ್ಟಿನ ಸೂಚನೆ: ತುಷಾರ್ ಗಿರಿನಾಥ್

• ಉದಯವಾಹಿನಿ ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಬೀದಿ ದೀಪಗಳ ದುರಸ್ತಿ ಕಾರ್ಯವನ್ನು ಸರಿಯಾಗಿ ನಿರ್ವಹಿಸಲು ಮುಖ್ಯ ಆಯುಕ್ತರಾದ ತುಷಾರ್ ಗಿರಿ ನಾಥ್ ರವರು ಗುತ್ತಿಗೆದಾರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದಲ್ಲಿ ಬೀದಿ ದೀಪಗಳ ನಿರ್ವಹಣೆಗೆ ಸಂಬಂಧಿಸಿದಂತೆ ಮಲ್ಲೇಶ್ವರಂನ ಐಪಿಪಿ ತರಬೇತಿ ಕೇಂದ್ರದಲ್ಲಿ ಎಲೆಕ್ಟ್ರಿಕ್ ವಿಭಾಗದ ಅಭಿಯಂತರರು ಹಾಗೂ ಗುತ್ತಿಗೆದಾರರ ಜೊತೆ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಹಲವು ಕಡೆ ಬೀದಿ ದೀಪಗಳನ್ನು ಸರಿಯಾಗಿ ನಿರ್ವಹಣೆ ಮಾಡದಿರುವುದನ್ನು ಗಮನಿಸಲಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ವಲಯಗಳಲ್ಲಿ ಬೀದಿ ದೀಪಗಳ ನಿರ್ವಹಣೆ ಸರಿಯಾಗಿರುವಂತೆ ನೋಡಿಕೊಳ್ಳಲು ಸೂಚನೆ ನೀಡಲಾಯಿತು.

ಆಯಾ ವಲಯ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ ಬೀದಿ ದೀಪಗಳು ಉರಿಯುತ್ತಿಲ್ಲ, ಎಲ್ಲೆಲ್ಲಿ ವಿದ್ಯುತ್ ಕಂಬಗಳು ಹಾಳಾಗಿವೆ ಎಂಬುದನ್ನು ಪರಿಶೀಲಿಸಿ ಜಿಯೋ ಲೊಕೇಶನ್ ಮೂಲಕ ಪಟ್ಟಿ ಸಿದ್ದಪಡಿಸಬೇಕು. ಅನಂತರ ತ್ವರಿತಗತಿಯಲ್ಲಿ ದುರಸ್ತಿ ಕಾರ್ಯವನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಹೊರ ವರ್ತುಲ ರಸ್ತೆ, ಪ್ರಮುಖ ರಸ್ತೆಗಳು ಹಾಗೂ ಮೇಲುಸೇತುವೆಗಳಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ಮಾಡಬೇಕು. ಅಧಿಕಾರಿಗಳು ಖುದ್ದು ಸ್ಥಳ ಪರಿಶೀಲನೆ ನಡೆಸಿ ಇರುವ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಲಾಯಿತು.

ಬೀದಿ ದೀಪಗಳ ನಿರ್ವಹಣೆಗೆ ಸಂಬಂಧಿಸಿದಂತೆ ಏನಾದರು ಸಮಸ್ಯೆ ಇದ್ದಲ್ಲಿ ಅದನ್ನು ಬಗೆಹರಿಸಲಾಗುವುದು. ಬೀದಿ ದೀಪಗಳ ಅಳವಡಿಕೆ ಸಂಬಂಧ ಶೀಘ್ರ ಟೆಂಡರ್ ಕರೆಯಲಾಗುವುದೆಂದು ತಿಳಿಸಿದರು.



ಉದಯವಾಹಿನಿ ಚಿತ್ರ

### ಗುತ್ತಿಗೆದಾರರಿಂದ ಭರವಸೆ

**ನಗರದಲ್ಲಿ ಬೀದಿ ಬದಿ ದೀಪಗಳನ್ನು ಶೀಘ್ರ ಅಳವಡಿಸಿ ಸರಿಯಾಗಿ ನಿರ್ವಹಣೆ ಮಾಡಲಾಗುವುದೆಂದು ಗುತ್ತಿಗೆದಾರರು ಮುಖ್ಯ ಆಯುಕ್ತರಿಗೆ ಭರವಸೆ ನೀಡಿದರು. ಈ ವೇಳೆ ವಿಶೇಷ ಆಯುಕ್ತರಾದ ಡಾ. ಕೆ. ಹರೀಶ್ ಕುಮಾರ್, ಪ್ರಧಾನ ಅಭಿಯಂತರರಾದ ಪ್ರಹ್ಲಾದ್, ಅಧೀಕ್ಷಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಗುತ್ತಿಗೆದಾರರು ಉಪಸ್ಥಿತರಿದ್ದರು.**

# ಕಲ್ಯಾಣ ಕರ್ನಾಟಕದ ಜನತೆಯ ಕಣ್ಣಿಗೆ ಮಣ್ಣೆರಚಿ ದ್ರೋಹ

• ಉದಯವಾಹಿನಿ ಬೆಂಗಳೂರು



ಕಲ್ಯಾಣ ಕರ್ನಾಟಕದಲ್ಲಿ ಸಂಪುಟ ಸಭೆ ಮಾಡಿ ಮಾಡಿ ಬಿಟ್ಟಿ ಪ್ರಚಾರ ಗಿಟ್ಟಿಸಿಕೊಳ್ಳಲು ಹೊರಟಿರುವ ರಾಜ್ಯದ ಕಾಂಗ್ರೆಸ್ ಸರ್ಕಾರ ಕಲ್ಯಾಣ ಕರ್ನಾಟಕದ ಜನತೆಯ ಕಣ್ಣಿಗೆ ಮಣ್ಣೆರಚಿ ದ್ರೋಹ ಮಾಡುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ವಾಗ್ದಾಳಿ ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಅವರು, ಸಿಎಂ ಸಿದ್ದರಾಮಯ್ಯನವರೇ, ಕಲ್ಯಾಣ ಕರ್ನಾಟಕದಲ್ಲಿ ಸಂಪುಟ ಸಭೆ ಮಾಡಿದ ಮಾತ್ರಕ್ಕೆ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಆಗಿಬಿಡುತ್ತಾ ಎಂದು ಕೇಳಿದ್ದಾರೆ. ಅಲ್ಲದೆ, ಸಿಎಂ ಮುಂದೆ ಪ್ರಶ್ನೆಗಳ ಸರಣಿಯನ್ನಿರಿಸಿ, ಕಿಂಚಿತ್ತಾದರೂ ಆತ್ಮಸಾಕ್ಷಿ ಇದ್ದರೆ ಸಂಪುಟ ಸಭೆ ಮಾಡುವ ಮುನ್ನ ಕಲ್ಯಾಣ ಕರ್ನಾಟಕದ ಜನತೆಯ ಈ ಪ್ರಶ್ನೆಗಳಿಗೆ ಉತ್ತರಿಸಿ ಎಂದು ಆರ್.ಅಶೋಕ್ ಸವಾಲು ಹಾಕಿದ್ದಾರೆ

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಪ್ರತಿ ವರ್ಷ 5,000 ಕೋಟಿ ರೂಪಾಯಿ ನೀಡುವುದಾಗಿ ತಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದರಲ್ಲ, ಕಳೆದ ಎರಡು ಬಜೆಟ್‌ನಲ್ಲಿ ಕಲ್ಯಾಣ ಕರ್ನಾಟಕಕ್ಕೆ ಒಟ್ಟು ಎಷ್ಟು ಹಣ ಮೀಸಲಿಟ್ಟಿದ್ದೀರಿ ಅದರಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ಖರ್ಚಾಗಿದ್ದು ಎಷ್ಟುಬಳ್ಳಾರಿಯಲ್ಲಿ 5,000 ಕೋಟಿ ರೂಪಾಯಿ ಮೊತ್ತದ ಅಪೇರಲ್ ಪಾರ್ಕ್ ಸ್ಥಾಪಿಸುವ ಭರವಸೆ ಏನಾಯ್ತು @RahulGandhi ಅವರು ತಮ್ಮ ಪ್ರಚಾರ ಭಾಷಣದಲ್ಲಿ ಬಳ್ಳಾರಿಯನ್ನ ಜೀನ್ಸ್ ರಾಜಧಾನಿ ಮಾಡುವ ಭರವಸೆ ಏನಾಯ್ತು ಕಲ್ಯಾಣ ಕರ್ನಾಟಕದಲ್ಲಿ 41 ವಿಧಾನಸಭಾ ಕ್ಷೇತ್ರಗಳಲ್ಲಿ ಕನಿಷ್ಠ 100 ಪಿಯುಸಿ ಕಾಲೇಜು, ಒಂದು ಮಹಿಳಾ ಪದವಿ ಕಾಲೇಜು ಸ್ಥಾಪಿಸುವ ಭರವಸೆ ನೀಡಿದ್ದರಲ್ಲಾ ಅದರಲ್ಲಿ ಒಂದಾದರೂ ಸ್ಥಾಪನೆಯಾಗಿದೆಯಾ ಕಲ್ಯಾಣ ಕರ್ನಾಟಕದ ಪ್ರತಿ ಹೋಬಳಿಯಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಇಂಗ್ಲಿಷ್ ಮಾಧ್ಯಮ ಶಾಲೆ ಸ್ಥಾಪಿಸುವ ಭರವಸೆ ನೀಡಿದ್ದರಲ್ಲ, ಕನಿಷ್ಠ ಪಕ್ಷ ಒಂದಾದರೂ ಸ್ಥಾಪನೆ ಆಗಿದೆಯಾ ಎರಡು ವರ್ಷದೊಳಗೆ ಕಲ್ಯಾಣ ಕರ್ನಾಟಕದ 2,500 ಹೊಸ ಶಾಲಾ ಕೊಠಡಿ ನಿರ್ಮಾಣ,

ಖಾಲಿ ಇರುವ ಎಲ್ಲಾ ಶಿಕ್ಷಕ ಹುದ್ದೆಗಳ ನೇಮಕಾತಿ ಮಾಡುತ್ತೇವೆ ಎನ್ನುವ ಭರವಸೆ ಈಡೇರುವುದು ಯಾವಾಗ ಕಳೆದ 15 ತಿಂಗಳಲ್ಲಿ ಎಷ್ಟು ಶಿಕ್ಷಕರ ನೇಮಕಾತಿ ಆಗಿದೆ ಎಷ್ಟು ಶಾಲಾ ಕೊಠಡಿಗಳ ನಿರ್ಮಾಣ ಆಗಿದೆ

# ದೇಶದ್ರೋಹ ಮಾಡಿದರೂ ಅಡ್ಡಿ ಇಲ್ಲ

## ವೋಟ್ ಬ್ಯಾಂಕ್ ಬೇಕು ಎಂಬ ಮಾನಸಿಕತೆ ಇರುವ ಸಿದ್ದರಾಮಯ್ಯ: ಕು. ಶೋಭಾ ಕರಂದ್ಲಾಜೆ ಪ್ರಶ್ನೆ

• ಉದಯವಾಹಿನಿ ಬೆಂಗಳೂರು

ದೇಶದ್ರೋಹ ಮಾಡಿದರೂ ಅಡ್ಡಿ ಇಲ್ಲ, ನಮಗೆ ವೋಟ್ ಬ್ಯಾಂಕ್ ಬೇಕು ಎಂಬ ಮಾನಸಿಕತೆ ಇರುವ ಸಿದ್ದರಾಮಯ್ಯನವರಿಂದ ನಾವು ದೇಶಪ್ರೇಮ, ಕಾನೂನಿನ ಅನುಷ್ಠಾನ ನಿರೀಕ್ಷೆ ಮಾಡುವುದು ಹೇಗೆ ಸಾಧ್ಯ ಎಂದು ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ಅವರು ಪ್ರಶ್ನಿಸಿದರು.

ಈ ಕುರಿತು ಬಿಜೆಪಿ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಅಪರಾಧಿಗಳ ಮೇಲುಗೈ ಆಗುತ್ತಿದೆ. ರಾಜ್ಯದಲ್ಲಿ ದೇಶದ್ರೋಹಿಗಳು ಮೇಲುಗೈ ಸಾಧಿಸುತ್ತಿದ್ದಾರೆ.

ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದವರಿಗೆ ಶಿಕ್ಷೆ ವಿಧಿಸಿಲ್ಲ. ದೇಶದ್ರೋಹಕ್ಕೆ ಕುಮ್ಮಕ್ಕು ಕೊಡುವ ಸರಕಾರ ಅಧಿಕಾರದಲ್ಲಿದೆ ಎಂದು ಟೀಕಿಸಿದರು.

ಬೆಂಗಳೂರು, ಮೈಸೂರು, ಕೊಡಗು, ಹಾಸನ, ಕೋಲಾರ, ನಾಗಮಂಗಲ ಸೇರಿ ಬೇರೆ ಬೇರೆ ಜಾಗಗಳಲ್ಲಿ ಇವತ್ತು ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೇಳಿಬರುತ್ತಿದೆ. ಪ್ಯಾಲೆಸ್ಟೀನ್ ಧ್ವಜ ಹಾರುತ್ತಿದೆ. ಆದರೆ, ರಾಜ್ಯ ಸರಕಾರ ಓಲೈಕೆ ರಾಜಕೀಯದಲ್ಲಿ ನಿರತವಾಗಿದೆ.

ನರೇಂದ್ರ ಮೋದಿಯವರು ಸ್ವಂತಕ್ಕಾಗಿ ಸ್ವಲ್ಪ, ದೇಶಕ್ಕಾಗಿ ಸರ್ವಸ್ವ ಎಂಬ ಮಾದರಿ ಜೀವನ ನಡೆಸಿದವರು. ನಮ್ಮೆಲ್ಲ ಕಾರ್ಯಕರ್ತರು ಮತ್ತು ಯುವಪೀಳಿಗೆಗೆ ಇದೇ ಸಂದೇಶವನ್ನು ಅವರು ನೀಡಿದ್ದಾರೆ. ಮೋದಿಜೀ ಅವರ ಜನ್ಮದಿನವನ್ನು ಮತ್ತು ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದರು. ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ವಿವಿಧ ಸೇವಾ ಚಟುವಟಿಕೆಯಲ್ಲಿ ನಮ್ಮ ಕಾರ್ಯಕರ್ತರು ತೊಡಗಿಸಿಕೊಳ್ಳುತ್ತಿದ್ದಾರೆ. ಆರೋಗ್ಯ ಶಿಬಿರ, ರಕ್ತದಾನ ಶಿಬಿರ, ಸ್ವಚ್ಛತಾ ಅಭಿಯಾನ, ಚಿತ್ರಕಲಾ ಪ್ರದರ್ಶಿನಿಗಳನ್ನು ಏರ್ಪಡಿಸಲಾಗುತ್ತಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟಗಾರರು ಮತ್ತು ದೇಶಕ್ಕಾಗಿ ದುಡಿವ ಮಹನೀಯರನ್ನು ಸ್ಮರಿಸುವ ಕೆಲಸ ನಡೆಸಲಾಗುತ್ತಿದೆ. ಮುಖ್ಯಮಂತ್ರಿ ಮತ್ತು ದೇಶದ ಪ್ರಧಾನಿಯಾಗಿ ಸುಮಾರು 25 ವರ್ಷಗಳಿಂದ ಮೋದಿಯವರು ಕೆಲಸ ಮಾಡಿದ್ದಾರೆ. ಎಲ್ಲವನ್ನೂ ಅವರು ಬಡವರ ಸಲುವಾಗಿ ಮಾಡಿದ್ದಾರೆ ಎಂದು ವಿಶ್ಲೇಷಿಸಿದರು. ವಿಶ್ವಕರ್ಮ ಯೋಜನೆಯಡಿ ಇದೇ 20ರಂದು ದೇಶದ 20 ಲಕ್ಷ ವಿಶ್ವಕರ್ಮರಿಗೆ ಹಣ ಕಾಸಿನ ಸೌಲಭ್ಯ ಒದಗಿಸಲಾಗುತ್ತದೆ.

ಮಹಿಳೆಯರ ಘನತೆ ಹೆಚ್ಚಿಸಲು ಶೌಚಾಲಯ ನಿರ್ಮಾಣ, ಗ್ಯಾಸ್ ಸಿಲಿಂಡರ್ಗಳನ್ನು ನೀಡಲಾಗಿದೆ.

ಪರಿಶಿಷ್ಟ ಸಮುದಾಯ, ಹಿಂದುಳಿದ ವರ್ಗ, ಮಹಿಳೆಯರು, ಯುವಕರಿಗಾಗಿ ಅನೇಕ ಯೋಜನೆಗಳನ್ನು ಮೋದಿಜೀ ಅವರು ಜಾರಿಗೊಳಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು. ಇವತ್ತು ಮೋದಿಜೀ ಅವರ ಜನ್ಮದಿನ ಮಾತ್ರವಲ್ಲ ವಿಶ್ವಕರ್ಮ ಜಯಂತಿಯೂ ಆಗಿದೆ. ಕರ್ನಾಟಕದ ಪಾಲಿಗೆ ಹೈದರಾಬಾದ್ ನಿಜಾಮನ ಮತಾಂಧತೆಯಿಂದ ಕಲ್ಯಾಣ ಕರ್ನಾಟಕವನ್ನು ಮುಕ್ತಗೊಳಿಸಿದ ಸುದಿನವೂ ಇದಾಗಿದೆ. ದೇಶವೇ ಮೊದಲು ಎಂಬ ತತ್ವದೊಂದಿಗೆ ಮೋದಿಜೀ ನಿಂತರವಾಗಿ ಕೆಲಸ ಮಾಡಿದವರು ಎಂದು ವಿವರಿಸಿದರು.



ಉದಯವಾಹಿನಿ ಚಿತ್ರ

**ಮೋದಿಯವರ ಬದುಕೇ ಒಂದು ಸಂದೇಶ. ಹೇಗೆ ಗಾಂಧಿಯವರು ನನ್ನ ಜೀವನವೇ ನನ್ನ ಸಂದೇಶ ಎಂಬ ಮಾತನ್ನು ಹೇಳಿದ್ದರೋ, ನರೇಂದ್ರ ಮೋದಿಯವರ ಅನುದಿನದ ಬದುಕು ದೇಶಕ್ಕಾಗಿ ಮುಡಿಪಿಟ್ಟಿದ್ದಾರೆ ಎಂದು ವಿಶ್ಲೇಷಿಸಿದರು. ಬಡವರಿಗೆ ಶಕ್ತಿ ತುಂಬಲು ತಮ್ಮ ರಾಜಕೀಯ ಜೀವನವನ್ನು ಅವರು ಮುಡಿಪಾಗಿ ಇಟ್ಟಿದ್ದಾರೆ ಎಂದು ಹೇಳಿದರು.**

**ರೈತರು, ಮಹಿಳೆಯರು, ಯುವಕರು, ಬಡವರು ಎಂಬ ನಾಲ್ಕು ಜಾತಿಗಳು ಮಾತ್ರ ಈ ದೇಶದಲ್ಲಿದೆ ಎಂಬ ಸಂದೇಶ ಪ್ರಧಾನಿ ಅವರದು. ಅವರೊಬ್ಬ ವಿಶ್ವನಾಯಕ. ದೇಶದ ಘನತೆಯನ್ನು ಅವರು ವಿಶ್ವದಾದ್ಯಂತ ಎತ್ತಿ ಹಿಡಿದಿದ್ದಾರೆ; ದೇಶದ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು. ಈ ವೇಳೆ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರು, ಮೋದಿಯವರು ಪ್ರಧಾನಮಂತ್ರಿಗಳಾದ ಬಳಿಕ ಆಗಿರುವ ಬದಲಾವಣೆಗಳು ನಮ್ಮ ಅನುಭವಕ್ಕೆ ಬರುತ್ತಿವೆ. ಬಡವರನ್ನು ವ್ಯವಸ್ಥೆಯ ಜೊತೆ ಜೋಡಿಸಿದ ಕೀರ್ತಿ ಪ್ರಧಾನಮಂತ್ರಿಗಳದ್ದು ಎಂದು ತಿಳಿಸಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ:** ನಿಮ್ಮ ಶಕ್ತಿಯನ್ನು ಸ್ವಯಂ ಸುಧಾರಣೆ ಯೋಜನೆಗಳಲ್ಲಿ ಹಾಗೂ ನಿಮ್ಮನ್ನು ಉತ್ತಮವಾಗಿಸುವ ಯೋಜನೆಗಳಲ್ಲಿ ಹಾಕಿ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

**ವೃಷಭ:** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನಿಮ್ಮ ಹತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ. ನಿಮ್ಮ ಪ್ರೇಮಿಯನ್ನು ಭೇಟಿ ಮಾಡುತ್ತಿದ್ದ ಹಾಗೆ ನಿಮ್ಮ ಮನಸ್ಸನ್ನು ಪ್ರಣಯ ಆವರಿಸಿಕೊಳ್ಳುತ್ತದೆ.

**ಮಿಥುನ:** ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳಿವೆ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭ ಗಳನ್ನು ನಿರೀಕ್ಷಿಸಬಹುದು. ಸಂಬಂಧಿಗಳು ಬೆಂಬಲ ನೀಡುತ್ತಾರೆ ಮತ್ತು ನಿಮ್ಮ ಮನಸ್ಸಿಗೆ ಆ ಹೊರೆಯಾದ ಆ ತೊಂದರೆಯನ್ನು ಕಡಿಮೆ ಮಾಡುತ್ತಾರೆ.

**ಕರ್ಕಾಟಕ:** ಸರ್ವತೋಮುಖ ಅಭಿವೃದ್ಧಿ ಸಾಧ್ಯವಿದ್ದಾಗ ಮಾತ್ರ ಮಾನಸಿಕ ಮತ್ತು ನೈತಿಕ ಶಿಕ್ಷಣದ ಜೊತೆ ದೈಹಿಕ ಶಿಕ್ಷಣವನ್ನೂ ತೆಗೆದುಕೊಳ್ಳಿ. ಆರೋಗ್ಯಕರ ಮನಸ್ಸು ಯಾವಾಗಲೂ ಆರೋಗ್ಯಕರ ದೇಹದಲ್ಲಿ ಪರ್ಯವಸಾನವಾಗುತ್ತದೆಂದು ನೆನಪಿಡಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ.

**ಸಿಂಹ:** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

**ಕನ್ಯಾ:** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ.

**ತುಲಾ:** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ಊಹೆಗಳು ಲಾಭ ತರುತ್ತವೆ. ಸಂಜೆ ಸ್ನೇಹಿತರೊಡನೆ ಹೋಗಿ ? ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ. ಶ್ರಮ, ಸೂಕ್ತ ಪ್ರಯತ್ನಗಳು ಒಳ್ಳೆಯ ಫಲಿತಾಂಶಗಳು, ಪ್ರತಿಫಲಗಳನ್ನು ತರುತ್ತವೆ.

**ವೃಶ್ಚಿಕ:** ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು, ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ, ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು

**ಧನಸ್ಸು:** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ.

**ಮಕರ:** ಖಂಡಿತವಾಗಿಯೂ ಆರೋಗ್ಯದ ಆರೈಕೆಯ ಅಗತ್ಯವಿದೆ. ಇಂದು ಹೂಡಿಕೆಗಳನ್ನು ಮಾಡಬಾರದು. ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತೆರೆದಿಡುತ್ತದೆ. ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

**ಕುಂಭ:** ಪ್ರೇಮ ಜೀವನ ಭರವಸೆ ತರುತ್ತದೆ ಈ ರಾಶಿಚಕ್ರದ ಉದ್ಯಮಿಗಳು ಇಂದು ವ್ಯಾಪಾರಕ್ಕೆ ಸಂಬಂಧಿಸಿದ ಅಪೇಕ್ಷಿಸದ ಪ್ರಯಾಣಕ್ಕೆ . ಈ ಪ್ರಯಾಣವು ನಿಮಗೆ ಮಾನಸಿಕ ಒತ್ತಡವನ್ನು ನೀಡಬಹುದು. ಜನರು ಇಂದು ಕಚೇರಿಯಲ್ಲಿ ಅಲ್ಲಿ ಮಾತುಗಳಿಂದ ತಪ್ಪಿಸಬೇಕು.

**ಮೀನ:** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು.

## ಟ್ರ್ಯಾಕ್ಟರ್, ಬೈಕ್ ಡಿಕ್ಕಿ ವಿದ್ಯಾರ್ಥಿ ಸಾವು

• ಉದಯವಾಹಿನಿ, ಆಳಂದ

ಪಟ್ಟಣದ ಪ್ರವಾಸಿ ಮಂದಿರದಿಂದ ಹಳೆಯ ಚೆಕ್‌ಪೋಸ್ಟ್ ಮಾರ್ಗ ಮಧ್ಯದಲ್ಲಿ ಭಾನುವಾರ ಸಂಜೆಯ ಹೊತ್ತಿನಲ್ಲಿ ಟ್ರ್ಯಾಕ್ಟರ್ ಮತ್ತು ಬೈಕ್ ನಡುವೆ ಡಿಕ್ಕಿ ಸಂಭವಿಸಿದ ಪರಿಣಾಮ ಬೈಕ್ ಸವಾರರಾಗಿದ್ದ ವಿದ್ಯಾರ್ಥಿಗಳಿಬ್ಬರು ಗಂಭೀರವಾಗಿ ಗಾಯಗೊಂಡ ಹಿನ್ನೆಲೆಯಲ್ಲಿ ಜಿಲ್ಲಾಸ್ಪತ್ರೆಗೆ ದಾಖಲಿಸಲಿಸಿ ಚಿಕಿತ್ಸೆ ನೀಡಲಾಗಿತ್ತಾದರು, ಚಿಕಿತ್ಸೆ ಫಲಕಾರಿಯಾಗದೆ ಓರ್ವ ಸವಾರ ಸೋಮವಾರ ಬೆಳಗಿನ ಜಾವ ಮೃತಪಟ್ಟ ಘಟನೆ ವರದಿಯಾಗಿದೆ. ಪಟ್ಟಣದ ನಿವಾಸಿಯಾಗಿದ್ದ ಸ್ವಯಂ ಸತೀಶ ಢಗೆ (17) ವಿದ್ಯಾರ್ಥಿಯೇ ಮೃತಪಟ್ಟಿದ್ದು, ಇನ್ನೋರ್ವ ಹಿಂಬದಿಯ ಸವಾರನಾಗಿದ್ದ ವಿದ್ಯಾರ್ಥಿ ಪಟ್ಟಣದ ನಿವಾಸಿ ವಿನಯ ಇಂದ್ರಜೀತ ರೆಡ್ಡಿ (17), ಗಾಯಗೊಂಡ ಹಿನ್ನೆಲೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಘಟನಾ ಸ್ಥಳಕ್ಕೆ ಆಗಮಿಸಿದ್ದ ಹೆಚ್ಚುವರಿ ಎಸ್‌ಪಿ ಶ್ರೀನಿಧಿ ಮತ್ತು ಪೊಲೀಸ್ ಅಧಿಕಾರಿಗಳು ಗಾಯಾಳುಗಳಿಗೆ ಆಸ್ಪತ್ರೆಗೆ ಸಾಗಿಸಿದರು. ಪಟ್ಟಣದಿಂದ ಹೊರವಲಯದ ಹಳೆಯ ಚೆಕ್‌ಪೋಸ್ಟ್‌ಗೆ ಬೈಕ್ ಮೇಲೆ ಹೊರಟ್ಟಿದ್ದ ವೇಳೆ ಈ ಘಟನೆ ಸಂಭವಿಸಿದೆ ಎಂದು ಮೂಲಗಳು ಹೇಳಿಕೊಂಡಿವೆ. ಈ ಕುರಿತು ಆಳಂದ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಕಾಟಿಪಳ್ಳ ಮಸೀದಿಗೆ ಕಲ್ಲು ತೂರಾಟ ಪ್ರಕರಣ; ಆರು ಜನರನ್ನು ಬಂಧಿಸಿದ ಪೊಲೀಸರು

• ಉದಯವಾಹಿನಿ, ಸುರತ್ಕಲ್

ಇಲ್ಲಿನ ಕಾಟಿಪಳ್ಳ 3ನೇ ಬ್ಲಾಕ್ ಮಸೀದಿಯ ಮೇಲೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಆರು ಜನರನ್ನು ಪೊಲೀಸರು ಬಂಧಿಸಿದ್ದಾರೆ. ಕೃಷ್ಣಾಪುರ ಕಾಟಿಪಳ್ಳ ಬಳಿ ಇರುವ ಮಸೀದಿಗೆ ಬೈಕ್ ನಲ್ಲಿ ಬಂದ ಕಿಡಿಗೇಡಿಗಳ ತಂಡವೊಂದು ಕಲ್ಲು ಬಿಸಾಡಿ ಸ್ಥಳದಿಂದ ಪರಾರಿಯಾಗಿದ್ದರು. ಇದೀಗ ಪೊಲೀಸರ ತಂಡವು ನಾಲ್ವರನ್ನು ಬಂಧಿಸಿದ್ದಾರೆ. ಸುರತ್ಕಲ್ ಆಶ್ರಯ ಕಾಲನಿ ನಿವಾಸಿ ಭರತ್, ಕಟ್ಲ ಆಶ್ರಯ ಕಾಲನಿ ನಿವಾಸಿ ಚೆನ್ನಪ್ಪ, ಹಳೆಯಂಗಡಿ ಚೇಳಾಯರು ಖಂಡಿಗೆ ಪಾಡಿ ನಿವಾಸಿ ನಿತಿನ್, ಈಶ್ವರ ನಗರ ನಿವಾಸಿ ಮನು ಮತ್ತು ಮುಂಚೂರು ನಿವಾಸಿ ಸುಜಿತ್ ಎಂಬವರು ಬಂಧಿತ ಆರೋಪಿಗಳೆಂದು ತಿಳಿದುಬಂದಿದೆ.

## ದರ್ಶನ್ ಭೇಟಿಯಾದ ಪತ್ನಿ, ನಟ ಧನ್ವೀರ್

• ಉದಯವಾಹಿನಿ, ಬಳ್ಳಾರಿ


ಕೊಲೆ ಪ್ರಕರಣದ ಆರೋಪಿ ದರ್ಶನ್ ಅವರನ್ನು ಪತ್ನಿ ವಿಜಯಲಕ್ಷ್ಮಿ, ನಟ ಧನ್ವೀರ್, ಸಂಬಂಧಿಕರಾದ ಹೇಮಂತ್ ಮತ್ತು ಸುಶಾಂತ್ ನಾಯ್ಡು ಮಂಗಳವಾರ ಸಂಜೆ 4.30 ರಿಂದ 5ರವರೆಗೆ ಬಳ್ಳಾರಿ ಕಾರಾಗೃಹದಲ್ಲಿ ಭೇಟಿಯಾದರು. ಸುದ್ದಿಗಾರರ ಜೊತೆ ಮಾತನಾಡಲು ನಿರಾಕರಿಸಿದರು. ವಿಜಯಲಕ್ಷ್ಮಿ ಅವರು ಬಟ್ಟೆ ಮತ್ತು ತಿಂಡಿ ತಿನಿಸುಗಳು ಇದ್ದ ಎರಡು ಚೀಲಗಳನ್ನು ತಂದಿದ್ದರು. ಸಂದರ್ಶಕರ ಕೊಠಡಿಗೆ ಬರುವಾಗ ಮತ್ತು ಮರಳುವಾಗ, ದರ್ಶನ್ ಕೈಯಲ್ಲಿ ಎರಡು ಚೀಲಗಳಿದ್ದವು. ಬಳ್ಳಾರಿ ಕಾರಾಗೃಹದಲ್ಲಿ ರಕ್ತಸಂಬಂಧಿಗಳು ಹೊರತುಪಡಿಸಿ ಬೇರೆಯವರನ್ನು ಭೇಟಿಯಾಗಲು ದರ್ಶನ್‌ಗೆ ಅವಕಾಶವಿಲ್ಲ' ಎಂದು ಕಾರಾಗೃಹ ಉತ್ತರ ವಲಯದ ಡಿಐಜಿ ಟಿ.ಪಿ.ಶೇಷ ಹೇಳಿದ್ದರು.

ಆದರೆ, ಜೈಲು ಮಾರ್ಗಸೂಚಿಯಂತೆ ಸ್ನೇಹಿತರು. ಹಿತೈಷಿಗಳ ಭೇಟಿಗೆ ಅವಕಾಶ ನೀಡಲು ನ್ಯಾಯಾಲಯ ಮಂಗಳವಾರ ತಿಳಿಸಿದ ಹಿನ್ನೆಲೆಯಲ್ಲಿ ಧನ್ವೀರ್, ಹೇಮಂತ್ ಅವರಿಗೆ ಭೇಟಿಯಾಗಲು ಸಾಧ್ಯವಾಯಿತು. ನ್ಯಾಯಾಂಗ ಬಂಧನ ಅವಧಿ ಸೆಪ್ಟೆಂಬರ್ 30ರವರೆಗೆ ವಿಸ್ತರಣೆ, ಜಾಮೀನು ಅರ್ಜಿ ಸಲ್ಲಿಕೆ ಸೇರಿ ಕಾನೂನು ಹೋರಾಟದ ಬಗ್ಗೆ ಪತ್ನಿ ಜತೆಗೆ ದರ್ಶನ್ ಚರ್ಚಿಸಿದರು. ಭೇಟಿಗೆ ತಾಯಿ ಬಾರದಿರುವ ಬಗ್ಗೆ ದರ್ಶನ್ ಬೇಸರ ವ್ಯಕ್ತಪಡಿಸಿದರು ಎಂಬುದು ಗೊತ್ತಾಗಿದೆ. ಆದರೆ, ಇದನ್ನು ಕಾರಾಗೃಹದ ಅಧಿಕಾರಿಗಳು ಖಚಿತಪಡಿಸಲಿಲ್ಲ. ಸಿನಿಮಾ 'ಬೆಂಗಳೂರು ಕಾರಾಗೃಹದಿಂದ ಬರುವಾಗ ದರ್ಶನ್ ವಿಟಮಿನ್ ಮಾತ್ರೆಗಳನ್ನು ತಂದಿದ್ದರು. ಭೇಟಿ ವೇಳೆ ಕುಟುಂಬಸ್ಥರೂ ತಂದಿದ್ದರು. ಆದರೆ, ಅದ್ಯಾವುದನ್ನೂ ದರ್ಶನ್‌ಗೆ ನೀಡಿಲ್ಲ' ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ದಲಿತರ ಮೇಲೆ ದೌರ್ಜನ್ಯ ನಡೆದರೂ ಕ್ರಮ ಕೈಗೊಳ್ಳದ ಪೊಲೀಸರು

## ದಲಿತರ ಮೇಲಿನ ದೌರ್ಜನ್ಯ , ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಸೇರಿದಂತೆ ಹತ್ತು ಬೇಡಿಕೆಗಳ ಮನವಿ

• ಉದಯವಾಹಿನಿ, ಮುದ್ದೇಬಿಹಾಳ




ವಿಜಯಪುರ ಜಿಲ್ಲೆಯಲ್ಲಿ ದಲಿತರ ಮೇಲೆ ನಿರಂತರ ದೌರ್ಜನ್ಯ, ದಬ್ಬಾಳಿಕೆ ಜಾತಿ ನಿಂದನೆ ನಡೆದರು ಸಂಭಂದಿಸಿದ ಪೊಲೀಸ ಇಲಾಖೆ ಸೂಕ್ತ ಕ್ರಮಕ್ಕೆ ಕೈಗೊಂಡಿಲ್ಲ ದಲಿತರ ಮೇಲೆ ದೌರ್ಜನ್ಯ ಮಾಡುವ ಅಧಿಕಾರಿಗಳನ್ನು ಅಮಾನತ್ತುಗೂಳಿಸಬೇಕೆಂದು ಮಂಗಳವಾರ ಮುದ್ದೇಬಿಹಾಳ ತಾಲ್ಲೂಕಿನ ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟದಿಂದ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು .

**ತಹಶೀಲ್ದಾರ ಕಚೇರಿಯ ವರಗೆ ಪ್ರತಿಭಟನೆ**

ದಲಿತರ ಮೇಲಿನ ದೌರ್ಜನ್ಯ , ಪೊಲೀಸ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಸೇರಿದಂತೆ ಹತ್ತು ಬೇಡಿಕೆಗಳ ಮನವಿ ಪತ್ರವನ್ನು ಗೃಹಮಂತ್ರಿ ಜಿ ಪರಮೇಶ್ವರ ಅವರಿಗೆ ತಹಶೀಲ್ದಾರ ಕಚೇರಿಯ ಮೂಲಕ ಸಲ್ಲಿಸಿದರು.

ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ದಲಿತಪರ ಮುಖಂಡರಾದ ಹರೀಶ್ ನಾಟಿಕಾರ ,ಡಿ ಬಿ ಮುದೂರ, ಸಿ ಜಿ ವಿಜಯಕರ, ತಿಪ್ಪಣ್ಣ ದೂಡಮನಿ ಮಾತನಾಡಿ ಹುಣಚಗಿ ತಾಲ್ಲೂಕಿನ ಬಪ್ಪರಗಿಯಲ್ಲಿ 14 ವರ್ಷದ ದಲಿತ ಬಾಲಕಿಯ ಮೇಲೆ ಅತ್ಯಾಚಾರ ಮಾಡಲಾಗಿದೆ ಆರೋಪಿಯನ್ನು ಬಂಧಿಸಿಲ್ಲ. ಕುಷ್ಟಗಿಯಲ್ಲಿ ಇಂತಹದೆ ಘಟನೆ ನಡೆದಿದೆ ಬಾಗೇವಾಡಿ, ತಾಳಿಕೋಟೆಯಲ್ಲಿ ದಲಿತರ ಮೇಲೆ ದೌರ್ಜನ್ಯ ದಬ್ಬಾಳಿಕೆ ಮಾಡುತ್ತಿರುವರ ವಿರುದ್ಧ ಕ್ರಮ ಕೈಗೊಳ್ಳಬೇಕು ಬಾಲಕಿಯ ಮೇಲೆ ಅತ್ಯಾಚಾರ ಮಾಡಿದ ಆರೋಪಿಯ ವಿರುದ್ಧ ಪೊಲೀಸರ ಠಾಣೆಯಲ್ಲಿ ಪ್ರಕರಣ ದಾಖಲಾದರು ಆರೋಪಗಳನ್ನು ಬಂಧಿಸಿಲ್ಲ ಮತ್ತು ಬಾಗೇವಾಡಿ ಡಿವೈಎಸ್ಪಿ ವ್ಯಾಪ್ತಿಯಲ್ಲಿ 21 ಅಟ್ರಾಸಿಟಿ ಕೇಸ್ ಆಗಿದ್ದರು ಸಂಬಂಧಿಸಿದ ಆರೋಪಗಳನ್ನು ಬಂಧಿಸಿಲ್ಲ ಆಟ್ರಾಸಿಟಿ ಕೇಸ್ ಮಾಡಿದರೆ ಬಂಧಿಸಬೇಕಿಲ್ಲ ಈಗ ಕಾನೂನು ಬದಲಾಗಿದೆ ಎಂದು ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ಹೇಳ್ತಾರೆ ಬದಲಾದ ಕಾನೂನು ತೋರಿಸಬೇಕು ಇದರ ಹಿಂದೆ ರಾಜಕೀಯ ಒತ್ತಡ ಇರಬೇಕು ಡಿವೈಎಸ್ಪಿ ಅವರನ್ನು ಅಮಾನತ್ತುಗೂಳಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಗ್ರೇಡ್ 2 ತಹಶಿಲ್ದಾರ ಮಳ್ಳಿಕೇರಿ ಅವರ ಮೂಲಕ ಸಲ್ಲಿಕೆ**

**ಹುಣಚಗಿ ತಾಲ್ಲೂಕಿನ ಬಪ್ಪರಗಿ ಗ್ರಾಮದಲ್ಲಿ ದಲಿತ ಬಾಲಕಿ ಮೇಲೆ ಅತ್ಯಾಚಾರ ಮಾಡಿದ ಆರೋಪಿಯನ್ನು ಬಂಧಿಸಬೇಕು, ಗಂಗಾವತಿ ತಾಲ್ಲೂಕಿನ ಸಂಕನಾಳ ಗ್ರಾಮದ ದಲಿತರ ಮೇಲೆ ದೌರ್ಜನ್ಯ ಎಸಗಿದ ಸುವರ್ಣಿಯರ ಮೇಲೆ ಕ್ರಮ, ಮುದ್ದೇಬಿಹಾಳ ತಾಲ್ಲೂಕಿನ ಬಿಟ್ ಪೊಲೀಸರು ಎಸ್ ಪಿ.ಎಂ ಟಿ ಡ್ಯೂಟಿ ಮೂಲಕ ಸಾರಾಯಿ ಮಾರಾಟಗಾರರಿಂದ ಫೂನ್ ಪೇ ಮಾಡಿಸಿಕೊಂಡ ಪೊಲೀಸರ ವಿರುದ್ಧ ತನಿಖೆ, ಬಾಗೇವಾಡಿ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ಅವರನ್ನು, ವಜಾಗೂಳಿಸಬೇಕು ಮುದ್ದೇಬಿಹಾಳ ಕಾರ್ಮಿಕ ಇಲಾಖೆಯ ಈಗಿರುವ ಅಧಿಕಾರಿಗಳನ್ನು ಮುಂದುವರೆಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಆಗ್ರಹಿಸಿದ ಗೃಹ ಸಚಿವರಿಗೆ ಮನವಿ ಪತ್ರವನ್ನು ಗ್ರೇಡ್ 2 ತಹಶೀಲ್ದಾರ ಮಳ್ಳಿಕೇರಿ ಅವರ ಮೂಲಕ ಸಲ್ಲಿಸಲಾಯಿತು.**

ಮಹಿಳೆ ಹಾಗೂ ದಲಿತರ ಬಗ್ಗೆ ಅವಹೇಳನಕಾರಿ ಪದ ಬಳಕೆ ಮಾಡಿದ್ದಾರೆ ಎನ್ನಲಾದ ಆಡಿಯೋ ವೈರಲ್ ಹಿನ್ನೆಲೆಯಲ್ಲಿ ಆರ್ ಆರ್ ನಗರ ವಿಧಾನಸಭೆ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಮುನಿರತ್ನ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡುಬೇಕು ಮತ್ತು ಅವರನ್ನು ರಾಜ್ಯದಿಂದಲೇ ಗಡಿಪಾರು ಮಾಡುವಂತೆ ಆಗ್ರಹಿಸಿದರು. ಈ ವೇಳೆ ಪ್ರಕಾಶ ಸರೂರ, ದೇವರಾಜ ಹಂಗರಗಿ, ಸಿದ್ದು ಕಟ್ಟಿಮನಿ ಮಾತನಾಡಿದರು. ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಬಸವೇಶ್ವರ ವೃತ್ತ ಮಾರ್ಗವಾಗಿ ತಹಶಿಲ್ದಾರ ಕಚೇರಿಯ ವರಗೆ ಪ್ರತಿಭಟನೆ ಮೆರವಣಿಗೆ ಹಲಗೆ ಬಾರಿಸುವ ಮೂಲಕ ಮಾಡಲಾಯಿತು.

## ನಿಜಾಮನಿಂದ ಮುಕ್ತಿ ಪಡೆದ ದಿನವೇ ಹೈದರಾಬಾದ್ ವಿಮೋಚನಾ ದಿನಾಚರಣೆ

• ಉದಯವಾಹಿನಿ, ಜೇವರ್ಗಿ




ತಾಲ್ಲೂಕಿನ ಮಿನಿ ವಿಧಾನಸೌಧದ ಆವರಣದಲ್ಲಿ ಹೈದರಾಬಾದ್ ಕರ್ನಾಟಕ ವಿಮೋಚನೆ ದಿನಾಚರಣೆ ನಿಮಿತ್ತ ದಂಡಾಧಿಕಾರಿ ಮಲ್ಲಣ್ಣ ಯಲಗೋಡ ಧ್ವಜಾರೋಹಣ ನೆರವೇರಿಸಿದರು.

ಧ್ವಜಾರೋಹಣ ನೆರವೇರಿಸಿ ವಿಶ್ವಕರ್ಮ ಗುರುಗಳಗ ಹಾಗೂ ಸರ್ದಾರ್ ವಲ್ಲಭಾಯಿ ಪಟೇಲ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ವಿಶ್ವಕರ್ಮ ಜಯಂತಿ ಶುಭಾಶಯಗಳು ತಿಳಿಸಿ ಮಾತನಾಡಿದ ದಂಡಾಧಿಕಾರಿ ಮಲ್ಲಣ್ಣ ಯಲಗೋಡ ಅಖಂಡ ಭಾರತ 1947 ಆಗಸ್ಟ್ 15 ರಂದು ಸ್ವಾತಂತ್ರವಾಯಿತು. ಆದರೆ ಭಾರತ ಒಕ್ಕೂಟ ರಚನೆಯಾದ ಬಳಿಕ ಭಾರತ ಸರಕಾರ 560ಕ್ಕೂ ಹೆಚ್ಚು ಸಂಸ್ಥಾನ ರಾಜ್ಯಗಳನ್ನು ಭಾರತ ಒಕ್ಕೂಟಕ್ಕೆ ಸೇರುವಂತೆ ಮನವಿ ಮಾಡಿದರು ಆದರೆ 6 ಜಿಲ್ಲೆಗಳಲ್ಲಿ ನಿಜಾಮರ ಆಡಳಿತವಿತ್ತು.

ನಿಜಾ ಮರು ಭಾರತ ಒಕ್ಕೂಟಕ್ಕೆ ಸೇರಲು ಇಷ್ಟವಿಲ್ಲದ ಕಾರಣ ಸ್ವತಂತ್ರ ರಾಜ್ಯಕ್ಕೆ ಬೇಡಿಕೆ ಇಟ್ಟಿದ್ದರು. ಅಂದಿನ ಕೇಂದ್ರ ಗ ಮಂತ್ರಿಗಳಾದ ಸರ್ದಾರ್ ವಲ್ಲಭಾಯಿ ಪಟೇಲ್ ಅವರ ಸತತ ಪ್ರಯತ್ನದ ಫಲವಾಗಿ ಮತ್ತು ಪೋಲೋ ಮಿಲಿಟರಿ ಕಾರ್ಯಾ ಚರಣೆಯಿಂದ 1948 ಸೆಪ್ಟೆಂಬರ್ 17ರಂದು ಸಂಸ್ಥಾನ ರಾಜರು ಭಾರತ ಒಕ್ಕೂಟಕ್ಕೆ ಸೇರಲು ಸಹಿ ಹಾಕಿದರು. ಅಂದಿನ ದಿನ ದಂದು ಹೈದರಾಬಾದ್ ಕರ್ನಾಟಕ ವಿಮೋಚನ ದಿನಾಚರಣೆ ಎಂದು ಆಚರಿಸಲಾಗುತ್ತದೆ ಎಂದು ಹೇಳಿದರು. ಮುಂದೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನ ಕಾಲದಲ್ಲಿ ಕಲ್ಯಾಣ ಕರ್ನಾಟಕ ಎಂದು ಮರು ನಾಮಕರಣ ಮಾಡಲಾಯಿತು.

ನಿಜಾಮ್ ಸರ್ಕಾರದ ವಿರುದ್ಧ ಹೋರಾಡಿದ ನಮ್ಮ ಜಿಲ್ಲೆಯವರು ಮತ್ತು ನಮ್ಮ ತಾಲ್ಲೂಕು ದಮ್ಮದ್ರಿ ಸರ್ದಾರ್ ಶರಣಗೌಡರು ಹೈದರಾಬಾದ್ ನಿಜಾಮ, ರಜಾಕರ ವಿರುದ್ಧ ಹೋರಾಡಿ ಆರು ಜಿಲ್ಲೆಗಳನ್ನು ಅಖಂಡ ಭಾರತ ಒಕ್ಕೂಟ ವ್ಯವಸ್ಥೆಗೆ ಸೇರಿಸಿದ ಕೀರ್ತಿ ಸರ್ದಾರ್ ಶರಣ ಗೌಡರಿಗೆ ಸಲ್ಲುತ್ತದೆ.

ಈ ಸಂದರ್ಭದಲ್ಲಿ ತಾಲ್ಲೂಕ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ಮನಗೂಳಿ ಪಟ್ಟಣ ಅಭಿವೃದ್ದಿ ಪಥದತ್ತ ಸಾಗುತ್ತಿದೆ: ಸಚಿವ

• ಉದಯವಾಹಿನಿ, ಬಸವನಬಾಗೇವಾಡಿ




ಮತಕ್ಷೇತ್ರದ ಮನಗೂಳಿ ಪಟ್ಟಣ ಸರ್ವಾಂಗೀಣ ಅಭಿವೃದ್ಧಿ ಹೊಂದುವ ಮೂಲಕ ಅಭಿವೃದ್ಧಿ ಪಥದತ್ತ ಸಾಗುತ್ತಿದೆ ಎಂದು ಜವಳಿ, ಸಕ್ಕರೆ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ತಾಲ್ಲೂಕಿನ ಮನಗೂಳಿ ಪಟ್ಟಣದಲ್ಲಿ ಸಂಜೆ ಪಟ್ಟಣ ಪಂಚಾಯಿತಿ ಘನತ್ಯಾಜ್ಯ ವಾಹನ ಮತ್ತು ಪಟ್ಟಣದಲ್ಲಿ ಪಟ್ಟಣ ಪಂಚಾಯಿತಿಯಿಂದ ಅಳವಡಿಸಲಾಗಿರುವ ಸಿಸಿ ಕ್ಯಾಮರಾ ಕಾಮಗಾರಿ, ನವೀಕರಿಸಲಾದ ಪಂಚಾಯಿತಿಯ ಸಭಾಭವನವನ್ನ ಉದ್ಘಾಟಿಸಿ ಮಾತನಾಡಿದ ಅವರು ಮನಗೂಳಿ ಪಟ್ಟಣದಲ್ಲಿ ಸರ್ಕಾರಿ ಡಿಗ್ರಿ ಕಾಲೇಜು, ವಿದ್ಯಾರ್ಥಿ ನಿಲಯ ಸೇರಿದಂತೆ ಸಾಕಷ್ಟು ಸರ್ಕಾರಿ ಕಟ್ಟಡಗಳು ತಲೆ ಎತ್ತಿದ್ದು ಹಿಂದೆಂದು ಕಾಣದ ರೀತಿಯಲ್ಲಿ ಪಟ್ಟಣ ಅಭಿವೃದ್ಧಿ ಹೊಂದುತ್ತಿದೆ ಕ್ಷೇತ್ರದ ಜನರ ಸಹಾಯ ಸಹಕಾರದಿಂದ ಬಸವನಬಾಗೇವಾಡಿ ಮತಕ್ಷೇತ್ರ ಸರ್ವಾಂಗೀಣ ಅಭಿವೃದ್ಧಿ ಹೊಂದುವ ಮೂಲಕ ರಾಜ್ಯದಲ್ಲಿಯೇ ಮಾದರಿ ಕ್ಷೇತ್ರವಾಗಿ ಹೊರಹೊಮ್ಮುತ್ತಿದೆ ಎಂದರು.

ಈ ಸಂಧರ್ಭದಲ್ಲಿ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಕಾಂಗ್ರೆಸ್ ಉಪಾಧ್ಯಕ್ಷ ಶಿವನಗೌಡ ಗುಜಗೊಂಡ, ತಾಲ್ಲೂಕಾ ಅಧ್ಯಕ್ಷ ಸುರೇಶ ಹಾರಿವಾಳ, ಮುಖಂಡರಾದ ಭಾಗ್ಯರಾಜ ಸೊನ್ನದ, ಅಜೀತ್ ಜಾನಕರ, ಸೇರಿದಂತೆ ಮುಂತಾದವರು ಇದ್ದರು.

## ಸ್ವಚ್ಛ ಸ್ವಭಾವ, ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಿ: ಗಿರೀಶ್

• ಉದಯವಾಹಿನಿ, ಚಿತ್ರದುರ್ಗ




ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು. ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಮಂಗಳ ವಾರ ಆರೋಗ್ಯ ಇಲಾಖೆ ಸಹಯೋಗದಲ್ಲಿ ಪೌರ ಕಾರ್ಮಿಕರ, ಸಫಾಯಿ ಕರ್ಮಚಾರಿಗಳವರ ಆರೋಗ್ಯ ತಪಾಸಣೆ, ಆರೋಗ್ಯ ಮಾಹಿತಿ ಶಿಕ್ಷಣ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

**ಸಫಾಯಿ ಕರ್ಮಚಾರಿಗಳಿಗೆ ಆರೋಗ್ಯ ತಪಾಸಣೆ**

ಹೆಚ್ಚು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿ ರುವ ವರ್ಗಗಳಲ್ಲಿ ಪೌರ ಕಾರ್ಮಿಕರು ಮೊದಲಿಗರು. ನಗರದ ಸ್ವಚ್ಚತೆ ಕಾಪಾಡಿ ನಾಗರೀಕರಿಗೆ ಸಾಂಕ್ರಾಮಿಕ ರೋಗಗಳು ಹರಡದಂತೆ ಕಾಪಾಡುವ ತಾವುಗಳು ನಿಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಲೇಬೇಕು ಎಂದು ಹೇಳಿ ದರು. ಕಸ ಕಡ್ಡಿ ಚರಂಡಿ ಸ್ವಚ್ಚತೆ, ಶುದ್ಧ ಕುಡಿ ಯುವ ನೀರು ಒದಗಿಸುವಲ್ಲಿ, ಗಲೀಜುಗಳನ್ನು ಮುಟ್ಟುವ ಸಂದರ್ಭಗಳಲ್ಲಿ ಕಸ ವಿಲೇವಾರಿ ಮಾಡುವಾಗ ಇಲಾಖೆ ಒದಗಿಸಿದ ಗ್ಲೌಸ್, ಬೂಟು, ಮಾಸ್ಕ್ ಇತರೆ ರಕ್ಷಣಾ ಪರಿಕರಗಳನ್ನು ತಪ್ಪದೇ ಉಪಯೋಗಿಸಿ.

**ರಾಷ್ಟ್ರೀಯ ಬಾಲ ಸ್ವಾಸ್ಥಯ ಯೋಜನೆಯಡಿ ನಿಮ್ಮ ಕುಟುಂಬದ 1 ವರ್ಷದಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಹುಟ್ಟಿನ ನ್ಯೂನ್ಯತೆ, ಕುಂಠಿತ ಬೆಳವಣಿಗೆ, ದೀರ್ಘಕಾಲೀನ ಆರೋಗ್ಯ ಸಮಸ್ಯೆಗಳಿಗೆ ಉನ್ನತ ಮಟ್ಟದ ಉಚಿತ ಚಿಕಿತ್ಸೆ ತಪಾಸಣೆಗೆ ಸಹಕಾರಿಯಾಗಿದೆ. ಧೂಮಪಾನ, ಮದ್ಯಪಾನ, ತಂಬಾಕು ಸೇವನೆಯಿಂದ ದೂರವಿರಿ. ಶುದ್ಧವಾದ ನೀರು, ಶುದ್ಧವಾದ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಿ ಎಂದರು.**

ಇಲ್ಲವಾದಲ್ಲಿ ಬೇಗನೇ ರೋಗಗಳಿಗೆ ತುತ್ತಾಗುತ್ತಿರಾ ಎಂದು ತಿಳಿಸಿದ ಅವರು, ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಿ ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಎಲ್ಲಾ ಕಾರ್ಮಿಕರು ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಕಾರ್ಡ್ ಮಾಡಿಸಿಕೊಳ್ಳಿ. ರೂ.5 ಲಕ್ಷದವರೆಗೆ ನಿಮ್ಮ, ನಿಮ್ಮ ಕುಟುಂಬದ ಆರೋಗ್ಯ ಸಮಸ್ಯೆ ಗಂಭೀರ ಸ್ವರೂಪದ ಕಾಯಿಲೆಗಳಿಗೆ ಉಚಿತ ಉನ್ನತ ಮಟ್ಟದ ಚಿಕಿತ್ಸೆ ಪಡೆದುಕೊಳ್ಳಲು ಸಹಕಾರಿಯಾಗಿದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ ಅವರು ಕೈ ತೊಳೆದುಕೊಳ್ಳುವ ವಿಧಾನದ ಪ್ರಾತ್ಯಕ್ಷಿಕೆ ನೀಡಿದರು. ಬಿ.ಜಾನಕಿ ಅವರು ಪೌಷ್ಟಿಕಾಹಾರದ ಬಗ್ಗೆ ತಿಳಿಸಿದರು.

ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ ಮಾತನಾಡಿ, ಪ್ರತಿ ಎರಡು ತಿಂಗಳಿಗೆ ಒಮ್ಮೆಯಾದರೂ ಪೌರ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಿ ಎಂದು ಆರೋಗ್ಯ ಇಲಾಖೆಗೆ ತಿಳಿಸಿದರು.

ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ.ಬಿಲಾಲ್, ಡಾ.ವಾಣಿ, ಸಂಚಾರಿ ಆರೋಗ್ಯ ಘಟಕದ ತ್ರಿವೇಣಿ, ಲಕ್ಷ್ಮಿದೇವಿ, ರೆಹಮಾನ್, ಶಂಕರ ಮೂರ್ತಿ, ನಗರಸಭೆ ವ್ಯವಸ್ಥಾಪಕಿ ಮಂಜುಳಾ, ನಗರಸಭೆ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗರಾಜ್, ಬಾಬುರೆಡ್ಡಿ, ಭಾರತಿ, ರುಕ್ಮಿಣಿ, ಪರಿಸರ ಇಂಜಿನಿಯರ್ ಜಾಫರ್ ಹಾಗೂ 98 ಜನ ಸಫಾಯಿ ಕರ್ಮಚಾರಿಗಳು ಇದ್ದರು.

## ಕರಡಿ ದಾಳಿ: ಕಬ್ಬು ಬೆಳೆ ನಾಶ

• ಉದಯವಾಹಿನಿ, ಕಂಪ್ಲಿ

ತಾಲ್ಲೂಕಿನ ರಾಮಸಾಗರ ಗ್ರಾಮ ಹೊರವಲಯದ ಕಣಿವಿತಿಮ್ಮಲಾಪುರ ರಸ್ತೆ ವ್ಯಾಪ್ತಿಯಲ್ಲಿರುವ ಕಬ್ಬಿನ ಗದ್ದೆಗಳಿಗೆ ಮೂರು ಕರಡಿಗಳು ನಿರಂತರವಾಗಿ ದಾಳಿ ನಡೆಸಿ ಬೆಳೆ ಹಾಳು ಮಾಡುತ್ತಿರುವುದರಿಂದ ರೈತರು ಚಿಂತೆಗೀಡಾಗಿದ್ದಾರೆ.'ಒಂದು ತಿಂಗಳಿಂದ ರಾತ್ರಿ ವೇಳೆ ಮೂರು ಕರಡಿಗಳು ದಾಳಿ ನಡೆಸುತ್ತಿವೆ. ಈ ಸಂದರ್ಭದಲ್ಲಿ ಗದ್ದೆ ವ್ಯಾಪ್ತಿಯ ಕೆಲ ಅಡಿ ಅಂತರದಲ್ಲಿ ಬೆಂಕಿ ಹಾಕಿ ಕುಳಿತರೂ, ಪಟಾಕಿ ಸಿಡಿಸಿದರೂ ಕರಡಿಗಳು ಹೆದರುತ್ತಿಲ್ಲ' ಎಂದು ರೈತರಾದ ಗೆಣಿಕೆಹಾಳು ಭೀಮಲಿಂಗನಗೌಡ, ಬಿ. ಮಂಜುನಾಥ, ವೀರನಗೌಡ, ಬೇವಿನಹಳ್ಳಿ ವಿರುಪಾಕ್ಷಿ, ಕಾಟಂಬ್ಲಿ ಯಂಕಣ್ಣ, ರಾಮರೆಡ್ಡಿ, ಮೇಷ್ಟ್ರು ರೇಣುಕಪ್ಪ ಬೇಸರ ವ್ಯಕ್ತಪಡಿಸಿದರು. ಅರಣ್ಯ ಇಲಾಖೆಯವರು ಕರಡಿಗಳನ್ನು ಸೆರೆಹಿಡಿದು ದೂರ ಸಾಗಿಸುವಂತೆ ರೈತರು ಒತ್ತಾಯಿಸಿದರು.

ಅರಣ್ಯ ರಕ್ಷಕ ರಾಘವೇಂದ್ರ ಮಾತನಾಡಿ, 'ರೈತರ ಮನವಿ ಮೇರೆಗೆ ಅರಣ್ಯ ವೀಕ್ಷಕ ನಾಗರಾಜ, ವನಪಾಲಕ ನಾಗರಾಜ ಅವರೊಡನೆ ಕರಡಿ ದಾಳಿ ನಡೆಸಿದ ಕಬ್ಬಿನ ಗದ್ದೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದೇವೆ. ಕರಡಿಗಳಿಂದ ಕಬ್ಬಿನ ಬೆಳೆ ನಷ್ಟ ಉಂಟಾದ ರೈತರು ಪರಿಹಾರಕ್ಕೆ ಹೊಸಪೇಟೆಯ ಪ್ರಾದೇಶಿಕ ವಲಯ ಅರಣ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಬೇಕು' ಎಂದು ಸ್ಪಷ್ಟಪಡಿಸಿದರು.

## ಬೀದರ್‌ಲ್ಲಿ ಸಚಿವ ಈಶ್ವರ ಖಂಡ್ರೆ ಧ್ವಜಾರೋಹಣ

• ಉದಯವಾಹಿನಿ, ಬೀದರ್




ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಪರಿಸರ,ಅರಣ್ಯ ಖಾತೆ ಸಚಿವ ಈಶ್ವರ ಬಿ. ಖಂಡ್ರೆ ಅವರು ನಗರದ ನೆಹರೂ ಕ್ರೀಡಾಂಗಣದಲ್ಲಿ ಮಂಗಳವಾರ ಧ್ವಜಾರೋಹಣ ನೆರವೇರಿಸಿದರು. ಆನಂತರ ತೆರೆದ ಜೀಪಿನಲ್ಲಿ ತೆರಳಿ ಗೌರವ ವಂದನೆ ಸ್ವೀಕರಿಸಿದರು. ಬಳಿಕ ವಿವಿಧ ತುಕಡಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಈಶ್ವರ ಬಿ. ಖಂಡ್ರೆ, ಅನೇಕರ ತ್ಯಾಗ, ಬಲಿದಾನದಿಂದ ಕಲ್ಯಾಣ ಕರ್ನಾಟಕಕ್ಕೆ 1948, ಸೆಪ್ಟೆಂಬರ್ 17ರಂದು ವಿಮೋಚನೆ ದೊರೆತಿದೆ. ವಿಮೋಚನೆಯ ಹೋರಾಟದಲ್ಲಿ ಬೀದರ್ ಜಿಲ್ಲೆಯ ಹೋರಾಟಗಾರ ಕೊಡುಗೆ ಬಹಳ ದೊಡ್ಡದಿದೆ ಎಂದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಈಶ್ವರ ಬಿ. ಖಂಡ್ರೆ, ಅನೇಕರ ತ್ಯಾಗ, ಬಲಿದಾನದಿಂದ ಕಲ್ಯಾಣ ಕರ್ನಾಟಕಕ್ಕೆ 1948, ಸೆಪ್ಟೆಂಬರ್ 17 ರಂದು ವಿಮೋಚನೆ ದೊರೆತಿದೆ. ವಿಮೋಚನೆಯ ಹೋರಾಟದಲ್ಲಿ ಬೀದರ್ ಜಿಲ್ಲೆಯ ಹೋರಾಟಗಾರ ಕೊಡುಗೆ ಬಹಳ ದೊಡ್ಡದಿದೆ ಎಂದರು.

ಇದಕ್ಕೂ ಮುನ್ನ ನಗರದಲ್ಲಿ ಅಲಂಕರಿಸಿದ ವಾಹನದಲ್ಲಿ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಭಾವಚಿತ್ರದ ಮೆರವಣಿಗೆ ನಡೆಯಿತು. ಸಂಸದ ಸಾಗರ್ ಖಂಡ್ರೆ, ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ನಗರಸಭೆ ಅಧ್ಯಕ್ಷ ಮೊಹಮ್ಮದ್ ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಡಿಸಿಎಫ್ ವಾನತಿ ಎಂ.ಎಂ., ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಹಾಜರಿದ್ದರು.

## ಅಡಿಕೆಗೆ ಕೊಳೆ ರೋಗ: ಆತಂಕದಲ್ಲಿ ಬೆಳೆಗಾರರು

• ಉದಯವಾಹಿನಿ, ಸೊರಬ

ತಾಲ್ಲೂಕಿನಲ್ಲಿ ನಿರಂತರ ಸುರಿಯುತ್ತಿರುವ ಮಳೆಯಿಂದ ಅಡಿಕೆಗೆ ಕೊಳೆ ರೋಗ ಭಾದೆ ಎದುರಾಗಿದ್ದು, ಬೆಳೆಗಾರರಲ್ಲಿ ಆತಂಕ ಮೂಡಿಸಿದೆ. ತಾಲ್ಲೂಕಿನಲ್ಲಿ ಬಹುತೇಕ ಶುಂಠಿ, ಜೋಳ ಹಾಗೂ ಭತ್ತ ಬೆಳೆಯುತ್ತಿದ್ದ ರೈತರು ಅಡಿಕೆ ತೋಟ ಮಾಡುವಲ್ಲಿ ಹೆಚ್ಚು ಆಸಕ್ತಿ ತೋರಿಸುತ್ತಿದ್ದಾರೆ. ಐದು ವರ್ಷಗಳ ಈಚೆಗೆ 12 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಹೆಚ್ಚುವರಿ ಅಡಿಕೆ ಬೆಳೆಯಲಾಗುತ್ತಿದೆ. ಈ ವರ್ಷದ ಮಳೆಗಾಲದಲ್ಲಿ ಸುರಿದ ಭಾರಿ ಮಳೆ ಹಾಗೂ ಮಳೆಯ ನಡುವೆ ಆಗಾಗ ಬಿಸಿಲು ಬರುತ್ತಿರುವ ಪರಿಣಾಮ ತಾಲ್ಲೂಕಿನ ಎಲ್ಲೆಡೆ ಅಡಿಕೆ ತೋಟಗಳಿಗೆ ವ್ಯಾಪಕ ಪ್ರಮಾಣದಲ್ಲಿ ಕೊಳೆರೋಗ ಕಾಣಿಸಿಕೊಂಡಿದೆ. ಕೊಳೆರೋಗದ ಪರಿಣಾಮ ಅಡಿಕೆ ಉದುರುತ್ತಿದೆ. ಶೇ 74ರಷ್ಟು ಬೆಳೆ ನಾಶವಾಗಿದೆ.

ತಾಲ್ಲೂಕಿನಲ್ಲಿ 8.900 ಹೆಕ್ಟೇರ್ ಪ್ರದೇಶದ ಅಡಿಕೆ ತೋಟಗಳಲ್ಲಿ ಕೊಳೆರೋಗ ಆವರಿಸಿದೆ. ಅಧಿಕ ಮಳೆಗೆ ಈಗಾಗಲೇ ಶುಂಠಿ, ಜೋಳದ ಬೆಳೆ ನಾಶವಾಗಿದ್ದು, ಅಡಿಕೆಯನ್ನು ನೆಚ್ಚಿಕೊಂಡಿದ್ದ ರೈತರಿಗೆ ಇದೀಗ ನಿರಾಶೆ ಮೂಡಿದೆ. ಈ ಬಾರಿ ಮಾರುಕಟ್ಟೆಯಲ್ಲಿ ಅಡಿಕೆ ಧಾರಣೆ ಕುಸಿತ ಕಂಡಿರುವುದರಿಂದ ಮಾರುಕಟ್ಟೆಯಲ್ಲಿ ಕೊಳೆ ಅಡಿಕೆ ಕೇಳುವವರಿಲ್ಲ. ಮರದ ಬುಡದಲ್ಲಿ ಬಿದ್ದ ಅಡಿಕೆ ಆರಿಸಲು ಕೂಲಿಕಾರರಿಗೆ ಕೂಲಿ ನೀಡುವಷ್ಟು ಬೆಲೆಯೂ ಸಿಗುತ್ತಿಲ್ಲ. ಇದರಿಂದ ಬೆಳೆಗಾರರು ಕೊಳೆ ಅಡಿಕೆ ಆರಿಸಲು ಮನಸ್ಸು ಮಾಡದೆ ಇರುವುದರಿಂದ ತೋಟದಲ್ಲಿ ಕೊಳೆತ ಅಡಿಕೆ ರಾಶಿ ಬಿದ್ದಿದೆ.

# ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪಾನ್ಯಾಸ

## ಸ್ವಾತಂತ್ರ್ಯ ಪೂರ್ವದಲ್ಲಿ ದೇಶ 554 ಸಂಸ್ಥಾನದಲ್ಲಿ ಹಂಚಿಹೋಗಿತ್ತು, ಭಾರತ ಪ್ರಾಂತ್ಯ ಕೂಡ ಒಂದಾಗಿತ್ತು: ಪ್ರಾಚಾರ್ಯ ಪಾಲಾಮೋರ್

• ಉದಯವಾಹಿನಿ, ಚಿಂಚೋಳಿ




1947ರ ಸ್ವಾತಂತ್ರ್ಯ ಪೂರ್ವದಲ್ಲಿ ದೇಶವು 554 ಸಂಸ್ಥಾನದಲ್ಲಿ ಹಂಚಿ ಹೋಗಿತ್ತು ಅದರಲ್ಲಿ ಭಾರತ ಪ್ರಾಂತ್ಯ ಒಂದಾಗಿತ್ತು, 1857ರಲ್ಲಿ ಸ್ವಾತಂತ್ರ್ಯ ಮಹಾ ಸಂಗ್ರಮವೇ ನಡೆಯಿತು ಎಂದು ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೋರ್ ಹೇಳಿದರು.

**ಗಾಂಧಿ ಟೋಪಿ ನಿಷೇಧದಿಂದ ಜನರು ತತ್ತರ**

ಪಟ್ಟಣದ ತಹಶೀಲ್ ಆವರಣದಲ್ಲಿ ತಾಲ್ಲೂಕಾಡಳಿತ ವತಿಯಿಂದ ಹಮ್ಮಿಕೊಂಡ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪಾನ್ಯಾಸ ನೀಡಿದ ಅವರು, ದೇಶಕ್ಕೆ 1947ರ ಲ್ಲಿ ಸ್ವಾತಂತ್ರ್ಯ ದೊರೆತ್ತಿದರೆ ಆಗಿನ ಹೈದ್ರಾಬಾದ್ ಕರ್ನಾಟಕಕ್ಕೆ ಸ್ವಾತಂತ್ರ್ಯ ಸಿಗದೆ ರಜಾಕಾರರ ದಬ್ಬಾಳಿಕೆಯಲ್ಲಿ ರಕ್ತದ ಓಕಳಿ ರಾಷ್ಟ್ರಧ್ವಜ ಗಾಂಧಿ ಟೋಪಿ ನಿಷೇಧದಿಂದ ಜನರು ತತ್ತರಿಸಿ ಹೋಗಿದ್ದರು.

1947ರ ಸ್ವಾತಂತ್ರ್ಯ ದೊರೆತ ನಂತರ ವಿಭಜನೆ ಮಾಡುವಾಗ ಯಾರು ಯಾವ ಪ್ರಾಂತ್ಯಕ್ಕೆ ಸೇರಿಕೊಳ್ಳುತ್ತಾರೆ ಸೇರಿಕೊಳ್ಳಲ್ಲಿ ಎಂದು ಆದೇಶ ಮಾಡಿದಾಗ ಹೈದರಾಬಾದ್ ನಿಜಾಮನ ಒಳ್ಳೆವನಾಗಿದ್ದ ಆದರೆ ಅವನ ಸೈನಿಕ ಖಾಸಿಂ ರೀಜವಿ ಬಹಳಷ್ಟು ಕ್ರೂರಿ ಚಿತ್ರಹಿಂಸೆ ಅಸೂಸೆ ಹೊಂದಿದ್ದ ಆಗ ನಿಜಾಮನ ಆದೇಶ ನಡೆಯುತ್ತಿರಲಿಲ್ಲಾ ಬರೀ ಖಾಸಿಂ ರೀಜವಿ ಆದೇಶ ನಡೆಯುತ್ತಿತ್ತು ಇದರಿಂದ ಬೇಸತ್ತಿದ್ದವರಲ್ಲಿ ರಾಮನೂರ ತೀರ್ಥಕರ ನೇತೃತ್ವದಲ್ಲಿ ತಂಡವನ್ನು ರಚಿಸಿ ಖಾಸಿಂ ರೀಜವಿಯವರ ರಜಾಕಾರರ ಗಡಿ ಶಿಬಿರಗಳ ಮೇಲೆ ದಾಳಿ ನಡೆಸಿ ಅವರಿಂದ ಸಂಪೂರ್ಣವಾಗಿ ಸ್ವಾತಂತ್ರ್ಯವಾದ ನಂತರ ಒಂದು ವರ್ಷದ ನಂತರ ನಮಗೆ ಸ್ವಾತಂತ್ರ್ಯ ದೊರಕಿದೆ. ಆದರೆ ಇಲ್ಲಿಯವರೆಗೆ ಕಲ್ಯಾಣ ಕರ್ನಾಟಕ ಮೂಲಭೂತ ಸೌಕರ್ಯಗಳಿಂದ ಇನ್ನು ಹಿಂದುಳಿದಿದೆ, 371ಜೆ ಹೋರಾಟದ ಫಲವಾಗಿ ಮಲ್ಲಿಕಾರ್ಜುನ ಖರ್ಗೆಯವರು ಜಾರಿಗೆ ಗೋಳಿಸುವುದರಿಂದ ಈ ಭಾಗದ ಅಭಿವೃದ್ಧಿ ಮತ್ತು ಸೌಲಭ್ಯಗಳನ್ನು ಉದ್ಯೋಗವನ್ನು ದೊರಕುತ್ತಿದೆ, ಇನ್ನು ಸಾಕಷ್ಟು ನ್ಯೂನತೆಗಳನ್ನು 371ಜೆ ಅಡಿಯಲ್ಲಿ ತಿದ್ದುಪಡಿ ಮಾಡಿ ಈ ಭಾಗ ಅಭಿವೃದ್ಧಿ ಹೊಂದಬೇಕಾಗಿದೆ.

ನಿಜಾಮರ ಕಾಲದಲ್ಲಿದ್ದ ಹೈದರಾಬಾದ್ ಕರ್ನಾಟಕ ಗೃಹ ಸಚಿವರಾದ ಸರ್ದಾರ್ ವಲ್ಲಭಭಾಯಿ ಪಟೇಲರ ಶ್ರಮ ಬಹಳಷ್ಟುಯಿದ್ದು ಅಪರೇಷನ್ ಪೋಲೋ ಎಂದು ದಾಳಿ ನಡೆಸಿ ರಜಾಕಾರರನ್ನು ಸದೆಬಡೆದಿದ್ದರು ಎಂದರು.

**ಪೋಲೋ ಎಂಬ ದೊಡ್ಡ ಕ್ರೀಡಾಗಣ ಹೈದರಾಬಾದ್ ನಲ್ಲಿದ್ದು ಸ್ವಾತಂತ್ರ್ಯ ಸಂದರ್ಭದಲ್ಲಿ ರಜಾಕಾರರ ಸದೆಬಡೆಯಲು ಡಾ. ಬಿ.ಆರ್.ಅಂಬೇಡ್ಕರ್ ಸಲಹೆ ಪಡೆದ ಸರ್ದಾರ್ ವಲ್ಲಭಭಾಯಿ ಪಟೇಲ ಅಪರೇಷನ್ ಪೋಲೋ ಎಂದು ಪೋಲಿಸ್ ದಾಳಿ ನಡೆಸಿ ರಜಾಕಾರರಿಗೆ ಸೆರೆ ಹಿಡಿಯಿರಿ ಎಂದು ಹೇಳಿದಾಗ ಸರ್ದಾರ್ ವಲ್ಲಭಭಾಯಿ ಪಟೇಲರು ದಾಳಿಗೆ ಸೂಚಿಸಿದ ನಂತರ ರಜಾಕಾರರು ಸೆರೆಯಾದರು**

**– ಆನಂದಕುಮಾರ ಟೈಗರ**
**ಪುರಸಭೆ ಅಧ್ಯಕ್ಷ**

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಜಯಪ್ಪ ಚಾಪಲ್ ಸ್ವಾಗತಿಸಿದರು, ಶಿಕ್ಷಣ ಸಂಯೋಜಕ ಅಶೋಕ ಹೂವಿನಭಾವಿ ನಿರೂಪಿಸಿದರು, ಕ್ಷೇತ್ರ ಸಮನ್ವಯಾಧಿಕಾರಿ ನಾಗಶೆಟ್ಟಿ ಭದ್ರಶೆಟ್ಟಿ ವಂದಿ ಸಿದರು.

**ಮೀಸಲಾತಿಯಲ್ಲಿ ಅನ್ಯಾಯ**

**371ಜೆ ಅಡಿಯಲ್ಲಿ ಸರ್ಕಾರಿ ನೌಕರರಿಗೆ ಇನ್ನು ಅನ್ಯಾಯ ವಾಗುತ್ತಿದ್ದು ಬೆಂಗಳೂರು ಮೈಸೂರು ಭಾಗದ ಜನರಿಗೆ ಕಲ್ಯಾಣ ಕರ್ನಾಟಕದಲ್ಲಿ ಶೇ.20ರಷ್ಟು ಮೀಸಲಾತಿ ನೀಡಿದರೆ ಕಲ್ಯಾಣ ಕರ್ನಾಟಕ ನೌಕರರಿಗೆ ಬೆಂಗಳೂರು ಮೈಸೂರು ಭಾಗದಲ್ಲಿ ಮೀಸಲಾತಿಯಲ್ಲಿ ಅನ್ಯಾಯ ಮಾಡುತ್ತಿದ್ದು ಇದನ್ನು ಸರಿಪಡಿಸಬೇಕಾಗಿದೆ.**

ಈ ಸಂದರ್ಭದಲ್ಲಿ ಬಿಇಓ ಲಕ್ಷ್ಮಯ್ಯ, ಟಿಹೆಚ್‌ಓ ಮಹ್ಮದ್ ಗಫಾರ್,ರಾಮಚಂದ್ರ ಸೂನಾಲ್, ನಾಗೇಂದ್ರಪ್ಪಾ, ಅನುಸೋಯಾ ಚವ್ಹಾಣ, ವೀರಶೆಟ್ಟಿ ರಾಠೋಡ್,ಸುರೇಶ ದೇಶಪಾಂಡೆ, ಶಾಮರಾವ ಮೋಘಾ, ನಾರಾಯಣ ರಡ್ಡಿ, ದೇವಿಂದ್ರಪ್ಪಾ ಹೋಳ್ಕರ, ಸುರೇಶ ಕೊರವಿ, ಗಿರಿರಾಜ ಸಜ್ಜನ, ಅನೇಕರಿದ್ದರು.

# ಅಮೆರಿಕದ 11 ವರ್ಷದ ಬಾಲಕನ ಬಳಿ ಅಪಾರ ಶಸ್ತ್ರಾಸ್ತ್ರ

## ಅಮೆರಿಕದ ಫ್ಲೋರಿಡಾ ರಾಜ್ಯದ ಪ್ರೌಢಶಾಲಾ ವಿದ್ಯಾರ್ಥಿ ಬಂಧನ, ಸಾಮೂಹಿಕ ಗುಂಡಿನ ದಾಳಿ ನಡೆಸುವ ಬೆದರಿಕೆ ಹಾಕಿದ ಆರೋಪ



ದಾಳಿ ನಡೆಸಲು ಹಿಟ್ ಲಿಸ್ಟ್

**ಅಮೆರಿಕ:** ವಿಶ್ವದ ದೊಡ್ಡಣ್ಣ ಅಮೆರಿಕದಲ್ಲಿ ಒಂದು ಶಾಕಿಂಗ್ ಘಟನೆ ನಡೆದಿದೆ. 11 ವರ್ಷದ ಬಾಲಕನೊಬ್ಬನನ್ನು ಅಲ್ಲಿನ ಪೊಲೀಸರು ತಮ್ಮ ವಶಕ್ಕೆ ಪಡೆದಿದ್ದಾರೆ. ಏಕೆಂದರೆ ಈ ಬಾಲಕನ ಬಳಿ ಭಾರೀ ಪ್ರಮಾಣದಲ್ಲಿ ಶಸ್ತ್ರಾಸ್ತ್ರ ಸಂಗ್ರಹ ಇತ್ತು. ಜೊತೆಯಲ್ಲೇ ಎರಡು ವಿಭಿನ್ನ ಶಾಲೆಗಳ ಮೇಲೆ ದಾಳಿ ನಡೆಸಿ ಯಾರನ್ನೆಲ್ಲಾ ಹತ್ಯೆ ಮಾಡ ಬೇಕು ಎಂದು ಈ ಬಾಲಕ 'ಹಿಟ್ ಲಿಸ್ಟ್' ರೆಡಿ ಮಾಡಿಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಅಮೆರಿಕದ ಫ್ಲೋರಿಡಾ ರಾಜ್ಯದ ಈ ಬಾಲಕ ಇನ್ನೂ ಪ್ರೌಢ ಶಾಲಾ ವಿದ್ಯಾರ್ಥಿ. ಈತನ ಮೇಲೆ ಸಾಮೂಹಿಕ ಗುಂಡಿನ ದಾಳಿ ನಡೆಸುವ ಬೆದರಿಕೆ ಆರೋಪವನ್ನು ಪೊಲೀಸರು ಹೊರಿಸಿದ್ದಾರೆ. ತಾನು ವ್ಯಾಸಂಗ ಮಾಡುತ್ತಿರುವ ಪ್ರೌಢ ಶಾಲೆ ಹಾಗೂ ಸಮೀಪದ ಮತ್ತೊಂದು ಶಾಲೆಯಲ್ಲಿ ಗುಂಡಿನ ದಾಳಿ ನಡೆಸೋದಾಗಿ ಈತ ಬೆದರಿಕೆ ಹಾಕಿದ್ದ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಈ ಕುರಿತಾಗಿ ಪೊಲೀಸ್ ಇಲಾಖೆ ಸಾಮಾಜಿಕ ಜಾಲತಾಣಗಳಲ್ಲೂ ಮಾಹಿತಿ ನೀಡಿದ್ದು, ಈ ಬಾಲಕ ತಾನು ಯಾವೆಲ್ಲಾ ಶಾಲೆಗಳ ಮೇಲೆ ದಾಳಿ ನಡೆಸುತ್ತೇನೆ, ಯಾವ ಶಾಲೆಯಲ್ಲಿ ಯಾವ ವಿದ್ಯಾರ್ಥಿ ಮೇಲೆ ದಾಳಿ ನಡೆಸಬೇಕು ಅನ್ನೋದನ್ನ ಹೆಸರು ಸಮೇತ ಬರೆದು ಇಟ್ಟಿದ್ದ. ಆದರೆ, ವಿಚಾರಣೆ ವೇಳೆ ಈತ ಇದೆಲ್ಲವೂ ಕೇವಲ ಜೋಕ್ ಎಂದು ಹೇಳಿದ್ದಾನೆ ಎಂದು ಮಾಹಿತಿ ನೀಡಿದ್ದಾರೆ.

**ಆ ಬಾಲಕನ ಬಳಿ ಅಪಾರ ಶಸ್ತ್ರಾಸ್ತ್ರಗಳ ಸಂಗ್ರಹ ಇತ್ತು. ಜೊತೆಯಲ್ಲೇ ಯಾರ ಮೇಲೆ ದಾಳಿ ನಡೆಸಬೇಕು ಎಂದು ಹೆಸರುಗಳನ್ನು ಬರೆದು ಇಟ್ಟಿದ್ದ ಪಟ್ಟಿಯೂ ಇತ್ತು. ಸಾಮಾಜಿಕ ಜಾಲತಾಣಗಳಲ್ಲಿ ಇದನ್ನು ಗಮನಿಸಿದ ಬಾಲಕನ ಸ್ನೇಹಿತರು ಪೊಲೀಸರ ಗಮನಕ್ಕೆ ತಂದಿದ್ದರು. ಈ ಹಿನ್ನೆಲೆಯಲ್ಲಿ ಪೊಲೀಸರು ಆರೋಪಿ ಬಾಲಕನನ್ನು ಬಂಧಿಸಿದ್ದಾರೆ. ಆದರೆ, ಬಾಲಕ ಪ್ರದರ್ಶನ ಮಾಡಿದ್ದು ನಕಲಿ ಶಸ್ತ್ರಾಸ್ತ್ರಗಳ ಸಂಗ್ರಹ ಎಂಬ ವಾದವೂ ಮುನ್ನಲೆಗೆ ಬಂದಿದೆ.**

ಬಾಲಕ ತನ್ನ ಸಹಪಾಠಿಗಳ ಜೊತೆ ಫೇಸ್‌ಟೈಮ್ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಚಾಟ್ ಮಾಡುವಾಗ ತನ್ನ ಬಳಿ ಇರುವ ಶಸ್ತ್ರಾಸ್ತ್ರಗಳ ಸಂಗ್ರಹ ಹಾಗೂ ತಾನು ಸಿದ್ದಪಡಿಸಿ ಇಟ್ಟಿರುವ ಹಿಟ್ ಲಿಸ್ಟ್ ಪ್ರದರ್ಶನ ಮಾಡಿದ್ದ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಈತನ ಸಹಪಾಠಿ ಬಾಲಕನೊಬ್ಬ ತನ್ನ ಪೋಷಕರ ಮುಖೇನ ಪೊಲೀಸರನ್ನು ಸಂಪರ್ಕಿಸಿ ದೂರು ನೀಡಿದ್ದ. ಈ ಹಿನ್ನೆಲೆಯಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿ ಬಾಲಕನನ್ನು ಬಂಧಿಸಿ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆದಿದ್ದಾರೆ.

ಇನ್ನು ಬಾಲಕನ ಬಳಿ ಸಿಕ್ಕಿರುವ ಶಸ್ತ್ರಾಸ್ತ್ರಗಳು ನಕಲಿ ಇರಬಹುದು ಎಂದೂ ಕೆಲವರು ವಾದಿಸುತ್ತಿದ್ದಾರೆ. ಆದರೆ, ಈ ಕುರಿತಾಗಿ ಪೊಲೀಸ್ ಇಲಾಖೆ ಯಾವುದೇ ಸ್ಪಷ್ಟನೆ ನೀಡಿಲ್ಲ. ಆದರೆ ಈ ಶಸ್ತ್ರಾಸ್ತ್ರಗಳು ನಕಲಿ ಎಂಬ ಕುರಿತಾಗಿ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆ ನಡೆಯುತ್ತಿದೆ. ಜೊತೆಯಲ್ಲೇ ಬಾಲಕನಿಗೆ ಕೈ ಕೊಳ ತೊಡಿಸಿದ್ದನ್ನೂ ಕೆಲವರು ಪ್ರಶ್ನಿಸುತ್ತಿದ್ದಾರೆ.

### ಮಾರಕಾಸ್ತ್ರ ಪೊಲೀಸರ ವಶಕ್ಕೆ

**ಇದಲ್ಲದೆ ಕೇವಲ 11 ವರ್ಷ ವಯಸ್ಸಿನ ಬಾಲಕನಿಗೆ ಪೊಲೀಸರು ಕೈ ಕೋಳ ತೊಡಿಸಿ ನಿಲ್ಲಿಸಿರುವ ಫೋಟೋ ಕೂಡಾ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಈ ಬಾಲಕನನ್ನು ಸದ್ಯ ಜೈಲಿನಲ್ಲಿ ಇರಿಸಲಾಗಿದೆ. ಬಾಲಕನ ಬಳಿ ಮಾದಕ ವಸ್ತು ಕಳ್ಳಸಾಗಣೆದಾರರ ಬಳಿ ಇರುವ ರೀತಿ ಶಸ್ತ್ರಾಸ್ತ್ರಗಳ ಸಂಗ್ರಹ ಇತ್ತು. ಅತ್ಯಾಧುನಿಕ ಬಂದೂಕುಗಳು, ಪಿಸ್ತೂಲ್‌ಗಳು, ಸಮುರಾಯ್ ಶೈಲಿಯ ಖಡ್ಗ, ಕತ್ತಿ, ಚಾಕು ಹಾಗೂ ಇನ್ನಿತರ ಮಾರಕಾಸ್ತ್ರಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.**

# ಬಿಎಪಿಎಸ್ ಸ್ವಾಮಿನಾರಾಯಣ ದೇಗುಲದ ಮೇಲೆ ದಾಳಿ



ಹಿಂದೂಗಳ ವ್ಯಾಪಕ ಆಕ್ರೋಶ

**ನ್ಯೂಯಾರ್ಕ್:** ನ್ಯೂಯಾರ್ಕ್‌ನ ಮೆಲ್ವಿಲ್ಲೆಯಲ್ಲಿರುವ ಬಿಎಪಿಎಸ್ ಸ್ವಾಮಿ ನಾರಾಯಣ ದೇಗುಲದ ಮೇಲೆ ದುಷ್ಕರ್ಮಿಗಳು ದಾಳಿ ನಡೆಸಿದ್ದಾರೆ. ಭಾರತೀಯ ಕಾನ್ಸುಲೇಟ್ ಜನರಲ್ ಘಟನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ನ್ಯೂಯಾರ್ಕ್‌ನ ಮೆಲ್ವಿಲ್ಲೆಯಲ್ಲಿರುವ ಬಾಪ್ಸ್ ಸ್ವಾಮಿ ನಾರಾಯಣ ದೇಗುಲದ ಮೇಲಿನ ದಾಳಿ ಒಪ್ಪುವಂಥದ್ದಲ್ಲ. ಕಾನ್ಸುಲೇಟ್ ಕಚೇರಿ ಹಿಂದೂ ಸಮುದಾಯದ ಜೊತೆ ಸಂಪರ್ಕ ದಲ್ಲಿದೆ.

ಈ ವಿಷಯವನ್ನು ಯುಎಸ್ ಅಧಿಕಾರಿಗಳಿಗೆ ತಿಳಿಸಲಾಗಿದೆ. ಇಂಥ ಹೇಯ ಕೃತ್ಯ ಎಸಗಿದವರ ವಿರುದ್ಧ ಸೂಕ್ತ ಕ್ರಮಕ್ಕೆ ಆಗ್ರಹಿಸಲಾಗಿದೆ ಎಂದು ಎಕ್ಸ್‌ನಲ್ಲಿ ಮಾಹಿತಿ ನೀಡಿದೆ. ಅಮೆರಿಕನ್ ಹಿಂದೂ ಫೌಂಡೇಷನ್ ದೇ ಗುಲದ ಮೇಲಿನ ದಾಳಿ ಪ್ರಕರಣವನ್ನು ಸೂಕ್ತ ರೀತಿಯಲ್ಲಿ ತನಿಖೆ ನಡೆಸುವಂತೆ ಯುಎಸ್ ನ್ಯಾಯಾಂಗ ಇಲಾಖೆಯನ್ನು ಒತ್ತಾಯಿಸಿದೆ. ಈ ವಾರಾಂತ್ಯದಲ್ಲಿ ಮೆಲ್ವಿಲ್ಲೆ ಸಮೀಪದ ನಾಸ್ಸೌ ಕೌಂಟಿಯಲ್ಲಿ ಹಿಂದೂ ಸಮುದಾಯದವರು ದೊಡ್ಡ ಸಂಖ್ಯೆಯ ಲ್ಲಿ ಸೇರುವ ಕಾರ್ಯಕ್ರಮ ಇರುವುದರಿಂದ ಹಿಂದೂ ಸಂಸ್ಥೆಗಳ ಮೇಲೆ ದಾಳಿ ಬೆದರಿಕೆ ಆತಂಕ ವ್ಯಕ್ತವಾಗಿತ್ತು ಎಂದು ತಿಳಿಸಿದೆ. ಇದರ ಜೊತೆಗೆ ಖಲಿಸ್ತಾನಿ ಉಗ್ರ ಗುರು ಪತ್ವಂತ್ ಸಿಂಗ್ ಪನ್ನು ಇತ್ತೀಚೆಗೆ ವಿಡಿಯೋ ಮೂಲಕ ಹಿಂದೂಗಳು ಮತ್ತು ಹಿಂದೂ ಸಂಸ್ಥೆಗಳ ಮೇಲೆ ಬೆದರಿಕ ಹಾಕಿದ್ದ ಎಂದು ಹೇಳಿದೆ.

ನ್ಯೂಯಾರ್ಕ್‌ನಲ್ಲಿರುವ ದೇಗುಲದ ಮೇಲೆ ನಡೆದ ದಾಳಿಯು ಈ ಹಿಂದೆ ಕ್ಯಾಲಿಫೋರ್ನಿಯಾ ಮತ್ತು ಕೆನಡಾದಲ್ಲಿ ನಡೆದ ದಾಳಿಗಳೊಂದಿಗೆ ಸಾಮ್ಯತೆ ಹೊಂದಿದೆ ಎಂದು ತಿಳಿಸಿದೆ. ಕಳೆದ ಜುಲೈನಲ್ಲಿ ಕೆನಡಾದ ಎಡಾಂಟನ್‌ನಲ್ಲಿರುವ ಬಾಪ್‌ಸ ಸ್ವಾಮಿ ನಾರಾಯಣ ಮಂದಿರದ ಮೇಲೆ ಖಲಿಸ್ತಾನಿ ಉಗ್ರರು ದಾಳಿ ನಡೆಸಿದ್ದು, ಭಾರತೀಯ ಸಮುದಾಯ ತೀವ್ರ ಆಕ್ರೋಶ ವ್ಯಕ್ತಪಡಿಸಿತ್ತು. ಇದೀಗ ಅಮೆರಿಕದಲ್ಲಿ ದಾಳಿ ಮರುಕಳಿಸಿದೆ.

ಇದೇ ವರ್ಷ ಜನವರಿಯಲ್ಲಿ ಕ್ಯಾಲಿಫೋರ್ನಿಯಾದಲ್ಲಿರುವ ವಿಜಯ್ ಶೆರವಾಲಿ ದೇವಸ್ಥಾನದ ಮೇಲೆ ಸ್ಪ್ರೇ ಪೇಂಟಿಂಗ್ ಮಾಡಿದ್ದ ಖಲಿಸ್ತಾನ್ ಹೋರಾಟಗಾರರು ಭಾರತದ ವಿರುದ್ಧ ಅವಹೇಳನಕಾರಿ ವಾಕ್ಯಗಳನ್ನು ಬರೆದಿದ್ದರು. ಅಲ್ಲದೆ ಖಾಲಿಸ್ತಾನ್ ಜಿಂದಾಬಾದ್, ಮೋದಿ ಈಸ್ ಎ ಟೆರರಿಸ್ಟ್ ಎಂಬಿತ್ಯಾದಿ ವಾಕ್ಯಗಳನ್ನೂ ಬರೆಯಲಾಗಿತ್ತು. 2023ರ ಡಿಸೆಂಬರ್ 22ರಂದು ಕ್ಯಾಲಿಫೋರ್ನಿಯಾದಲ್ಲಿರುವ ಸ್ವಾಮಿ ನಾರಾಯಣ್ ವಾಸನಾ ಸಂಸ್ಥಾ ದೇವಸ್ಥಾನದ ಮೇಲೆಯೂ ಭಾರತ ವಿರೋಧಿ ವಾಕ್ಯಗಳನ್ನು ಬರೆಯಲಾಗಿತ್ತು.

# ಹಸಿರು ನಿಶಾನೆ ತೋರಿಸುವ ವೇಳೆ ಹಳಿ ಮೇಲೆ ಬಿದ್ದ ಶಾಸಕಿ



**ಇಟಾವಾ:** ಇಲ್ಲಿ ಆಗ್ರಾ-ವಾರಣಾಸಿ ವಂದೇ ಭಾರತ್ ಎಕ್ಸ್‌ಪ್ರೆಸ್‌ಗೆ ಹಸಿರು ಧ್ವಜವನ್ನು ಬೀಸುವ ಸ್ಪರ್ಧೆಯಲ್ಲಿ ಬಿಜೆಪಿಯ ಇಟಾವಾ ಶಾಸಕಿ ಸರಿತಾ ಬದೌರಿಯಾ ಅವರು ರೈಲ್ವೆ ಹಳಿಗಳ ಮೇಲೆ ಬಿದ್ದ ಗಟನೆ ನಡೆದಿದೆ.

ಘಟನೆಯ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ. ನಿನ್ನೆ ಸಂಜೆ 6 ಗಂಟೆ ಸುಮಾರಿಗೆ ರೈಲು ಆಗಮಿಸುತ್ತಿದ್ದಂತೆ ಕಿಕ್ಕಿರಿದ ಪ್ಲಾಟ್‌ಫಾರ್ಮ್ ನಡುವೆ ಈ ಘಟನೆ ನಡೆದಿದೆ. 61 ವರ್ಷದ ಎರಡನೇ ಅವಧಿಯ ಬಿಜೆಪಿ ಶಾಸಕಿ ವೇದಿಕೆಯಲ್ಲಿ ನಿಂತಿದ್ದಾಗ ಹಸಿರು ಬಾವುಟವನ್ನು ಹಿಡಿದ್ದರು . ಪ್ರಧಾನಿ ನರೇಂದ್ರ ಮೋದಿಯವರು ವಂದೇ ಭಾರತ್ ರೈಲಿನ ವರ್ಚುವಲ್ ಉದ್ಘಾಟನೆಯ ನಂತರ, 20175 ಸಂಖ್ಯೆಯ ರೈಲಿಗೆ ಆಗ್ರಾದಿಂದ ರೈಲು ಸಚಿವ ರವನೀತ್ ಸಿಂಗ್ ಬಿಟ್ಟು ಅವ ರು ಫ್ಲ್ಯಾಗ್ ಆಫ್ ಮಾಡಿದರು.

ಈ ವೇಲೆ ಜಾರಿ ಹಳಿ ಮೇಲೆ ಬಿದ್ದಿದ್ದಾರೆ . ನಂತರ ರೈಲನ್ನು ನಿಲ್ಲಿಸಿಬಿಜೆಪಿಯ ಇಟಾವಾ ಘಟಕದ ಖಜಾಂಚಿ ಸಂಜೀವ್ ಭದೌರಿಯಾ, ಶಾಸಕಿಯನ್ನು ರಕ್ಷಿಸಿದ್ದಾರೆ. ನಂತರ ಅವರು ವೈ ದ್ಯರೊಂದಿಗೆ ಸಮಾಲೋಚಿಸಿದರು ಮತ್ತು ಈಗ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಅವರು ಯಾವುದೇ ದೈಹಿಕ ಗಾಯಗಳನ್ನು ಅನುಭವಿಸಲಿಲ್ಲ. ಯಾವುದೇ ಆಂತರಿಕ ಗಾಯವಿದ್ದರೆ, ಅದನ್ನು ಇನ್ನೂ ದೃಢೀಕರಿಸಬೇಕಾಗಿದೆ ಎಂದು ಭದೌರಿಯಾ ಹೇಳಿದರು. ಸಮಾಜವಾದಿ ಪಕ್ಷದ ಸಂಸದ ಜಿತೇಂದ್ರ ದೌವ್‌ಹಾರೆ, ಬಿಜೆಪಿಯ ಮಾಜಿ ಸಂಸದ ರಾಮ್ ಶಂಕರ್ ಮತ್ತು ಹಾಲಿ ಶಾಸಕಿ ಸರಿತಾ ಭ ದೌರಿಯಾ ಸೇರಿದಂತೆ ವಿವಿಧ ರಾಜಕೀಯ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲು ಜಮಾಯಿಸಿದಾಗ ವೇದಿಕೆಯಲ್ಲಿ ಗದ್ದಲ ಉಂಟಾಯಿತು. ರೈಲಿನ ಹಾರ್ನ್ ಹೊರಡುವ ಸೂಚನೆ ನೀಡುತ್ತಿದ್ದಂತೆಯೇ ಪ್ಲಾಟ್‌ಫಾರ್ಮ್ ಅಸ್ತವ್ಯಸ್ತಗೊಂಡಿದ್ದು, ಬೆಂಬಲಿಗರು ಸ್ಥಾನಕ್ಕಾಗಿ ಹರಸಾಹಸ ಪಡುತ್ತಿದ್ದರು. ನಂತರದ ಗಲಿಬಿಲಿಯಲ್ಲಿ, ಶಾಸಕರನ್ನು ಪ್ಲಾಟ್‌ಫಾರ್ಮ್‌ನಿಂದ ತಳ್ಳಲಾಯಿತು ಮತ್ತು ಅವರು ರೈಲಿನ ಮುಂಭಾಗದ ರೈಲ್ವೆ ಹಳಿಗಳ ಮೇಲೆ ಬಿದ್ದಿದ್ದಾರೆ. ಅದೃಷ್ಟವಷಾತ್ ಯಾವುದೇ ಅನಾಹುತ ಸಂಭವಿಸಿಲ್ಲ.

# ಜಮ್ಮು -ಕಾಶ್ಮೀರ ಮೊದಲ ಹಂತದ ಚುನಾವಣೆ

**ಜಮ್ಮು -ಕಾಶ್ಮೀರ,ಸೆ:** ಇಂದು ನಡೆಯಲಿರುವ ಮೊದಲ ಹಂತದ ಮತದಾನಕ್ಕೆ ಮುಂಚಿತವಾಗಿ ಇಂದು ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯ ಚುನಾವಣಾ ಪಕ್ಷಗಳು ತಮ್ಮ ಗೊತ್ತುಪಡಿಸಿದ ಮತಗಟ್ಟೆಗಳಿಗೆ ಎಲೆಕ್ಟ್ರಾನಿಕ್ ಮತಯಂತ್ರಗಳೊಂದಿಗೆ ತೆರಳಿವೆ. 534 ಮತಗಟ್ಟೆಗಳನ್ನು ದೋಡಾದ ದೂರದ ಪ್ರದೇಶಗಳಿಗೆ ಕಳುಹಿಸಲಾಗಿದೆ. ಯು ಟಿಯಾದ್ಯಂತ 24 ವಿಧಾನಸಭಾ ಕ್ಷೇತ್ರಗಳಲ್ಲಿ ಸೆ. 18 ರಂದು ಮೊದಲ ಹಂತದಲ್ಲಿ ಮತದಾನ ನಡೆಯಲಿದೆ.

2019 ರಲ್ಲಿ 370 ನೇ ವಿಧಿ, ರಾಜ್ಯತ್ವವನ್ನು ರದ್ದುಗೊಳಿಸಿದ ನಂತರ ಇದು ಮೊದಲ ಚುನಾವಣೆಯಾಗಿದೆ. ರಾಂಬನ್ ಮತ್ತು ಕಿಶ್ತ್ವಾರ್ ಜಿಲ್ಲೆಗಳ ಚುನಾವಣಾ ತಂಡಗಳು ಎಲೆಕ್ಟ್ರಾನಿಕ್ ಮತಯಂತ್ರಗಳೊಂದಿಗೆ ತಮ್ಮ ಗೊತ್ತುಪಡಿಸಿದ ಮತಗಟ್ಟೆಗಳಿಗೆ ತೆರಳಿವೆ. ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ, 7 ಜಿಲ್ಲೆಗಳ 24 ವಿಧಾನಸಭಾ ಸ್ಥಾನಗಳಿಗೆ ನಾಳೆ ಸೆಪ್ಟೆಂಬರ್ 18 ರಂದು ಮತದಾನ ನಡೆಯಲಿದೆ. ಇದರಲ್ಲಿ 23.27 ಲಕ್ಷ ಮತದಾರರು ಸೇರ್ಪಡೆಯಾಗಲಿದ್ದಾರೆ.

ಮೊದಲ ಹಂತದ 24 ಸ್ಥಾನಗಳ ಪೈಕಿ 8 ಸ್ಥಾನಗಳು ಜಮ್ಮು ವಿಭಾಗದಲ್ಲಿ, 16 ಸ್ಥಾನಗಳು ಕಾಶ್ಮೀರ ಕಣಿವೆಯಲ್ಲಿವೆ. ಗರಿಷ್ಠ 7 ಸ್ಥಾನಗಳು ಅನಂತನಾಗ್‌ನಲ್ಲಿವೆ, ಕನಿಷ್ಠ 2 ಸ್ಥಾನಗಳು ಶೋಪಿಯಾನ್, ರಾಂಬನ್ ಜಿಲ್ಲೆಗಳಲ್ಲಿವೆ. ಚುನಾವಣಾ ಆಯೋಗದ ಪ್ರಕಾರ ಮೊದಲ ಹಂತದಲ್ಲಿ 219 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಇವರಲ್ಲಿ 9 ಮಹಿಳೆಯರು, 92 ಸ್ವತಂತ್ರ ಅಭ್ಯರ್ಥಿಗಳು ಸೇರಿದ್ದಾರೆ.

110 ಅಭ್ಯರ್ಥಿಗಳು ಮಿಲಿಯನೇರ್‌ಗಳಾಗಿದ್ದರೆ, 36 ಮಂದಿ ವಿರುದ್ಧ ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಮೊದಲ ಹಂತದಲ್ಲಿ ಅನಂತನಾಗ್‌ನ 7, ಪುಲ್ವಾಮಾದ 4, ಕುಲ್ಗಾಮ್‌ನ 3-3, ಕಿಶ್ತ್ವಾರ್ ಮತ್ತು ದೋಡಾದ 2-2, ಶೋಪಿಯಾನ್, ರಾಂಬನ್‌ನ 2-2 ಸ್ಥಾನಗಳಿಗೆ ಮತದಾನ ನಡೆಯಲಿದೆ. ದೋಡಾ, ರಾಂಬನ್, ಕಿಶ್ತ್ವಾರ್ ಜಿಲ್ಲೆಗಳು ಜಮ್ಮು ವಿಭಾಗದಲ್ಲಿ ಬಂದರೆ ಅನಂತನಾಗ್, ಪುಲ್ವಾಮಾ, ಕುಲ್ಗಾಮ್, ಶೋಪಿಯಾನ್ ಕಾಶ್ಮೀರ ವಿಭಾಗದಲ್ಲಿ ಬ ರುತ್ತವೆ. ಪುಲ್ವಾಮಾದ ಪಾಂಪೋರ್ ಕ್ಷೇತ್ರವು ಗರಿಷ್ಠ 14 ಅಭ್ಯರ್ಥಿಗಳನ್ನು ಹೊಂದಿದೆ. ಅದೇ ಸಮಯದಲ್ಲಿ, ಅನಂತನಾಗ್‌ನ ಬಿಜ್‌ಬೆಹರಾ ಕ್ಷೇತ್ರದಲ್ಲಿ ಕೇವಲ 3 ಅಭ್ಯರ್ಥಿಗಳ ನಡುವೆ ಚುನಾವಣಾ ಹೋರಾಟವಿದೆ.

# ದೆಹಲಿಯ ನೂತನ ಸಿಎಂ ಆಗಿ ಅತಿಶಿ ಸಿಂಗ್ ಆಯ್ಕೆ



**ನವದೆಹಲಿ:** ನಿರೀಕ್ಷೆಯಂತೆ ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಸಚಿವೆ ಅತಿಶಿ ಮರ್ಲೆನಾ ಸಿಂಗ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ನಿವಾಸದಲ್ಲಿ ನಡೆದ ಆಮ್ ಆದಿ ಪಕ್ಷದ ಶಾಸಕಾಂಗ ಸಭೆಯಲ್ಲಿ ಲೋಕೋಪಯೋಗಿ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಪ್ರವಾಸೋದ್ಯಮ, ಸಂಸ್ಕೃತಿ ಸೇರಿದಂತೆ ಹಲವು ಖಾತೆಗಳನ್ನು ಯಶಸ್ವಿಯಾಗಿ ನಿಭಾಯಿಸಿದ್ದ ಅತಿಶಿ ಅವರನ್ನು ಶಾಸಕರು ಸರ್ವಸಮತವಾಗಿ ಅವಿರೋಧವಾಗಿ ಆಯ್ಕೆ ಮಾಡಿದರು. ನಂತರ ಅವರ ಹೆಸರನ್ನು ಅರವಿಂದ್ ಕೇಜ್ರಿವಾಲ್ ಅಧಿಕೃತವಾಗಿ ಘೋಷಣೆ ಮಾಡಿದರು. ಶಾಸಕಾಂಗ ಸಭೆಯಲ್ಲಿ ಅತಿಶಿ ಸಿಂಗ್ ಹೆಸರನ್ನು ಖುದ್ದು ಕೇಜ್ರಿವಾಲ್ ಅವರೇ ಪ್ರಸ್ತಾಪಿಸಿದರು.

ಇದಕ್ಕೆ ಎಲ್ಲಾ ಶಾಸಕರು ಬೆಂಬಲ ನೀಡಿದರು. ಮುಖ್ಯಮಂತ್ರಿ ಸ್ಥಾನಕ್ಕೆ ಅರವಿಂದ ಕ್ರೇಜಿವಾಲ್ ಅವರ ಪತ್ನಿ, ಸಚಿವರಾದ ಗೋಪಾಲ್ ರೈ, ಸೌರವ್ ಭಾರದ್ವಾಜ್, ಕೈಲಾಸ್ ಗೆಹ್ಲೋಟ್ ಹೆಸರುಗಳು ಕೇಳಿಬಂದವು. ಅಂತಿಮವಾಗಿ ಕೇಜ್ರಿವಾಲ್ ಅವರ ಸೂಚನೆಯಂತೆ ಎಲ್ಲಾ ಶಾಸಕರು ಅತಿಶಿ ಸಿಂಗ್ ಅವರ ಹೆಸರಿಗೆ ಬೆಂಬಲ ಸೂಚಿಸಿದ್ದಾರೆ.

**ಯಾರು ಅತಿಶಿ ಸಿಂಗ್?:** ಆಮ್ ಆದಿ ಪಕ್ಷದ ರಾಷ್ಟ್ರೀಯ ವ್ಯವಹಾರಗಳ ಸಮಿತಿಯ ಸದಸ್ಯರಾಗಿರುವ ಅತಿಶಿ ಸಿಂಗ್ ಕೇಜ್ರಿವಾಲ್ ಅವರ ನಂಬಿಗಸ್ಥ ಆಪ್ತರಲ್ಲಿ ಒಬ್ಬರಾಗಿದ್ದಾರೆ. ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯ ಜೈಲು ಪಾಲಾದ ಮೇಲೆ ಇಡೀ ಸರ್ಕಾರವನ್ನು ಬಲವಾಗಿ ಸಮರ್ಥಿಸಿಕೊಂಡವರಲ್ಲಿ ಇವರು ಒಬ್ಬರು.

ದೆಹಲಿಯ ಕಲ್ಯಾಜಿ ವಿಧಾನಸಭಾ ಕ್ಷೇತ್ರದಿಂದ ಎರಡು ಬಾರಿ ಗೆದ್ದಿರುವ ಅತಿಶಿ ಸಿಂಗ್, ಸಾರ್ವಜನಿಕ ಲೆಕ್ಕಸಮಿತಿ, ಲೆಕ್ಕಪತ್ರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಲ್ಪಸಂಖ್ಯಾತ ಸೇರಿದಂತೆ ಹಲವು ಸಮಿತಿಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಅವರು ದೇಶದಲ್ಲಿ ಜಿದ್ದುಗಟ್ಟಿರುವ ಭ್ರಷ್ಟಾಚಾರ ವ್ಯವಸ್ಥೆಯನ್ನು ತೊಡೆದು ಹಾಕಲೆಂದೇ 2013ರಲ್ಲಿ ಆಮ್ ಆದಿ ಪಕ್ಷಕ್ಕೆ ಸೇರುವ ಮೂಲಕ ರಾಜಕೀಯ ಪಾದಾರ್ಪಣೆ ಮಾಡಿದರು.

### ಅತಿಶಿಯವರ ಪರಿಶ್ರಮ

**ದೆಹಲಿಯ ಶಿಕ್ಷಣ ಸಚಿವೆಯಾಗಿ ಸರ್ಕಾರಿ ಶಾಲೆಗಳನ್ನು ಉನ್ನತೀಕರಿಸಿದ್ದು, ಉತ್ತಮ ಶಿಕ್ಷಣ, ಶಾಲೆಗಳಿಗೆ ಮಕ್ಕಳನ್ನು ಆಕರ್ಷಿಸಿದ್ದು ದೇಶದಲ್ಲೇ ಕ್ರಾಂತಿಕಾರಿ ಬೆಳವಣಿಗೆಯಾಗಿತ್ತು. ದೆಹಲಿಯಲ್ಲಿ ಈಗಲೂ ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತೆ ಸರ್ಕಾರಿ ಶಾಲೆಗಳು ಎದ್ದು ನಿಂತಿರುವುದರ ಹಿಂದೆ ಅತಿಶಿಯವರ ಪರಿಶ್ರಮವಿದೆ.**

# ಅಪೌಷ್ಟಿಕತೆ ನಿವಾರಣೆಯಲ್ಲಿ ಭಾರತಕ್ಕೆ 'ಎ' ಸರ್ಟಿಫಿಕೇಟ್

**ವಾಷಿಂಗ್ಟನ್:** ಮೈಕ್ರೋಸಾಫ್ಟ್ ಸಹ ಸಂಸ್ಥಾಪಕ ಮತ್ತು ಬಿಲಿಯನೇರ್ ಬಿಲ್ ಗೇಟ್ಸ್ ಅವರು ಅಪೌಷ್ಟಿಕತೆಯ ಸಮಸ್ಯೆಯನ್ನು ಪರಿಹರಿಸುವಲ್ಲಿ ಗಮನಹರಿಸಿರುವ ಭಾರತಕ್ಕೆ ಎ ಸರ್ಟಿಫಿಕೇಟ್ ನೀಡುವುದಾಗಿ ಹೇಳಿದ್ದಾರೆ.

ಭಾರತವು ತನ್ನ ಆದಾಯದ ಮಟ್ಟಕ್ಕಾಗಿ, ಈ ಪೌಷ್ಟಿಕಾಂಶದ ಕೆಲವು ಸೂಚಕಗಳು ತಾನು ಬಯಸುವುದಕ್ಕಿಂತ ದುರ್ಬಲವಾಗಿವೆ ಎಂದು ಒಪ್ಪಿಕೊಳ್ಳುತ್ತದೆ.


ಆ ರೀತಿಯ ನಿಷ್ಕಪಟತೆ ಮತ್ತು ಅದರ ಮೇಲೆ ಕೇಂದ್ರೀಕರಿಸುವುದು ತುಂಬಾ ಪ್ರಭಾವಶಾಲಿಯಾಗಿದೆ ಎಂದು ನಾನು ಭಾವಿಸುತ್ತೇನೆ ಎಂದು ಗೇಟ್ಸ್ ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಹೇಳಿದರು. ಇತರ ಯಾವುದೇ ಸರ್ಕಾರಗಳಿಗಿಂತ ಭಾರತವು ಈ ವಿಷಯದ ಮೇಲೆ ಹೆಚ್ಚು ಗಮನಹರಿಸಿದೆ ಎಂದು ಅವರು ಹೇಳಿದರು, ಇದು ಸಾರ್ವಜನಿಕ ಆಹಾರ ವ್ಯವಸ್ಥೆ ಮತ್ತು ಮಧ್ಯಾಹ್ನದ ಊಟ ವ್ಯವಸ್ಥೆಯನ್ನು ಬಳಸುತ್ತಿದೆ ಮತ್ತು ಬಲವರ್ಧಿತ ಆಹಾರಗಳನ್ನು ಪಡೆಯಲು ಪ್ರಯತ್ನಿಸುತ್ತಿದೆ, ಆದರೆ ಇದು ಇನ್ನೂ ಒಂದು ದೊಡ್ಡ ಅವಕಾಶವಾಗಿದೆ ಎಂದು ಗೇಟ್ಸ್ ಹೇಳಿದರು.

ಗೇಟ್ಸ್ ಫೌಂಡೇಶನ್‌ನ 2024 ರ ವರದಿ ಬಿಡುಗಡೆಯ ಸಂದರ್ಭದಲ್ಲಿ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಗೇಟ್ಸ್ ಹೀಗೆ ಹೇಳಿದರು.

**ಅದರ ಭಾಗವು ನಿಮ ಕರುಳಿನಲ್ಲಿರುವ ಸಂಕೀರ್ಣ ವ್ಯವಸ್ಥೆಯನ್ನು ಅರ್ಥಮಾಡಿಕೊಳ್ಳುತ್ತಿದೆ, ಇದು ಬಹಳಷ್ಟು ಬ್ಯಾಕ್ಟೀರಿಯಾಗಳನ್ನು ಒಳಗೊಂಡಿರುತ್ತದೆ. ಇದನ್ನು ಮೈಕ್ರೋಬಯೋಮ್ ಎಂದು ಕರೆಯಲಾಗುತ್ತದೆ. ಆದರೆ ನಾವು ನೋಡಿದ ಸಂಗತಿಯೆಂದರೆ, ನೀವು ಕೆಲವು ಜೀವಸತ್ವಗಳನ್ನು ಕಳೆದುಕೊಂಡರೆ ಅಥವಾ ನೀವು ಪ್ರೋಟೀನ್ ಅನ್ನು ಕಳೆದುಕೊಂಡರೆ, ಕೆಲವು ಮಕ್ಕಳು, ಅವರ ಕರುಳು ಉರಿಯುತ್ತದೆ, ಆದ್ದರಿಂದ ಅವರು ತಿನ್ನುವ ಆಹಾರವನ್ನು ಹೀರಿಕೊಳ್ಳಲು ಸಾಧ್ಯವಿಲ್ಲ ಮತ್ತು ಅವರು ಆರೋಗ್ಯದಿಂದಿರಲು ಸಾಧ್ಯವಾಗುವುದಿಲ್ಲ**

– ಬಿಲಿಯನೇರ್ ಬಿಲ್ ಗೇಟ್ಸ್

### ಗೇಟ್ಸ್ ಫೌಂಡೇಶನ್ ಅಲ್ಲಿ ದೊಡ್ಡ ಧನಸಹಾಯ



**ಇದು ಬಹುಶಃ ಶಿಕ್ಷಣಕ್ಕಾಗಿ ಬಿ ಎಂದು ರೇಟ್ ಮಾಡ ಬಹುದೆಂದು ನಾನು ಭಾವಿಸುತ್ತೇನೆ ಆದರೆ ಇನ್ನೂ ಉತ್ತಮವಾಗಿ ಮಾಡುವ ನಿಜವಾದ ಗಂಭೀರ ಉದ್ದೇಶದಿಂದ. ಅಪೌಷ್ಟಿಕತೆಯ ತಿಳುವಳಿಕೆಯು ಬಹಳಷ್ಟು ಸುಧಾರಿಸಿದೆ ಎಂದು ಗೇಟ್ಸ್ ಹೇಳಿದರು, ಗೇಟ್ಸ್ ಫೌಂಡೇಶನ್ ಅಲ್ಲಿ ದೊಡ್ಡ ಧನಸಹಾಯವಾಗಿದೆ ಎಂದು ಹೇಳಿದರು.**

# ಭಾರತದ ಪ್ರತಿಷ್ಠೆ ಹೆಚ್ಚಿಸಿದ ಮೋದಿಜಿ: ಶಾ ಬಣ್ಣನೆ



**ನವದೆಹಲಿ:** ಕೇಂದ್ರ ಗಹ ಸಚಿವ ಅಮಿತ್ ಶಾ ಅವರು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಜನುಮದಿನದ ಶುಭಾಶಯಗಳನ್ನು ಕೋರಿದ್ದಾರೆ ಮತ್ತು ಅವರು ತಮ ದಣಿವರಿಯದ ಕೆಲಸ, ಪರಿಶ್ರಮ ಮತ್ತು ದೂರದಷ್ಟಿಯ ಮೂಲಕ ಜನರ ಜೀವನದಲ್ಲಿ ಸಕಾರಾತಕ ಬದಲಾವಣೆಗಳನ್ನು ತಂದಿದ್ದಾರೆ ಮತ್ತು ಜಗತ್ತಿನಲ್ಲಿ ಭಾರತದ ಪ್ರತಿಷ್ಠೆಯನ್ನು ಹೆಚ್ಚಿಸಿದ್ದಾರೆ ಎಂದು ಹೇಳಿದರು.

74 ನೇ ವರ್ಷಕ್ಕೆ ಕಾಲಿಟ್ಟ ಪ್ರಧಾನಿ, ತಮ ದಶಕಗಳ ಸಾರ್ವಜನಿಕ ಜೀವನದಲ್ಲಿ ರಾಷ್ಟ್ರಕ್ಕಾಗಿ ತ್ಯಾಗ ಮತ್ತು ಸಮರ್ಪಣೆಯ ಹೊಸ ಮಾನದಂಡಗಳನ್ನು ಹೊಂದಿಸಿದ್ದಾರೆ ಎಂದು ಶಾ ಹೇಳಿದರು. ವಂಚಿತ ವರ್ಗದವರ ಬದುಕಿನಲ್ಲಿ ಬದಲಾವಣೆ ತರಲು ಶ್ರಮಿಸಿದ ಮೋದಿಯವರಲ್ಲಿ ದೇಶಕ್ಕೆ ಅಂತಹ ನಿರ್ಣಾಯಕ ನಾಯಕ ಸಿಕ್ಕಿದ್ದಾರೆ ಎಂದು ಗಹ ಸಚಿವರು ಹೇಳಿದರು.

ತಮ ದಣಿವರಿಯದ ಪರಿಶ್ರಮ, ಪರಿಶ್ರಮ ಮತ್ತು ದೂರದಷ್ಟಿಯ ಮೂಲಕ ದೇಶವಾಸಿಗಳ ಜೀವನದಲ್ಲಿ ಸಕಾರಾತಕ ಬದಲಾವಣೆಗಳನ್ನು ತಂದ ಮತ್ತು ಅದರ ಹೆಮೆಯನ್ನು ಹೆಚ್ಚಿಸುವ ಮೂಲಕ ಭಾರತಕ್ಕೆ ವಿಶ್ವದಲ್ಲಿ ಹೊಸ ಗೌರವವನ್ನು ನೀಡಿದ ಜನಪ್ರಿಯ ಪ್ರಧಾನ ಮಂತ್ರಿ ಮೋದಿ ಜೀ ಅವರಿಗೆ ಹತ್ಪೂರ್ವಕ ಜನದಿನದ ಶುಭಾಶಯಗಳು. ನಾನು ಪ್ರಾರ್ಥಿಸುತ್ತೇನೆ. ನಿಮ ಆರೋಗ್ಯಕರ ಮತ್ತು ದೀರ್ಘಾಯುಷ್ಯಕ್ಕಾಗಿ ದೇವರಿಗೆ ಎಂದು ಶಾ ಹಿಂದಿಯಲ್ಲಿ ಎಕ್ಸ್ ಮಾಡಿದ್ದಾರೆ. ದೀರ್ಘಕಾಲದಿಂದ ಮೋದಿಯವರ ರಾಜಕೀಯ ಸಹೋದ್ಯೋಗಿಯಾಗಿರುವ ಶಾ, ಪ್ರಧಾನಿಯವರು ದೇಶ ಮೊದಲು ಎಂಬ ಕಲ್ಪನೆಯನ್ನು ಮರುಸ್ಥಾಪಿಸುವ ನಿಟ್ಟಿನಲ್ಲಿ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

**ಸಂಘಟನೆಯಿಂದ ಸರ್ಕಾರದ ಉನ್ನತಿಗೆ ತನ್ನ ಪಯಣದಲ್ಲಿ, ಸಾರ್ವಜನಿಕ ಕಲ್ಯಾಣ ಮತ್ತು ಸಮಾ ಜದ ಪ್ರತಿಯೊಂದು ವಯೋಮಾನದವರ ಕಾಳಜಿ ಮೋದಿಯವರಿಗೆ ಪ್ರಮುಖವಾಗಿದೆ ಇಂತಹ ದಾರ್ಶನಿಕ ರಾಜಕಾರಣಿಯ ಮಾರ್ಗದರ್ಶನದಲ್ಲಿ ರಾಷ್ಟ್ರ ಹಿತಾಸಕ್ತಿಯ ಕೆಲಸ ಗಳಲ್ಲಿ ಪಾಲ್ಗೊಳ್ಳುತ್ತಿರುವುದು ನನ್ನ ಸೌಭಾಗ್ಯ**

–ಅಮಿತ್ ಶಾ, ಕೇಂದ್ರ ಗಹ ಸಚಿವ

# ಪಾಕಿಸ್ತಾನದಲ್ಲಿ ಭಯೋತ್ಪಾದಕ ದಾಳಿಗೆ ಪಬ್‌ಜಿ ಪ್ರೇರಣೆ

## ಉಗ್ರರು ಒಬ್ಬರನ್ನೊಬ್ಬರು ಸಂಪರ್ಕ ಮಾಡಲು ಪಬ್‌ಜಿ ಚಾಟ್ ರೂಂ ಬಳಕೆ, ಉಗ್ರರು ಫೋನ್ ಕರೆ ಮಾಡೋದೇ ಇಲ್ಲ




ಚಾಟ್ ರೂಂ ಬಳಸಿ ಸಂದೇಶ ರವಾನೆ

**ಪಾಕಿಸ್ತಾನ:** ಪೊಲೀಸ್ ಠಾಣೆ ಸೇರಿದಂತೆ ಹಲವು ಸೂಕ್ಷ್ಮ ಪ್ರದೇಶಗಳಲ್ಲಿ ಸಲೀಸಾಗಿ ದಾಳಿ ನಡೆಸಿ ತಪ್ಪಿಸಿಕೊಳ್ಳುವ ಭಯೋತ್ಪಾದಕರು ಪಾಕಿಸ್ತಾನ ಪೊಲೀಸರು ಹಾಗೂ ಸೇನೆಗೆ ತಲೆನೋವಾಗಿದ್ದಾರೆ. ಸಿಸಿಟಿವಿ ಕ್ಯಾಮರಾ, ಪೊಲೀಸರ ಕಣ್ಗಾವಲಿಗೂ ಸಿಗದೆ ಈ ಭಯೋತ್ಪಾದಕರು ಅದು ಹೇಗೆ ದಾಳಿ ನಡೆಸುತ್ತಾರೆ ಅನ್ನೋ ಪ್ರಶ್ನೆಗೆ ಉತ್ತರ ಹುಡುಕ ಹೊರಟ ಪೊಲೀಸರು ಅಚ್ಚರಿಯ ಸಂಗತಿಯೊಂದನ್ನು ಬಯಲು ಮಾಡಿದ್ದಾರೆ. ಉಗ್ರರ ದುಷ್ಕೃತ್ಯಕ್ಕೆ ಪ್ರೇರಣೆ ಹಾಗೂ ನೆರವಾಗಿ ನಿಂತಿರೋದು ಪಬ್‌ಜಿ ವಿಡಿಯೋ ಗೇಮ್.

ಈ ಭಯೋತ್ಪಾದಕರ ಕೈನಲ್ಲಿ ಮೊಬೈಲ್ ಇದ್ದವು. ಉಗ್ರರು ಒಬ್ಬರನ್ನು ಒಬ್ಬರು ಸಂಪರ್ಕ ಮಾಡಲು ಪಬ್ ಜಿ ಚಾಟ್ ರೂಂಗಳನ್ನು ಬಳಕೆ ಮಾಡುತ್ತಿದ್ದರು. ಈ ಮೂಲಕ ವಿದ್ಯುನ್ಮಾನ ಸರ್ವೇಕ್ಷಣೆಯಿಂದ ಸುಲಭವಾಗಿ ಬಚಾವಾಗಿ ಪ ರಸ್ಪರ ಸಂವಹನ ನಡೆಸಲು ಉಗ್ರರಿಗೆ ಅನುಕೂಲವಾಗಿದೆ. ಪೊಲೀಸರಿಗಂತೂ ಈ ಪ್ರಕರಣ ಭೇದಿಸೋದೇ ನಿಜಕ್ಕೂ ತ್ರಾಸದಾಯಕವಾಗಿದೆ. ಏಕೆಂದರೆ ಉಗ್ರರು ಯಾವು ದೇ ಕಾರಣಕ್ಕೂ ಫೋನ್ ಕರೆ ಮಾಡೋ ದೇ ಇಲ್ಲ. ಇವರ ಎಲ್ಲಾ ಮಾತುಕತೆಯೂ ಪಬ್ ಜಿ ಚಾಟ್ ರೂಂನಲ್ಲಿ ನಡೆಯುತ್ತಿದೆ.

**ಹಿಂಸಾತ್ಮಕ ದಾಳಿ ನಡೆಸಲು ಪಬ್ ಜಿ ಪ್ರೇರಣೆ!**

ಕೇವಲ ಸಂವಹನದ ಕಾರಣಕ್ಕಾಗಿ ಮಾತ್ರವಲ್ಲ, ಭಯೋತ್ಪಾದಕ ದಾಳಿ ನಡೆಸಲು ಸ್ಫೂರ್ತಿ ತುಂಬೋದಕ್ಕೂ ಪಬ್‌ಜಿ ನೆರವಾಗುತ್ತಿದೆ. ಪಬ್‌ಜಿನಲ್ಲಿ ಬರುವ ಹಿಂಸಾತ್ಮಕ ಆಟಗಳನ್ನು ಆಡುವ ಆಟಗಾರರು, ಇದರಿಂದ ಪ್ರೇರಣೆಗೊಂಡು ನಿಜ ಜೀವನದಲ್ಲೂ ಹಿಂಸಾಕೃತ್ಯ ಎಸಗಲು ಸಜ್ಜಾಗುತ್ತಾರೆ ಎಂದು ಡಾನ್ ಪತ್ರಿಕೆಗೆ ರಕ್ಷಣಾ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇನ್ನು ಪೊಲೀಸ್ ಠಾಣೆ ಮೇಲೆ ದಾಳಿ ನಡೆಸಿದ್ದ ಭಯೋತ್ಪಾದಕರು ಗ್ರೆನೇಡ್ ಬದಲಾಗಿ ಪವರ್ ಬ್ಯಾಂಕ್ ಅನ್ನೇ ಬಾಂಬ್ ಆಗಿ ಪರಿವರ್ತಿಸಿದ್ದರು. ಇದರಲ್ಲೇ ಐಇಡಿ ತಯಾರಿಸಿದ್ದರು ಎಂದು ತನಿಖೆ ವೇಳೆ ತಿಳಿದು ಬಂದಿದೆ. ಸಿಸಿಟಿವಿ ದೃಶ್ಯಾವಳಿ ಪರಿಶೀಲನೆ ವೇಳೆ ಓರ್ವ ಭಯೋತ್ಪಾದಕನ ಸುಳಿ ವು ಸಿಕ್ಕಿದೆ ಎಂದು ಪೊಲೀಸರು ಹೇಳಿದ್ದಾರೆ. ಈ ಭಯೋತ್ಪಾದಕರು ತೆಹ್ರಿಕ್ - ಇ - ತಾಲಿಬಾನ್ ಉಗ್ರ ಸಂಘಟನೆ ಜೊತೆ ಗುರ್ತಿಸಿಕೊಂಡಿದ್ದರು ಎಂದು ತಿಳಿದು ಬಂದಿದೆ.

ಇನ್ನು ಈ ಪ್ರಕರಣ ಸಂಬಂಧ ಕೆಲವು ಆರೋಪಿಗಳನ್ನು ಬಂಧಿಸಲಾಗಿದ್ದು, ಈ ಆರೋಪಿಗಳು ಪಬ್‌ಜಿ ಚಾಟ್ ರೂಂ ಮೂಲಕವೇ ಅಫ್ಘಾನಿಸ್ತಾನದಲ್ಲಿ ಇರುವ ತಮ್ಮ ಸಹಚರರ ಜೊತೆ ಸಂಪರ್ಕದಲ್ಲಿ ಇರೋದಾಗಿ ತಿಳಿಸಿದ್ದಾರೆ ಎನ್ನಲಾಗಿದೆ.

### ಪೊಲೀಸರಿಗೆ ಪಬ್‌ಜಿ ಪ್ರತಾಪ ಗೊತ್ತಾಗಿದ್ದು ಹೇಗೆ?

**ಪಾಕಿಸ್ತಾನದ ಸ್ವಾತ್ ಪ್ರಾಂತ್ಯದಲ್ಲಿ ಇರುವ ಪೊಲೀಸ್ ಠಾಣೆ ಒಂದರ ಮೇಲೆ ಉಗ್ರರು ದಾಳಿ ನಡೆಸಿದ್ದರು. ಈ ಘಟನೆಯಲ್ಲಿ ಓರ್ವ ಪೊಲೀಸ್ ಅಧಿಕಾರಿ ಮೃತಪಟ್ಟು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದರು. ಈ ಪ್ರಕರಣದ ತನಿಖೆ ವೇಳೆ ಪೊಲೀಸರಿಗೆ ಅಚ್ಚರಿಯ ಸಂಗತಿ ಬಯಲಾಯ್ತು. ಘಟನಾ ಸ್ಥಳದ ಆಸುಪಾಸಿನಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ವಿಡಿಯೋಗಳ ಪರಿಶೀಲನೆ ವೇಳೆ, ಘಟನೆಗೆ ಕಾರಣರಾದ ಭಯೋತ್ಪಾದಕರ ಸುಳಿವು ಸಿಕ್ಕಿತ್ತು.**

**ಭದ್ರತಾ ಪಡೆಗಳು ಒಂದು ಹೆಜ್ಜೆ ಮುಂದೆ ಹೋದರೆ ಉಗ್ರರು ನಾಲ್ಕು ಹೆಜ್ಜೆ ಮುಂದೆ ಇರುತ್ತಾರೆ. ಉಗ್ರರ ದಾಳಿ ನಿಗ್ರಹಿಸಲು ಪಾಕಿಸ್ತಾನದ ಪೊಲೀಸರು ಹಾಗೂ ಸೇನೆ ಹರಸಾಹಸ ನಡೆಸುತ್ತಿದ್ದರೂ ಉಗ್ರರು ಹಲವು ರೀತಿಯಲ್ಲಿ ದಾಳಿ ನಡೆಸುತ್ತಿದ್ದಾರೆ. ಉಗ್ರರ ತಂತ್ರಗಾರಿಕೆಗೆ ತಂತ್ರಜ್ಞಾನ ಕೂಡಾ ನೆರವಾಗಿದೆ. ಪಬ್‌ಜಿ ಆಟದ ಚಾಟ್ ರೂಂ ಮೂಲಕವೂ ಉಗ್ರರು ಪರಸ್ಪರ ಸಂವಹನ ನಡೆಸಿ ಹಲವೆಡೆ ದಾಳಿ ಮಾಡ್ತಿದ್ದಾರೆ.**

# ಮಿನಿ ನ್ಯೂಸ್

## ಪಟಾಕಿ ಸ್ಫೋಟದಿಂದ ಕಟ್ಟಡ ಕುಸಿದು ನಾಲ್ವರ ಸಾವು

**ಫಿರೋಜಾಬಾದ್:** ಫಿರೋಜಾ ಬಾದ್‌ನ ನೌಶೇರಾದಲ್ಲಿರುವ ಪಟಾಕಿ ಕಾರ್ಖಾನೆಯಲ್ಲಿ ಮಂಗಳವಾರ ಸಂಭವಿಸಿದ ಸ್ಫೋಟದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಮತ್ತು ಗಾಯಗೊಂಡ ಆರು ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಸ್ಫೋಟದಿಂದಾಗಿ ಕಟ್ಟಡ ಕುಸಿದಿದ್ದು, ಹಲವರು ಅವಶೇಷಗಳಡಿ ಸಿಲುಕಿರುವ ಆತಂಕವಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಿಕೋಹಾಬಾದ್ ಪಿಎಸ್ ಪ್ರದೇಶದಲ್ಲಿ, ಮನೆಯೊಂದರಲ್ಲಿ ಪಟಾಕಿಗಳನ್ನು ಸಂಗ್ರಹಿಸಲಾಗಿದೆ ಮತ್ತು ಅಲ್ಲಿ ಸ್ಫೋಟ ಸಂಭವಿಸಿದೆ.

ಸ್ಫೋಟದ ಪ್ರಭಾ ವದಿಂದ, ಹತ್ತಿರದ ಮನೆಯ ಮೇಲ್ಛಾವಣಿ ಕುಸಿದಿದೆ. ಪೊಲೀಸರು ಅವಶೇಷಗಳಿಂದ 10 ಜನರನ್ನು ಹೊರತೆಗೆದರು. 6 ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ. ಆಸ್ಪತ್ರೆಯಲ್ಲಿ ಮತ್ತು 4 ಜನರು ಸಾವನ್ನಪ್ಪಿದ್ದಾರೆ. ಹೆಚ್ಚಿನ ರಕ್ಷಣಾ ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ ಎಂದು ಐಜಿ ದೀಪಕ್ ಕುಮಾರ್ ಹೇಳಿದ್ದಾರೆ. ಏತನಧ್ಯೆ, ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಫಿರೋಜಾಬಾದ್ ಜಿಲ್ಲಾ ವ್ಯಾಜಿಸ್ಟ್ರೇಟ್ ರಮೇಶ್ ರಂಜನ್ ಹೇಳಿದ್ದಾರೆ.ಘಟನಾ ಸ್ಥಳದಲ್ಲಿ ರಕ್ಷಣಾ ತಂಡವಿದೆ. ಜಿಲ್ಲಾ ಆಸ್ಪತ್ರೆ ಮತ್ತು ಉಪ ಜಿಲ್ಲಾಸ್ಪತ್ರೆ, ಎರಡೂ ಹೈ ಅಲರ್ಟ್‌ನಲ್ಲಿವೆ ವೈದ್ಯರ ತಂಡ, ಆಂಬ್ಯುಲೆನ್ಸ್, ಅಗ್ನಿಶಾಮಕ ತಂಡ, ವಿಪತ್ತು ತಂಡ, ಎಲ್ಲರೂ ಸ್ಥಳದಲ್ಲಿದ್ದಾರೆ ಎಂದು ಫಿರೋಜಾಬಾದ್ ಜಿಲ್ಲಾ ವ್ಯಾಜಿಸ್ಟ್ರೇಟ್ ರಮೇಶ್ ರಂಜನ್ ಹೇಳಿದ್ದಾರೆ.

## ಪತ್ನಿ ರುಂಡ ಕಡಿದು ಕೈಯಲ್ಲಿ ಹಿಡಿದು ಓಡಾಡಿದ್ದ ಪತಿಯ ಬಂಧನ

**ಪಾಟ್ನಾ:** ಅಕ್ರಮ ಸಂಬಂಧದ ಶಂಕೆ ಹಿನ್ನೆಲೆಯಲ್ಲಿ ಪತ್ನಿಯನ್ನು ಕೊಲೆ ಮಾಡಿ, ಆಕೆಯ ತಲೆಯನ್ನು ಕೈಯಲ್ಲಿ ಹಿಡಿದು ಊರೂರು ಸುತ್ತುತ್ತಿದ್ದ ವ್ಯಕ್ತಿಯನ್ನು ಬಿಹಾರ ಪೊಲೀಸರು ಬಂಧಿಸಿದ್ದಾರೆ. ಮಾಧೇಪುರದ ಶ್ರೀನಗರ ಪೊಲೀಸ್ ಠಾಣೆ ವ್ಯಾಪ್ತಿಯ ಪೊಖಾರಿಯಾದಲ್ಲಿ ಘಟನೆ ನಡೆದಿದ್ದು, ಅರ್ಜುನ್ ಶರ್ಮಾ ಎಂಬಾತ ತನ್ನ ಪತ್ನಿಗೆ ಅಕ್ರಮ ಸಂಬಂಧವಿದೆ ಎಂದು ಶಂಕಿಸಿ ಆಕೆಯನ್ನು ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಆತ ತನ್ನ ಪತ್ನಿ ಪೂಜಾದೇವಿಯನ್ನು ಹರಿತವಾದ ಚಾಕುವಿನಿಂದ ಕತ್ತು ಸೀಳಿ ಕೊಲೆಗೈದಿದ್ದಾನೆ ಎನ್ನುವ ಮಾ ಹಿತಿ ನಮಗೆ ಸಿಕ್ಕಿತ್ತು ತಕ್ಷಣ ಕಾರ್ಯಚರಣೆ ನಡೆಸಿ ಆತನನ್ನು ಬಂಧಿ ಸಲಾಗಿದೆ ಎಂದು ಡಿಎಸ್‌ಪಿ ಮನೋಜ್ ಮೋಹನ್ ತಿಳಿಸಿದ್ದಾರೆ.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸದರ್ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಅಲ್ಲದೆ, ಘಟನೆಗೆ ಬಳಸಿದ್ದ ಆಯುಧ ವಶಪಡಿಸಿಕೊಳ್ಳಲಾಗಿದೆ. ಆರೋಪಿ ಅರ್ಜುನ್ ಕೈಯಲ್ಲಿ ಬ್ಯಾಗ್ ಹಿಡಿದು ಪೊಲೀಸ್ ಠಾಣೆಗೆ ಬರುತ್ತಿದ್ದ ಎಂದು ನಜೀರ್ ತಿಳಿಸಿದ್ದಾನೆ. ಚೀಲದಿಂದ ರಕ್ತ ಸೋರುತ್ತಿತ್ತು. ಅಷ್ಟರಲ್ಲಿ ಒಬ್ಬ ಪೋಲೀಸ್ ಅವನನ್ನು ತಡೆದಿದ್ದರು, ಆಗ ಬ್ಯಾಗ್ ನಲ್ಲಿ ತುಂಡರಿಸಿದ ತಲೆಯನ್ನು ನೋಡಿ ಎಲ್ಲರೂ ಬೆಚ್ಚಿಬಿದ್ದರು. ಇದಾದ ಬಳಿಕ ಪೊಲೀಸರು ಆತನನ್ನು ಬಂಧಿಸಿದ್ದಾರೆ. ಪತ್ನಿಯನ್ನು ಏಕೆ ಕೊಂದಿದ್ದೀರಿ ಎಂದು ಪ್ರಶ್ನಿಸಿದಾಗ ಆಕೆಗೆ ಬೇರೊಬ್ಬ ವ್ಯಕ್ತಿಯ ಜತೆ ಅಕ್ರಮ ಸಂಬಂಧವಿತ್ತು ಎಂದು ಹೇಳಿದ್ದಾನೆ ಎಂದು ವರದಿಯಾಗಿದೆ.

## ವೈದ್ಯರ ಶೇ.99 ರಷ್ಟು ಬೇಡಿಕೆ ಈಡೇರಿಕೆ : ಮಮತಾ ಬ್ಯಾನರ್ಜಿ

**ಕೋಲ್ಕತ್ತಾ:** ಧರಣಿ ನಿರತ ಕಿರಿಯ ವೈದ್ಯರ ಬೇಡಿಕೆಗೆ ಮಣಿದು ಕೋಲ್ಕತ್ತಾ ಪೊಲೀಸ್ ಆಯುಕ್ತ ವಿನೀತ್ ಗೋಯಲ್, ಆರೋಗ್ಯ ಸೇವೆಗಳ ನಿರ್ದೇಶಕ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರನ್ನು ವಜಾಗೊಳಿಸುವುದಾಗಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತಡರಾತ್ರಿ ಘೋಷಿಸಿದ್ದಾರೆ. ವೈದ್ಯರೊಂದಿಗಿನ ಸಭೆಯ ನಂತರ, ಮಾತುಕತೆಗಳು ಫಲದಾಯಕ ಮತ್ತು ಅವರ ಬೇಡಿಕೆಗಳಲ್ಲಿ ಸುಮಾರು 99 ಪ್ರತಿಶತವನ್ನು ಅಂಗೀಕರಿಸಲಾಗಿದೆ ಎಂದು ಅವರು ಹೇಳಿದರು. ಮಂಗಳವಾರ ಸಂಜೆ 4 ಗಂಟೆಯ ನಂತರ ಹೊಸ ಕೋಲ್ಕತ್ತಾ ಪೊಲೀಸ್ ಆಯುಕ್ತರ ಹೆಸರನ್ನು ಪ್ರಕಟಿಸಲಾಗುವುದು ಎಂದು ಆರ್‌ಜಿಕರ್ ಬಿಕ್ಕಟ್ಟನ್ನು ಪರಿಹರಿಸಲು ತಮ ನಿವಾಸದಲ್ಲಿ ನಡೆದ ಸಭೆಯ ನಂತರ ಅವರು ಸುದ್ದಿಗಾರರಿಗೆ ತಿಳಿಸಿದರು.

ವೈದ್ಯರು ತಮ ಬಹುತೇಕ ಬೇಡಿಕೆಗಳನ್ನು ಸ್ವೀಕರಿಸಿರುವುದರಿಂದ ಕೆಲಸಕ್ಕೆ ಮರಳು ವಂತೆ ಮುಖ್ಯಮಂತ್ರಿಗಳು ಒತ್ತಾಯಿಸಿದರು. ವೈದ್ಯರ ವಿರುದ್ಧ ಯಾವುದೇ ದಂಡನಾತಕ ಕ್ರಮವನ್ನು ತೆಗೆದು ಕೊಳ್ಳುವುದಿಲ್ಲ . ಸಾಮಾನ್ಯ ಜನರು ಬಳಲುತ್ತಿರುವ ಕಾರಣ ನಾನು ಅವರನ್ನು ಮತ್ತೆ ಕೆಲಸಕ್ಕೆ ಸೇರಲು ವಿನಂತಿಸುತ್ತೇನೆ ಎಂದು ಅವರು ಹೇಳಿದರು.

## ಚಿರತೆ ಯೋಜನೆಗೆ ಯಶಸ್ವಿ 2 ವರ್ಷ

**ಭೂಪಾಲ್:** ದೇಶದಲ್ಲಿ ಮತ್ತೆ ಚಿರತೆಗಳ ಮರುಸೃಷ್ಟಿಗೆ ಎರಡು ವರ್ಷ ಪೂರೈಸಿದೆ. ಕೇಂದ್ರ ಸರ್ಕಾರದ ಮಹತ್ವದ ಯೋಜನೆಗಳಲ್ಲಿ ಒಂದಾಗಿತ್ತು. ಎರಡು ವರ್ಷಗಳ ಹಿಂದೆ ತಮ್ಮ 72ನೇ ವರ್ಷದ ಹುಟ್ಟುಹಬ್ಬದಂದು ನಮೀಬಿಯಾದಿಂದ ತಂದಿದ್ದ 8 ಚಿರತೆಗಳ ಮೊದಲ ತಂಡವನ್ನು ಮಧ್ಯಪ್ರದೇಶದ ಕುನೊ ರಾಷ್ಟ್ರೀಯ ಉದ್ಯಾನದಲ್ಲಿ ಬಿಡಲಾಗಿತ್ತು. ಎರಡು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಭೂಪೇಂದ್ರ ಯಾದವ್ ಸಾಮಾಜಿಕ ಜಾಲತಾಣದಲ್ಲಿ ಭಾರತ ನೆಲದಲ್ಲಿ ಮತ್ತೆ ಚಿರತೆಗಳ ಮರುಸೃಷ್ಟಿಸಿರುವ ವಿಡಿಯೋವೊಂದನ್ನ ಪೋಸ್ಟ್ ಮಾಡಿದ್ದಾರೆ. ಈ ಯೋಜನೆಯನ್ನು ಪ್ರಧಾನಿ ಮೋದಿ ಅವರು ಕಳೆದು ಹೋಗಿದ್ದ ವನ್ಯಜೀವಿಗಳನ್ನು ಮತ್ತೆ ಮರುಸೃಷ್ಟಿಸಿದ್ದಾರೆ. ಈ ಯೋಜನೆಯ ಹಾದಿ ಅಷ್ಟು ಸುಲಭವಾಗಿರಲಿಲ್ಲ. ಹಲವಾರು ಸವಾಲುಗಳು ಎದುರಿಸಿ ಯಶಸ್ಸು ಕಂಡಿದ್ದೇವೆ ಎಂದು ಕೇಂದ್ರ ಸಚಿವ ಭೂಪೇಂದ್ರ ಯಾದವ್ ಬರೆದುಕೊಂಡಿದ್ದಾರೆ.

## ಇಂದು ಸೂಪರ್ ಮೂನ್ ಗೋಚರ

**ನವದೆಹಲಿ:** ಇಂದು ನೀಲಾಕಾಶದಲ್ಲಿ ಅಪರೂಪದ ಘಟನೆ ಸಂಭವಿ ಸಲಿದೆ. ಏಕೆಂದರೆ ವರ್ಷದ ಎರಡನೇ ಮತ್ತು ಕೊನೆಯ ಚಂದ್ರಗ್ರಹಣ ಇಂದು ಸಂಭವಿಸಲಿದೆ. ಖಗೋಳಶಾಸ್ತ್ರಜ್ಞರಿಗೆ ಇದು ಎರಡು ಕೊ ಡುಗೆಯಾಗಿದೆ, ಏಕೆಂದರೆ ಸೂಪರ್ ಮೂನ್, ಚಂದ್ರಗ್ರಹಣ ಎರಡೂ ಏಕಕಾಲದಲ್ಲಿ ಸಂಭವಿಸುತ್ತಿವೆ. ಚಂದ್ರಗ್ರಹಣವು ಖಗೋಳ ವಿದ್ಯಮಾನವಾಗಿದೆ. ಇದು ಭಾಗಶಃ ಚಂದ್ರಗ್ರಹಣವಾಗಿದ್ದು, ಇದು ಪ್ರಪಂಚದ ಹೆಚ್ಚಿನ ಭಾಗದಲ್ಲಿ ಗೋಚರಿಸುತ್ತದೆ.ಈ ಗ್ರಹಣವು ಭಾರತದಲ್ಲಿ ಗೋಚರಿಸುವುದಿಲ್ಲ. ಚಂದ್ರಗ್ರಹಣದಲ್ಲಿ ಮೂರು ವಿಧಗಳಿವೆ ಪೆನಂಬ್ರಾಲ್ ಚಂದ್ರಗ್ರಹಣ, ಭಾಗಶಃ ಚಂದ್ರಗ್ರಹಣ ಮತ್ತು ಸಂಪೂರ್ಣ ಚಂದ್ರಗ್ರಹಣ. ಸೆಪ್ಟೆಂಬರ್ 18 ರಂದು ಭಾಗಶಃ ಮತ್ತು ಪೆನಂಬ್ರಾಲ್ ಚಂದ್ರಗ್ರಹಣ ಸಂಭವಿಸಲಿದೆ. ಇದು ಪ್ರಪಂಚದ ಅನೇಕ ಸ್ಥಳಗಳಲ್ಲಿ ಕಂಡುಬರುತ್ತದೆ. ಸೂರ್ಯ, ಭೂಮಿ ಮತ್ತು ಚಂದ್ರರು ನೇರ ರೇಖೆಯಲ್ಲಿ ಬಂದಾಗ, ಚಂದ್ರಗ್ರಹಣ ಸಂಭವಿಸುತ್ತದೆ, ಏಕೆಂದರೆ ಭೂಮಿಯ ಕಾರಣದಿಂದಾಗಿ, ಸೂರ್ಯನ ಬೆಳಕು ಚಂದ್ರನ ಮೇಲೆ ಬೀಳುವುದಿಲ್ಲ.




# ಸ್ತನ ಕ್ಯಾನ್ಸರ್‌ನಿಂದ ಬಳಲುತ್ತಿರುವ ಹಿನಾ

'ಬಿಗ್ ಬಾಸ್' ಖ್ಯಾತಿಯ ಹಿನಾ ಖಾನ್ 3ನೇ ಹಂತದ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಕಿಮೋಥೆರಪಿ ಚಿಕಿತ್ಸೆ ಪಡೆಯುತ್ತಿರುವ ಹಿನಾ ಇದೀಗ ಕಾರ್ಯಕ್ರಮವೊಂದರಲ್ಲಿ ರ್‍ಯಾಂಪ್ ವಾಕ್ ಮಾಡಿದ್ದಾರೆ. ಈ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿದೆ.

ಕೆಂಪು ಬಣ್ಣದ ಲೆಹೆಂಗಾ ಧರಿಸಿ ನಟಿ ಹಿನಾ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಮದುಮಗಳಂತೆ ನಗು ಮುಖದಿಂದ ವೇದಿಕೆಗೆ ಎಂಟ್ರಿ ಕೊಟ್ಟು ನಟಿ ರಯಾಂಪ್ ವಾಕ್ ಮಾಡಿರೋದು ನೋಡಿ ಫ್ಯಾನ್ಸ್ ಭೇಷ್ ಎಂದಿದ್ದಾರೆ. ನಟಿಯ ವೃತ್ತಿಪರತೆಯನ್ನು ಅಭಿಮಾನಿಗಳು ಹೊಗಳಿದ್ದಾರೆ. ಅಂದಹಾಗೆ, ಇತ್ತೀಚೆಗೆ ತಮಗಿರುವ ಸ್ತನ ಕ್ಯಾನ್ಸರ್ ಕಾಯಿಲೆ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ನೀಡಿದ್ದರು. ಈ ಕಾಯಿಲೆ ಇದ್ದಾಗಿಯೂ ನಾನು ಉತ್ತಮವಾಗಿದ್ದೇನೆ. ನಾನು ಬಲಶಾಲಿ ಮತ್ತು ಈ ರೋಗವನ್ನು ಜಯಿಸಲು ನಿಜವಾಗಿಯೂ ಬದ್ಧನಾಗಿದ್ದೇನೆ ಎಂದು ಎಲ್ಲಾರಿಗೂ ಭರವಸೆ ನೀಡಲು ನಾನು ಬಯಸುತ್ತೇನೆ. ನನ್ನ ಚಿಕಿತ್ಸೆಯು ಈಗಾಗಲೇ ಪ್ರಾರಂಭವಾಗಿದೆ. ಇದರಿಂದ ಇನ್ನಷ್ಟು ಬಲವಾಗಿ ಹೊರಹೊಮ್ಮಲು ಅಗತ್ಯವಿರುವ ಎಲ್ಲಾವನ್ನೂ ಮಾಡಲು ನಾನು ಸಿದ್ಧಳಿದ್ದೇನೆ ಎಂದು ಹಿನಾ ಖಾನ್ ಹೇಳಿಕೊಂಡಿದ್ದರು. ಈ ಸಮಯದಲ್ಲಿ ನನ್ನ ಖಾಸಗಿತನವನ್ನು ಗೌರವಿಸುತ್ತೀರಿ ಎಂದು ನಾನು ಭಾವಿಸುತ್ತೇನೆ. ನಿಮ್ಮ ಪ್ರೀತಿ, ಶಕ್ತಿ ಮತ್ತು ಆಶೀರ್ವಾದವನ್ನು ನಾನು ಆಳವಾಗಿ ಪ್ರಶಂಸಿಸುತ್ತೇನೆ. ನಾನು, ನನ್ನ ಕುಟುಂಬ ಮತ್ತು ಪ್ರೀತಿಪಾತ್ರರ ಜೊತೆಗೆ ಧನಾತ್ಮಕವಾಗಿ ಇರುತ್ತೇನೆ. ಸರ್ವಶಕ್ತನ ಅನುಗ್ರಹದಿಂದ, ನಾನು ಈ ಸವಾಲನ್ನು ಜಯಿಸುತ್ತೇನೆ ಮತ್ತು ಸಂಪೂರ್ಣವಾಗಿ ಆರೋಗ್ಯವಾಗಿರುತ್ತೇನೆ ಎಂದು ನಾನು ನಂಬಿದ್ದೇನೆ. ದಯವಿಟ್ಟು ನಿಮ್ಮ ಪ್ರಾರ್ಥನೆ, ಆಶೀರ್ವಾದ ಮತ್ತು ಪ್ರೀತಿ ನನ್ನ ಮೇಲೆ ಇರಲಿ ಎಂದು ನಟಿ ಮನವಿ ಮಾಡಿದ್ದರು.

**ಎಲ್ಲರಿಗೂ ಭರವಸೆ ನೀಡಲು ನಾನು ಬಯಸುತ್ತೇನೆ**





# ಮತ್ತೆ ನೈಜ ಕಥೆ ಆಯ್ಕೆ ಮಾಡಿದ ರವಿ ಶ್ರೀವತ್ಸ

ಡೆಡ್ಲಿ ಸೋಮ, ಮಾದೇಶ, ದಶಮುಖ ಹೀಗೆ ಬಹುತೇಕ ಸ್ಟಾರ್ ಚಿತ್ರಗಳನ್ನೇ ನಿರ್ದೇಶಿಸಿದ ರವಿ ಶ್ರೀವತ್ಸ ಅವರೀಗ ತಮ್ಮದೇ ಆದ ಹೊಸ ನಿರ್ಮಾಣ ಸಂಸ್ಥೆಯೊದನ್ನು ಸ್ಥಾಪಿಸಿದ್ದು, ಆ ಮೂಲಕ ನಿರ್ಮಾಣವಾಗುತ್ತಿರುವ 'ಗ್ಯಾಂಗ್ಸ್ ಆಫ್ ಯುಕೆ' ಚಿತ್ರದಲ್ಲಿ ಸಾಕಷ್ಟು ಹೊಸ ಪ್ರತಿಭೆಗಳಿಗೆ ಅವಕಾಶ ನೀಡಿದ್ದಾರೆ. ಇತ್ತೀಚೆಗೆ ರವಿ ಶ್ರೀವತ್ಸ ಅವರ 'ಡೆಡ್ಲಿ ಆರ್ಟ್ಸ್' ಸಂಸ್ಥೆಯ ಲಾಂಛನ ಬಿಡುಗಡೆ ಹಾಗೂ ಗ್ಯಾಂಗ್ಸ್ ಆಫ್ ಯುಕೆ ಚಿತ್ರದ ಪತ್ರಿಕಾಗೋಷ್ಠಿ ನಡೆಯಿತು. ನಿರ್ದೇಶಕ ಕೆವಿ.ರಾಜು ಅವರ ಧರ್ಮಪತ್ನಿ ನೂತನ ನಿರ್ಮಾಣ ಸಂಸ್ಥೆಯ ಲಾಂಛನಕ್ಕೆ ಚಾಲನೆ ನೀಡಿದರು. ಕನ್ನಡದ ಹಿರಿಯ ನಿರ್ದೇಶಕ ಕೆ.ವಿ. ರಾಜು ಅವರ ಬಳಿ ಬರವಣಿಗೆ, ನಿರ್ದೇಶನದ ಪಾಠ ಕಲಿತಿದ್ದ ರವಿ ಶ್ರೀವತ್ಸ, ಆರಂಭದಲ್ಲಿ ಕೆವಿ. ರಾಜು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವಾಗ ವಿದ್ಯೆ ಕಲಿಸಿದ ಗುರುಗಳನ್ನು ನೆನೆದು ಗಗ್ಗದಿತರಾದ ಅವರ ಕಣ್ಣಲ್ಲಿ ಕಂಬನಿಧಾರೆ ಹರಿಯಿತು. ನಂತರ ಮಾತನಾಡುತ್ತ ನಾನು ಒಳ್ಳೆ ಸಿನಿಮಾ ಮಾಡ್ಬೇಕು ಅಂದಾಗೆಲ್ಲ ಅವರು ಹಿಂದೆ ನಿಲ್ತಿದ್ದರು. 2018ರಲ್ಲಿ ಮಾಡಿಕೊಂಡಿದ್ದ ಕಥೆಯಿದು. ಅವರನ್ನು ಮಿಸ್ ಮಾಡಿಕೊಂಡ ಮೇಲೆ ಎಂ.ಎಸ್. ರಮೇಶ್ ನನಗೆ ಜೊತೆಯಾದರು. ಕಳೆದ ಡಿಸೆಂಬರ್ ನಲ್ಲಿ ರಮೇಶ್ ಅವರಿಗೆ ಈ ಕಥೆ ಹೇಳಿದಾಗ ಯಾರೆಲ್ಲ ಕಲಾವಿದರಿರ್ತಾರೆ ಅಂತ ಕೇಳಿದರು. ಒಟ್ಟು 56 ಕಲಾವಿದರಲ್ಲಿ ಬಹುತೇಕ ಹೊಸಬರೇ ಇದ್ದಾರೆ. ಏ.18ಕ್ಕೆ ಚಿತ್ರದ ಮುಹೂರ್ತ ನಡೆಸಿ ಶೂಟಿಂಗ್ ಪ್ರಾರಂಭಿಸಿದೆವು ಎಂದರು.



**ರಕ್ಷಿತ್ ಸರ್ ಅವರ ಆಕ್ಟಿಂಗ್ ಎಂದರೆ ತುಂಬಾ ಇಷ್ಟ. ಬಹಳ ಸಮಯದಿಂದ ಅವರ ಕೆಲಸವನ್ನು ಗಮನಿಸುತ್ತಿದ್ದೇನೆ. ಅವರ ಜೊತೆ ಕೆಲಸ ಮಾಡಲು ಆಸಕ್ತಿಯಿದೆ. ಅವಕಾಶ ಸಿಕ್ಕರೆ ನಟಿಸುತ್ತೇನೆ**

# ಉತ್ತಮ ಕಥೆ ಸಿಕ್ಕರೆ ಕನ್ನಡದಲ್ಲಿ ರಕ್ಷಿತ್ ಶೆಟ್ಟಿ ಜೊತೆ ನಟಿಸಲು ಸಿದ್ಧ

ಕರಾವಳಿ ಬೆಡಗಿ ಕೃತಿ ಶೆಟ್ಟಿ ಅವರು ಸಾಲು ಸಾಲು ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಡುವ ಕುರಿತು ನಟಿ ಮಾತನಾಡಿದ್ದಾರೆ. ಸಿಂಪಲ್ ಸ್ಟಾರ್ ರಕ್ಷಿತ್ ಶೆಟ್ಟಿ ನಟನೆ ಎಂದರೆ ಇಷ್ಟ, ಅವರೊಂದಿಗೆ ಸಿನಿಮಾ ಮಾಡಲು ರೆಡಿ ಎಂದು ಕೃತಿ ಮಾತನಾಡಿದ್ದಾರೆ. 'ಉಪ್ಪೇನಾ' ಸೇರಿದಂತೆ ಹಲವು ಸಿನಿಮಾಗಳ ಮೂಲಕ ಮೋಡಿ ಮಾಡಿರುವ ನಟಿ ಕೃತಿ ಇದೀಗ ನೀಡಿರುವ ಹೇಳಿಕೆಯೊಂದು ಸಖತ್ ಸದ್ದು ಮಾಡುತ್ತಿದೆ. ಕೃತಿ ಮೂಲತಃ ಕರ್ನಾಟಕದವರು, ಮಾತೃಭಾಷೆ ತುಳು ಆಗಿದ್ದರೂ ಕೂಡ ಕನ್ನಡ ಭಾಷೆಯ ಮೇಲೆ ಅವರಿಗೆ ಅಭಿಮಾನವಿದೆ.

ಅದರಂತೆ ಉತ್ತಮ ಕಥೆ ಸಿಕ್ಕರೆ ಖಂಡಿತವಾಗಿಯೂ ಕನ್ನಡ ಚಿತ್ರದಲ್ಲಿ ನಟಿಸುತ್ತೇನೆ ಎಂದು ನಟಿ ಸಂದರ್ಶನವೊಂದರಲ್ಲಿ ಹೇಳಿದ್ದಾರೆ. ಯಾರೊಂದಿಗೆ ಕೆಲಸ ಮಾಡಲು ಇಷ್ಟಪಡುತ್ತೀರಿ ಎಂದು ಎದುರಾದ ಪ್ರಶ್ನೆಗೆ ನಟಿ ಥಟ್ ಅಂತ ರಕ್ಷಿತ್ ಶೆಟ್ಟಿ ಹೆಸರು ಹೇಳಿದ್ದಾರೆ. ರಕ್ಷಿತ್ ಸರ್ ಅವರ ಆಕ್ಟಿಂಗ್ ಎಂದರೆ ತುಂಬಾ ಇಷ್ಟ. ಬಹಳ ಸಮಯದಿಂದ ಅವರ ಕೆಲಸವನ್ನು ಗಮನಿಸುತ್ತಿದ್ದೇನೆ. ಅವರ ಜೊತೆ ಕೆಲಸ ಮಾಡಲು ಆಸಕ್ತಿಯಿದೆ. ಅವಕಾಶ ಸಿಕ್ಕರೆ ನಟಿಸುತ್ತೇನೆ ಎಂದು 'ಉಪ್ಪೇನಾ' ನಟಿ ಮಾತನಾಡಿದ್ದಾರೆ. ಅವರ ಮಾತು ಕೇಳಿ ಕನ್ನಡಿಗರು ಮೆಚ್ಚುಗೆ ಸೂಚಿಸಿದ್ದಾರೆ. ಅಂದಹಾಗೆ, ಸೆ.12ರಂದು 'ಎಆರ್‌ಎಂ' ಸಿನಿಮಾ ರಿಲೀಸ್ ಆಗಿದೆ. ಮಲಯಾಳಂ ಸಿನಿಮಾದಲ್ಲಿ ನಾಯಕಿಯಾಗಿ ಕೃತಿ ಈ ಚಿತ್ರದ ಮೂಲಕ ಪಾದಾರ್ಪಣೆ ಮಾಡಿದ್ದಾರೆ. ಅವರ ನಟನೆಗೆ ಪ್ರಶಂಸೆ ವ್ಯಕ್ತವಾಗಿದೆ.

**ಅಮ್ಮನ್ 2 ನಟಿಸಲು ಗ್ರೀನ್ ಸಿಗ್ನಲ್**

## ಲೇಡಿ ಸೂಪರ್ ಸ್ಟಾರ್‌ಗೆ ತಮಿಳು ಡೈರೆಕ್ಟರ್ ಸುಂದರ್ ಆಕ್ಷನ್ ಕಟ್

ತಮಿಳಿನ ಲೇಡಿ ಸೂಪರ್ ಸ್ಟಾರ್ ನಯನತಾರಾ ಅವರು ನಟಿ, ನಿರ್ಮಾಪಕಿಯಾಗಿ ಬ್ಯುಸಿಯಾಗಿದ್ದಾರೆ. ಇದೀಗ ಡೈರೆಕ್ಟರ್ ಸುಂದರ್ ಸಿ. ಜೊತೆ ಸಿನಿಮಾ ಮಾಡಲು ನಟಿ ಮುಂದಾಗಿದ್ದಾರೆ. ಶಾರುಖ್ ಖಾನ್ ಜೊತೆ 'ಜವಾನ್' ಸಿನಿಮಾದಲ್ಲಿ ನಯನತಾರಾ ನಟಿಸಿದ ಮೇಲೆ ಅವರ ಬೇಡಿಕೆ ಹೆಚ್ಚಾಗಿದೆ. ಬಹುಭಾಷೆಗಳಲ್ಲಿ ನಟಿಸುತ್ತಾ ನಟಿ ಆಕ್ಟಿವ್ ಆಗಿದ್ದಾರೆ. ಸದ್ಯ ಅವರು 'ಮೂಕುತಿ ಅಮ್ಮನ್ 2' ಸಿನಿಮಾ ದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಈ ಕುರಿತು ಚಿತ್ರತಂಡ ಅಧಿಕೃತವಾಗಿ ತಿಳಿಸಿದೆ. ಇನ್ನೂ ನಯನತಾರಾಗೆ ಸುಂದರ್ ಸಿ. ನಿರ್ದೇಶನ ಮಾಡಲಿದ್ದಾರೆ. ಮತ್ತೊಂದು ದೇವಿ ಕುರಿತು ವಿಭಿನ್ನ ಕಥೆ ತರಲು ಅವರು ಸಿದ್ಧತೆ ಮಾಡಿಕೊಂಡಿದ್ದಾರೆ.



# ಹುಟ್ಟು ಹಬ್ಬಕ್ಕೆ ಫುಲ್ ಮೀಲ್ಸ್ ಪೋಸ್ಟರ್

ಸಂಕಷ್ಟಕರ ಗಣಪತಿ, ಫ್ಯಾಮಿಲಿ ಪ್ಯಾಕ್, ಅಬ್ಬಬ್ಬ ಚಿತ್ರಗಳ ಖ್ಯಾತಿಯ ನಾಯಕ ನಟ ಲಿಖಿತ್ ಶೆಟ್ಟಿ ನಟಿಸಿ ನಿರ್ಮಿಸುತ್ತಿರುವ 'ಫುಲ್ ಮೀಲ್ಸ್' ಚಿತ್ರದ ನಾಯಕಿ ತೇಜಸ್ವಿನಿ ಶರ್ಮ ಹುಟ್ಟು ಹಬ್ಬದ ಅಂಗವಾಗಿ ಚಿತ್ರತಂಡ ಬರ್ತ್ ಡೇ ಪೋಸ್ಟರ್ ಅನ್ನು ಬಿಡುಗಡೆ ಮಾಡಿದೆ. ತ್ರಿಕೋನ ಪ್ರೇಮಕಥೆ ಹೊಂದಿರುವ ಸಿನೆಮಾದಲ್ಲಿ ನಾಯಕ ಲಿಖಿತ್ ಶೆಟ್ಟಿ ನಾಯಕಿಯರಾದ ತೇಜಸ್ವಿನಿ ಶರ್ಮ ಮತ್ತು ಖುಷಿ ರವಿಯೊಟ್ಟಿಗಿರುವ ವಿಭಿನ್ನ ಭಂಗಿಯ, ಭಾವದ ಪೋಸ್ಟರ್ ನೋಡುಗರ ಗಮನ ಸೆಳೆದಿದ್ದು, ಸಿನೆಮಾದ ಬಗ್ಗೆ ಕುತೂಹಲ ಹೆಚ್ಚಿಸಿದೆ. ತೇಜಸ್ವಿನಿ ಶರ್ಮ ಚಿತ್ರದಲ್ಲಿ ಮೇಕಪ್ ಆರ್ಟಿಸ್ಟ್ ಪಾತ್ರವನ್ನು ಮಾಡಿದ್ದು, ಅವರ ಪಾತ್ರವನ್ನು ತೆರೆಯ ಮೇಲೆ ನೋಡಲು ಸಾಕಷ್ಟು ಕಾತುರರಾಗಿದ್ದಾರೆ.. ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕೆಲಸ ಬಹುತೇಕ ಮುಗಿದಿದ್ದು, ಸಧ್ಯಕ್ಕೆ ಹಿನ್ನೆಲೆ ಸಂಗೀತದ ಕೆಲಸ ನಡೆಯುತ್ತಿದ್ದು, ವರ್ಷಾಂತ್ಯದೊಳಗೆ ಚಿತ್ರವನ್ನು ತೆರೆಗೆ ತರುವ ಯೋಚನೆಯಲ್ಲಿ ಚಿತ್ರತಂಡವಿದೆ.

ವೆಡ್ಡಿಂಗ್ ಫೋಟೋಗ್ರಾಫರ್ ಸುತ್ತ ಸುತ್ತುವ ಕಥಾ ಹಂದರವನ್ನು ಹೊಂದಿರುವ ಸಿನೆಮಾ, ಮನೋರಂಜನೆಯ ಜೊತೆಗೆ ಸಾಕಷ್ಟು ಹೊಸ ವಿಷಯಗಳನ್ನು ಒಳಗೊಂಡಿದ್ದು, ಪ್ರೇಕ್ಷಕರು ಸಿನೆಮಾವನ್ನು ಇಷ್ಟಪಡುತ್ತಾರೆಂಬ ವಿಶ್ವಾಸ ಚಿತ್ರತಂಡಕ್ಕಿದೆ. . ಲಿಖಿತ್ ಶೆಟ್ಟಿಗೆ ನಾಯಕಿಯರಾಗಿ ಖುಷೀ ರವಿ ಮತ್ತು ತೇಜಸ್ವಿನಿ ಶರ್ಮ ಅಭಿನಯಿಸಿದ್ದು, ಚಿತ್ರದುರ್ಗದ ಪ್ರತಿಭೆ ಎನ್. ವಿನಾಯಕ ಚಿತ್ರದ ಮೂಲಕ ಮೊದಲ ಬಾರಿಗೆ ನಿರ್ದೇಶನದ ಜವಾಬ್ದಾರಿ ಹೊತ್ತಿದ್ದಾರೆ. ಸಿನೆಮಾಗೆ ಹರೀಶ್ ಗೌಡ ಸಂಭಾಷಣೆ ಬರೆದಿದ್ದು, ಮನೋಹರ್ ಜೋಷಿ ಛಾಯಾಗ್ರಹಣ, ಗುರು ಕಿರಣ್ ಸಂಗೀತವಿದೆ.

# ಸರಿಸಮಾನಾದ ಬಹುಮಾನ ಮೊತ್ತ ಘೋಷಿಸಿದ ಐಸಿಸಿ

**ಮಹಿಳಾ ಟಿ20 ವಿಶ್ವಕಪ್ ಗೆದ್ದ ತಂಡಕ್ಕೆ ಪುರುಷ ಟಿ20 ಚಾಂಪಿಯನ್ ತಂಡಕ್ಕೆ ಸಿಕ್ಕಷ್ಟೇ ಸರಿಸಮಾನದ ಬಹುಮಾನ**

ಇದೇ ಅಕ್ಟೋಬರ್ 3 ರಿಂದ ಆರಂಭವಾಗಲಿರುವ ಮಹಿಳಾ ಟಿ20 ವಿಶ್ವಕಪ್‌ಗೆ ಐಸಿಸಿ ಸಕಲ ಸಿದ್ಧತೆ ಮಾಡಿಕೊಂಡಿದೆ. ಯುಎಇಯಲ್ಲಿ ನಡೆಯುತ್ತಿರುವ ಈ ಚುಟುಕು ಸಮರಕ್ಕೆ ಇದೀಗ ದಿನಗಣನೆ ಆರಂಭವಾಗಿದೆ. ಈ ನಡುವೆ ಐಸಿಸಿ, ಈ ಪಂದ್ಯಾವಳಿಯ ಬಹುಮಾನ ಮೊತ್ತವನ್ನು ಪ್ರಕಟಿಸಿದೆ. ಅದರಂತೆ ಈ ಬಾರಿಯ ಚಾಂಪಿಯನ್ ತಂಡಕ್ಕೆ ಕೋಟಿಗಳ ಸುರಿಮಳೆಯಾಗಲಿದೆ.

ಮಹಿಳಾ ಟಿ20 ವಿಶ್ವಕಪ್ ಗೆದ್ದ ತಂಡಕ್ಕೆ ಪುರುಷ ಟಿ20 ಚಾಂಪಿಯನ್ ತಂಡಕ್ಕೆ ಸಿಕ್ಕಷ್ಟೇ ಸರಿಸಮಾನದ ಬಹುಮಾನ ಸಿಗಲಿದೆ ಎಂಬುದು ದೊಡ್ಡ ಸುದ್ದಿಯಾಗಿದೆ. ಇನ್ನು ಮಹಿಳಾ ಟಿ20 ವಿಶ್ವಕಪ್‌ನಲ್ಲಿ ವಿಜೇತ ತಂಡಕ್ಕೆ 19 ಕೋಟಿ 59 ಲಕ್ಷ ರೂಪಾಯಿ ನೀಡುವುದಾಗಿ ಐಸಿಸಿ ಪ್ರಕಟಿಸಿದೆ.

ಇತ್ತೀಚೆಗಷ್ಟೇ ಅಮೆರಿಕ ಹಾಗೂ ವೆಸ್ಟ್ ಇಂಡೀಸ್ ಆತಿಥ್ಯದಲ್ಲಿ ನಡೆದಿದ್ದ 2024 ರ ಟಿ20 ವಿಶ್ವಕಪ್‌ನಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದ ಟೀಮ್ ಇಂಡಿಯಾ ಇದಕ್ಕಿಂತ ಕೊಂಚ ಹೆಚ್ಚು, ಅಂದರೆ 20.52 ಕೋಟಿ ರೂ. ಬಹುಮಾನ ಪಡೆದಿತ್ತು. ಮೇಲೆ ಹೇಳಿದಂತೆ ಮಹಿಳೆಯರ ಟಿ20 ವಿಶ್ವಕಪ್ ಅಕ್ಟೋಬರ್ 3 ರಿಂದ ಆರಂಭವಾಗಲಿದೆ.




ಈ ಪಂದ್ಯಾವಳಿಯನ್ನು ಬಾಂಗ್ಲಾದೇಶದಿಂದ ಯುಎಇಗೆ ಸ್ಥಳಾಂತರಿಸಲಾಗಿದೆ. ವಾಸ್ತವವಾಗಿ ಈ ಮೊದಲು ಈ ಪಂದ್ಯಾವಳಿಗೆ ಬಾಂಗ್ಲಾದೇಶ ಆತಿಥ್ಯವಹಿಸಬೇಕಿತ್ತು. ಆದರೆ ಅಲ್ಲಿ ಮೀಸಲಾತಿ ವಿರುದ್ಧ ಭುಗಿಲೆದ್ದ ಹಿಂಸಾಚಾರದಿಂದಾಗಿ ಐಸಿಸಿ, ಪಂದ್ಯಾವಳಿಯನ್ನು ಸ್ಥಳಾಂತರಿಸುವ ನಿರ್ಧಾರಕ್ಕೆ ಬಂದಿತು. ಈ ಬಾರಿಯ ಟಿ20 ವಿಶ್ವಕಪ್ ವಿಜೇತ ತಂಡಕ್ಕೆ 19 ಕೋಟಿ 59 ರೂ. ಬಹುಮಾನ ಸಿಕ್ಕರೆ, ರನ್ನರ್ ಅಪ್ ತಂಡ 9 ಕೋಟಿ 79 ಲಕ್ಷ ರೂ. ಬಹುಮಾನ ಪಡೆಯಲಿದೆ. ಕಳೆದ ವರ್ಷ ರನ್ನರ್ ಅಪ್ ಆಗಿದ್ದ ದಕ್ಷಿಣ ಆಫ್ರಿಕಾ ತಂಡ ಐದು ಲಕ್ಷ ಡಾಲರ್ ಪಡೆದಿತ್ತು. ಇದೀಗ ಈ ಬಹುಮಾನದ ಗಾತ್ರದಲ್ಲಿ ಶೇ.134ರಷ್ಟು ಹೆಚ್ಚಳ ಆಗಿದೆ. ಇನ್ನು ಸೆಮಿಫೈನಲ್‌ನಲ್ಲಿ ಸೋತ ತಂಡಗಳು 5 ಕೋಟಿ 65 ಲಕ್ಷ ರೂ. ಬಹುಮಾನ ಪಡೆಯಲಿವೆ. ಕಳೆದ ಬಾರಿಯ ವಿಶ್ವಕಪ್‌ನಲ್ಲಿ ಸೆಮಿಫೈನಲ್ ಸೋತ ತಂಡಗಳಿಗೆ 2 ಲಕ್ಷದ 10 ಸಾವಿರ ಡಾಲರ್ ಬಹುಮಾನ ನೀಡಲಾಗಿತ್ತು. ಈ ರೀತಿಯಾಗಿ, ಪಂದ್ಯಾವಳಿಯ ಒಟ್ಟು ಬಹುಮಾನದ ಮೊತ್ತವನ್ನು ಹತ್ತಿರಹಿತ್ತರ 80 ಕೋಟಿಗೆ ಮೀಸಲಿರಿಸಲಾಗಿದೆ. ಉಳಿದಂತೆ ಈ ಮಹಿಳಾ ಟಿ20 ವಿಶ್ವಕಪ್‌ನಲ್ಲಿ ಗುಂಪು ಹಂತದಿಂದ ಹೊರಬೀಳುವ ತಂಡಗಳು ಸರಿ ಸುಮಾರು 26 ಲಕ್ಷ ರೂ ಬಹುಮಾನ ಪಡೆದರೆ, ಸೆಮಿಫೈನಲ್ ತಲುಪಲು ವಿಫಲವಾದ ಆರು ತಂಡಗಳು ತಮ್ಮ ಅಂತಿಮ ಸ್ಥಾನಗಳ ಆಧಾರದ ಮೇಲೂ ಬಹುಮಾನವನ್ನು ಪಡೆಯಲಿವೆ.




# ಕೆಎಲ್ ರಾಹುಲ್‌ರನ್ನು ನೇರವಾಗಿ ಆಯ್ಕೆ ಮಾಡುವ ಹಾಗಿಲ್ಲ!

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18ರ ಸಿದ್ಧತೆಗಳ ನಡುವೆ ಎಲ್ಲಾರ ಕುತೂಹಲಕ್ಕೆ ಕಾರಣವಾಗಿರುವುದು ಕೆಎಲ್ ರಾಹುಲ್ ಅವರ ಮುಂದಿನ ನಡೆ. ಏಕೆಂದರೆ ಲಕ್ನೋ ಸೂಪರ್ ಜೈಂಟ್ಸ್ ತಂಡದಿಂದ ಕನ್ನಡಿಗ ಹೊರಬರುವುದು ಬಹುತೇಕ ಖಚಿತ. ಇದನ್ನು ಪುಷ್ಠೀಕರಿಸುವಂತೆ ರಾಹುಲ್ ಕೂಡ ಆರ್‌ಸಿಬಿ ಪರ ಕಣಕ್ಕಿಳಿಯುವ ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

ಆದರೆ ಆರ್‌ಸಿಬಿ ಪರ ಮತ್ತೆ ಆಡುವ ಇಚ್ಛೆ ಹೊಂದಿದ್ದರೂ ಕೆಎಲ್ ರಾಹುಲ್ ನೇರವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಆಯ್ಕೆಯಾಗುವುದಿಲ್ಲ. ಅಂದರೆ ಮೆಗಾ ಹರಾಜಿಗೂ ಮುನ್ನ ಲಕ್ನೋ ಸೂಪರ್ ಜೈಂಟ್ಸ್ ತಂಡದಿಂದ ರಾಹುಲ್ ಅವರನ್ನು ಟ್ರೇಡ್ ಮಾಡಲು ಅವಕಾಶವಿಲ್ಲ. ಬದಲಾಗಿ ಮೆಗಾ ಹರಾಜಿನ ಮೂಲಕವೇ ಖರೀದಿಸಬೇಕಾಗುತ್ತದೆ.

ಏಕೆಂದರೆ ಐಪಿಎಲ್ ನಿಯಮಗಳ ಪ್ರಕಾರ, ಮೆಗಾ ಹರಾಜಿನ ಸಂದರ್ಭಗಳಲ್ಲಿ ಆಟಗಾರರ ಟ್ರೇಡಿಂಗ್‌ಗೆ ಅವಕಾಶವಿಲ್ಲ. ಬದಲಾಗಿ ಈ ಮಿನಿ ಹರಾಜಿನ ವೇಳೆ ಮಾತ್ರ ಆಟಗಾರರನ್ನು ಟ್ರೇಡಿಂಗ್‌ಗೆ ಅವಕಾಶ ನೀಡಲಾಗುತ್ತದೆ. ಹೀಗಾಗಿ ಈ ಬಾರಿಯ ಹರಾಜಿಗೂ ಮುನ್ನ ಆರ್‌ಸಿಬಿಗೆ ಕೆಎಲ್ ರಾಹುಲ್ ಅವರನ್ನು ಖರೀದಿಸಲು ಸಾಧ್ಯವಾಗುವುದಿಲ್ಲ.

ಇನ್ನು ಕೆಎಲ್ ರಾಹುಲ್ ಮೆಗಾ ಹರಾಜಿನಲ್ಲಿ ಕಾಣಿಸಿಕೊಂಡರೆ ಇತರೆ ಫ್ರಾಂಚೈಸಿಗಳು ಕೂಡ ಅವರ ಖರೀದಿಗೆ ಆಸಕ್ತಿವಹಿಸಲಿದೆ. ಏಕೆಂದರೆ ರಾಹುಲ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್. ಅದರಲ್ಲೂ ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳನ್ನು ಮುನ್ನಡೆಸಿದ ಅನುಭವವನ್ನು ಸಹ ಹೊಂದಿದ್ದಾರೆ.

ಹೀಗಾಗಿ ಕೆಎಲ್ ರಾಹುಲ್ ಅವರ ಖರೀದಿಯಿಂದ ಕ್ಯಾಪ್ಟನ್, ವಿಕೆಟ್ ಕೀಪರ್ ಹಾಗೂ ಓಪನರ್ ಸ್ಥಾನಗಳನ್ನು ತುಂಬಬಹುದು. ಹೀಗೆ ಒಂದೇ ಆಯ್ಕೆಯಿಂದ ಮೂರು ಸ್ಥಾನಗಳನ್ನು ತುಂಬಬಲ್ಲ ಆಟಗಾರರ ಖರೀದಿಗೆ ಹೆಚ್ಚಿನ ಫ್ರಾಂಚೈಸಿಗಳು ಆಸಕ್ತಿವಹಿಸಲಿದೆ.

ಇನ್ನು ಮೆಗಾ ಹರಾಜಿನ ಮೂಲಕ ಆರ್‌ಸಿಬಿ ಕೆಎಲ್ ರಾಹುಲ್ ಅವರ ಖರೀದಿಗೆ ಮುಂದಾದರೂ, ಹೆಚ್ಚಿನ ಪೈಪೋಟಿ ಕಂಡು ಬರುವುದು ಖಚಿತ. ಹೀಗಾಗಿ ಮೆಗಾ ಆಕ್ಷನ್‌ನಲ್ಲಿ ಕಾಣಿಸಿಕೊಳ್ಳಲಿರುವ ಕನ್ನಡಿಗ ಅಂತಿಮವಾಗಿ ಯಾವ ತಂಡದ ಪಾಲಾಗಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ.

**ಫ್ರಾಂಚೈಸಿ ಕೂಡ ಖರೀದಿಗೆ ಆಸಕ್ತಿ**




# ಕಿಂಗ್ ಕೊಹ್ಲಿ ಮುಂದಿದೆ 4 ರೆಕಾರ್ಡ್ಸ್


ದಾಖಲೆಗಳ ಮೇಲೆ ದಾಖಲೆ ನಿರ್ಮಿಸುತ್ತಾ ಸಾಗಿರುವ ವಿರಾಟ್ ಕೊಹ್ಲಿ ಇದೀಗ ಮೂರು ಹೊಸ ದಾಖಲೆಗಳನ್ನು ಬರೆಯುವ ಹೊಸ್ತಿಲಲ್ಲಿದ್ದಾರೆ. ಆದರೆ ಇವು ಅಂತಿಂಥ ದಾಖಲೆಗಳಲ್ಲ. ಬದಲಾಗಿ ವಿಶ್ವ ದಾಖಲೆಗಳು ಎಂಬುದು ವಿಶೇಷ. ಆ ದಾಖಲೆಗಳಾವುವು ಎಂದು ನೋಡುವುದಾದರೆ...

**27 ಸಾವಿರ ರನ್:** ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 27 ಸಾವಿರ ರನ್ ಪೂರೈಸಲು ವಿರಾಟ್ ಕೊಹ್ಲಿಗೆ ಬೇಕಿರುವುದು ಕೇವಲ 58 ರನ್‌ಗಳು ಮಾತ್ರ. ಚೆನ್ನೈನಲ್ಲಿ ನಡೆಯಲಿರುವ ಬಾಂಗ್ಲಾದೇಶ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ವಿರಾಟ್ ಕೊಹ್ಲಿ 58 ರನ್ ಕಲೆಹಾಕಿದರೆ, ಕ್ರಿಕೆಟ್ ಇತಿಹಾಸದಲ್ಲೇ ಅತೀ ವೇಗವಾಗಿ 27 ಸಾವಿರ ರನ್ ಪೂರೈಸಿದ ವಿಶ್ವ ದಾಖಲೆ ನಿರ್ಮಾಣವಾಗಲಿದೆ. ಸದ್ಯ ಈ ದಾಖಲೆ ಸಚಿನ್ ತೆಂಡೂಲ್ಕರ್ (623 ಇನಿಂಗ್ಸ್) ಹೆಸರಿನಲ್ಲಿದೆ. ಇದೀಗ 591 ಇನಿಂಗ್ಸ್‌ಗಳಲ್ಲಿ 26942 ರನ್ ಕಲೆಹಾಕಿರುವ ಕೊಹ್ಲಿ ಬ್ಯಾಟ್‌ನಿಂದ ಈ ಭರ್ಜರಿ ದಾಖಲೆಯನ್ನು ನಿರೀಕ್ಷಿಸಬಹುದು.

**12 ಸಾವಿರ ರನ್:** 12 ಸಾವಿರ ರನ್ ಪೂರೈಸಲು ವಿರಾಟ್ ಕೊಹ್ಲಿಗೆ ಕೇವಲ 11 ರನ್‌ಗಳ ಅಗತ್ಯತೆಯಿದೆ. ಬಾಂಗ್ಲಾದೇಶ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಹನ್ನೊಂದು ಕಲೆಹಾಕಿದರೆ, ಈ ಸಾಧನೆ ಮಾಡಿದ ವಿಶ್ವದ 5ನೇ ಬ್ಯಾಟರ್ ಎನಿಸಿಕೊಳ್ಳಲಿದ್ದಾರೆ. ಸದ್ಯ ಸಚಿನ್ ತೆಂಡೂಲ್ಕರ್ (14192), ರಿಕಿ ಪಾಂಟಿಂಗ್ (13117), ಜಾಕ್ಸ್ ಕಾಲಿಸ್ (12305) ಮತ್ತು ಕುಮಾರ ಸಂಗಕ್ಕಾರ (12043) ಮಾತ್ರ ಈ ಸಾಧನೆ ಮಾಡಿದ್ದಾರೆ.

**9 ಸಾವಿರ ರನ್:** ಟೆಸ್ಟ್ ಕ್ರಿಕೆಟ್‌ನಲ್ಲಿ 9 ಸಾವಿರ ರನ್ ಪೂರೈಸಲು ವಿರಾಟ್ ಕೊಹ್ಲಿ ಕೇವಲ 152 ರನ್‌ಗಳನ್ನು ಮಾತ್ರ ಪೂರೈಸಬೇಕಿದೆ. ಬಾಂಗ್ಲಾದೇಶ್ ವಿರುದ್ಧದ ಸರಣಿಯಲ್ಲಿ 152 ರನ್‌ಗಳಿಸಿದರೆ, ಟೆಸ್ಟ್‌ನಲ್ಲಿ 9000+ ರನ್ ಕಲೆಹಾಕಿದ ಭಾರತದ ನಾಲ್ಕನೇ ಬ್ಯಾಟರ್ ಎನಿಸಿಕೊಳ್ಳಲಿದ್ದಾರೆ. ಈ ಪಟ್ಟಿಯಲ್ಲಿ ಸಚಿನ್ ತೆಂಡೂಲ್ಕರ್ (15921), ರಾಹುಲ್ ದ್ರಾವಿಡ್ (13288) ಮತ್ತು ಸುನಿಲ್ ಗವಾಸ್ಕರ್ (10122) ಮೊದಲ ಮೂರು ಸ್ಥಾನಗಳಲ್ಲಿದ್ದಾರೆ.

**30 ಶತಕಗಳ ದಾಖಲೆ:** ಟೆಸ್ಟ್ ಕ್ರಿಕೆಟ್‌ನಲ್ಲಿ 30 ಸೆಂಚುರಿ ಸಿಡಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆಯಲು ವಿರಾಟ್ ಕೊಹ್ಲಿಗೆ ಒಂದು ಶತಕದ ಅವಶ್ಯಕತೆಯಿದೆ.




# ಸಿರಾಜ್ ಬರೆದ ಐತಿಹಾಸಿಕ ದಾಖಲೆಗೆ ವರ್ಷ

ಅಂದು ಸೆಪ್ಟೆಂಬರ್ 17, 2023 ಆರ್ ಪ್ರೇಮದಾಸ ಮೈದಾನದಲ್ಲಿ ನಡೆದ ಏಷ್ಯಾಕಪ್‌ನ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ಶ್ರೀಲಂಕಾ ತಂಡಗಳು ಮುಖಾಮುಖಿಯಾಗಿದ್ದವು. ಟಾಸ್ ಗೆದ್ದ ದಸುನ್ ಶಾನಕ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಶ್ರೀಲಂಕಾ ತಂಡವು 16 ಎಸೆತಗಳಲ್ಲಿ 5 ವಿಕೆಟ್ ಕಳೆದುಕೊಂಡಿತ್ತು. ಹೀಗೆ ಕೇವಲ 16 ಎಸೆತಗಳಲ್ಲಿ ಐದು ವಿಕೆಟ್ ಉರುಳಿಸಿ ಸಂಚಲನ ಸೃಷ್ಟಿಸಿದ್ದು ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್.

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಶ್ರೀಲಂಕಾ ತಂಡಕ್ಕೆ ಮೊದಲ ಓವರ್‌ನಲ್ಲೇ ಜಸ್‌ಪ್ರೀತ್ ಬುಮ್ರಾ ಆರಂಭಿಕ ಆಘಾತ ನೀಡಿದ್ದರು. ಇದಾದ ಬಳಿಕ ಶುರುವಾಗಿದ್ದೇ ಮಿಯಾ ಮ್ಯಾಜಿಕ್. 4ನೇ ಓವರ್‌ನ ಮೊದಲ ಎಸೆತದಲ್ಲಿ ಪಾತುಮ್ ನಿಸ್ಸಂಕಾ ಅವರ ವಿಕೆಟ್ ಪಡೆದ ಸಿರಾಜ್, ಮೂರನೇ ಎಸೆತದಲ್ಲಿ ಸದೀರ ಸಮರವಿಕ್ರಮ ಅವರನ್ನು ಎಲ್‌ಬಿಡಬ್ಲ್ಯು ಬಲೆಗೆ ಕೆಡವಿದರು. ಇನ್ನು ನಾಲ್ಕನೇ ಎಸೆತದಲ್ಲಿ ಚರಿತ್ ಅಸಲಂಕಾ ಅವರನ್ನು ಔಟ್ ಮಾಡಿದರು. ಆರನೇ ಎಸೆತದಲ್ಲಿ ಧನಜಂಯ ಡಿಸಿಲ್ವಾ ವಿಕೆಟ್ ಕೀಪರ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದರು.

ಒಂದೇ ಓವರ್‌ನಲ್ಲಿ 4 ವಿಕೆಟ್ ಕಬಳಿಸಿದ ಸಿರಾಜ್, 6ನೇ ಓವರ್‌ನ 4ನೇ ಎಸೆತದಲ್ಲಿ ಶ್ರೀಲಂಕಾ ತಂಡದ ನಾಯಕ ದಸುನ್ ಶಾನಕ ಅವರನ್ನು ಕ್ಲೀನ್ ಬೌಲ್ಡ್ ಮಾಡಿದರು. ಇದರೊಂದಿಗೆ ಕೇವಲ 4 ರನ್ ನೀಡಿ 5 ವಿಕೆಟ್ ಕಬಳಿಸಿದ ವಿಶೇಷ ಸಾಧನೆ ಮಾಡಿದರು. ಅಷ್ಟೇ ಅಲ್ಲದೆ ಅತೀ ಕಡಿಮೆ ಎಸೆತಗಳಲ್ಲಿ 5 ವಿಕೆಟ್ ಕಬಳಿಸಿದ ವಿಶ್ವದ 2ನೇ ಬೌಲರ್ ಎಂಬ ವಿಶ್ವ ದಾಖಲೆಯನ್ನು ಕೂಡ ತಮ್ಮದಾಗಿಸಿಕೊಂಡರು.

ಇದಕ್ಕೂ ಮುನ್ನ ಚಾಮಿಂಡ ವಾಸ್ ಈ ಸಾಧನೆ ಮಾಡಿದ್ದರು. 2003 ರಲ್ಲಿ ಶ್ರೀಲಂಕಾದ ಮಾಜಿ ವೇಗಿ ಚಾಮಿಂಡ ವಾಸ್ ಬಾಂಗ್ಲಾದೇಶ್ ವಿರುದ್ಧ ಕೇವಲ 16 ಎಸೆತಗಳಲ್ಲಿ 5 ವಿಕೆಟ್ ಕಬಳಿಸಿದ್ದರು. ಈ ವಿಶ್ವ ದಾಖಲೆಯನ್ನು ಸರಿಗಟ್ಟುವ ಮೂಲಕ ಮೊಹಮ್ಮದ್ ಸಿರಾಜ್ ಹೊಸ ಇತಿಹಾಸ ನಿರ್ಮಿಸಿದ್ದರು. ಈ ಪಂದ್ಯದಲ್ಲಿ 7 ಓವರ್‌ಗಳನ್ನು ಎಸೆದ ಮೊಹಮ್ಮದ್ ಸಿರಾಜ್ ಕೇವಲ 21 ರನ್ ನೀಡಿ 6 ವಿಕೆಟ್ ಕಬಳಿಸಿದರು. ಸಿರಾಜ್ ಅವರ ಈ ಕರಾರುವಾಕ್ ದಾಳಿಗೆ ತತ್ತರಿಸಿದ ಶ್ರೀಲಂಕಾ ತಂಡವು ಕೇವಲ 50 ರನ್‌ಗಳಿಗೆ ಆಲೌಟ್ ಆಯಿತು. 51 ರನ್‌ಗಳ ಸುಲಭ ಗುರಿಯನ್ನು ಟೀಮ್ ಇಂಡಿಯಾ 6.1 ಓವರ್‌ಗಳಲ್ಲಿ ಚೇಸ್ ಮಾಡಿ 10 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು. ಈ ಗೆಲುವಿನೊಂದಿಗೆ 8ನೇ ಬಾರಿಗೆ ಏಷ್ಯಾಕಪ್ ಕಿರೀಟ ಮುಡಿಗೇರಿಸಿಕೊಂಡಿದ್ದರು. ಈ ಐತಿಹಾಸಿಕ ಗೆಲುವಿಗೆ ಒಂದು ವರ್ಷ ಎಂಬುದೇ ವಿಶೇಷ.

**ಒಂದೇ ಓವರ್‌ನಲ್ಲಿ 4 ವಿಕೆಟ್**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966